ಸಂಪುಟ: 04 ಸಂಚಿಕೆ: 81 ಪುಟಗಳು: 08 ಮಂಗಳವಾರ 04 ಜೂನ್ 2024

www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಆತ್ಮವಿಶ್ವಾಸವೊಂದಿದ್ದರೆ ಆಯಾಸವಿಲ್ಲದೇ ಕೊನೆಯವರೆಗೂ ಪಯಣಿಸಬಹುದು. ವಿಶ್ವಾಸದ ಕೊರತೆಯಿಂದ ಪ್ರಯಾಣ ಅರ್ಧಕ್ಕೆ ನಿಲ್ಲಬಹುದು. ವಿಶ್ವಾಸವೇ ಇಂಧನವಾಗಲಿ

# ಜನನಾಯಕರ ಹುರುಪು ಇಂದು ಮಹಾತೀರ್ಪು

**● ಲೋಕ ಜಿದ್ದಾಜಿದ್ದಿ ಹ್ಯಾಟ್ರಿಕ್ ಮೋದಿ, ● ಬೆಟ್ಟಿಂಗ್ ಜೋರು ● ಬಾರಿ ಬಿಗಿ ಭದ್ರತೆ ● ಮೋದಿ ಅಲೆ ಭದ್ರ ● ವಿರೋಧಿ ಪಕ್ಷಗಳ ಕನಸು ಛಿದ್ರ**




• ಉದಯವಾಹಿನಿ, ನವದೆಹಲಿ

ಇಡೀ ದೇಶವೇ ಕಾತುರದಿಂದ ಕಾಯುತ್ತಿರುವ ಲೋಕಸಭಾ ಚುನಾವಣೆಯ ಫಲಿತಾಂಶ ಇಂದು ಪ್ರಕಟವಾಗಲಿದ್ದು, ದೇಶದ ಅಧಿಕಾರದ ಗದ್ದುಗೆ ಯಾವ ಪಕ್ಷದ ಪಾಲಾಗಲಿದೆ, ಪ್ರಧಾನಿ ಮೋದಿಯವರು ಹ್ಯಾಟ್ರಿಕ್ ಸಾಧಿಸುವರೇ ಎಂಬೆಲ್ಲಾ ಪ್ರಶ್ನೆಗಳಿಗೆ ಇಂದು ಉತ್ತರ ಸಿಗಲಿದೆ. ಕಳೆದ 82 ದಿನಗಳಿಂದ 7 ಹಂತಗಳಲ್ಲಿ ನಡೆದ ಲೋಕಸಭಾ ಚುನಾವಣೆಯಲ್ಲಿ ಮತದಾರ ಯಾರ ಪರವಾಗಿ ತೀರ್ಪು ನೀಡಿದ್ದಾನೆ, ಯಾರಿಗೆ ಮತದಾರನ ಕೃಪಕಟಾಕ್ಷ ಸಿಕ್ಕಿದೆ ಎಂಬುದು ಇಂದು ಬಹಿರಂಗವಾಗಲಿದೆ. ದೇಶದ 543 ಲೋಕಸಭಾ ಕ್ಷೇತ್ರಗಳ ಚುನಾವಣೆ 7 ಹಂತಗಳಲ್ಲಿ ನಡೆದು ಜೂ.1ರಂದು ಅಂತಿಮ ಹಂತದ ಚುನಾವಣೆ ನಡೆದು ಲೋಕಸಭಾ ಚುನಾವಣೆಗಳು ಸಂಪನ್ನಗೊಂಡಿದ್ದವು.ಈ ಚುನಾವಣೆಯ ಮತ ಎಣಿಕೆ ಇಂದು ನಡೆಯಲಿದ್ದು, ಫಲಿತಾಂಶವೂ ಪ್ರಕಟವಾಗಲಿದೆ. ಫಲಿತಾಂಶ ಏನಾಗಲಿದೆ, ಯಾವ ಪಕ್ಷ ಅಧಿಕಾರಕ್ಕೆ ಬರಲಿದೆ ಎಂಬುದೆಲ್ಲಾ ಇಂದು ಬಹಿರಂಗವಾಗಲಿದೆ. ಇಂದು ಚುನಾವಣಾ ಮತ ಎಣಿಕೆ ನಡೆದು ಫಲಿತಾಂಶ ಪ್ರಕಟವಾಗಲಿರುವ ಹಿನ್ನೆಲೆಯಲ್ಲಿ ಅಭ್ಯರ್ಥಿಗಳ ಎದೆಯಲ್ಲಿ ಢವ ಢವ ಶುರುವಾಗಿದ್ದು, ಗೆಲುವು ತಮ್ಮದಾಗಲಿ ಎಂದು ಕೆಲ ಅಭ್ಯರ್ಥಿಗಳು ಈಗಾಗಲೇ ದೇವರ ಮೊರೆ ಹೋಗಿದ್ದಾರೆ. ಮತಗಟ್ಟೆ ಸಮೀಕ್ಷೆಗಳು ಪ್ರಧಾನಿ ಮೋದಿಯವರು ಹ್ಯಾಟ್ರಿಕ್ ಸಾಧಿಸಲಿದ್ದು, ಮತ್ತೆ ದೇಶದ ಅಧಿಕಾರ ಚುಕ್ಕಾಣಿಯನ್ನು ಎನ್‌ಡಿಎ ಹಿಡಿಯಲಿದೆ ಎಂದು ಭವಿಷ್ಯ ನುಡಿದಿದ್ದು, ಈ ಭವಿಷ್ಯ ನಿಜವೇ, ಸುಳ್ಳೇ ಎಂಬುದು ಸಹ ಇಂದು ಜಗಜ್ಜಾಹೀರಾಗಲಿದೆ.

ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಪ್ರಧಾನಿ ಮೋದಿ ವಿರುದ್ಧ ವಿರೋಧ ಪಕ್ಷಗಳೆಲ್ಲಾ ಒಟ್ಟಾಗಿ ಇಂಡಿಯಾ ಮೈತ್ರಿಕೂಟವನ್ನು ರಚಿಸಿಕೊಂಡು ಸ್ಪರ್ಧೆಗೆ ಇಳಿದಿದ್ದು, ಇಂಡಿಯಾ ಮೈತ್ರಿಕೂಟ ಎನ್‌ಡಿಎಯನ್ನು ಸೋಲಿಸಿ ಅಧಿಕಾರ ಹಿಡಿಯಲಿದೆಯೇ ಎಂಬುದು ಇಂದು ಗೊತ್ತಾಗಲಿದೆ. ಮತಗಟ್ಟೆ ಸಮೀಕ್ಷೆಗಳು ತಮ್ಮ ಪರವಾಗಿರುವ ಹಿನ್ನೆಲೆಯಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಒಕ್ಕೂಟ ಪಕ್ಷಗಳು ಸಂತಸದಿಂದ ಬೀಗುತ್ತಿದ್ದರೆ, ಈ ಮತಗಟ್ಟೆ ಸಮೀಕ್ಷೆಗಳನ್ನು ತಿರಸ್ಕರಿಸಿರುವ ಇಂಡಿಯಾ ಒಕ್ಕೂಟ ಫಲಿತಾಂಶ ತಮ್ಮ ಪರವಾಗಿ ಇರಲಿದೆ, ಮತದಾರರು ತಮ್ಮ ಪರವಾಗಿ ತೀರ್ಪು ಕೊಟ್ಟಿದ್ದಾರೆ ಎಂಬ ವಿಶ್ವಾಸದಲ್ಲಿದೆ.ಲೋಕಸಭಾ ಚುನಾವಣೆಯ ಜತೆಗೆ ಆಂಧ್ರ ಪ್ರದೇಶ, ತೆಲಂಗಾಣ, ಸಿಕ್ಕಿಂ, ಅರುಣಾಚಲ ಪ್ರದೇಶದ ವಿಧಾನಸಭಾ ಚುನಾವಣೆಗೂ ಮತದಾನ ನಡೆದಿತ್ತು. ಸಿಕ್ಕಿಂ ಮತ್ತು ಅರುಣಾಚಲ ಪ್ರದೇಶದ ವಿಧಾನಸಭಾ ಚುನಾವಣೆಯ ಮತ ಎಣಿಕೆ ನಿನ್ನೆಯೇ ನಡೆದು ಈಗಾಗಲೇ ಫಲಿತಾಂಶ ಹೊರ ಬಿದ್ದಿದೆ. ಆಂಧ್ರಪ್ರದೇಶ ಮತ್ತು ಒರಿಸ್ಸಾ ವಿಧಾನಸಭೆಯ ಮತ ಎಣಿಕೆಯೂ ಇಂದು ನಡೆಯಲಿದ್ದು, ಈ ಎರಡೂ ರಾಜ್ಯದಲ್ಲಿ ಯಾವ ಪಕ್ಷ ಅಧಿಕಾರಕ್ಕೆ ಬರಲಿದೆ ಎಂಬುದು ಇಂದು ಬಹಿರಂಗವಾಗಲಿದೆ.

**1** ಬೆಂಗಳೂರು ಗ್ರಾಮಾಂತರದಲ್ಲಿ ಡಾ.ಮಂಜುನಾಥ್ ವರ್ಸಸ್ ಡಿಕೆ ಸುರೇಶ್ ನಡುವೆ ಸ್ಪರ್ಧೆ

**2** ರಾಜ್ಯದ ಅತ್ಯಂತ ಕುತೂಹಲಕಾರಿ ಕ್ಷೇತ್ರಗಳಲ್ಲಿ ಯಾರಿಗೆ ಜಯ..?

**3** ಎಲ್ಲೇ ಹೋದ್ರೂ, ಜನರ ಪ್ರಶ್ನೆ, 'ಗ್ರಾಮಾಂತರದಲ್ಲಿ ಡಾಕ್ಟರ್ ವಿನ್ ಆಗ್ತಾರಾ'?



**ನಿರೀಕ್ಷಿತ ಫಲಿತಾಂಶಕ್ಕೆ ವೇದಿಕೆ ಸಿದ್ಧ**

ಇಂಡಿಯಾ ಟಿವಿ ಸಿಎನ್‌ಎಕ್ಸ್ ಎಕ್ಸಿಟ್ ಪೋಲ್ ಪ್ರಕಾರ ಸೇರಿದಂತೆ ಬಹುತೇಕ ಮತಗಟ್ಟೆ ಸಮೀಕ್ಷೆಗಳು ಎನ್‌ಡಿಎ ಮೈತ್ರಿಕೂಟ 371 ರಿಂದ 401 ಸ್ಥಾನಗಳನ್ನು ಗೆಲ್ಲುತ್ತದೆ ಎಂದು ಅಂದಾಜಿಸಲಾಗಿದೆ, ಆದರೆ ಐಎನ್‌ಡಿಐಎ ಬ್ಲಾಕ್ 109 ರಿಂದ 139 ಸ್ಥಾನಗಳನ್ನು ಗಳಿಸಬಹುದು ಎಂದು ಬಿಂಬಿಸಿದೆ. ಆದರೆ ಕಾಂಗ್ರೆಸ್ ಈ ಮತಗಟ್ಟೆ ಸಮೀಕ್ಷೆಗಳನ್ನು ತಳ್ಳಿ ಹಾಕಿದ್ದು, ಇಂಡಿಯಾ ಮೈತ್ರಿಕೂಟಕ್ಕೆ ಸ್ಪಷ್ಟ ಬಹುಮತ ಸಿಗಲಿದೆ ಎಂಬ ವಿಶ್ವಾಸದಲ್ಲಿದ್ದಾರೆ ಇಂಡಿಯಾ ಮೈತ್ರಿಕೂಟ ನಾಯಕರು. ಇತರೆ ಪಕ್ಷಗಳು 28 ರಿಂದ 38 ಸ್ಥಾನಗಳನ್ನು ವಶಪಡಿಸಿಕೊಳ್ಳುವ ನಿರೀಕ್ಷೆಯಿದೆ. ರಾಜಕೀಯ ಪಕ್ಷಗಳು ತಮ್ಮ ಗೆಲುವನ್ನು ಉತ್ಸಾಹದಿಂದ ಹೇಳಿಕೊಳ್ಳುತ್ತಿವೆ, ಹೆಚ್ಚು ನಿರೀಕ್ಷಿತ ಫಲಿತಾಂಶಕ್ಕೆ ವೇದಿಕೆ ಸಿದ್ಧ ಮಾಡಿ ಕೊಳ್ಳಲಾಗುತ್ತಿದೆ. ಲೋಕಸಭೆಯ 543 ಕ್ಷೇತ್ರಗಳಿಗೆ ಏ.19 ರಿಂದ ಜೂನ್ 1ರ ತನಕ 7 ಹಂತದಲ್ಲಿ ಮತದಾನ ನಡೆದಿತ್ತು. ಎಲ್ಲಾ ಹಂತದ ಮತ ಎಣಿಕೆ ನಡೆಯಲಿದೆ.



## ಮೋದಿ ಗ್ಯಾರಂಟಿಯಲ್ಲಿ ಬಿಜೆಪಿ

ರಾಜ್ಯದಲ್ಲಿ ಮೊದಲ ಬಾರಿಗೆ ಜೆಡಿಎಸ್ ಜೊತೆ ಮೈತ್ರಿ ಮಾಡಿಕೊಂಡು ಚುನಾವಣಾ ಕಣಕ್ಕಿಳಿದಿದ್ದ ಬಿಜೆಪಿ ಈ ಬಾರಿ ಬಂಪರ್ ಬೆಳೆಯ ನಿರೀಕ್ಷೆಯಲ್ಲಿದೆ. ಕಾಂಗ್ರೆಸ್ ಗ್ಯಾರಂಟಿಗಿಂತ ರಾಜ್ಯದ ಜನತೆ ಮೋದಿ ಗ್ಯಾರಂಟಿ ಬಗ್ಗೆಯೇ ಹೆಚ್ಚು ಒಲವು ಹೊಂದಿದ್ದಾರೆ. ಏನೇ ಆದರೂ ನಾವು 25ಕ್ಕೂ ಹೆಚ್ಚು ಕ್ಷೇತ್ರಗಳನ್ನು ಗೆಲ್ಲುತ್ತೇವೆ ಎಂಬ ದೃಢ ವಿಶ್ವಾಸ ಬಿಜೆಪಿ ನಾಯಕರಲ್ಲಿದೆ. ಇದಕ್ಕೆ ಪುಷ್ಟಿ ನೀಡುವಂತೆ ಮತಗಟ್ಟೆ ಸಮೀಕ್ಷೆಗಳು ಕೂಡ ರಾಜ್ಯದಲ್ಲಿ ಈ ಬಾರಿ ಬಿಜೆಪಿ-ಜೆಡಿಎಸ್ ಮೈತ್ರಿಕೂಟ ಕಡಿಮೆ ಎಂದರೂ 20ಕ್ಕೂ ಹೆಚ್ಚು ಸ್ಥಾನ ಗೆಲ್ಲಲಿದೆ ಎಂದು ಹೇಳಿದೆ. ಇನ್ನು ಕೆಲವು ಸಮೀಕ್ಷೆಗಳು ರಾಜ್ಯದಲ್ಲಿ ಎನ್‌ಡಿಎ 24-26 ಕ್ಷೇತ್ರಗಳನ್ನು ಗೆದ್ದು ದಾಖಲೆ ಬರೆಯಬಹುದೆಂಬ ಭವಿಷ್ಯ ನುಡಿದಿರುವುದು ಕಾಂಗ್ರೆಸ್ ನಾಯಕರನ್ನು ತಲೆ ತಿರುಗುವಂತೆ ಮಾಡಿದೆ. ಹೀಗಾಗಿಯೇ ಮತಗಟ್ಟೆ ಸಮೀಕ್ಷೆಗಳು ಸುಳ್ಳು ಎಂದು ಕಾಂಗ್ರೆಸ್ ಪ್ರತಿಪಾದಿಸಿದರೆ, ಬಿಜೆಪಿ ಇದು ವಾಸ್ತವಕ್ಕೆ ಹತ್ತಿರವಿದ್ದು ಜನರ ನಾಡಿಮಿಡಿತದ ಮೇಲೆಯೇ ಮತಗಟ್ಟೆ ಸಮೀಕ್ಷೆಗಳು ಹೊರಬಂದಿವೆ.

## ಮತ ಎಣಿಕೆಗೆ ಸಿದ್ಧತೆ

ಇಂದು ನಡೆಯಲಿರುವ ಲೋಕಸಭಾ ಚುನಾವಣೆಯ ಮತ ಎಣಿಕೆ ಎಲ್ಲಾ ಸಿದ್ಧತೆಗಳನ್ನು ಚುನಾವಣಾ ಆಯೋಗ ಮಾಡಿಕೊಂಡಿದ್ದು, ಬಿಗಿ ಭದ್ರತೆಯಲ್ಲಿ ಮತ ಎಣಿಕೆ ನಡೆಯಲಿದೆ. ಆಯಾಯ ಲೋಕಸಭಾ ಕ್ಷೇತ್ರದ ವ್ಯಾಪ್ತಿಯ ಜಿಲ್ಲಾ ಕೇಂದ್ರಗಳಲ್ಲಿ ಮತ ಎಣಿಕೆ ನಡೆಯಲಿದೆ. ಇದಕ್ಕಾಗಿ ಜಿಲ್ಲಾಡಳಿತಗಳು ಸೂಕ್ತ ವ್ಯವಸ್ಥೆ ಮಾಡಿಕೊಂಡಿದೆ. ಮತ ಎಣಿಕೆ ಸಂದರ್ಭದಲ್ಲಿ ಯಾವುದೇ ಅಹಿತಕರ ಘಟನೆಗಳು ಆಗದಂತೆ ಎಚ್ಚರ ವಹಿಸಲು ಮತ ಎಣಿಕೆ ಕೇಂದ್ರಗಳ ಸುತ್ತ ನಿಷೇಧಾಜ್ಞೆ ಜಾರಿ ಮಾಡಿ ಪೊಲೀಸ್ ಬಂದೋಬಸ್ತ್ ಕೈಗೊಳ್ಳಲಾಗಿದೆ. ಹಾಗೆಯೇ ಎಲ್ಲೆಡೆ ಮದ್ಯ ಮಾರಾಟಕ್ಕೂ ನಿಷೇಧ ಹೇರಲಾಗಿದೆ. ಸೂಕ್ಷ್ಮ ಮತ್ತು ಅತಿ ಸೂಕ್ಷ್ಮ ಜಿಲ್ಲೆಗಳಲ್ಲಿ ರಾಜ್ಯ ಪೊಲೀಸರ ಜೊತೆಗೆ ಕೇಂದ್ರೀಯ ಪೊಲೀಸ್ ಪಡೆಯನ್ನು ಹೆಚ್ಚುವರಿಯಾಗಿ ನಿಯೋಜನೆ ಮಾಡಲಾಗಿದೆ.



## ನಡ್ಡಾ ನೇತೃತ್ವದಲ್ಲಿ ಸಭೆ

ಆಚರಣೆ ಹೇಗೆಲ್ಲಾ ಇರಬೇಕು ಎನ್ನುವ ಕುರಿತು ಬಿಜೆಪಿ ಅಧ್ಯಕ್ಷ ಜೆಪಿ ನಡ್ಡ ನಿವಾಸದಲ್ಲಿ ಮಹತ್ವದ ಸಭೆ ಪಕ್ಷದ ಹಿರಿಯ ನಾಯಕರೊಂದಿಗೆ ಸಭೆ ನಡೆಸಿದ ನಡ್ಡಾ ಅವರು ಕಾರ್ಯಕರ್ತರ ಸಂಭ್ರಮ ಸೇರಿದಂತೆ ವಿವಿಧ ವಿಷಯಗಳ ಕುರಿತು ರೂಪುರೇಶೆ ಸಿದ್ಧಪಡಿಸಿದ್ದಾರೆ ಎಂದು ಉನ್ನತ ಮೂಲಗಳು ಮಾಹಿತಿ ಹಂಚಿಕೊಂಡಿವೆ. ಪಶ್ಚಿಮ ಬಂಗಾಳದಲ್ಲಿ ಎಲ್ಲಾ 7 ಹಂತದ ಚುನಾವಣೆಯಲ್ಲಿ ಹಿಂಸಾಚಾರ ನಡೆದಿರುವ ಹಿನ್ನೆಲೆಯಲ್ಲಿ 400ಕ್ಕೂ ಹೆಚ್ಚು ಬೆಟಾಲಿಯನ್‌ಗಳನ್ನು ಭದ್ರತೆಗೆ ನಿಯೋಜಿಸಲಾಗಿದೆ. ಚುನಾವಣೋತ್ತರ ಹಿಂಸಾಚಾರ ತಡೆಯಲು ಅಗತ್ಯ ಪೊಲೀಸ್ ಬಂದೋಬಸ್ತ್ ಮಾಡಲಾಗಿದೆ. ಸುಮಾರು 400 ಕೇಂದ್ರೀಯ ಸಶಸ್ತ್ರ ಪೊಲೀಸ್ ಪಡೆ ಕಂಪನಿಗಳು ಅಂದರೆ 40,000 ಕ್ಕೂ ಹೆಚ್ಚು ಸಿಬ್ಬಂದಿಯನ್ನು ಭದ್ರತೆಗಾಗಿ ನಿಯೋಜನೆ ಮಾಡಲಾಗಿದೆ.

## ನಿಷೇಧಾಜ್ಞೆ




ಮತ ಎಣಿಕೆ ಹಿನ್ನೆಲೆಯಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ತಡೆಯಲು ಜೂನ್ 3 ಸೋಮವಾರ ಸಂಜೆ 6 ಗಂಟೆಯಿಂದ ಜೂನ್ 5ರ ಮಧ್ಯರಾತ್ರಿ 12 ಗಂಟೆಯವರೆಗೆ ದೇಶಾದ್ಯಂತ ನಿಷೇಧಾಜ್ಞೆ ಜಾರಿಯಲ್ಲಿರುತ್ತದೆ. ನಿಷೇಧಾಜ್ಞೆ ವೇಳೆ ಸಾರ್ವಜನಿಕರು ಐದು ಅಥವಾ ಅದಕ್ಕಿಂತ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕ ರಸ್ತೆ, ಬೀದಿ, ಓಣಿ, ಕೇರಿಗಳಲ್ಲಿ, ಸಾರ್ವಜನಿಕ ಸ್ಥಳ, ಸಾರ್ವಜನಿಕ ಕಟ್ಟಡ ಮುಂತಾದವುಗಳಲ್ಲಿ ಗುಂಪು ಸೇರುವಂತಿಲ್ಲ. ಯಾವುದೇ ಆಯುಧ, ಕುಡುಗೋಲು, ಖಡ್ಗ, ಭರ್ಚಿ, ಚೂರಿ, ದೊಣ್ಣೆ, ಪಿಸ್ತೂಲು, ಬಂದೂಕು ಸೇರಿದಂತೆ ಯಾವುದೇ ಮಾರಕಾಸ್ತ್ರಗಳನ್ನು ಒಯ್ಯುವುದು ಮತ್ತು ಸಾಗಾಟ ಮಾಡುವುದನ್ನು ನಿಷೇಧಿಸಲಾಗುತ್ತದೆ.

## ಮೋದಿ ಮತ್ತೆ ಪ್ರಧಾನಿ ಆಗ್ತಾರೆ ಸಮೀಕ್ಷೆ ಯಾವತ್ತಿಗೂ ತಪ್ಪಾಗಲ್ಲ

• ಉದಯವಾಹಿನಿ, ಮಡಿಕೇರಿ

ಲೋಕಸಭಾ ಚುನಾವಣೋತ್ತರ ಸಮೀಕ್ಷೆಗಳು ಯಾವತ್ತಿಗೂ ತಪ್ಪಾಗೋದಿಲ್ಲ. ಎನ್‌ಡಿಎ ಪಕ್ಷ ಹೆಚ್ಚು ಸ್ಥಾನ ಗಳಿಸಲಿದೆ. ಮೋದಿ ಮತ್ತೆ ಪ್ರಧಾನಿಯಾಗಲಿದ್ದಾರೆ ಅಂತ ನಟ ಚೇತನ್ ಹೇಳಿದ್ದಾರೆ. ಮಡಿಕೇರಿಯಲ್ಲಿ ಸುದ್ದಿಗಾರರೊಂದಿಗೆ ಅವರು 2014-2019ರಲ್ಲಿ ಇದ್ದ ಮೋದಿ ಅಲೆ ಈಗ ಇಲ್ಲ.ಮೋದಿ ಬ್ರ್ಯಾಂಡ್ ಕಡಿಮೆ ಆಗಿರಬಹುದು. ಆದ್ರೇ ಬಿಜೆಪಿಗೆ ದೊಡ್ಡ ಮಟ್ಟದ ಫಲಿತಾಂಶ ಬರಲಿದೆ ಎಂಬುದಾಗಿ ಭವಿಷ್ಯ ನುಡಿದಿದ್ದಾರೆ. ಲೋಕಸಭಾ ಚುನಾವಣೆಯ ಮತದಾನ ಮುಕ್ತಾಯದ ನಂತ್ರ ಚುನಾವಣೋತ್ತರ ಸಮೀಕ್ಷೆಗಳ ವರದಿಯನ್ನು ನೋಡಿದ್ರೇ, ಎಲ್ಲಾ ಸಮೀಕ್ಷೆ ಒಂದೇ ರೀತಿಯಲ್ಲಿ ಇದೆ. ಅದರಲ್ಲಿ ಯಾವುದೇ ಗೊಂದಲಗಳಿಲ್ಲ. ಈ ಸಮೀಕ್ಷೆಗಳು ಯಾವತ್ತಿಗೂ ತಪ್ಪಾಗುವುದಿಲ್ಲ ಎಂದರು.

## ಇವತ್ತು ಸಂಜೆ ಮುಗಿಸ್ತೀವಿ : ಮಾಜಿ ಸಚಿವನಿಗೆ ಕೊಲೆ ಬೆದರಿಕೆ!

• ಉದಯವಾಹಿನಿ, ದಾವಣಗೆರೆ

ಮಾಜಿ ಸಚಿವ ಎಂಪಿ ರೇಣುಕಾಚಾರ್ಯಗೆ ಕೊಲೆ ಬೆದರಿಕೆ ಒಡ್ಡಲಾಗಿದೆ. ದೂರವಾಣಿ ಕರೆ ಮಾಡಿ ಸಚಿವನಿಗೆ ಪ್ರಾಣ ಬೆದರಿಕೆ ಹಾಕಲಾಗಿದೆ +60695539248 ಹಾಗೂ +912259155161 ನಂಬರ್ ನಿಂದ ಕರೆ ಮಾಡಿ ಬೆದರಿಕೆ ಹಾಕಲಾಗಿದ್ದು ಇಂದು ಸಂಜೆ ನಿಮ್ಮನ್ನು ಮುಗಿಸುತ್ತೇವೆ ಎಂದು ದುಷ್ಕರ್ಮಿಗಳು ಬೆದರಿಸಿದ್ದಾರೆ ರೇಣುಕಾಚಾರ್ಯ ಪುತ್ರನಿಗೂ ಕೊಲೆ ಬೆದರಿಕೆ ಒಡ್ಡಲಾಗಿದ್ದು ಈ ಕುರಿತು ಅವರು ಮಾಧ್ಯಮ ಪ್ರಕಟಣೆ ಹೊರಡಿಸಿದ್ದಾರೆ. ಈ ಬಗ್ಗೆ ಪ್ರತಿಕ್ರಿಯಿಸಿರುವ ರೇಣುಕಾಚಾರ್ಯ ನಾನು ಇಂಥಹ ಬೆದರಿಕೆಗಳನ್ನು ಸಾಕಷ್ಟು ನೋಡಿದ್ದೇನೆ. ಈ ಹಿಂದೆ ನನಗೆ ದುಬೈನಿಂದಲೂ ಕರೆಗಳು ಬಂದಿದ್ದವು. ಈ ರೀತಿಯ ಗೊಡ್ಡು ಬೆದರಿಕೆಗಳಿಗೆಲ್ಲ ನಾನು ಬಗ್ಗೋದಿಲ್ಲ, ಕೂಡಲೇ ಬೆದರಿಕೆ ಕರೆ ಕುರಿತು ದೂರು ದಾಖಲಿಸುತ್ತೇನೆ ಎಂದಿದ್ದಾರೆ.

## ನರೇಂದ್ರ ಮೋದಿಯವರು ಮತ್ತೆ ಪ್ರಧಾನಿಯಾಗುವುದು ಖಚಿತ

• ಉದಯವಾಹಿನಿ, ಬೆಂಗಳೂರು

ಯಾವ ಸಮೀಕ್ಷೆಗಳು ಬೇಡ, ನರೇಂದ್ರ ಮೋದಿಯವರು ಮತ್ತೆ ಪ್ರಧಾನಿಯಾಗುವುದು ಖಚಿತ ಎಂದು ಕೆ.ಎಸ್.ಈಶ್ವರಪ್ಪ ಹೇಳಿದರು. ಸುದ್ದಿಗಾರರೊಂದಿಗೆ ಶಿವಮೊಗ್ಗದಲ್ಲಿ ಮಾತನಾಡಿದ ಅವರು, ಚುನಾವಣೆ ಎಂಬುವುದು ನಿಮಿತ್ತ ಮಾತ್ರ. ಮೋದಿಯವರು ಜನರ ಹೃದಯವನ್ನು ಗೆದ್ದಿದ್ದಾರೆ. ಅವರು ಪ್ರಧಾನಿಯಾಗುವುದು ಖಚಿತ. ಸಮೀಕ್ಷೆ ಇದಕ್ಕೆ ಇಂಬುಕೊಟ್ಟಿದೆ ಅಷ್ಟೇ ಎಂದರು. ಕಾಂಗ್ರೆಸ್‌ನವರ ಟೀಕೆಗೆ ಉತ್ತರ ಕೊಡಬೇಕಾಗಿಲ್ಲ. ನಾಳೆಯವರೆಗೂ ಅವರು ಕಾಂಗ್ರೆಸ್ ಅಧಿಕಾರಕ್ಕೆ ಬರುತ್ತೇ ಎಂದು ಹೇಳುತ್ತಲೇ ಇರುತ್ತಾರೆ. ಒಂದು ಪಕ್ಷ ಸೋತರೆ ಇವಿಎಂ ಮಿಷನ್ ಮೇಲೆ ಆರೋಪ ಹೊರಿಸುತ್ತಾರೆ. ಅವರು ಏನು ಹೇಳುತ್ತಾರೆ ಎಂದು ನಾನು ಈ ದಿನವೇ ಹೇಳುತ್ತೇನೆ ಎಂದರು. ರಾಜ್ಯದಲ್ಲಿನ ಸಮೀಕ್ಷೆ ಕುರಿತಂತೆ ಮಾತನಾಡಿದ ಅವರು ರಾಜ್ಯದಲ್ಲಿ ಬಿಜೆಪಿ ಹೆಚ್ಚು ಸ್ಥಾನ ಖಂಡಿತ ಗಳಿಸುತ್ತದೆ. ಕಾಂಗ್ರೆಸ್ ಕೂಡ 7-8 ಸ್ಥಾನ ಗೆಲ್ಲುತ್ತದೆ ಎಂದು ಸಮೀಕ್ಷೆ ಹೇಳಿರುವುದು ಆಶ್ಚರ್ಯ ತಂದಿದೆ. ಅದೇನೇ ಆಗಿರಲಿ ರಾಜ್ಯದ ಬಿಜೆಪಿ ಮಟ್ಟಿಗೆ ಶುದ್ಧೀಕರಣವಂತೂ ಆಗೇ ಆಗುತ್ತದೆ ಎಂದರು.

## ಎಕ್ಸಿಟ್ ಪೋಲ್ ಫಲಿತಾಂಶ' ಕಾಂಗ್ರೆಸ್ಸಿಗರ ಎದೆಬಡಿತ ಹೆಚ್ಚಿಸಿದೆ

• ಉದಯವಾಹಿನಿ, ಬೆಂಗಳೂರು

ಲೋಕಸಭಾ ಚುನಾವಣೆಯ ಎಕ್ಸಿಟ್ ಪೋಲ್ ಫಲಿತಾಂಶ ಬಂದ ಬಳಿಕ ರಾಜ್ಯದ ಆಡಳಿತ ಪಕ್ಷದ ಮುಖಂಡರಿಗೆ, ಮಾನ್ಯ ಮುಖ್ಯಮಂತ್ರಿಯಾದಿಯಾಗಿ ಸಚಿವರಿಗೂ ಕೂಡ ಎದೆಬಡಿತ ಹೆಚ್ಚಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ವಿಶ್ಲೇಷಿಸಿದರು.

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣ ಸಣ್ಣದಲ್ಲ; ಇದರ ಆಳ ಮತ್ತು ಅಗಲ ಇನ್ನೂ ಹೆಚ್ಚಾಗಿದೆ. ಕೂಡಲೇ ಸಚಿವ ನಾಗೇಂದ್ರರ ರಾಜೀನಾಮೆ ಪಡೆಯಲು ನಾವು ಆಗ್ರಹಿಸಿದ್ದರೂ ಮುಖ್ಯಮಂತ್ರಿಗಳು ಇನ್ನೂ ಮನಸ್ಸು ಮಾಡಿಲ್ಲ ಎಂದು ಆಕ್ಷೇಪಿಸಿದರು. ತೆಲಂಗಾಣಕ್ಕೆ ಹಣ ವರ್ಗಾವಣೆ, ನಕಲಿ ಕಂಪನಿ ಹೆಸರಿನಲ್ಲಿ ಬ್ಯಾಂಕ್ ಖಾತೆ ತೆರೆದು ಹಣ ವರ್ಗಾಯಿಸಿದ್ದು ಬಯಲಾಗಿದೆ. ಲೋಕಸಭಾ ಚುನಾವಣೆ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಹೈಕಮಾಂಡಿಗೋಸ್ಕರ ಈ ಎಸ್‌ಟಿ ಅಭಿವೃದ್ಧಿ ನಿಗಮದ 187 ಕೋಟಿ ಹಣವನ್ನು ತೆಲಂಗಾಣಕ್ಕೆ ವರ್ಗಾಯಿಸಿದ್ದಾರೆ. ಬೇರೆ ಬೇರೆ ಖಾತೆಗಳಿಂದ ಈ ಹಣ ಚುನಾವಣೆಗೆ ದುರುಪಯೋಗ ಆಗಿದೆ ಎಂದು ಆರೋಪಿಸಿದರು. ಸಿಬಿಐ ತನಿಖೆಗೆ ಕೋರಿ ಯೂನಿಯನ್ ಬ್ಯಾಂಕ್ ಕೂಡ ಪತ್ರ ಬರೆದಿದೆ. ರಾಜ್ಯ ಸರಕಾರ ಮತ್ತು ಮುಖ್ಯಮಂತ್ರಿಗಳು ತಮ್ಮ ಕೊಳಕನ್ನು ಮುಚ್ಚಿ ಹಾಕಲು ಆತುರಾತುರವಾಗಿ ಎಸ್‌ಐಟಿ ರಚಿಸಿದ್ದಾರೆ ಎಂದು ಅವರು ಟೀಕಿಸಿದರು.



# ಸುಳ್ಳು ಹೇಳಿ ಡ್ಯಾಮೇಜ್ ಕಂಟ್ರೋಲ್ ಮಾಡಲು ಸಿಎಂ ಪ್ರಯತ್ನ

• ಉದಯವಾಹಿನಿ, ಬೆಂಗಳೂರು

**ರಾಜೀನಾಮೆ ನೀಡೋವರೆಗೂ ತೀವ್ರ ಹೋರಾಟ**

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣದಡಿ ಸಚಿವ ನಾಗೇಂದ್ರರ ರಾಜೀನಾಮೆ ಪಡೆಯುವವರೆಗೆ ಬಿಜೆಪಿ ಹೋರಾಟ ಮುಂದುವರೆಸಲಿದೆ ಎಂದು ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು ತಿಳಿಸಿದರು. ಕಾಂಗ್ರೆಸ್ ಸರಕಾರ ದಲಿತರ 187 ಕೋಟಿ ಹಣವನ್ನು ನುಂಗಿ ನೀರು ಕುಡಿದಿದೆ ಎಂದು ಆಕ್ಷೇಪಿಸಿದರು. ಸಿದ್ದರಾಮಯ್ಯನವರು ಸಚಿವರ ರಾಜೀನಾಮೆ ಪಡೆಯದೆ ಭಂಡತನ ಮೆರೆಯುತ್ತಿದ್ದಾರೆ ಎಂದು ಟೀಕಿಸಿದರು.

ವಾಲ್ಮೀಕಿ ಅಭಿವೃದ್ಧಿ ನಿಗಮದ ಅವ್ಯವಹಾರ ಪ್ರಕರಣದಲ್ಲಿ ಸಚಿವ ನಾಗೇಂದ್ರ ಅವರ ರಾಜಿನಾಮೆಯನ್ನು ನಾವು ಕೇಳಿಲ್ಲ. ಪ್ರಕರಣದ ಬಗ್ಗೆ ಈಗಾಗಲೇ ಎಸ್‌ಐಟಿ ತನಿಖೆ ನಡೆಸುತ್ತಿದೆ. ಪ್ರಾಥಮಿಕ ವರದಿ ಪಡೆದು ನಂತರ ತೀರ್ಮಾನಿಸಲಾಗುವುದು. ಬೆಂಗಳೂರಿನಲ್ಲಿ ಒಳ್ಳೆ ಮಳೆಯಾಗಿದ್ದು, ಮಳೆಗೆ ಸಂಬಂಧಿಸಿದಂತೆ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳಲು ಈಗಾಗಲೇ ಸೂಚಿಸಲಾಗಿದೆ.

ಮಳೆ ಹೆಚ್ಚಾದಾಗ ಸಮಸ್ಯೆಗಳು ಉಂಟಾಗುತ್ತದೆ. ರಸ್ತೆ ಗುಂಡಿಗಳನ್ನು ಮುಚ್ಚಲು ಕ್ರಮ ತೆಗೆದುಕೊಳ್ಳಲಾಗಿದೆ. ಪಕ್ಷದ ವರಿಷ್ಠರಾದ ರಾಹುಲ್ ಗಾಂಧಿ ಅವರು ಚುನಾವಣೋತ್ತರ ಸಮೀಕ್ಷೆಯನ್ನು ಒಪ್ಪಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ. ರಾಜ್ಯದಲ್ಲಿ ನಾವು ಕನಿಷ್ಠ 15 ಸ್ಥಾನಗಳನ್ನು ಗೆಲ್ಲುತ್ತೇವೆ, ಇದು ವಾಸ್ತವ. ಆದರೆ ಸಮೀಕ್ಷಾ ವರದಿ ಇದಕ್ಕೆ ವ್ಯತಿರಿಕ್ತವಾಗಿದೆ. ಈ ಸಮೀಕ್ಷೆಯನ್ನು ನಾವು ಸಂಪೂರ್ಣ ತಳ್ಳಿಹಾಕುತ್ತೇವೆ' ಎಂದು ಸಿಎಂ ಹೇಳಿದರು. ಇನ್ನು ಸಿಎಂ ಹೇಳಿಕೆಗೆ ಪ್ರತಿಕ್ರಿಯಿಸಿದ ವಿಪಕ್ಷ ನಾಯಕ ಆರ್. ಅಶೋಕ, 'ಸಚಿವ ಬಿ. ನಾಗೇಂದ್ರ ಮಾಡುತ್ತಿರುವ ಬ್ಲಾಕ್ ಮೇಲ್‌ನಿಂದ ಮುಜುಗುರಕ್ಕೆ ಒಳಗಾಗಿರುವ ಸಿಎಂ ಸಿದ್ದರಾಮಯ್ಯ, ರಾಜೀನಾಮೆ ಕೇಳಿಯೇ ಇಲ್ಲ ಎಂದು ಸುಳ್ಳು ಹೇಳಿ ಡ್ಯಾಮೇಜ್ ಕಂಟ್ರೋಲ್ ಮಾಡಲು ಪ್ರಯತ್ನಿಸುತ್ತಿದ್ದಾರೆ. ನಿಮ್ಮ ಸಂಪುಟದ ಸದಸ್ಯರನ್ನು ಮೊದಲಿನಿಂದಲೂ ಕಂಟ್ರೋಲ್‌ನಲ್ಲಿ ಇಟ್ಟಿದ್ದಿದ್ದರೆ, ಈಗ ನಿಮ್ಮ ಸ್ವಾಭಿಮಾನ, ಘನತೆ, ಗೌರವ ಎಲ್ಲಾವನ್ನೂ ಪಣಕ್ಕಿಟ್ಟು ಡ್ಯಾಮೇಜ್ ಕಂಟ್ರೋಲ್ ಮಾಡುವ ದುಸ್ಥಿತಿ ಬರುತ್ತಿರಲಿಲ್ಲ' ಎಂದರು.

## ಮತ ಎಣಿಕೆ ಕೇಂದ್ರದ ಬಳಿ ಬಿಗಿ ಪೊಲೀಸ್ ಬಂದೋಬಸ್ತ್: ಪೊಲೀಸ್ ಆಯುಕ್ತ

• ಉದಯವಾಹಿನಿ, ಬೆಂಗಳೂರು



ನಾಳೆ ಲೋಕಸಭಾ ಚುನಾವಣೆಗೆ ಮತ ಏಣಿಕೆ ಕಾರ್ಯ ನಡೆಯಲಿದೆ. ಬೆಂಗಳೂರಿನ ಮೂರು ಕೇಂದ್ರಗಳಲ್ಲಿ ಮತಏಣಿಕೆ ಕಾರ್ಯ ನಡೆಯಲಿದ್ದು, ಮುಂಜಾಗ್ರತಾ ಕ್ರಮವಾಗಿ ಬಿಗಿ ಪೊಲೀಸ್ ಬಂದೋಬಸ್ತ್ ಕೈಗೊಳ್ಳಲಾಗಿದೆ.ಈ ಕುರಿತು ಮಾಹಿತಿ ನೀಡಿರುವಂತ ಬೆಂಗಳೂರು ನಗರ ಪೊಲೀಸ್ ಆಯುಕ್ತ ದಯಾನಂದ ಅವರು, ಬೆಂಗಳೂರಿನ ಮೂರು ಕೇಂದ್ರಗಳಲ್ಲಿ ನಾಳೆ ಲೋಕಸಭಾ ಚುನಾವಣೆಯ ಮತಏಣಿಕೆ ಕಾರ್ಯ ನಡೆಯಲಿದೆ. ಎಲ್ಲಾ ಕೇಂದ್ರಗಳ ಬಳಿಯಲ್ಲೂ ಪೊಲೀಸ್ ಬಂದೋಬಸ್ತ್ ಕೈಗೊಳ್ಳಲಾಗಿದೆ ಎಂದರು. ಬೆಂಗಳೂರಿನಲ್ಲಿ 1524 ಪೊಲೀಸರನ್ನು ಭದ್ರತೆಗಾಗಿ ನಿಯೋಜಿಸಲಾಗಿದೆ. 13 ಕೆ ಎಸ್ ಆರ್ ಪಿ ತುಕಡಿ ನಿಯೋಜಿಸಲಾಗಿದೆ. ಈಗಾಗಲೇ 512 ಪೊಲೀಸ್ ಸಿಬ್ಬಂದಿ ಸ್ಟ್ರಾಂಗ್ ರೂಂ ಬಳಿಯಲ್ಲಿ ಭದ್ರತಾ ಕಾರ್ಯ ನಿರ್ವಹಿಸುತ್ತಿದ್ದಾರೆ ಎಂದು ತಿಳಿಸಿದರು.

# ಅಕ್ರಮ ಹಣದ ವರ್ಗಾವಣೆಗೆ ಸಿಎಂ ಸಿದ್ದರಾಮಯ್ಯ ನೇರ ಹೊಣೆ

**■ ಅಕ್ರಮದಲ್ಲಿ ಸರ್ಕಾರದ ಇಡೀ ಸಂಪುಟವೇ ಭಾಗಿಯಾಗಿರುವ ಅನುಮಾನ ■ ನಿಗಮ ಮಂಡಳಿಗಳಲ್ಲಿ ಇರುವ ಹಣದ ಬಗ್ಗೆ ಲೆಕ್ಕ ನೀಡಬೇಕು**

• ಉದಯವಾಹಿನಿ, ಬೆಂಗಳೂರು

ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದಿರುವ ಅಕ್ರಮ ಹಣದ ವರ್ಗಾವಣೆಗೆ ಹಣಕಾಸು ಖಾತೆ ಹೊಂದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ನೇರ ಹೊಣೆ ಹೊರಬೇಕು ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರು ಹೇಳಿದರು. ವಿಧಾನಸೌಧದಲ್ಲಿ ಮಾಧ್ಯಮಗಳ ಜತೆ ಮಾತನಾಡಿದ ಅವರು; ಎಲ್ಲಾವನ್ನೂ ಸಚಿವ ನಾಗೇಂದ್ರ ಅವರ ತಲೆಗೆ ಕಟ್ಟುವ ಷಡ್ಯಂತ್ರ ನಡೆಯುತ್ತಿದೆ.


ಇಡೀ ಅಕ್ರಮದಲ್ಲಿ ಸರ್ಕಾರದ ಇಡೀ ಸಂಪುಟವೇ ಭಾಗಿಯಾಗಿರುವ ಅನುಮಾನವಿದೆ. ಹೀಗಾಗಿ ಎಲ್ಲಾ ನಿಗಮ ಮಂಡಳಿಗಳಲ್ಲಿ ಇರುವ ಹಣದ ಬಗ್ಗೆ ಜನರ ಮುಂದೆ ಲೆಕ್ಕ ಇಡಬೇಕು ಎಂದು ಒತ್ತಾಯ ಮಾಡಿದರು.

ನಿಗಮದ ಹಣ ಹಲವಾರು ನಕಲಿ ಖಾತೆಗಳಿಗೆ ವರ್ಗಾವಣೆ ಆಗಿದೆ. ಈ ಬಗ್ಗೆ ದಾಖಲೆಗಳೇ ಬಹಿರಂಗ ಆಗಿವೆ. ಕೇವಲ ತೆಲಂಗಾಣಕ್ಕೆ ಮಾತ್ರ ಈ ಹಣ ಯಾಕೆ ಹೋಯಿತು? ಯಾರು ವರ್ಗಾವಣೆ ಮಾಡಿಸಿದರು? ಇಲ್ಲಿ ಯೂನಿಯನ್ ಬ್ಯಾಂಕ್ ಖಾತೆಯಿಂದ ಹಣ ವರ್ಗಾವಣೆ ಅದ ಕೆಲ ಹೊತ್ತಿನಲ್ಲಿ ನಕಲಿ ಬ್ಯಾಂಕ್ ಖಾತೆಗಳಿಂದ ರಾಕೆಟ್ ವೇಗದಲ್ಲಿ ಅಷ್ಟೂ ದೊಡ್ಡ ಮೊತ್ತ ಹಣವನ್ನು ಡ್ರಾ ಮಾಡಲಾಗಿದೆ. ಇದು ಬಹುದೊಡ್ಡ ಅಕ್ರಮ. ಸಿಎಂ ಸೇರಿದಂತೆ ಇಡೀ ಸಂಪುಟವೇ ಶಾಮೀಲಾಗಿದೆ ಎಂದು ಅವರು ನೇರ ಆರೋಪ ಮಾಡಿದರು.

**ದೊಡ್ಡ ಮೊತ್ತ ಹಣ ಡ್ರಾ**

ಕೇವಲ ವಾಲ್ಮೀಕಿ ಅಭಿವೃದ್ಧಿ ನಿಗಮದಿಂದ ಮಾತ್ರ ಹಣ ವರ್ಗಾವಣೆ ಆಗಿರಲು ಸಾಧ್ಯವಿಲ್ಲ. ಬೇರೆ ಬೇರೆ ಇಲಾಖೆಗಳ ನಿಗಮ ಮಂಡಳಿಗಳ ಖಾತೆಗಳಿಂದ ಹಣ ವರ್ಗ ಆಗಿರುವ ಸಾಧ್ಯತೆ ಇದೆ. ತೆಲಂಗಾಣ ಚುನಾವಣೆಗೆ ರಾಜ್ಯದಿಂದ ಯಾರೆಲ್ಲ ಉಸ್ತುವಾರಿಗಳು ಇದ್ದರು? ಅದನ್ನೆಲ್ಲ ಗಮನಿಸಬೇಕು ಎಂದು ಕುಮಾರಸ್ವಾಮಿ ಅವರು ಹೇಳಿದರು.

ಹಣಕಾಸಿನ ಖಾತೆ ಹೊಂದಿರುವ ಸಿಎಂ ಸಿದ್ದರಾಮಯ್ಯ ಅವರೇ ಇದಕ್ಕೆಲ್ಲ ನೇರ ಜವಾಬ್ದಾರಿ ಹೊರಬೇಕು. ಹಗರಣದ ತನಿಖೆ ಬಗ್ಗೆ ಆಮೆ ವೇಗ! ಆದರೆ ಹಣ ವರ್ಗಾವಣೆ ಮಾಡಿಕೊಳ್ಳಲು ರಾಕೆಟ್ ವೇಗ!! ಇದು ಇವರ ಕಾರ್ಯವೈಖರಿ ಎಂದು ಕುಮಾರಸ್ವಾಮಿ ಅವರು ಕಟುವಾಗಿ ಟೀಕಿಸಿದರು.



> ಈಗ ಎಸ್‌ಐಟಿ ರಚನೆ ಮಾಡಿ ಯಾರ ಮೇಲೆ ಕ್ರಮ ಕೈಗೊಳ್ಳುತ್ತಾರೆ ಇವರು? ಆತ್ಮಹತ್ಯೆ ಮಾಡಿಕೊಂಡ ಅಧಿಕಾರಿ ಮರಣ ಪತ್ರದಲ್ಲಿ ಸಚಿವ ನಾಗೇಂದ್ರ ಹೆಸರನ್ನೂ ಬರೆದಿಲ್ಲ. 36 ಜನ ಸಚಿವರಿದ್ದಾರೆ, ನಾವು ಯಾರೂ ಅಂತ ಅಂದುಕೊಳ್ಳಬೇಕು ಹಲವಾರು ನಿಗಮ ಮಂಡಳಿಗಳಲ್ಲಿ ಹೀಗೆ ಆಗುತ್ತಿದೆ. ಎಲ್ಲಾವೂ ತನಿಖೆ ಆಗಬೇಕು
>
> -ಎಚ್.ಡಿ. ಕುಮಾರಸ್ವಾಮಿ
> ಮಾಜಿ ಮುಖ್ಯಮಂತ್ರಿ

**ಈ ಬಾರಿ ಪೆನ್‌ಡ್ರೈವ್ ಹೆಚ್ಚು ಸದ್ದು ಮಾಡುತ್ತಿದೆ**

ಹಗರಣದಲ್ಲಿ ಯೂನಿಯನ್ ಬ್ಯಾಂಕ್ ಇರುವುದರಿಂದ ಸಿಬಿಐ ತನಿಖೆ ಆಗಿಯೇ ಆಗುತ್ತದೆ. ಆದರೆ, ರಾಜ್ಯ ಸರ್ಕಾರ ತರಾತುರಿಯಲ್ಲಿ ಎಸ್‌ಐಟಿ ರಚನೆ ಮಾಡಿದೆ. ಎಸ್‌ಐಟಿ ಆದರೆ ದಾಖಲೆ ನಾಶ ಮಾಡಬಹುದು, ಕಡತಗಳನ್ನು ಸುಟ್ಟು ಹಾಕಬಹುದು. ಆತ್ಮಹತ್ಯೆ ಮಾಡಿಕೊಂಡ ಅಧಿಕಾರಿ ಚಂದ್ರಶೇಖರ್ ಅವರ ಮನೆಯಿಂದ ಪೆನ್‌ಡ್ರೈವ್ ತೆಗೆದುಕೊಂಡು ಬಂದರಲ್ಲ, ಆ ಪೆನ್ ಡ್ರೈವ್ ಎಲ್ಲಿದೆ ಈಗ? ಯಾಕೋ.. ಈ ಬಾರಿ ಪೆನ್‌ಡ್ರೈವ್ ಹೆಚ್ಚು ಸದ್ದು ಮಾಡುತ್ತಿದೆ ಎಂದು ಸರ್ಕಾರಕ್ಕೆ ಟಾಂಗ್ ಕೊಟ್ಟರು ಮಾಜಿ ಮುಖ್ಯಮಂತ್ರಿ.

ಇಷ್ಟು ಮೊತ್ತದ ಹಣವನ್ನು ಯಾರ ನಿರ್ದೇಶನದ ಮೇರೆಗೆ ಮಾಡಿದ್ದರು. ನಿಗಮ ಆಡಳಿತ ಮಂಡಳಿ ಸಭೆಯಲ್ಲಿ ಇದೆಲ್ಲಾ ಚರ್ಚೆ ನಡೆದು ನಿರ್ಧಾರ ತೆಗೆದುಕೊಳ್ಳಬೇಕಿತ್ತು. ಜನರ ತೆರಿಗೆ ಹಣ, ಅವರ ಬೆವರಿನ ಹಣ. ಜನರ ದುಡ್ಡನ್ನು ಇಷ್ಟು ಸ್ವೇಚ್ಛಾಚಾರವಾಗಿ ಬಳಕೆ ಮಾಡಿಕೊಂಡಿದ್ದಾರೆ. ನಿಮಗೆ ಯಾವ ನೈತಿಕತೆ ಇದೆ ಸಿದ್ದರಾಮಯ್ಯನವರೇ? ಬಡವರ ದುಡ್ಡನ್ನೇ ಕೊಳ್ಳೆ ಹೊಡೆಯೋದು, ಅವರನ್ನು ಉದ್ಧಾರ ಮಾಡುತ್ತಿದ್ದೇವೆ ಎಂದು ನಾಟಕ ಆಡೋದು. ಇದು ಯಾವ ಸೀಮೆ ಅಭಿವೃದ್ಧಿ? ಎಂದು ಅವರು ಖಾರವಾಗಿ ಪ್ರಶ್ನೆ ಮಾಡಿದರು. ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಬಹಳ ಮಾತಾನಾಡುತ್ತಾರೆ. ಪ್ರತಿಯೊಂದಕ್ಕೂ ಮುಂದೆ ಬಂದು ಹೇಳಿಕೆ ಕೊಡುತ್ತಾರೆ. ಇದಕ್ಕೂ ಅವರು ಉತ್ತರ ಕೊಡಲಿ. ಯಾರಪ್ಪನ ಮನೆಯ ದುಡ್ಡು ಇದು? ಕೇಂದ್ರ ಸರ್ಕಾರ ದುಡ್ಡು ಕೊಡುತ್ತಿಲ್ಲ ಎಂದು ಹೇಳುತ್ತೀರಿ, ಇನ್ನೊಂದು ಕಡೆ ಇರುವ ಹಣವನ್ನು ಹೀಗೆ ಲೂಟಿ ಮಾಡುತ್ತೀರಿ!! ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

**ಈ ದಿನದ ದರ** ಪೆಟ್ರೋಲ್: 99.84 ₹/L | ಡೀಸೆಲ್ : 85.93 ₹/L | ಬಂಗಾರ: ₹7,211/Gram(24ct) ₹6,610/Gram(22ct) | ಬೆಳ್ಳಿ: ₹93.00/Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

### ಕಾವಿಗರ ವೈವಿಧ್ಯ

ಸೂರ್ಯ ಬೆಂಕಿಯ ಬಣ್ಣ ಕಾವಿ. ಸುಟ್ಟು ಭಸ್ಮ ಮಾಡುವುದು ಬೆಂಕಿ. ಕಾಮಾದಿ ಸುಟ್ಟು ಜಗದ ನಶ್ವರತೆ ಮನಗಂಡವನ ಕುರುಹು ವೇಷ ಕಾವಿ. ಆದ್ದರಿಂದ ಕಾವಿಗೆ ಎಲ್ಲಿಲ್ಲದ ಗೌರವ. ಕಾವಿಯಿಂದಲ್ಲ ವ್ಯಕ್ತಿಯ ಘನತೆ. ವ್ಯಕ್ತಿಯ ಅರ್ಹತೆಯಿಂದ ಕಾವಿಗೆ ಘನತೆ. ಕಾವಿಯಿದ್ದಲ್ಲಿ ಅರ್ಹತೆ ಇದೆ ಎಂದರ್ಥ. ಲಾಂಛನಕ್ಕೆ ಶರಣೆಂದ ಬಸವಣ್ಣ. ಕಾವಿ ಧರಿಸದೆಯೂ ಅರ್ಹತೆಯಿಂದ ಗೌರವ ಗಳಿಸಿದವರು ಸಿದ್ಧಾರೂಢ ಸಿದ್ದೇಶ್ವರರಂಥ ಸ್ವಾಮಿಗಳು, ಗಾಂಧೀ ವಿನೋಬಾರಂಥ ಮಹಾತ್ಮರು. ಇಂಥವರಿಗಿಂತ ಅರ್ಹತೆ ಇಲ್ಲದೆಯೂ ಆ ಗೌರವಕ್ಕಾಗಿ ಕಾವಿ ತೊಟ್ಟು ತಾತ್ಕಾಲಿಕ ಗೌರವ ಗಿಟ್ಟಿಸಿ ಅನರ್ಹತೆ ತೋರಿ ಅರ್ಹ ಕಾವಿಗರ ಮಾನ ತೆಗೆವ ನಕಲಿ ಕಾವಿಗರು ಹೆಚ್ಚು! ಕಾವಿಗರಿಗೆ ಆಶೆ ಆಕಾಂಕ್ಷೆ ಇರಬಾರದೆನ್ನುವುದಕ್ಕಿಂತ ಅನಿವಾರ್ಯ - ಮಾನವಸಹಜವಲ್ಲದ, ಮಾನವೀಯ ಮೌಲ್ಯ ಹಾಗೂ ಸಾಮಾಜಿಕ ಸ್ವಾಸ್ಥ್ಯಕ್ಕೆ ವಿರುದ್ಧ ಪ್ರವೃತ್ತಿ ಇರಬಾರದೆನ್ನಬೇಕು. ಹಣದಾಶೆಗಾಗಿ ಕಾವಿ ಧರಿಸಿ ಕಾರ್ಯಕ್ರಮ ಹುಡುಕಿಕೊಂಡು ಹೋಗುವವರುಂಟು. ಅಲ್ಲಿ ನೈಜ ಕಾವಿಗರಿಗಿಂತ ಜೋರು ತೋರುವುದುಂಟು. ಮತ ಮಾನ್ಯ ಸಾಧನೆ ಸಿದ್ಧಿ ಇಲ್ಲದೆಯೂ ಗಂಡ ಹೆಂಡತಿ ಮಕ್ಕಳು ಜೊತೆ ಇದ್ದರೂ ಕಾವಿ ಧರಿಸುವುದುಂಟು. ಕಾವಿಯಲ್ಲಿದ್ದು ಚೀಟಿ ಬಡ್ಡಿ ಹಣದ ದಂಧೆ ಮಾಡುವುದುಂಟು. ಕಾವಿಯ ವೇಷ ತೊಟ್ಟು ಕಾವಿಗರ ಕಾಣಿಕೆಯ ಹಣ ಹಣದ ಚೀಲ ಕದಿಯುವವರುಂಟು. ಇಂಥ ವೈವಿಧ್ಯರನ್ನು ಹೊತ್ತ ಭೂತಾಯಿಗೆ ನಮೋ ನಮಃ!!!

# ಮತ ಎಣಿಕೆ: ರಾಜ್ಯ ರಾಜಧಾನಿಯ ರಸ್ತೆಗಳಲ್ಲಿ ಸಂಚಾರ ಬಂದ್

■ ಎಣಿಕೆಗಾಗಿ ಮೂರು ಕೇಂದ್ರಗಳನ್ನು ಗುರುತು ■ ವಾಹನಗಳನ್ನು ನಿಲುಗಡೆ ಮಾಡಲು ಅವಕಾಶ

• ಉದಯವಾಹಿನಿ, ಬೆಂಗಳೂರು

ಏಳು ಹಂತಗಳಲ್ಲಿ ನಡೆದ ಲೋಕಸಭಾ ಚುನಾವಣೆಯ ಪೈಕಿ ರಾಜ್ಯದಲ್ಲಿ ಎರಡು ಹಂತಗಳಲ್ಲಿ ಮತದಾನ ನಡೆದಿತ್ತು. ಮತ ಎಣಿಕೆ ಕಾರ್ಯ ನಡೆಯಲಿದ್ದು, ಬೆಂಗಳೂರಿನಲ್ಲಿ ಮತ ಎಣಿಕೆಗಾಗಿ ಮೂರು ಕೇಂದ್ರಗಳನ್ನು ಗುರುತಿಸಲಾಗಿದೆ. ವಸಂತನಗರದ ಮೌಂಟ್ ಕಾರ್ಮೆಲ್ ಕಾಲೇಜ್, ಜಯನಗರದ ಎನ್ ಎಸ್ ಎಮ್ ಆರ್ ವಿ ಕಾಲೇಜ್ ಹಾಗೂ ಬೆಂಗಳೂರು ಕೇಂದ್ರ ವಿಭಾಗದಲ್ಲಿರುವ ಸೆಂಟ್ ಜೋಸೆಫ್ ಕಾಲೇಜಿನಲ್ಲಿ ಮತ ಎಣಿಕೆ ನಡೆಯಲಿದೆ.

ಇನ್ನು ಪರ್ಯಾಯ ಮಾರ್ಗ ಸೂಚಿಸಲಾಗಿದ್ದು, ಪ್ಯಾಲೇಸ್ ರಸ್ತೆಯಿಂದ ಮೌಂಟ್ ಕಾರ್ಮೆಲ್ ಕಾಲೇಜು, ಕಲ್ಪನಾ ಜಂಕ್ಷನ್ ಮತ್ತು ಚಂದ್ರಿಕಾ ಜಂಕ್ಷನ್ ಕಡೆಗೆ ಸಂಚರಿಸುವ ವಾಹನಗಳು ಪ್ಯಾಲೇಸ್ ರಸ್ತೆ ಎಡ ತಿರುವು ಚಕ್ರವರ್ತಿ ಲೇಔಟ್ ಮುಖ್ಯ ಪ್ಯಾಲೇಸ್ ವಸಂತನಗರ ಅಂಡರ್ ಬ್ರಿಡ್ಜ್ ಎಡ ತಿರುವು ಎಂ.ವಿ.ಜಯರಾಮ ರಸ್ತೆ ಹಳೆ ಉದಯ ಟಿವಿ ಜಂಕ್ಷನ್ ಎಡ ತಿರುವು ಕಂಟೋನ್ಮೆಂಟ್ ರಸ್ತೆಯ ಮೂಲಕ ಸಂಚರಿಸಬಹುದು. ಬಸವೇಶ್ವರ ಜಂಕ್ಷನ್ ಕಡೆಯಿಂದ ಉದಯ ಟಿವಿ ಜಂಕ್ಷನ್ ಮತ್ತು ಜಯಮಹಲ್ ರಸ್ತೆಯ ಕಡೆಗೆ ಸಂಚರಿಸಲು, ಬಸವೇಶ್ವರ ಜಂಕ್ಷನ್ ಓಲ್ಡ್ ಹೈಗೌಂಡ್ಸ್ ಜಂಕ್ಷನ್ ಕಲ್ಪನಾ ಜಂಕ್ಷನ್ ಬಲ ತಿರುವು ಚಂದ್ರಿಕಾ ಜಂಕ್ಷನ್ ಎಡ ತಿರುವು ಅಯ್ಯಪ್ಪಸ್ವಾಮಿ ಟೆಂಪಲ್ ಉದಯ ಟಿವಿ ಜಂಕ್ಷನ್ ಕಡೆಯಿಂದ ಎಡ ತಿರುವು ಎಂ.ವಿ. ಜಯರಾಂ ರಸ್ತೆ ಅಥವಾ ನೇರ ಜಯಮಹಲ್ ರಸ್ತೆ ಅಥವಾ ಬಲ ತಿರುವು ರೈಲ್ವೆಸ್ಟಷನ್ ರಸ್ತೆ ಕಂಟೋನ್ಮೆಂಟ್ ಮೂಲಕ ಫ್ರೇಜರ್ ಟೌನ್ ಅಥವಾ ಕ್ವೀನ್ಸ್ ರಸ್ತೆಯ ಮೂಲಕ ತೆರಳಬಹುದು. ಎಸ್ ಎಸ್ ಎಮ್ ಆರ್ ವಿ ಕಾಲೇಜು ಎಣಿಕಾ ಕೇಂದ್ರ: 18ನೇ ಮುಖ್ಯ ರಸ್ತೆ ಮತ್ತು 28 ನೇ ಮುಖ್ಯ ರಸ್ತೆಯ ಮಧ್ಯದಲ್ಲಿ ಬರುವ 36ನೇ ಕ್ರಾಸ್ ಸಂಚಾರ ನಿರ್ಬಂಧವಿರಲಿದೆ.

32ನೇ ಇ ಕ್ರಾಸ್ ರಸ್ತೆ ಮತ್ತು 39ನೇ ಕ್ರಾಸ್ ರಸ್ತೆ ಜಂಕ್ಷನ್ ನಡುವೆ ಬರುವ 26ನೇ ಮುಖ್ಯರಸ್ತೆಯಲ್ಲಿ ಸಂಚಾರ ನಿರ್ಬಂಧವಿರಲಿದೆ. ಇನ್ನು ಪರ್ಯಾಯ ಮಾರ್ಗಕ್ಕಾಗಿ ಈಸ್ಟ್ ಎಂಡ್ ಮುಖ್ಯ ರಸ್ತೆ, 39ನೇ ಕ್ರಾಸ್ ರಸ್ತೆ, 18ನೇ ಮುಖ್ಯ ರಸ್ತೆ, 32ನೇ ಇ-ಕ್ರಾಸ್ ರಸ್ತೆಗಳನ್ನು ಬಳಸಬಹುದು ಎಂದು ತಿಳಿಸಲಾಗಿದೆ. ಸೇಂಟ್ ಜೋಸೆಫ್ ಕಾಲೇಜು ವಾಹನ ನಿಲುಗಡೆ ನಿಷೇಧಿತ ರಸ್ತೆಗಳನ್ನು ಗುರುತಿಸಲಾಗಿದ್ದು, ವಿಠಲ್ ಮಲ್ಯ ರಸ್ತೆ ಸಿದ್ದಲಿಂಗಯ್ಯ ವೃತ್ತದಿಂದ ರಿಚ್ಮಂಡ್ ಜಂಕ್ಷನ್‌ವರೆಗೆ



ಉದಯವಾಹಿನಿ ಚಿತ್ರ

**ರಸ್ತೆಯಲ್ಲಿ ಸಂಚಾರ ನಿರ್ಬಂಧ**

**ಸೇಂಟ್ ಜೋಸೆಫ್ ಕಾಲೇಜು ಮೈದಾನ ಹಾಗೂ ಕಂಠೀರವ ಸ್ಟೇಡಿಯಂ ಪಾರ್ಕಿಂಗ್ ಸ್ಥಳದಲ್ಲಿ ವಾಹನಗಳನ್ನು ನಿಲುಗಡೆ ಮಾಡಲು ಅವಕಾಶ ಕಲ್ಪಿಸಲಾಗಿದೆ.**

**ಆರ್.ಆರ್.ಎಂ.ಆರ್ ರಸ್ತೆ ರಿಚ್ಮಂಡ್ ಸರ್ಕಲ್‌ನಿಂದ ಹಡ್ಸನ್ ಜಂಕ್ಷನ್ ತನಕ ಎನ್.ಆರ್ ರಸ್ತೆ ಹಡ್ಸನ್ ಸರ್ಕಲ್‌ನಿಂದ ಟೌನ್ ಹಾಲ್ ಜಂಕ್ಷನ್‌ವರೆಗೆ ಕೆ.ಬಿ ರಸ್ತೆ ಹೆಚ್‌ಎಲ್‌ಡಿ ಜಂಕ್ಷನ್‌ನಿಂದ ಕ್ವೀನ್ಸ್ ಜಂಕ್ಷನ್ ತನಕ ಕೆ.ಜಿ ರಸ್ತೆ ಪೊಲೀಸ್ ಕಾರ್ನರ್ ಜಂಕ್ಷನ್‌ನಿಂದ ಮೈಸೂರು ಬ್ಯಾಂಕ್ ಜಂಕ್ಷನ್‌ವರೆಗೆ ನೃಪತುಂಗ ರಸ್ತೆ ಕೆ.ಆರ್ ಜಂಕ್ಷನ್‌ನಿಂದ ಪೊಲೀಸ್ ಕಾರ್ನರ್‌ವರೆಗೆ ಕ್ವೀನ್ಸ್ ರಸ್ತೆ ಬಾಳೇಕುಂದ್ರಿ ಸರ್ಕಲ್‌ನಿಂದ ಸಿ.ಟಿ.ಒ ಸರ್ಕಲ್ ತನಕ ಸೆಂಟ್ರಲ್ ಸ್ಟ್ರೀಟ್ ರಸ್ತೆ ಬಿ.ಆರ್.ವಿ ಜಂಕ್ಷನ್‌ನಿಂದ ಅನಿಲ್ ಕುಂಬ್ಳೆ ವೃತ್ತದವರೆಗೆ ಎಂ.ಜಿ ರಸ್ತೆ ಅನಿಲ್ ಕುಂಬ್ಳೆ ವೃತ್ತದಿಂದ ಕ್ವೀನ್ಸ್ ಜಂಕ್ಷನ್‌ವರೆಗೆ ವಾಹನಗಳನ್ನು ಪಾರ್ಕ್ ಮಾಡುವಂತಿಲ್ಲ.**

## ಮತ ಎಣಿಕೆಗೆ ಒಂದೇ ದಿನ ಬಾಕಿ ಬೆಟ್ಟಿಂಗ್ ಕಟ್ಟಲು ಹಲವರ ಪೈಪೋಟಿ..!

• ಉದಯವಾಹಿನಿ, ಬೆಂಗಳೂರು

ದೇಶದಲ್ಲಿ ಏಳು ಹಂತಗಳಲ್ಲಿ ನಡೆದ ಲೋಕಸಭಾ ಚುನಾವಣೆಯ ಮತದಾನ ಈಗಾಗಲೇ ಪೂರ್ಣಗೊಂಡಿದ್ದು, ಮತ ಎಣಿಕೆ ಜೂನ್ 4ರ ನಡೆಯಲಿದೆ. ಬಹುತೇಕ ಅಂದು ಸಂಜೆಯೊಳಗೆ ಫಲಿತಾಂಶ ಹೊರಬೀಳಲಿದ್ದು ಮುಂದಿನ ಐದು ವರ್ಷಗಳ ಕಾಲ ದೇಶದ ಆಡಳಿತ ಚುಕ್ಕಾಣಿಯನ್ನು ಯಾರು ಹಿಡಿಯಲಿದ್ದಾರೆ ಎಂಬುದು ತೀರ್ಮಾನವಾಗಲಿದೆ. ಇದರ ಮಧ್ಯೆ ಅಂತಿಮ ಹಂತದ ಮತದಾನ ನಡೆದ ದಿನವಾದ ಶನಿವಾರ ಸಂಜೆ 6.30 ಗಂಟೆಯಿಂದ ಚುನಾವಣೋತ್ತರ ಸಮೀಕ್ಷೆಗಳು ಮಾಧ್ಯಮಗಳಲ್ಲಿ ಪ್ರಕಟವಾಗಿದ್ದು, ನರೇಂದ್ರ ಮೋದಿ ನೇತೃತ್ವದ ಎನ್ ಡಿ ಎ ಮೈತ್ರಿಕೂಟ ಮೂರನೇ ಬಾರಿಗೆ ಅಧಿಕಾರ ಹಿಡಿಯುವುದು ಖಚಿತ ಎಂಬ ಮಾತುಗಳು ಕೇಳಿ ಬರುತ್ತಿವೆ. ಇದರ ಮಧ್ಯೆ ಬೆಟ್ಟಿಂಗ್ ದಂಧೆಯೂ ಜೋರಾಗಿದ್ದು, ಹಣ ಮಾತ್ರವಲ್ಲದೆ ಜಮೀನು, ಕುರಿ, ಕೋಳಿ, ಆಡು ಸಹ ಬೆಟ್ಟಿಂಗ್ ಇಡಲಾಗುತ್ತಿದೆ. ಅದರಲ್ಲೂ ಕರ್ನಾಟಕದ ಪ್ರತಿಷ್ಠಿತ ಕ್ಷೇತ್ರಗಳಾದ ಬೆಂಗಳೂರು ಗ್ರಾಮಾಂತರ, ಮಂಡ್ಯ, ಹಾಸನ ಮೊದಲಾದವು ಎಲ್ಲರ ಗಮನ ಸೆಳೆದಿದೆ.

## ವಿಧಾನಪರಿಷತ್ ಚುನಾವಣೆ: ಬಿಜೆಪಿಯ ಮೂವರು ಅಭ್ಯರ್ಥಿಗಳು ನಾಮಪತ್ರ ಸಲ್ಲಿಕೆ

• ಉದಯವಾಹಿನಿ, ಬೆಂಗಳೂರು

ವಿಧಾನಪರಿಷತ್ ಚುನಾವಣೆ ಬಿಜೆಪಿ ಅಭ್ಯರ್ಥಿಗಳಾದ ಸಿ.ಟಿ.ರವಿ, ಎನ್. ರವಿಕುಮಾರ್ ಮತ್ತು ಎಂ.ಜಿ. ಮುಳೆ ಅವರು ವಿಧಾನಸೌಧದ 1ನೇ ಮಹಡಿ, ಕೊಠಡಿ ಸಂಖ್ಯೆ 121ರಲ್ಲಿ ನಾಮಪತ್ರ ಸಲ್ಲಿಸಿದರು. ಈ ಸಂದರ್ಭದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ, ವಿರೋಧ ಪಕ್ಷದ ನಾಯಕ ಆರ್. ಅಶೋಕ್, ರಾಜ್ಯದ ಮಾಜಿ ಮುಖ್ಯಮಂತ್ರಿ ಡಿ.ವಿ. ಸದಾನಂದ ಗೌಡ, ರಾಜ್ಯದ ಮಾಜಿ ಉಪಮುಖ್ಯಮಂತ್ರಿ ಡಾ. ಸಿ.ಎನ್. ಅಶ್ವತ್ಥನಾರಾಯಣ್, ವಿಧಾನಪರಿಷತ್ ವಿಪಕ್ಷ ನಾಯಕ ಕೋಟ ಶ್ರೀನಿವಾಸ ಪೂಜಾರಿ, ರಾಜ್ಯಸಭಾ ಸದಸ್ಯ ಲೆಹರ್ ಸಿಂಗ್, ಶಾಸಕರಾದ ಗೋಪಾಲಯ್ಯ, ಮುನಿರತ್ನ, ಸುನಿಲ್ ಕುಮಾರ್, ಸುರೇಶ್, ಮಾನಪ್ಪ ವಜ್ಜಲ, ವಿಧಾನ ಪರಿಷತ್ ಸದಸ್ಯರಾದ ಛಲವಾದಿ ನಾರಾಯಣಸ್ವಾಮಿ, ಹನುಮಂತ ನಿರಾಣಿ ಅವರು ಉಪಸ್ಥಿತರಿದ್ದರು.

## ಸರ್ಕಾರ ಈ ಪೆಡ್ಲರ್‌ಗೂ ಅಮಾಯಕ ಪಟ್ಟ ಕಟ್ಟಿದರೆ ಅಚ್ಚರಿ ಇಲ್ಲ: ಬಿಜೆಪಿ

• ಉದಯವಾಹಿನಿ, ಬೆಂಗಳೂರು

ನಗರದಲ್ಲಿ ರೇವ್ ಪಾರ್ಟಿ ಮೂಲಕ ಬೆಂಗಳೂರು ಮಾನ ರಾಷ್ಟ್ರೀಯ ಮಟ್ಟದಲ್ಲಿ ಹರಾಜಾಗಿದೆ. ಈಗ ಬ್ರದರ್ ಎನ್ನುವ ಕಾರಣಕ್ಕೆ ಸಿದ್ಧರಾಮಯ್ಯ ಸರ್ಕಾರವು ಈ ಪೆಡ್ಲರ್‌ಗೂ ಅಮಾಯಕ ಪಟ್ಟ ಕಟ್ಟಿದರೇ ಅಚ್ಚರಿ ಇಲ್ಲ ಅಂತ ಕರ್ನಾಟಕ ಬಿಜೆಪಿ ವಾಗ್ದಾಳಿ ನಡೆಸಿದೆ. ಇಂದು ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವಂತ ಬಿಜೆಪಿ, ಅಧಿಕಾರದಲ್ಲಿರುವ ಕರ್ನಾಟಕ ಕಾಂಗ್ರೆಸ್‌ರಾಜಧಾನಿ ಬೆಂಗಳೂರನ್ನು ಆ ದಿನಗಳ ಗತ ವೈಭವಕ್ಕೆ ಕರೆದುಕೊಂಡು ಹೋಗಲು ಗೂಂಡಾಗಿರಿ, ದಾದಾಗಿರಿಗೆ ಮುನ್ನುಡಿ ಬರೆದು ರೇವ್ ಪಾರ್ಟಿಗೆ ಅವಕಾಶ ನೀಡಿದೆ ಅಂತ ಗುಡುಗಿದೆ. ರಾಜಧಾನಿಯಲ್ಲಿ ಇತ್ತೀಚೆಗೆ ನಡೆದ ರೇವ್ ಪಾರ್ಟಿ, ದೇಶದಲ್ಲಿ ಬೆಂಗಳೂರಿನ ಮಾನ ಹರಾಜು ಹಾಕಿತ್ತು. ಇದೀಗ ಪಾರ್ಟಿಗೆ ಡ್ರಗ್ಸ್ ಸಪ್ಲೈ ಮಾಡಿದ ಡಿಜೆ ಹಳ್ಳಿಯ ಶರೀಫ್ ಸಿಕ್ಕಿ ಬಿದ್ದಿದ್ದಾನೆ ಎಂದು ಹೇಳಿದೆ. ಬ್ರದರ್ ಎನ್ನುವ ಕಾರಣಕ್ಕೆ ಸಿದ್ಧರಾಮಯ್ಯ ನೇತೃತ್ವದ ಕಾಂಗ್ರೆಸ್‌ಸರ್ಕಾರ ಈ ಪೆಡ್ಲರ್‌ಗೂ ಅಮಾಯಕ ಪಟ್ಟ ಕಟ್ಟಿದರೆ ಅಚ್ಚರಿ ಇಲ್ಲ ಎಂಬುದಾಗಿ ಹೇಳಿದೆ.

## ಪಕ್ಷ ಕೊಟ್ಟಿರುವ ಜವಾಬ್ದಾರಿ ನಿರ್ವಹಿಸುತ್ತೇನೆ

• ಉದಯವಾಹಿನಿ, ಬೆಂಗಳೂರು

ಸಿದ್ದರಾಮಯ್ಯ ಅವರ ಪುತ್ರ ಯತೀಂದ್ರ ಸಿದ್ದರಾಮಯ್ಯ ವಿಧಾನ ಪರಿಷತ್ ಸ್ಥಾನಕ್ಕೆ ಅವಿರೋಧವಾಗಿ ಆಯ್ಕೆಯಾಗುವುದು ಖಚಿತವಾಗಿದೆ. ಈ ವೇಳೆ ಮಾಧ್ಯಮಗಳೊಂದಿಗೆ ಪ್ರತಿಕ್ರಿಯೆ ನೀಡಿದ ಅವರು, ಪಕ್ಷ ನನ್ನ ಮೇಲೆ ಅತ್ಯಂತ ದೊಡ್ಡ ಜವಾಬ್ದಾರಿ ಹೊರಿಸಿದ್ದು, ಅದನ್ನು ಸಮರ್ಥವಾಗಿ ನಿರ್ವಹಿಸುತ್ತೇನೆ ಎಂದರು. ಇದೇ ವೇಳೆ , ತಾವು ಸಚಿವರಾಗುವ ಸಾಧ್ಯತೆಯನ್ನು ನಿರಾಕರಿಸಿರುವ ಅವರು, ಸಧ್ಯಕ್ಕೆ ನಾನು ಸಚಿವನಾಗಲು ಅವಕಾಶವಿಲ್ಲ ಎಂದು ಚುಟುಕಾಗಿ ಹೇಳಿದರು. ತಂದೆಗೆ ಕ್ಷೇತ್ರ ತ್ಯಾಗ ಮಾಡಿದ್ದಕ್ಕೆ ಮೇಲ್ಮನೆ ಸದಸ್ಯ ಸ್ಥಾನ ಪ್ರತಿಫಲವಾಗಿ ಸಿಕ್ಕಿದೆಯೇ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ತ್ಯಾಗ ಅನ್ನುವ ಪ್ರಶ್ನೆಯೇ ಬರುವುದಿಲ್ಲ, ಸಿಎಂ ಸಿದ್ದರಾಮಯ್ಯ ಅವರು ಎಲ್ಲಿ ಬೇಕಾದರೂ ನಿಲ್ಲಲು ಸಾಧ್ಯವಿತ್ತು ಎಂದರು.

## ಚುನಾವಣೋತ್ತರ ಸಮೀಕ್ಷೆಯೇ ಸುಳ್ಳು

• ಉದಯವಾಹಿನಿ, ಬೆಂಗಳೂರು

ಲೋಕಸಭಾ ಚುನಾವಣೆಯ ಎಕ್ಸಿಟ್ ಪೋಲ್‌ಗಳಲ್ಲಿ ಬಹುತೇಕ ಬಿಜೆಪಿ ಗೆಲುವನ್ನು ಖಚಿಪಡಿಸಿವೆ. ಆದರೆ ಇದನ್ನು ಇಂಡಿಯಾ ಕೂಟ, ಕಾಂಗ್ರೆಸ್‌ಒಪ್ಪಿಕೊಳ್ಳಲು ಹಿಂದೇಟು ಹಾಕುತ್ತಿದ್ದು, ಚುನಾವಣೋತ್ತರ ಸಮೀಕ್ಷೆಗಳು ಸುಳ್ಳು ಎನ್ನುತ್ತಿವೆ.ಈ ಬಗ್ಗೆ ಮಾತನಾಡಿರುವ ಕಾಂಗ್ರೆಸ್‌ಸಚಿವ ಪ್ರಿಯಾಂಕ್ ಖರ್ಗೆ, ಎಕ್ಸಿಟ್ ಪೋಲ್‌ಗಳು ಮಾಧ್ಯಮದ, ಪ್ರಧಾನಿ ಮೋದಿಯವರ ಫ್ಯಾಂಟಸಿ ಸಮೀಕ್ಷೆಗಳಾಗಿವೆ. ಬಿಜೆಪಿ ಸರ್ಕಾರದ ಆರ್ಥಿಕ ಅಸಮಾನತೆ ನೀತಿಗಳು, ಸಂವಿಧಾನ ವಿರೋಧಿ ನಿಲುವುಗಳ ವಿರುದ್ಧ ನಾವು ಹೋರಾಡಿದ್ದೇವೆ. ನಾವು ಲೋಕಸಭೆ ಚುನಾವಣೆ ಯಲ್ಲಿ 295 ಸ್ಥಾನಗಳನ್ನು ದಾಟುತ್ತೇವೆ ಎಂದು ಹೇಳಿದ್ದಾರೆ. ಸಚಿವ ಹೆಚ್‌ಕೆ ಪಾಟೀಲ್ ಮಾತನಾಡಿ, ಎಕ್ಸಿಟ್ ಪೋಲ್‌ಗಳು ಪಕ್ಷಪಾತ ತೋರುತ್ತಿವೆ. ನಾವು ಕರ್ನಾಟಕದಲ್ಲಿ 16 ಕ್ಕೂ ಹೆಚ್ಚು ಸ್ಥಾನಗಳನ್ನು ಪಡೆಯುತ್ತೇವೆ. ಉತ್ತರ ಕರ್ನಾಟಕದಲ್ಲಿ ಕಾಂಗ್ರೆಸ್‌ಕ್ಲೀನ್ ಸ್ವೀಪ್ ಮಾಡುತ್ತದೆ. ಯಾವುದೇ ಎಕ್ಸಿಟ್ ಪೋಲ್‌ಗಳು ಸ್ಥಳಗಳ ಮಾದರಿಯನ್ನು ನೀಡದೆ ಸಮೀಕ್ಷೆಗಳನ್ನು ನಡೆಸಿದ್ದಾರೆ ಎಂದು ಹೇಳಿದ್ದಾರೆ.

## ಬೆಂಗಳೂರು: ಜೂನ್‌ನಲ್ಲಿ ಅತಿ ಹೆಚ್ಚು ಮಳೆ ದಾಖಲು

• ಉದಯವಾಹಿನಿ, ಬೆಂಗಳೂರು

ನೈಋತ್ಯ ಮಾನ್ಸೂನ್ ಸಮಯದಲ್ಲಿ ಬೆಂಗಳೂರಿನಲ್ಲಿ ಮೊದಲ ಬಾರಿಗೆ ಸುರಿದ ಮಳೆ ಜೂನ್ ತಿಂಗಳಲ್ಲಿ ಅತಿ ಹೆಚ್ಚು ದೈನಂದಿನ ಮಳೆಯ 133 ವರ್ಷಗಳ ದಾಖಲೆಯನ್ನು ಮುರಿದಿದೆ.

ಭಾರತೀಯ ಹವಾಮಾನ ಇಲಾಖೆ (ಐಎಂಡಿ) ಪ್ರಕಾರ, ಬೆಂಗಳೂರು ನಗರದಲ್ಲಿ ಭಾನುವಾರ 111.1 ಮಿ.ಮೀ ಮಳೆಯಾಗಿದೆ. ಈ ಹಿಂದೆ 1891ರ ಜೂನ್ 16ರಂದು 101.6 ಮಿ.ಮೀ ಮಳೆಯಾಗಿತ್ತು. ಜೂನ್ ತಿಂಗಳ ಸರಾಸರಿ ಮಳೆ 106.5 ಮಿ.ಮೀ ಮಳೆಯಾಗಿತ್ತು.

ಮುಂದಿನ ಎರಡು ದಿನಗಳ ಕಾಲ ಬೆಂಗಳೂರಿನಲ್ಲಿ ಮೋಡ ಕವಿದ ವಾತಾವರಣವಿನೊಂದಿಗೆ ಮಳೆ ಮುಂದುವರಿಯುವ ನಿರೀಕ್ಷೆಯಿದೆ ಎಂದು ಐಎಂಡಿ ತಿಳಿಸಿದೆ. ಭಾರಿ ಮಳೆ, ಮುಂಬರುವ ದಿನಗಳಲ್ಲಿ ಹೆಚ್ಚಿನ ಮಳೆಯ ಮುನ್ಸೂಚನೆಯೊಂದಿಗೆ, ನಗರವು ಜೂನ್ನಲ್ಲಿ ತನ್ನ ಅತ್ಯಧಿಕ ಮಾಸಿಕ ಮಳೆಯನ್ನು ಮುರಿಯುವ ಹಾದಿಯಲ್ಲಿದೆ. ಪ್ರಸ್ತುತ ದಾಖಲೆ 1996ರಲ್ಲಿ 228.2 ಮಿ.ಮೀ ದಾಖಲಾಗಿದೆ. ಗುಡುಗು ಸಹಿತ ಭಾರಿ ಗಾಳಿಯಿಂದಾಗಿ ಬೆಂಗಳೂರಿನ ಹಲವು ಭಾಗಗಳಲ್ಲಿ ಪ್ರವಾಹ ಮತ್ತು ಹಾನಿ ಸಂಭವಿಸಿದೆ.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) ಪ್ರಕಾರ, 285 ದೂರುಗಳನ್ನು ಸ್ವೀಕರಿಸಿದೆ, ಅವುಗಳಲ್ಲಿ ಹೆಚ್ಚಿನವು ರಸ್ತೆಗಳು ಮತ್ತು ವಾಹನಗಳ ಮೇಲೆ ಮರಗಳು ಅಥವಾ ಕೊಂಬೆಗಳು ಬೀಳುವುದಕ್ಕೆ ಸಂಬಂಧಿಸಿವೆ.

ಮರ ಬಿದ್ದ ಬಗ್ಗೆ 206 ದೂರುಗಳು ಮತ್ತು ಕೊಂಬೆಗಳು ಬಿದ್ದಿರುವ ಬಗ್ಗೆ 41 ದೂರುಗಳು ಬಂದಿವೆ ಎಂದು ಬಿಬಿಎಂಪಿ ತಿಳಿಸಿದೆ. ಉಳಿದ 38 ದೂರುಗಳು ಪ್ರವಾಹ ಮತ್ತು ನೀರು ನಿಲ್ಲುವಿಕೆಗೆ ಸಂಬಂಧಿಸಿವೆ.



ಉದಯವಾಹಿನಿ ಚಿತ್ರ

**ಬಿಬಿಎಂಪಿ ಅರಣ್ಯ ವಿಭಾಗಕ್ಕೆ 118 ದೂರುಗಳು ಬಂದಿದ್ದು, ಅದರಲ್ಲಿ 40 ಮರಗಳು ದಕ್ಷಿಣ ವಲಯದಲ್ಲಿ, ಮುಖ್ಯವಾಗಿ ಜಯನಗರ ಬಳಿ ಬಿದ್ದಿವೆ. ಭಾನುವಾರ ಶಾಖೆಗಳು ಬಿದ್ದಿರುವ ಬಗ್ಗೆ 128 ದೂರುಗಳನ್ನು ಸ್ವೀಕರಿಸಿದೆ.**

## ಮೊದಲೇ ಒಪ್ಪಂದವಾಗಿತ್ತೆಂದು ಹೇಳಿದ ಸಿಎಂ

• ಉದಯವಾಹಿನಿ, ಬೆಂಗಳೂರು



ವಿಧಾನಸಭೆಯಿಂದ ವಿಧಾನ ಪರಿಷತ್‌ಗೆ ಜೂನ್ 13ರಂದು ಚುನಾವಣೆ ನಡೆಯಲಿದ್ದು, ಕಳೆದ ವಿಧಾನಸಭಾ ಚುನಾವಣೆಯಲ್ಲಿ ತಮ್ಮ ತಂದೆ ಸಿದ್ದರಾಮಯ್ಯನವರಿಗಾಗಿ ಕ್ಷೇತ್ರ ತ್ಯಾಗ ಮಾಡಿದ್ದ ಯತೀಂದ್ರ ಅವರಿಗೆ ಕಾಂಗ್ರೆಸ್ ಟಿಕೆಟ್ ಸಿಕ್ಕಿದೆ.

ನಾಮಪತ್ರ ಸಲ್ಲಿಸಲು ಇಂದು ಅಂತಿಮ ದಿನವಾಗಿದ್ದು ಕಾಂಗ್ರೆಸ್, ಬಿಜೆಪಿ, ಜೆಡಿಎಸ್ ಪಕ್ಷಗಳು ಸಂಖ್ಯಾಬಲದ ಆಧಾರದ ಮೇಲೆ ತಾವು ಗೆಲ್ಲಬಹುದಾದ ಸ್ಥಾನಗಳಿಗೆ ಮಾತ್ರ ಅಭ್ಯರ್ಥಿಗಳನ್ನು ಘೋಷಿಸಿರುವ ಕಾರಣ ಎಲ್ಲರೂ ಬಹುತೇಕ ಅವಿರೋಧವಾಗಿ ಆಯ್ಕೆಯಾಗಲಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರು ಇಂದು ತಮ್ಮ ಪಕ್ಷದ ಅಭ್ಯರ್ಥಿಗಳ ಜೊತೆ ನಾಮಪತ್ರ ಸಲ್ಲಿಕೆಗೆ ಬಂದ ವೇಳೆ ಸ್ವಾರಸ್ಯಕರ ಘಟನೆ ನಡೆದಿದೆ. ಸಿದ್ದರಾಮಯ್ಯನವರು ಬರುತ್ತಿರುವಾಗ ಜೆಡಿಎಸ್ ಶಾಸಕರು ಎದುರಾಗಿದ್ದು, ಕೆಲವರು ಸಿದ್ದರಾಮಯ್ಯನವರ ಕಾಲು ಮುಟ್ಟಿ ನಮಸ್ಕರಿಸಿದ್ದಾರೆ. ತಮಗೆ ಎದುರಾದ ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷ ಜಿ ಟಿ ದೇವೇಗೌಡ ಅವರ ಭುಜ ತಟ್ಟಿ ಸಿದ್ದರಾಮಯ್ಯನವರು ಮಾತನಾಡಿಸಿದ್ದು, ಈ ಸಂದರ್ಭದಲ್ಲಿ ಏನು ಮಗನನ್ನೇ ಅಭ್ಯರ್ಥಿಯನ್ನಾಗಿ ಮಾಡಿದ್ದೀರಾ ಎಂದು ಜಿ ಟಿ ಡಿ ಪ್ರಶ್ನಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿಗಳು, ಈ ಕುರಿತು ಮೊದಲೇ ಒಪ್ಪಂದವಾಗಿತ್ತು ಎಂದು ಹೇಳಿದ್ದಾರೆ.

## ಯಾಗ ಮಾಡಿಸೋದು ಡಿಕೆಶಿ ಸಂಸ್ಕೃತಿ: ಕಳ್ಳನಿಗೆ ಮಳ್ಳ ಸಾಕ್ಷಿ

• ಉದಯವಾಹಿನಿ, ಬೆಂಗಳೂರು

ನಾವು ದೇವರ ಪೂಜೆ ಮಾಡ್ತೀವಿ. ಹಿಂದೂ ಸಂಸ್ಕೃತಿಯಲ್ಲಿ ಇರುವ ನಾವು ಧಾರ್ಮಿಕವಾಗಿ ಪೂಜೆ ಮಾಡ್ತೀವಿ. ನಮಗೆ ಇರುವ ದೋಷ ಪರಿಹಾರಕ್ಕೆ ದೇವಾಲಯಕ್ಕೆ ಹೋಗುತ್ತೇವೆ ಹೊರತು ಯಾಗ ಮಾಡುವುದಿಲ್ಲ. ಯಾಗ ಮಾಡೋದು ಡಿಕೆಶಿ ಸಂಸ್ಕೃತಿ ಎಂದು ಮಾಜಿ ಸಿಎಂ ಕುಮಾರಸ್ವಾಮಿ ಡಿಸಿಎಂ ಡಿಕೆ ಶಿವಕುಮಾರ್ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ನಗರದ ಜೆಡಿಎಸ್ ಶಾಸಕಾಂಗ ಪಕ್ಷದ ಕಚೇರಿಯಲ್ಲಿಂದು ಸಭೆ ನಡೆಸಿ ಮಾತನಾಡಿದ ಅವರು, ಡಿಕೆ ಶಿವಕುಮಾರ್ ಅವರಿಗೆ ರಕ್ಷಣೆ ಮಾಡೋದಕ್ಕೆ ದೇವರು ಇರುವಂತೆ ನಮಗೂ ದೇವರಿದ್ದಾನೆ. ನಾನು ರಾಜರಾಜೇಶ್ವರ ದೇವಾಲಯಕ್ಕೆ ಹೋಗಿದ್ದೇನೆ. ರಾಜರಾಜೇಶ್ವರ ದೇವರಿಗೇ ಇದನ್ನ ಬಿಡ್ತೀನಿ, ರಾಜರಾಜೇಶ್ವರ ದೇವರೆ ಅವರಿಗೆ ಶಿಕ್ಷೆ ಕೊಡಲಿ ಎಂದು ಹೇಳಿದ್ದಾರೆ. ನಮ್ಮ ಸರ್ಕಾರದ ನಾಶಕ್ಕಾಗಿ ನನ್ನ ಹಾಗೂ ಸಿಎಂ ವಿರುದ್ಧ ಶತ್ರು ಭೈರವಿ ಯಾಗ ಮಾಡಿಸುತ್ತಿದ್ದಾರೆ ಎಂಬ ಡಿಕೆ ಶಿವಕುಮಾರ್ ಹೇಳಿಕೆಗೆ ಪ್ರತಿಕ್ರಿಯೆ ನೀಡಿದ ಅವರು. ಆಚಾರವಿಲ್ಲದ ನಾಲಿಗೆ, ನಿನ್ನ ನೀಚ ಬುದ್ಧಿ ಬಿಡು ನಾಲಿಗೆ ಎಂಬ ಪುರಂದರ ದಾಸರ ಕೀರ್ತನೆಯ ಮೂಲಕ ತಿರುಗೇಟು ನೀಡಿದ್ದಾರೆ.

ಡಿಸಿಎಂ ಆಗಿದ್ದರೂ ಆ ಸ್ಥಾನದ ಗೌರವ, ಮೌಲ್ಯ ಏನು ಅಂತ ಅವರಿಗೆ ಅರ್ಥ ಆಗಿಲ್ಲ. ಒಟ್ಟಿನಲ್ಲಿ ನಮ್ಮ ಕುಟುಂಬ ಮುಗಿಸಲೇಬೇಕು ಎಂದು ಶ್ರಮಪಡ್ತಿದ್ದಾರೆ. ಅದರ ಮುಂದುವರಿದ ಭಾಗವಾಗಿ ಯಾಗದ ಮಾತು ಹೇಳ್ತಿದ್ದಾರೆ. ನಮ್ಮ ಕುಟುಂಬದಲ್ಲಿ ನನಗೆ ತಿಳುವಳಿಕೆ ಬಂದಾಗಿನಿಂದ ಕುರಿ, ಕೋಣ, ಮೇಕೆ ಕಡಿಯೋದು ಯಾವತ್ತೂ ಮಾಡಿಲ್ಲ.

ನಾನು ಇತ್ತೀಚೆಗೆ ವಿಶ್ರಾಂತಿಗೆಂದು ನನ್ನ ಮೊಮ್ಮಗನ ಜೊತೆ ಕಬಿನಿ ಹಿನ್ನೀರಿಗೆ ಹೋಗಿದ್ದೆ. ಅದಕ್ಕೂ ಕೇರಳಕ್ಕೆ ಮಾಟ ಮಾಡಿಸೋಕೆ ಅಂತ ಹೇಳಿದ್ರು. ನಾನು ಹೋಗಿ ಯಾಗ ಮಾಡಿಸಬೇಕಾ ಕಾನೂನಿನ ಪ್ರಕಾರ ಕೋಣ, ಕುರಿ ಬಲಿ ಕೊಟ್ಟು ನಾಶ ಮಾಡೋದು ಅಪರಾಧ. ಆಗ ಸರ್ಕಾರ ಕ್ರಮ ತೆಗೆದುಕೊಳ್ಳಬೇಕು ತಾನೆ. ಜನರಲ್ಲಿ ನಮ್ಮ ಕುಟುಂಬ ನೆಲ ಕಚ್ಚಿಸಬೇಕು ಅಂತ ಇಂತಹ ಸುದ್ದಿ ಹರಡಿಸುತ್ತಿದ್ದಾರೆ. ಇಡೀ ದೇವೇಗೌಡ ಕುಟುಂಬ ನಾಶ ಮಾಡೋಕೆ ಮುಂದಾಗಿದ್ದಾರೆ. ಇದು ಅದರ ಮುಂದುವರಿದ ಭಾಗ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.



ಉದಯವಾಹಿನಿ ಚಿತ್ರ

**ಕಳ್ಳನಿಗೆ ಮಳ್ಳನ ಸಾಕ್ಷಿ ಎಂಬಂತೆ ಅವರೆ ನಮ್ಮ ಹೆಸರು ಹೇಳ್ತಾರೆ. ನಾನು ಎರಡು ಬಾರಿ ಸಿಎಂ ಆಗಿದ್ದೆ ಕೋಣ, ಕುರಿ ಕಡಿದು ಆಗಿಲ್ಲ. ದೇವರು ಕೊಟ್ಟು, ಆಗಿದ್ದೇನೆ. ದೇವೇಗೌಡರು ಅಧಿಕಾರ ಅನುಭವಿಸಿದ್ದೇ ಕಡಿಮೆ ಅವಧಿ. ಅದೇನು ಕೋಳಿ, ಕುರಿ ಕಡಿದು ಮಾಡಿ ಆಗಿದ್ದಾ? ಡಿಕೆ ಶಿವಕುಮಾರ್ ದೇವರು, ಶರಣರ ಜೊತೆ ಚೆಲ್ಲಾಟ ಆಡಬಾರದು ಎಂದು ಎಚ್ಚರಿಕೆ ನೀಡಿದ್ದಾರೆ.**

## ಡಾ.ಶಿವರಾಮ ಕಾರಂತ ಲೇಔಟ್‌ನಲ್ಲಿ ಮೊದಲ ಕಾರು ರೇಸಿಂಗ್ ಟ್ರ್ಯಾಕ್!

• ಉದಯವಾಹಿನಿ, ಬೆಂಗಳೂರು

ಡಾ ಶಿವರಾಮ ಕಾರಂತ ಲೇಔಟ್‌ನಲ್ಲಿ ಬೆಂಗಳೂರಿನ ಮೊದಲ ಮೋಟಾರ್‌ಸ್ಪೋರ್ಟ್ ರೇಸ್ ಟ್ರ್ಯಾಕ್ ಅಭಿವೃದ್ಧಿಪಡಿಸಲು ಯೋಜನೆ ರೂಪಿಸಲಾಗಿದೆ. 2026ರಲ್ಲಿ ದೇವನಹಳ್ಳಿಯಲ್ಲಿ ಮತ್ತೊಂದು ರೇಸ್ ಟ್ರ್ಯಾಕ್ ಸಿದ್ಧಗೊಳ್ಳುವ ನಿರೀಕ್ಷೆಯಿದೆ. ಯೋಜನೆ ಕುರಿತು ನಡೆಯುತ್ತಿರುವ ಚರ್ಚೆಗಳು ಫಲಪ್ರದವಾಗಿ, ಎಲ್ಲವೂ ಅಂದುಕೊಂಡಂತೆ ಸರಿಯಾಗಿ ನಡೆದರೆ ಇದೇ ವರ್ಷದ ನವೆಂಬರ್ ವೇಳೆಗೆ ಶಿವರಾಮ ಕಾರಂತ ಲೇಔಟ್‌ನಲ್ಲಿ ಯೋಜಿತ ಟ್ರ್ಯಾಕ್ ಸಿದ್ಧಗೊಳ್ಳಬಹುದು.



ನವೆಂಬರ್‌ನೊಳಗೆ ಟ್ರ್ಯಾಕ್ ಸಿದ್ಧಗೊಳಿಸಲು ಸೋಮಶೆಟ್ಟಿಹಳ್ಳಿಯ ಉದ್ದೇಶಿತ 25 ಎಕರೆ ಕ್ರೀಡಾಂಗಣದ ಸುತ್ತಲಿನ ಲೇಔಟ್‌ನಲ್ಲಿ 2.5 ಕಿಮೀ ಜಾಗದ ಹುಡುಕಾಟ ನಡೆಸುತ್ತಿರುವುದಾಗಿ ಬಿಡಿಎ ಮೂಲಗಳು ದಿ ನ್ಯೂ ಇಂಡಿಯನ್ ಎಕ್ಸ್ ಪ್ರೆಸ್‌ಗೆ ತಿಳಿಸಿವೆ. 2.5 ಕಿಮೀ ಜಾಗ ಕ್ರೀಡಾಂಗಣವನ್ನು ಸುತ್ತುವರೆದಿರುವ ಲೂಪ್ ರೂಪದಲ್ಲಿರುತ್ತದೆ.

ಕ್ರೀಡಾಕೂಟದ ಅವಧಿಯಲ್ಲಿ ಮಾತ್ರ ಅವರು ಆ ಪ್ರದೇಶವನ್ನು ಸ್ವಾಧೀನಪಡಿಸಿಕೊಳ್ಳುತ್ತಾರೆ. ಇದು ಕೆಲವು ದಿನಗಳವರೆಗೆ ಇರುತ್ತದೆ. ಓಟಕ್ಕೆ ಅಗತ್ಯವಾದ ಉನ್ನತೀಕರಣ, ರೇಸಿಂಗ್‌ಗೆ ಬ್ಯಾರಿಕೇಡಿಂಗ್ ಮತ್ತಿತರ ಕೆಲಸಗಳನ್ನು ಮಾಡಲಾಗುತ್ತದೆ.

ಇಲ್ಲದಿದ್ದರೆ ಬಿಡಿಎ ಸೈಟ್ ನೀಡಿದವರಿಗೆ ರಸ್ತೆ ಮುಕ್ತವಾಗಲಿದೆ. ಇನ್ನು ಕ್ರೀಡಾಂಗಣ ನಿರ್ಮಾಣವಾಗಬೇಕಿದೆ. ಆದರೆ ಅದಕ್ಕೆ ಈಗಾಗಲೇ ಜಾಗವನ್ನು ಮೀಸಲಿಡಲಾಗಿದೆ ಎಂದು ಬಿಡಿಎ ಹಿರಿಯ ಅಧಿಕಾರಿಯೊಬ್ಬರು ತಿಳಿಸಿದರು.

ಉದ್ದೇಶಿತ ಕ್ರೀಡಾಂಗಣದ ಸುತ್ತಲೂ ಬಹು ಕ್ರೀಡಾ ಸೌಲಭ್ಯ ಕಲ್ಪಿಸಲಾಗುವುದು, ಇದಕ್ಕೆ ಕೆಲವು ವರ್ಷಗಳು ಬೇಕಾಗಲಿದೆ ಎಂದು ಅವರು ಹೇಳಿದರು.

**ಭವಿಷ್ಯದ ಟೂರ್ನಿಗಳಿಗೆ ಇಲ್ಲಿ ಸ್ಥಳಾವಕಾಶ ನೀಡಲು ರೇಸಿಂಗ್ ಆಯೋಜಕರು ಇತ್ತೀಚೆಗೆ ಬಿಡಿಎ ಅಧ್ಯಕ್ಷರು, ಆಯುಕ್ತರಿಗೆ ಮನವಿ ನೀಡಿದ್ದಾರೆ ಎಂದು ಬಿಡಿಎ ಉನ್ನತ ಅಧಿಕಾರಿಯೊಬ್ಬರು ಖಚಿತಪಡಿಸಿದ್ದಾರೆ. ಲೇಔಟ್ 17 ಹಳ್ಳಿಗಳನ್ನು ಒಳಗೊಂಡಂತೆ 3,546 ಎಕರೆ ಪ್ರದೇಶವಿದೆ. ಹಂಚಿಕೆಗಾಗಿ ಅಧಿಸೂಚನೆಯೊಂದಿಗೆ ಮುಂದುವರಿಯಲು ಹೈಕೋರ್ಟ್‌ನಿಂದ ಹಸಿರು ನಿಶಾನೆಗೆ ಕಾಯುತ್ತಿದೆ. ಇಂಡಿಯನ್ ರೇಸಿಂಗ್ ಲೀಗ್ ಫಾರ್ಮುಲಾ 4-ಸಂಬಂಧಿತ ಈವೆಂಟ್‌ಗಳನ್ನು ಇಲ್ಲಿ ಆಯೋಜಿಸುವ ಸಾಧ್ಯತೆಯಿದೆ ಎಂದು ಮೋಟಾರ್‌ಸ್ಪೋರ್ಟ್ ತಜ್ಞರು ಹೇಳಿದ್ದಾರೆ.**

## ವಿದ್ಯುತ್ ಸ್ಪರ್ಶಿಸಿ ಇಬ್ಬರು ಸಾವು, ಟ್ರ್ಯಾಕ್ಟರ್‌ಗೆ ಬೆಂಕಿ

• ಉದಯವಾಹಿನಿ, ಬೆಂಗಳೂರು

ಪಲ್ಲಕ್ಕಿ ಉತ್ಸವ ಮುಗಿಸಿ ಮನೆಗೆ ಹಿಂತಿರುಗುತ್ತಿದ್ದ ಇಬ್ಬರು ವ್ಯಕ್ತಿಗಳು ವಿದ್ಯುತ್ ಸ್ಪರ್ಶಿಸಿ ಸಾವಿಗೀಡಾಗಿರುವ ದಾರುಣ ಘಟನೆ ಎಲೆಕ್ಟ್ರಾನಿಕ್ ಸಿಟಿಯಲ್ಲಿ ಭಾನುವಾರ ಬೆಳಗ್ಗೆ ನಡೆದಿದೆ. ಮೃತರನ್ನು ಜಿಗಣಿಯ ಹರಿಬಾಬು (25) ಮತ್ತು ವೀರಸಂದ್ರದ ರಂಗನಾಥ (30) ಎಂದು ಗುರುತಿಸಲಾಗಿದೆ.



ಹೆಬ್ಬಗೋಡಿನಲ್ಲಿ ಪಲ್ಲಕ್ಕಿ ಉತ್ಸವದ ಮೆರವಣಿಗೆ ಮುಕ್ತಾಯಗೊಂಡ ಬಳಿಕ ಭಾನುವಾರ ಮುಂಜಾನೆ 5.30ರ ಸುಮಾರಿಗೆ ಪಲ್ಲಕ್ಕಿಯನ್ನು ಹೊತ್ತು ಟ್ರ್ಯಾಕ್ಟರ್‌ನಲ್ಲಿ ಇಬ್ಬರೂ ಮನೆಗೆ ತೆರಳುತ್ತಿದ್ದರು. ಈ ವೇಳೆ ಟ್ರ್ಯಾಕ್ಟರ್‌ಗೆ ದಾರಿ ಮಾಡಿಕೊಡಲು ಇಬ್ಬರು ಕೋಲನ್ನು ಬಳಸಿ ವಿದ್ಯುತ್ ತಂತಿಯನ್ನು ಮೇಲೆತ್ತಿದ್ದಾರೆ. ಮಳೆಯಿಂದಾಗಿ ಕೋಲು ಒದ್ದೆಯಾಗಿದ್ದರಿಂದ ವಿದ್ಯುತ್ ಸ್ಪರ್ಶಿಸಿ ಯುವಕ ಸ್ಥಳದಲ್ಲೇ ಸಾವಿಗೀಡಾಗಿದ್ದಾನೆ.

ಮತ್ತೋರ್ವ ಆಸ್ಪತ್ರೆಗೆ ಸಾಗಿಸುವ ಮಾರ್ಗಮಧ್ಯೆ ಮೃತಪಟ್ಟಿರುವುದಾಗಿ ಪೊಲೀಸರು ತಿಳಿಸಿದ್ದಾರೆ. ಘಟನೆಯಲ್ಲಿ ಟ್ರ್ಯಾಕ್ಟರ್‌ಗೂ ಬೆಂಕಿ ಹೊತ್ತಿಕೊಂಡಿದೆ.

ನಾಗರಾಜ ಅವರು ವಿದ್ಯುತ್ ತಂತಿಗಳನ್ನು ಸರಿಪಡಿಸಲು ಸುರಕ್ಷಾ ಕ್ರಮಗಳನ್ನು ಕೈಗೊಂಡಿದ್ದಾರೆ. ಆದರೆ ಕಂಬ ಏರಿದಾಗ ವಿದ್ಯುತ್ ಶಾಕ್ ತಗುಲಿ ಕೆಳಗೆ ಬಿದ್ದಿದ್ದು, ಗಾಯಗಳಾಗಿವೆ. ದಾರಿಹೋಕರು ಅವರನ್ನು ಹತ್ತಿರದ ಆಸ್ಪತ್ರೆಗೆ ಕರೆದೊಯ್ದಿದ್ದಾರೆ. ಆದರೆ, ಆ ವೇಳೆಗಾಗಲೇ ಅವರು ಮೃತಪಟ್ಟಿರುವುದಾಗಿ ವೈದ್ಯರು ತಿಳಿಸಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

# ಹೆದ್ದಾರಿಗಳಲ್ಲಿ ಟೋಲ್ ಶುಲ್ಕ ಶೇ.3ರಿಂದ 25 ಹೆಚ್ಚಳ!

■ ಎಕ್ಸ್‌ಪ್ರೆಸ್‌ವೇ ಬಳಸಲು ಶೇ. 3ರಷ್ಟನ್ನು ಹೆಚ್ಚಿಸಿದರೆ, ಶೇ. 14 ರಷ್ಟು ಹೆಚ್ಚಿನ ಹಣ ನೀಡಬೇಕಾಗುತ್ತದೆ

• ಉದಯವಾಹಿನಿ, ಬೆಂಗಳೂರು

ವಾಹನ ಬಳಕೆದಾರರು ಇಂದಿನಿಂದ ಬೆಂಗಳೂರು-ಮೈಸೂರು, ಬೆಂಗಳೂರು-ಹೈದರಾಬಾದ್, ತುಮಕೂರು-ಹೊನ್ನಾವರ ಹೆದ್ದಾರಿ, ಹೊಸ ಕೋಟೆ- ದೇವನಹಳ್ಳಿ ಸ್ಯಾಟಲೈಟ್ ಟೌನ್ ರಿಂಗ್ ರಸ್ತೆ ಬಳಸಲು ಶೇ. 3 ರಿಂದ ಶೇ. 25 ರಷ್ಟು ಹೆಚ್ಚಿನ ಹಣವನ್ನು ಪಾವತಿಸಬೇಕಾಗುತ್ತದೆ ಎಂದು NHAI ಹೇಳಿದೆ.

ಇದು ಏಪ್ರಿಲ್ 1 ರಂದು ಜಾರಿಗೆ ಬರಬೇಕಿತ್ತು ಆದರೆ ಲೋಕಸಭೆ ಚುನಾವಣೆಯ ಕಾರಣ ಮುಂದೂಡಲಾಗಿತ್ತು. ಹೊಸ ಶುಲ್ಕಗಳು ಮಾರ್ಚ್ 31, 2025 ರವರೆಗೆ ಜಾರಿಯಲ್ಲಿರುತ್ತವೆ.

ಬೆಂಗಳೂರು-ಮೈಸೂರು ಎಕ್ಸ್ ಪ್ರೆಸ್ ವೇ ಬಳಸಲು ಶೇ. 3ರಷ್ಟನ್ನು ಹೆಚ್ಚಿಸಿದರೆ, ಸ್ಯಾಟಲೈಟ್ ಟೌನ್ ರಿಂಗ್ ರಸ್ತೆ ಬಳಸುವ ವಾಹನಗಳು ಶೇ. 14 ರಷ್ಟು ಹೆಚ್ಚಿನ ಹಣವನ್ನು ನೀಡಬೇಕಾಗುತ್ತದೆ ಎಂದು NHAI ಬೆಂಗಳೂರು ಪ್ರಾದೇಶಿಕ ಅಧಿಕಾರಿ ವಿಲಾಸ್ ಬಿಪಿ ಬ್ರಹ್ಮಂಕರ್ ತಿಳಿಸಿದ್ದಾರೆ. 39. 6 ಕಿ. ಮೀ ಉದ್ದದ ಸ್ಯಾಟಲೈಟ್ ಟೌನ್ ರಿಂಗ್ ರಸ್ತೆಯ ದೊಡ್ಡಬಳ್ಳಾಪುರ- ಹೊಸಕೋಟೆ ವಿಭಾಗದಲ್ಲಿ 2023, ನವೆಂಬರ್ 17 ರಂದು ಟೋಲ್ ಸಂಗ್ರಹವನ್ನು ಆರಂಭಿಸಲಾಗಿತ್ತು. ದಾಬಸ್ ಪೇಟೆ- ದೊಡ್ಡಬಳ್ಳಾಪುರ ಸೆಕ್ಷನ್ ನಲ್ಲಿ (42 ಕಿ.ಮೀ) ಜೂನ್ 15ರ ನಂತರ ಟೋಲ್ ಸಂಗ್ರಹ ಆರಂಭವಾಗುವ ಸಾಧ್ಯತೆಯಿದೆ ಎಂದು NHAI ಪ್ರಾಜೆಕ್ಟ್ ಡೈರೆಕ್ಟರ್ ಕೆ.ಬಿ. ಜಯಕುಮಾರ್ ತಿಳಿಸಿದ್ದಾರೆ. ಟೋಲ್ ಸಂಗ್ರಹಕ್ಕಾಗಿ ಏಜೆನ್ಸಿಯನ್ನು ಆಯ್ಕೆ ಮಾಡಲಾಗಿದ್ದು, ಶುಲ್ಕವನ್ನು ಶೀಘ್ರದಲ್ಲಿಯೇ ತಿಳಿಸಲಾಗುವುದು, ಹುಲಿಕುಂಟೆ ಟೋಲ್ ಪ್ಲಾಜಾದಲ್ಲಿ ಟೋಲ್ ಶುಲ್ಕ ಸಂಗ್ರಹಿಸಲಾಗುವುದು ಎಂದು ಅವರು ಹೇಳಿದ್ದಾರೆ.

ದೊಡ್ಡಬಳ್ಳಾಪುರ-ಹೊಸಕೋಟೆ: ದೊಡ್ಡಬಳ್ಳಾಪುರ ಬೈಪಾಸ್ ಮತ್ತು ಹೊಸಕೋಟೆ ನಡುವೆ ರೂ. 80 (ಸಿಂಗಲ್ ಜರ್ನಿ) ರೂ.120 ( ರಿಟರ್ನ್ ಜರ್ನಿ, ರೂ 2,720 (ಕಾರು, ವ್ಯಾನ್ ಮತ್ತು ಜೀಪ್ ಗಳಿಗೆ ತಿಂಗಳಲ್ಲಿ 50 ಭಾರಿ ಪ್ರಯಾಣ) ಪಾವತಿಸಬೇಕಾಗುತ್ತದೆ. ಲಘು ವಾಣಿಜ್ಯ ವಾಹನಗಳು, ಲಘು ಸರಕು ವಾಹನಗಳು ಮತ್ತು ಮಿನಿ ಬಸ್‌ಗಳು ಕ್ರಮವಾಗಿ ರೂ. 135 (ಸಿಂಗಲ್ ಜರ್ನಿ) ರೂ. 200 (ರಿಟರ್ನ್ ಜರ್ನಿ) ರೂ. 4,395 (50 ಜರ್ನಿ) ಪಾವತಿಸಬೇಕಾಗುತ್ತದೆ.

ಟ್ರಕ್‌ಗಳು ಮತ್ತು ಬಸ್‌ಗಳು (ಎರಡು ಆಕ್ಸಲ್‌ಗಳು) ರೂ 275 (ಒಮ್ಮೆ ಪ್ರಯಾಣ) ರೂ 415 (ರಿಟರ್ನ್ ಜರ್ನಿ) ರೂ 9,205 (50 ಭಾರಿ ಜರ್ನಿ) ಪಾವತಿಸಬೇಕಾಗುತ್ತದೆ. ಟೋಲ್ ಪ್ಲಾಜಾದಿಂದ 20 ಕಿ.ಮೀ ಒಳಗಡೆ ವಾಣಿಜ್ಯೇತರ ವಾಹನಗಳು ತಿಂಗಳ ಪಾಸಿಗೆ ರೂ. 340 ಭರಿಸಬೇಕಾಗುತ್ತದೆ. ದೇವನಬಳ್ಳಿ ಬಳಿಯ ನಲ್ಲೂರು ಬಳಿ ಟೋಲ್ ಸಂಗ್ರಹಿಸಲಾಗುತ್ತದೆ.





ಉದಯವಾಹಿನಿ ಚಿತ್ರ

**ಟೋಲ್ ಸಂಗ್ರಹ ಆರಂಭ**

### ಬೆಂಗಳೂರು- ಹೈದರಾಬಾದ್ ಹೆದ್ದಾರಿ

**ತುಮಕೂರು- ಹೊನ್ನಾವರ ಸಂಪರ್ಕಿಸುವ ಈ ಹೆದ್ದಾರಿ ಬಳಸುವ ಕಾರು, ಜೀಪ್, ವ್ಯಾನ್, ಲಘು ಸಾರಿಗೆಗಳು ರೂ. 115 (ಒಮ್ಮೆ ಪ್ರಯಾಣ) ರೂ. 175 (ರಿಟರ್ನ್ ಜರ್ನಿ) ಪಾವತಿಸಬೇಕಾಗುತ್ತದೆ. ಬಾಗೇಪಲ್ಲಿಯಲ್ಲಿ ಟೋಲ್ ಕೇಂದ್ರ ತೆರೆಯಲಾಗಿದೆ. ಇನ್ನೂ ರಾಷ್ಟ್ರೀಯ ಹೆದ್ದಾರಿ 206 ಬಳಸುವ ಕಾರು, ಜೀಪ್, ವ್ಯಾನ್, ಲಘು ವಾಹನಗಳು ರೂ. 60( ಸಿಂಗಲ್ ಜರ್ನಿ) ರೂ. 90 ( ರಿಟರ್ನ್ ಜರ್ನಿ) ಪಾವತಿಸಬೇಕು.**

### ಬೆಂಗಳೂರು-ಮೈಸೂರು ಹೆದ್ದಾರಿ

**ಈ ಹೆದ್ದಾರಿ ಬಳಸುವ ಕಾರು, ವ್ಯಾನ್ ಮತ್ತು ಜೀಪ್‌ಗಳು ಒಂದು ಬಾರಿಗೆ ರೂ. 330 ಪಾವತಿಸಬೇಕಾಗುತ್ತದೆ. ಬೆಂಗಳೂರು-ನಿಡಘಟ್ಟ ಸೆಕ್ಷನ್ ವರೆಗೂ ರೂ. 170 ಮತ್ತು ನಿಡಘಟ್ಟ-ಮೈಸೂರು ನಡುವಣ ರೂ.160 ರೂ. ನಿಗದಿಪಡಿಸಲಾಗಿದೆ. ಕಣಿಮಿಣಿಕೆ (ಬೆಂಗಳೂರು ನಗರ) ಶೇಷಗಿರಿಹಳ್ಳಿ (ರಾಮನಗರ) ಮತ್ತು ಗಂಗನೂರು (ಮಂಡ್ಯ) ಬಳಿ ಟೋಲ್ ಸಂಗ್ರಹಿಸಲಾಗುವುದು.**

## ಯಾವುದೇ ಪ್ರವಾಹ ಆಗಿಲ್ಲ ಎಂದ ಬಿಬಿಎಂಪಿ ಮುಖ್ಯ ಎಂಜಿನಿಯರ್



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಸುರಿದ ಮಳೆಗೆ ಬೆಂಗಳೂರು ದಕ್ಷಿಣದ ರಾಮಕೃಷ್ಣನಗರ ಮತ್ತು ಯಲಚೇನಹಳ್ಳಿ ಸುತ್ತಮುತ್ತಲಿನ ಪ್ರದೇಶಗಳು ಜಲಾವೃತಗೊಂಡಿದ್ದರೆ, ಬಿಬಿಎಂಪಿ ಮುಖ್ಯ ಎಂಜಿನಿಯರ್ ಪ್ರಹ್ಲಾದ್ ಅವರ ಹೆಸರಿನ ಎಕ್ಸ್ ಖಾತೆಯಲ್ಲಿ ಯಾವುದೇ ಪ್ರವಾಹ ಸಂಭವಿಸಿಲ್ಲ. ಆ ಪ್ರದೇಶಕ್ಕೆ ನೀರು ನುಗ್ಗುತ್ತಿರುವ ವಿಡಿಯೋಗಳು ಹಳೆಯವು ಮತ್ತು ಈ ವರ್ಷದ ಮಳೆಯನ್ನು ಸಂವೇದನಾಶೀಲಗೊಳಿಸಲು ಪ್ರಸಾರ ಮಾಡಲಾಗುತ್ತಿದೆ ಎಂದು ಹೇಳಿದ್ದಾರೆ. ಪಾಲಿಕೆಯ ಮುಖ್ಯ ಇಂಜಿನಿಯರ್ ಹೆಸರಿನ ಖಾತೆಯಿಂದ ಹೇಳಿರುವ ಮಾತಿಗೆ ಕೋಪಗೊಂಡ ನಿವಾಸಿಗಳು, ಇದು ನಿರ್ಲಕ್ಷ್ಯವನ್ನು ತೋರಿಸುತ್ತದೆ ಎಂದು ಆರೋಪಿಸಿದ್ದು, ಪ್ರದೇಶದಲ್ಲಿ ಸಂಭವಿಸಿದ ಮುಳುಗಡೆಗೆ ಪುರಾವೆಯಾಗಿ ಹೆಚ್ಚಿನ ವಿಡಿಯೋಗಳನ್ನು ಹಂಚಿಕೊಂಡಿದ್ದಾರೆ. ಪ್ರಹ್ಲಾದ್ ಅವರು, ವರ್ಷದ ಮಳೆಯನ್ನು ಸಂವೇದನಾಶೀಲಗೊಳಿಸಲು ಪ್ರವಾಹದ ಹಳೆಯ ವಿಡಿಯೋಗಳನ್ನು ಹಂಚಿಕೊಳ್ಳುತ್ತಿರುವುದು ಬಹಳ ದುಃಖಕರ ಸಂಗತಿಯಾಗಿದೆ. ಇಂದು (ಜೂನ್ 1) ಮಳೆಯಾಗಿದ್ದು, ರಾಮಕೃಷ್ಣನಗರದಲ್ಲಿ ರಸ್ತೆಗಳಲ್ಲಿ ಯಾವುದೇ ಪ್ರವಾಹ ಪರಿಸ್ಥಿತಿ ಉಂಟಾಗಿಲ್ಲ' ಎಂದಿದ್ದಾರೆ. ಇದಲ್ಲದೆ, ಸಂಜೆ 5.28 ಕ್ಕೆ ತೆಗೆದ ಫೋಟೊವನ್ನು ಈ ಪ್ರದೇಶದ ಜಿಪಿಎಸ್ ಸ್ಥಳದೊಂದಿಗೆ (ಕನಕ ನಗರ, ಕುಮಾರಸ್ವಾಮಿ ಲೇಔಟ್) ಮುಖ್ಯ ಎಂಜಿನಿಯರ್ ಹಂಚಿಕೊಂಡಿದ್ದು, ಪ್ರವಾಹವಿಲ್ಲ ಎಂದಿದ್ದಾರೆ.

# ಚುನಾವಣಾ ಅಧಿಕಾರಿಗಳಿಂದ ಮತಗಟ್ಟೆಗಳ ಪರಿಶೀಲನೆ

## ಸಕಾಲಕ್ಕೆ ಮತ ಎಣಿಕೆ ಕಾರ್ಯ ಪೂರ್ಣಗೊಳಿಸಿ ಫಲಿತಾಂಶ ಘೋಷಣೆಗೆ ಎಲ್ಲಾ ಸಿದ್ಧತೆಗಳನ್ನು ನಡೆಸಿದ್ದೇವೆ: ಜಿಲ್ಲಾಧಿಕಾರಿ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಲೋಕಸಭಾ ಚುನಾವಣೆ ಮತ ಎಣಿಕೆಗೆ ಇನ್ನೂ ಒಂದು ದಿನ ಮಾತ್ರ ಬಾಕಿ ಇದೆ. ರಾಜ್ಯದ ಜಿಲ್ಲೆಗಳಲ್ಲಿರುವ ಮತ ಎಣಿಕೆ ಕೇಂದ್ರಗಳಲ್ಲಿ ಮತ ಎಣಿಕೆಗೆ ಬೇಕಾದ ಸಿದ್ಧತೆಗಳು ಮಾಡಿಕೊಳ್ಳಲಾಗುತ್ತಿದೆ. ಆ ನಿಟ್ಟಿನಲ್ಲಿ ಚುನಾವಣಾ ಅಧಿಕಾರಿಗಳು ಚಿಕ್ಕಬಳ್ಳಾಪುರದ ಮತ ಎಣಿಕೆ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ನಗರ ಹೊರವಲಯದ ನಾಗಾರ್ಜುನ ಕಾಲೇಜಿನಲ್ಲಿರುವ ಚಿಕ್ಕಬಳ್ಳಾಪುರ ಲೋಕ ಸಭೆ ಕ್ಷೇತ್ರದ ಮತ ಎಣಿಕೆ ಕೇಂದ್ರಕ್ಕೆ ಚುನಾವಣಾ ಮುಖ್ಯ ವೀಕ್ಷಕ ನ್ಯಾಲಿ ಇಟೆ, ಜಿಲ್ಲಾಧಿಕಾರಿ ಹಾಗೂ ಚುನಾವಣಾಧಿಕಾರಿ ಪಿ. ಎನ್.ರವೀಂದ್ರ ನೇತೃತ್ವದ ಅಧಿಕಾರಿಗಳ ತಂಡ ಭೇಟಿ ನೀಡಿ ಸಿದ್ಧತೆಗಳ ಕುರಿ ತು ಪರಿಶೀಲನೆ ನಡೆಸಿತು. ಲೋಕಸಭೆ ಚುನಾವಣೆ ಮತ ಎಣಿಕೆ ಕಾರ್ಯ ಜೂ.4ರಂದು ನಡೆಯುವ ಹಿನ್ನೆಲೆಯಲ್ಲಿ ಭೇಟಿ ನೀಡಿದ್ದ ಅಧಿಕಾರಿಗಳ ತಂಡ, ಮತ ಯಂತ್ರಗಳನ್ನ ಭದ್ರಪಡಿಸಿರುವ ಕೊಠಡಿ, ಮತ ಎಣಿಕೆ ಏಜೆಂಟ್ ರೂಂಗಳು, ತಿಂಡಿ, ಊಟ, ನೀರು ವ್ಯವಸ್ಥೆ, ಮೂಲ ಭೂತ ವ್ಯವಸ್ಥೆಗಳ ಬಗ್ಗೆ ಪರಿಶೀಲಿಸಿತು.

**ತುರ್ತು ಚಿಕಿತ್ಸೆಗಾಗಿ ವೈದ್ಯರು**

ಮತ ಎಣಿಕೆ ವೇಳೆ ಯಾವುದೇ ಭದ್ರತಾ ಲೋಪ ಆಗದಂತೆ ಎಚ್ಚರ ವಹಿಸುವುದು. ಪಾಸ್ ಇಲ್ಲದೆ ಒಳ ಪ್ರವೇಶಿಸುವುದು ಮತ್ತಿತರ ಕುರಿತಂತೆ ಕೈಗೊಂಡಿರುವ ಕಟ್ಟೆಚ್ಚರಗಳ ಬಗ್ಗೆ ಮಾಹಿತಿ ಪಡೆದು ಹಲ ವು ಸಲಹೆ ಸೂಚನೆಗಳನ್ನು ನೀಡಲಾಯಿತು. ಮತ ಎಣಿಕೆ ದಿನ ಯಾವುದೇ ಸಮಸ್ಯೆಯಾಗದಂತೆ ಮುಂಜಾಗ್ರತೆ ವಹಿಸುವಂತೆ ಅಧಿಕಾರಿಗಳಿಗೆ ಆದೇಶಿಸಲಾಯಿತು. ಅಪರ ಜಿಲ್ಲಾಧಿಕಾರಿ ಡಾ. ಎನ್. ತಿಪ್ಪೇಸ್ವಾಮಿ, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಾಜ ಇಮಾಮ್ ಕಾಸಿಂ ಮತ್ತಿತರರು ಇದ್ದರು. ಮತ ಎಣಿಕೆ ಕೇಂದ್ರದಲ್ಲಿ ಕುಡಿಯುವ ಕುಡಿಯುವ ನೀರು, ಶೌಚಾಲಯ ವ್ಯವಸ್ಥೆ, ಊಟದ ವ್ಯವಸ್ಥೆ, ವಿದ್ಯುತ್ ಪೂರೈಕೆ, ವೈದ್ಯಕೀಯ ಸೇವೆ ಎಲ್ಲಾ ಅಗತ್ಯ ಮೂಲ ಸೌಕರ್ಯ ಕಲ್ಪಿಸಲಾಗುತ್ತದೆ.

ಮಾಧ್ಯಮ ಕೇಂದ್ರ ತೆರೆದು ಪ್ರತಿ ಸುತ್ತಿನ ವಿವರವನ್ನೂ ಒದಗಿಸಲಾಗುತ್ತದೆ. ಮಾಧ್ಯಮ ಕೇಂದ್ರಕ್ಕೆ ಗುರುತಿನ ಚೀಟಿ ಇರುವ ಮಾಧ್ಯಮದವರಿಗೆ ಮಾತ್ರ ಪ್ರವೇಶ ನೀಡಲಿದ್ದು, ಮೊಬೈಲ್ ಬಳಕೆಗೆ ಅಲ್ಲಿ ಅವಕಾಶ ನೀಡಲಾಗುತ್ತದೆ. ತುರ್ತು ಆರೋಗ್ಯ ಕೇಂದ್ರ ತೆರೆದು ಆಂಬ್ಯುಲೆನ್ಸ್ ವ್ಯವಸ್ಥೆ, ವೈದ್ಯರು, ಸಿಬ್ಬಂದಿಯನ್ನು ತುರ್ತು ಚಿಕಿತ್ಸೆಗಾಗಿ ನೇಮಿಸಲಾಗಿರುತ್ತದೆ ಎಂದು ಡಿಸಿ ತಿಳಿಸಿದರು. ಈ ವೇಳೆ ಕ್ಷೇತ್ರದ ಚುನಾವಣಾ ವೀಕ್ಷಕ ನ್ಯಾಲಿ ಈಟೆ, ಅಪರ ಜಿಲ್ಲಾಧಿಕಾರಿ ಡಾ.ಎನ್.ತಿಪ್ಪೇಸ್ವಾಮಿ, ಎಎಸ್ಪಿ ಆರ್.ಐ.ಖಾಸಿಂ ಹಾಜರಿದ್ದರು.


ಉದಯವಾಹಿನಿ ಚಿತ್ರ

**8 ಗಂಟೆಗೆ ಮತ ಎಣಿಕೆ ಆರಂಭ**

ಚಿಕ್ಕಬಳ್ಳಾಪುರ ಜಿಲ್ಲಾಡಳಿತ ಭವನದ ಸರ್ ಎಂ.ವಿಶ್ವೇಶ್ವರಯ್ಯ ಸಭಾಂಗಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮತ ಎಣಿಕೆಗೆ ಕೈಗೊಂಡಿರುವ ಎಲ್ಲಾ ಪೂರ್ವ ಸಿದ್ಧತೆಗಳ ಬಗ್ಗೆ ವಿವರ ನೀಡಿದ ಅವರು, ಬೆಳಗ್ಗೆ 7.30ಕ್ಕೆ ಸರಿಯಾಗಿ ಭದ್ರತಾ ಕೊಠಡಿ(ಸ್ಟ್ರಾಂಗ್ ರೂಂ) ಯ ಬೀಗವನ್ನು ಅಭ್ಯರ್ಥಿಗಳು, ಏಜೆಂಟರುಗಳ ಸಮ್ಮುಖದಲ್ಲಿ ತೆಗೆಯಲಾಗುತ್ತದೆ. ಪೊಲೀಸ್ ಬಿಗಿ ಭದ್ರತೆಯಲ್ಲಿ ಇವಿಎಂ ಯಂತ್ರಗಳನ್ನು ಮತ ಎಣಿಕೆ ಕೊಠಡಿಗಳಿಗೆ ತಂದು 8 ಗಂಟೆಗೆ ಮತ ಎಣಿಕೆ ಆರಂಭಿಸಲಾಗುತ್ತದೆ ಎಂದರು.

> ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಚುನಾವಣೆಯ ಮತ ಎಣಿಕೆ ಕಾರ್ಯ ಜೂ.4ರಂದು ನಾಗಾರ್ಜುನ ಕಾಲೇಜಿನಲ್ಲಿ ನಡೆಯಲಿದ್ದು ಸುಸೂತ್ರವಾಗಿ ಸಕಾಲಕ್ಕೆ ಮತ ಎಣಿಕೆ ಕಾರ್ಯ ಪೂರ್ಣ ಗೊಳಿಸಿ ಫಲಿತಾಂಶ ಘೋಷಣೆಗೆ ಎಲ್ಲಾ ಸಿದ್ಧತೆಗಳನ್ನು ನಡೆಸಿದ್ದೇವೆ -ಪಿ.ಎನ್.ರವೀಂದ್ರ, ಚುನಾವಣಾಧಿಕಾರಿ, ಜಿಲ್ಲಾಧಿಕಾರಿ


# ಶಾಲಾ-ಕಾಲೇಜುಗಳ ಆವರಣ ಸ್ವಚ್ಛವಾಗಿಡಲು ಜಿಲ್ಲಾಧಿಕಾರಿ ಸೂಚನೆ

• ಉದಯವಾಹಿನಿ, ತುಮಕೂರು

ಪ್ರಸಕ್ತ ಸಾಲಿನ ಶೈಕ್ಷಣಿಕ ವರ್ಷ ಆರಂಭವಾಗಿದ್ದು, ಹಗಲು ಹೊತ್ತಿನಲ್ಲಿ ರೋಗಗಳನ್ನು ಹರಡುವಂತಹ ಸೊಳ್ಳೆಗಳ ಕಡಿತದಿಂದ ಮಕ್ಕಳಿಗೆ ಸಾಂಕ್ರಾಮಿಕ ರೋಗಗಳು ಹರಡುವ ಸಂಭವವಿರುವ ಕಾರಣ ಜಿಲ್ಲೆಯಾದ್ಯಂತ ಎಲ್ಲಾ ಶಾಲಾ-ಕಾಲೇಜುಗಳ ಕೊಠಡಿಗಳನ್ನು ಪರಿಶೀಲಿಸಿ ಸ್ವಚ್ಛತೆ ಹಾಗೂ ಸೊಳ್ಳೆಗಳ ನಿಯಂತ್ರಣಕ್ಕಾಗಿ ಕ್ರಮಕೈಗೊಳ್ಳುವಂತೆ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿಯ ವಿಡಿಯೋ ಕಾನ್ಫರೆನ್ಸ್ ಸಭಾಂಗಣದಲ್ಲಿ ನಡೆದ 'ಮುಂಗಾರು ಹಾಗೂ ಬರ ನಿರ್ವಹಣೆಗೆ ಸಂಬಂಧಿಸಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಆಸ್ಪತ್ರೆಗಳ ಶಸ್ತ್ರಚಿಕಿತ್ಸೆ ಕೊಠಡಿಗಳು ಸೇರಿದಂತೆ ಆಸ್ಪತ್ರೆ ಆವರಣ ಸ್ವಚ್ಛತೆ ಕುರಿತಂತೆ ಕೈಗೊಂಡ ಕ್ರಮಗಳ ಬಗ್ಗೆ ಮಾಹಿತಿ ಪಡೆದ ಅವರು, ಪಾವಗಡದಲ್ಲಿ ನಡೆದಂತಹ ಪ್ರಕರಣ ಮರುಕಳಿಸದಂತೆ ಅಗತ್ಯ ಮುನ್ನೆಚ್ಚರಿಕೆ ವಹಿಸುವಂತೆ ಸೂಚಿಸಿದರು. ಜಿಲ್ಲೆಯ ಕುಡಿಯುವ ನೀರಿನ ಮೂಲಗಳ ಪರೀಕ್ಷೆ ನಡೆಸಲಾಗಿದ್ದು, ಕುಡಿಯುವ ನೀರಿನ ಪರೀಕ್ಷೆಯಲ್ಲಿ ನೀರಿನ ಅಶುದ್ಧತೆ ಬಗ್ಗೆ ವರದಿ ಬಂದ ತಕ್ಷಣ ಸಾರ್ವಜನಿಕರಿಗೆ ಅಶುದ್ಧ ಕುಡಿಯುವ ನೀರು ಪೂರೈಕೆಯನ್ನು ಕೂಡಲೇ ಸ್ಥಗಿತಗೊಳಿಸುವಂತೆ ಸೂಚಿಸಿದರಲ್ಲದೆ, ಪರ್ಯಾಯವಾಗಿ ಶುದ್ಧ ಕುಡಿಯುವ ನೀರಿನ ಘಟಕಗಳಿಂದ ನೀರಿನ ವ್ಯವಸ್ಥೆಯನ್ನು ಕಲ್ಪಿಸು ವಂತೆ ಅಧಿಕಾರಿಗಳಿಗೆ ಸೂಚಿಸಿದರು.


ಉದಯವಾಹಿನಿ ಚಿತ್ರ

> ಜಿಲ್ಲೆಯಾದ್ಯಂತ 103 ಗ್ರಾಮಗಳಲ್ಲಿ ಖಾಸಗಿ ಕೊಳವೆ ಬಾವಿ ಮೂಲಕ ಹಾಗೂ 5 ಕಡೆ ಟ್ಯಾಂಕರ್ ಮೂಲಕ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ
> -ರವೀಶ್, ಗ್ರಾಮೀಣ ಕುಡಿಯುವ ನೀರು ಹಾಗೂ ನೈರ್ಮಲ್ಯ ವಿಭಾಗದ ಕಾರ್ಯಪಾಲಕ ಅಭಿಯಂತರ

ತಿಪಟೂರು ತಾಲ್ಲೂಕಿನ ಈಚನೂರು ಕೆರೆಗೆ ಮಲೀನಯುಕ್ತ ನೀರು ಸೇರುತ್ತಿರುವ ಬಗ್ಗೆ ಇಂದೇ ಸ್ಥಳಕ್ಕೆ ಭೇಟಿ ನೀಡಿ ವರದಿ ಸಲ್ಲಿಸುವಂತೆ ಉಪವಿಭಾಗಾಧಿಕಾರಿ ಸಪ್ತಶ್ರೀ ಅವರಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಜಿಲ್ಲಾಧಿಕಾರಿ ಪ್ರತಿಕ್ರಿಯಿಸಿ ಮಳೆಯಿಂದ ಕೊಳವೆಬಾವಿಗಳಿಗೆ ಜಲ ಮರುಪೂರಣವಾಗಿ ಅಂತರ್ಜಲಮಟ್ಟ ಹೆಚ್ಚುತ್ತಿದ್ದು, ಈ ಬಗ್ಗೆ ಮರು ಪರಿಶೀಲಿಸುವಂತೆ ಸೂಚಿಸಿದರು.

ಅಪರ ಜಿಲ್ಲಾಧಿಕಾರಿ ಶಿವಾನಂದ ಬಿ. ಕರಾಳೆ, ತೋಟಗಾರಿಕೆ ಇಲಾಖೆ ಉಪ ನಿರ್ದೇಶಕಿ ಶಾರದಮ್ಮ, ಜಿಲ್ಲೆಯ ಎಲ್ಲಾ ಉಪವಿ ಭಾಗಾಧಿಕಾರಿಗಳು, ತಹಶೀಲ್ದಾರರು, ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಮತ್ತಿತರರು ಉಪಸ್ಥಿತರಿದ್ದರು.

# ಶಿಡ್ಲಘಟ್ಟದಲ್ಲಿ ಶೇ.96 ರಷ್ಟು ಆಗ್ನೇಯ ಶಿಕ್ಷಕರ ಮತದಾನ

• ಉದಯವಾಹಿನಿ, ಶಿಡ್ಲಘಟ್ಟ

ಆಗ್ನೇಯ ಶಿಕ್ಷಕರ ಕ್ಷೇತ್ರದ ಚುನಾವಣೆಯು ಸೋಮವಾರ ಬೆಳಿಗ್ಗೆ 8 ಗಂಟೆಯಿಂದಲೇ ಮತದಾನ ಆರಂಭವಾಗಿ ಸಂಜೆ ನಾಲ್ಕು ಗಂಟೆಯವರೆಗೆ ನಡೆಯಿತು. ತಾಲ್ಲೂಕು ಆಡಳಿತ ಸೌಧದ ತಾಲೂಕು ಕಚೇರಿಯ ಮೊದಲನೇ ಮಹಡಿಯಲ್ಲಿ ನಡೆದ ಮತದಾನದಲ್ಲಿ ಮತದಾರರು ಉತ್ಸುಕತೆಯಿಂದ ಆಗಮಿಸಿ ಮತ ಚಲಾಯಿಸಿದರು.


ಉದಯವಾಹಿನಿ ಚಿತ್ರ

**ಮತದಾರರ ಸಂಖ್ಯೆ ವಿರಳ**

ಬೆಳಿಗ್ಗೆ ಆರಂಭವಾದ ಮತದಾನ ಬೆಳಗಿನ ಸಂದರ್ಭದಲ್ಲಿ ಮತದಾರರ ಸಂಖ್ಯೆ ವಿರಳವಾಗಿತ್ತು. ಸಮಯ ಕಳೆದಂತೆ ಮತದಾರರು ಮತಗಟ್ಟೆಗೆ ಆಗಮಿಸುತ್ತಿದ್ದುದು ಹೆಚ್ಚಾಗಿ ಕಂಡುಬಂದಿತು. ಸರದಿ ಸಾಲಿನಲ್ಲಿ ನಿಂತು ಶಾಂತಿಯುತವಾಗಿ ಮತದಾನ ಮಾಡಿದರು. ಮತದಾನದ ಮುಕ್ತಾಯದ ಸಮಯಕ್ಕೆ ತಾಲ್ಲೂಕಿನಾದ್ಯಂತ 484 ಶಿಕ್ಷಕ ಮತದಾರರಿದ್ದು, ಅದರಲ್ಲಿ 468 ಮತದಾನ ನಡೆದಿದ್ದು, ಶೇ 96 ರಷ್ಟು ಮತದಾನ ನಡೆಯಿತು. ಅದರಲ್ಲಿ ಪುರುಷ ಮತದಾರರು 259 ಮತದಾನ ಮಾಡಿದ್ದರೆ, 209 ಮಹಿಳಾ ಮತದಾರರು ಮತದಾನ ಮಾಡಿದ್ದಾರೆ. ಚುನಾವಣಾ ಅಧಿಕಾರಿಯಾಗಿ ವಿನಯ್ ಕಪೂರ್ ಆರ್, ಹಾಗೂ ಉಪ ಚುನಾವಣಾ ಅಧಿಕಾರಿಯಾಗಿ ರವಿ ಕುಮಾರ್ ಕಾರ್ಯ ನಿರ್ವಹಿಸಿದರು.

ಇನ್ನು ಚುನಾವಣೆಯೂ ಯಾವುದೇ ರೀತಿಯ ಮತದಾರರಿಗೆ ಅನಾನುಕೂಲವಾಗದಂತೆ ಆಗ್ನೇಯ ಶಿಕ್ಷಕರ ಕ್ಷೇತ್ರದ ಮತದಾನವು ಸುಸೂತ್ರವಾಗಿ ,ಶಾಂತಿಯಿಂದ ಮತದಾನ ನಡೆಯಿತು ಎಂದು ತಹಶೀಲ್ದಾರ್ ಬಿ.ಎನ್.ಸ್ವಾಮಿ ಮಾಹಿತಿ ನೀಡಿದರು.

# ಸತ್ಯಮಂಗಲ ಕೆರೆ ಅಭಿವೃದ್ಧಿಗೆ ಬಿಡದ ಗ್ರಹಣ

• ಉದಯವಾಹಿನಿ, ತುಮಕೂರು

ನಗರ ಹೊರವಲಯದ ಸತ್ಯಮಂಗಲ ಕೆರೆ ಪ್ರದೇಶ ಕುಡುಕರ ಅಡ್ಡೆಯಾಗಿ ಬದಲಾಗಿದ್ದು, ಕೆರೆಯ ರಕ್ಷಣೆ, ಅಭಿವೃದ್ಧಿಗೆ ಯಾರೊಬ್ಬರು ಮುಂದಾಗಿಲ್ಲ.

ಸತ್ಯಮಂಗಲ ಅರೆ-ನಗರ ಪ್ರದೇಶವಾಗಿರುವುದರಿಂದ ಈ ಬಗ್ಗೆ ಅಧಿಕಾರಿಗಳು, ಜನಪ್ರತಿನಿಧಿಗಳು ಅಸಡ್ಡೆ, ತಾತ್ಸಾರ ಭಾವನೆ ತೋರುತ್ತಿದ್ದಾರೆ.

ಕೆರೆ ಅಕ್ರಮ ಚಟುವಟಿಕೆಗಳ ತಾಣವಾಗುತ್ತಿದ್ದರೂ ಅದನ್ನು ತಡೆಯುವ ಕೆಲಸಕ್ಕೆ ಯಾರೂ ಧ್ವನಿ ಎತ್ತುತ್ತಿಲ್ಲ. ಕೆರೆಯ ಸುತ್ತ ತಂತಿ ಬೇಲಿ ಹಾಕಿ, ಅನ್ಯ ಕಾರ್ಯಗಳಿಗಾಗಿ ಇತ್ತ ಬರದಂತೆ ನಿರ್ಬಂಧ ವಿಧಿಸುವ ಕೆಲಸ ತುರ್ತಾಗಿ ಆಗಬೇಕಿದೆ. ಕೆರೆ 13 ಎಕರೆ ವಿಸ್ತೀರ್ಣ ಹೊಂದಿದ್ದು, ಇದರಲ್ಲಿ ಒತ್ತುವರಿ ಜಾಸ್ತಿಯಾಗಿದೆ. ಮಹಾನಗರ ಪಾಲಿಕೆಯ ಅಧಿಕಾರಿಗಳು ಕೆರೆಯ ಸರ್ವೆ ಮಾಡುವುದನ್ನೇ ಮರೆತಿದ್ದಾರೆ. ಹೀಗಾಗಿ ಅವರಿಗೆ ಒತ್ತುವರಿಯಾದ ಬಗ್ಗೆ ಮಾಹಿತಿಯೇ ಇಲ್ಲ. ಅಧಿಕಾರಿಗಳು ಕಚೇರಿಯಲ್ಲಿ ಕೂತು ಕೆರೆಯ ನಕ್ಷೆ ನೋಡಿಕೊಂಡು 'ಒತ್ತುವರಿಯಾಗಿಲ್ಲ' ಎನ್ನುತ್ತಿದ್ದಾರೆ. ಆದರೆ, ವಾಸ್ತವದ ಸ್ಥಿತಿ ಬೇರೆಯೇ ಇದೆ.


ಉದಯವಾಹಿನಿ ಚಿತ್ರ


ಅಧಿಕಾರಿಗಳು ಒಮ್ಮೆ ಸ್ಥಳ ಪರಿಶೀಲನೆ ನಡೆಸಿದರೆ ವಾಸ್ತವ ಚಿತ್ರಣ ಏನು ಎಂಬುವುದು ಅವರ ಗಮನಕ್ಕೆ ಬರುತ್ತದೆ. ಸಂಬಂಧಪಟ್ಟವರು ಬಂದು ಕೆರೆಯನ್ನು ಜೀವಂತವಾಗಿ ಉಳಿಸುವ ಕೆಲಸ ಮಾಡಬೇಕು. ಕಚೇರಿ ಬಿಟ್ಟು ಹೊರ ಬಂದು ಜನರ ಸಮಸ್ಯೆ ತಿಳಿಯುವ ಪ್ರಯತ್ನ ಮಾಡಲಿ' ಎಂದು ಸತ್ಯಮಂಗಲದ ಶಿವಾನಂದ ಮನವಿ ಮಾಡಿದರು.

# ಮಂಡ್ಯ ಲೋಕಸಭಾ ಚುನಾವಣೆ ಎಣಿಕೆ: ಇಬ್ಬರಲ್ಲಿ ಗೆಲ್ಲೋದು ಯಾರು?

• ಉದಯವಾಹಿನಿ, ಮಂಡ್ಯ

ಲೋಕಸಭಾ ಚುನಾವಣೆ ಮತ ಎಣಿಕೆಗೆ 24 ಗಂಟೆ ಮಾತ್ರ ಬಾಕಿ ಉಳಿದಿದ್ದು ಫಲಿತಾಂಶದ ಬಗ್ಗೆ ಜನರಲ್ಲಿ ಕುತೂಹಲ ಮೂಡಿದೆ. ಬಿಜೆಪಿ- ಜೆಡಿಎಸ್ ಮೈತ್ರಿ ಅಭ್ಯರ್ಥಿ ಎಚ್.ಡಿ.ಕುಮಾರಸ್ವಾಮಿ ಹಾಗೂ ಕಾಂಗ್ರೆಸ್ ಅಭ್ಯರ್ಥಿ ವೆಂಕಟರಮಣೇಗೌಡ (ಸ್ಟಾರ್ ಚಂದ್ರು) ಅವರ ಭವಿಷ್ಯ ಮತಯಂತ್ರದಲ್ಲಿ ಭದ್ರವಾಗಿದ್ದು ಇಬ್ಬರಲ್ಲಿ ಗೆಲ್ಲುವುದು ಯಾರು ಎಂಬ ಪ್ರಶ್ನೆ ಮೂಡಿದೆ.

ಏ.26ರಂದು ಮತದಾನ ಮುಗಿದ ನಂತರ ಅಭ್ಯರ್ಥಿಗಳು, ರಾಜಕೀಯ ಪಕ್ಷಗಳ ಮುಖಂಡರು ಹಾಗೂ ಸಾರ್ವಜನಿಕರು ತಿಂಗಳಿಗೂ ಹೆಚ್ಚು ಕಾಲ ಕಾದಿದ್ದಾರೆ. ದೇಶದಾದ್ಯಂತ ಹಲವು ಹಂತಗಳ ಚುನಾವಣಾ ಪ್ರಕ್ರಿಯೆ ಪೂರ್ಣಗೊಂಡಿದ್ದು ಫಲಿತಾಂಶ ಹೊರಬೀಳುವ ಸಮಯ ಬಂದಿದೆ. ಹೀಗಾಗಿ ಎಲ್ಲೆಡೆ ಕುತೂಹಲ ಮನೆ ಮಾಡಿದ್ದು ಚರ್ಚೆಗಳು ಗರಿಗೆದರಿವೆ. ಮತಯಂತ್ರದಲ್ಲಿ 14 ಮಂದಿಯ ಭವಿಷ್ಯವಿದ್ದರೂ ಎಚ್‌ಡಿಕೆ ಹಾಗೂ ಸ್ಟಾರ್ ಚಂದ್ರು ನಡುವೆ,ರಾಜ್ಯದಲ್ಲಿ ಮೊದಲ ಹಂತದ ಚುನಾವಣಾ ಪ್ರಕ್ರಿಯೆ ಪೂರ್ಣಗೊಂಡ ನಂತರ ಮೈತ್ರಿ ಅಭ್ಯರ್ಥಿ ಎಚ್.ಡಿ.ಕುಮಾರಸ್ವಾಮಿ ಅವರು ಇನ್ನೊಂದು ಹಂತದ ಚುನಾವಣಾ ಪ್ರಚಾರ ನಡೆಸಿ ನಂತರ ವಿಶ್ರಾಂತಿ ಪಡೆದಿದ್ದರು. ಕಾಂಗ್ರೆಸ್ ಅಭ್ಯರ್ಥಿ ಸ್ಟಾರ್ ಚಂದ್ರು ಕೂಡ ವಿಶ್ರಾಂತಿಗೆ ಮರಳಿದ್ದರು. ಕಾಲಿಗೆ ಚಕ್ರ ಕಟ್ಟಿಕೊಂಡವರಂತೆ ಕ್ಷೇತ್ರದ 8 ತಾಲ್ಲೂಕುಗಳಲ್ಲೂ ಸುತ್ತಾಡಿದ್ದ ಅವರು ಮೌನಕ್ಕೆ ಶರಣಾಗಿದ್ದರು.

**ಇಬ್ಬರೂ ಅಭ್ಯರ್ಥಿಗಳು ತಮ್ಮ ಗೆಲುವು ನಿಶ್ಚಿತ ಎಂಬ ವಿಶ್ವಾಸ**

**ಬೆಳಿಗ್ಗೆ 8 ಗಂಟೆಗೆ ಎಣಿಕೆ ಕಾರ್ಯ**

ಈಗ ಫಲಿತಾಂಶದ ದಿನ ಬಂದಿದ್ದು ಅಭ್ಯರ್ಥಿಗಳ ಎದೆಯಲ್ಲಿ ಢವಢವ ಆರಂಭವಾಗಿದೆ. ಇಬ್ಬರೂ ಅಭ್ಯರ್ಥಿಗಳು ತಮ್ಮ ಗೆಲುವು ನಿಶ್ಚಿತ ಎಂಬ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಅವರ ವಿಶ್ವಾಸ ನಿಜವಾಗುವುದೇ ಅಥವಾ ಸುಳ್ಳಾಗುವುದೇ ಎಂಬ ಪ್ರಶ್ನೆಗೆ ಉತ್ತರ ದೊರೆಯಬೇಕಾದರೆ ರಾತ್ರಿ ಕಳೆದು ಬೆಳಕಾಗಬೇಕಾಗಿದೆ. ಮಂಗಳವಾರ ಬೆಳಿಗ್ಗೆ 8 ಗಂಟೆಗೆ ಎಣಿಕೆ ಕಾರ್ಯ ಆರಂಭವಾಗಲಿದ್ದು ಮಧ್ಯಾಹ್ನ 12 ಗಂಟೆಯ ಹೊತ್ತಿಗೆ ಸ್ಪಷ್ಟ ಚಿತ್ರಣ ದೊರೆಯಲಿದೆ.

# ಎಕ್ಸ್‌ಪ್ರೆಸ್ ಲಿಂಕ್ ಕೆನಾಲ್: ನಮ್ಮ ನೀರಿನ ಹಕ್ಕಿಗ್ಯಾಕೆ ಅವರ ವಿರೋಧ?


ಉದಯವಾಹಿನಿ ಚಿತ್ರ

• ಉದಯವಾಹಿನಿ, ಮಾಗಡಿ

ರಾಮನಗರ ಮತ್ತು ತುಮಕೂರು ಅಕ್ಕಪಕ್ಕದ ಜಿಲ್ಲೆಗಳು. ಹಲವು ವಿಷಯದಲ್ಲಿ ಕೊಡು-ಕೊಳ್ಳುವಿಕೆ ಇರುವ ಈ ಜಿಲ್ಲೆಗಳ ಮಧ್ಯೆ ಕೆಲ ದಿನಗಳ ನಡುವೆ 'ಶೀತಲ ಸಮರ' ಶುರುವಾಗಿದೆ. ರಾಮನಗರ ಜಿಲ್ಲೆಯ ಮಾಗಡಿ ತಾಲ್ಲೂಕಿಗೆ ಹೇಮಾವತಿ ನೀರು ಹರಿಸುವ ಎಕ್ಸ್‌ಪ್ರೆಸ್ ಲಿಂಕ್ ಕೆನಾಲ್ ಯೋಜನೆ ಈ ಸಮರಕ್ಕೆ ಕಾರಣ.

ಅತ್ತ ತುಮಕೂರು ಭಾಗದಲ್ಲಿ ಯೋಜನೆಗೆ ದೊಡ್ಡ ಮಟ್ಟದಲ್ಲಿ ವಿರೋಧ ವ್ಯಕ್ತವಾಗುತ್ತಿದ್ದಂತೆ, ಇತ್ತ ಮಾಗಡಿಯಲ್ಲೂ ಯೋಜನೆ ಪರವಾದ ಹೋರಾಟದ ಕಿಚ್ಚು ಹೊತ್ತಿಕೊಂಡಿದೆ. ಎರಡೂ ಕಡೆ ನಡೆಯುತ್ತಿರುವ ಪರ-ವಿರೋಧದ ಹೋರಾಟದಲ್ಲಿ ಜನಪ್ರತಿನಿಧಿಗಳು, ಸ್ವಾಮೀಜಿಗಳು, ರೈತ ಸಂಘ ಸೇರಿದಂತೆ ವಿವಿಧ ಸಂಘ-ಸಂಸ್ಥೆ, ನಾಗರಿಕ ಸಂಘಟನೆಗಳು ಬೆಂಬಲ ಸೂಚಿಸಿ ಪಾಲ್ಗೊಂಡಿರುವುದರಿಂದ, ಹೋರಾಟದ ಕಾವು ದಿನದಿಂದ ದಿನಕ್ಕೆ ಹೆಚ್ಚುತ್ತಿದೆ.


**2016ರಲ್ಲಿ ಶಂಕುಸ್ಥಾಪನೆ**

ಜಲ ಸಂಪನ್ಮೂಲ ಇಲಾಖೆಯ ಕಾವೇರಿ ನೀರಾವರಿ ನಿಗಮದ ವತಿಯಿಂದ ಕುಣಿಗಲ್ ತಾಲ್ಲೂಕಿನ ಹುತ್ರಿದುರ್ಗ ಹೋಬಳಿ ಹಾಗೂ ಮಾಗಡಿ ತಾಲ್ಲೂಕು ಒಳಗೊಂಡಂತೆ 83 ಕೆರೆಗಳಿಗೆ ಹೇಮಾವತಿ ನೀರು ತುಂಬಿಸುವ 327 ಕೋಟಿ ಮೊತ್ತದ 'ಶ್ರೀರಂಗ ಏತ ನೀರಾವರಿ ಯೋಜನೆ'ಗೆ 2016ರಲ್ಲಿ ಚಾಲನೆ ಸಿಕ್ಕಿತು.

**ಏನಿದು ಯೋಜನೆ:** ಕಾವೇರಿ ನ್ಯಾಯಾಧೀಕರಣದ ಆದೇಶದಂತೆ ಹೇಮಾವತಿ ನಾಲಾ ವಲಯ ಮತ್ತು ತುಮಕೂರಿಗೆ ಒಟ್ಟು 25.31 ಟಿಎಂಸಿ ಅಡಿ ನೀರು ನಿಗದಿಯಾಗಿದೆ. ಅದರಂತೆ ನಾಲಾ ವಲಯದಲ್ಲಿರುವ ಹಾಸನ, ಮಂಡ್ಯ, ತುಮಕೂರು ಹಾಗೂ ರಾಮನಗರ ಜಿಲ್ಲೆಗಳ 14 ತಾಲ್ಲೂಕುಗಳಿಗೆ ಸ್ಥಳಗಳಿಗೆ ನೀರು ಹಂಚಿಕೆಯಾಗಿದೆ.

ಇದರಲ್ಲಿ ರಾಮನಗರ ಜಿಲ್ಲೆಯ ಮಾಗಡಿ ತಾಲ್ಲೂಕಿನ 66 ಕೆರೆಗಳಿಗೆ ನೀರು ತುಂಬಿಸುವುದು ಸಹ ಸೇರಿದೆ. ಹೇಮಾವತಿ ನೀರಿಗಾಗಿ ತಾಲ್ಲೂಕಿನಲ್ಲಿ ಹಿರಿಯ ರಾಜಕಾರಣಿ ದಿವಂಗತ ಟಿ.ಎ. ರಂಗಯ್ಯ ಸೇರಿದಂತೆ ಇಂದಿನ ರಾಜಕಾರಣಿಗಳವರೆಗೆ ನಡೆಸಿದ ಪ್ರಯತ್ನದ ಫಲವಾಗಿ ದಶಕಗಳ ಕನಸು ನನಸಾಯಿತು.

# ಮಾವಿನ ಹಣ್ಣು ಕಿತ್ತು ಸವಿದ ಕಾಡಾನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಾಮರಾಜನಗರ

ತಾಲ್ಲೂಕಿನ ಗಡಿ ಭಾಗ ತಮಿಳುನಾಡಿನ ತಾಳವಾಡಿಯಲ್ಲಿ ರೈತರೊಬ್ಬರ ಜಮೀನಿಗೆ ರಾತ್ರಿ ನುಗ್ಗಿದ ಕಾಡಾನೆಯೊಂದು ಮಾವಿನ ಮರದಿಂದ ಹಣ್ಣುಗಳನ್ನು ಕಿತ್ತು ಸೇವಿಸಿದೆ. ತಾಳವಾಡಿಯ ನಟರಾಜು ಎಂಬುವವರ ತೋಟಕ್ಕೆ ಎರಡು ದಿನಗಳ ಹಿಂದೆ ರಾತ್ರಿ ಕಾಡಾನೆ ಬಂದಿದೆ. ಮಾವಿನ ಮರದ ರೆಂಬೆಗೆ ಕಾಲಿಟ್ಟು ಸೊಂಡಿಲಿನಿಂದ ಮಾವಿನ ಹಣ್ಣಿನ ಗೊಂಚಲನ್ನು ಕಿತ್ತು ಕೆಳಗಡೆ ಹಾಕಿದೆ. ನಂತರ ಹಣ್ಣುಗಳನ್ನು ಸೇವಿಸಿದೆ. ನಟರಾಜು ಮನೆಯವರೇ ಈ ದೃಶ್ಯವನ್ನು ಸೆರೆ ಹಿಡಿದಿದ್ದಾರೆ. ವಿಡಿಯೋ ತುಣುಕು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದೆ.

# ಜಿಹಾದಿ ಮನಸ್ಥಿತಿ ವಿರುದ್ಧ ಹೋರಾಡಿದ ರಘುಪತಿ ಭಟ್ಟರಿಗೆ ಎಂಎಲ್‌ಸಿ ಟಿಕೆಟ್ ಕೊಡಲಿಲ್ಲ

• ಉದಯವಾಹಿನಿ, ಮೈಸೂರು

ಕ್ಷೇತ್ರದ ಸಂಸದ ಪ್ರತಾಪ್ ಸಿಂಹ ಅವರಿಗೆ ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಟಿಕೆಟ್ ನಿರಾಕರಿಸಲಾಗಿದ್ದು, ಯದುವೀರ್ ಒಡೆಯರ್ ಅವರಿಗೆ ಬಿಜೆಪಿ ಅವಕಾಶ ಮಾಡಿಕೊಟ್ಟಿತ್ತು. ಒಳ ಗೊಳಗೆ ಅಸಮಾಧಾನವಿದ್ದರೂ ಸಹ ಪ್ರತಾಪ್ ಸಿಂಹ ಪಕ್ಷದ ಅಭ್ಯರ್ಥಿ ಪರ ಕೆಲಸ ಮಾಡಿದ್ದರು.



ವಿಧಾನಸಭೆಯಿಂದ ವಿಧಾನ ಪರಿಷತ್‌ಗೆ ನಡೆಯುವ ಚುನಾವಣೆಯಲ್ಲಿ ತಮಗೆ ಅವಕಾಶ ಸಿಗಬಹುದು ಎಂದು ಇದಕ್ಕಾಗಿ ಪ್ರಯತ್ನ ನಡೆಸಿದ್ದ ಪ್ರತಾಪ್ ಸಿಂಹ ಅವರಿಗೆ ಇಲ್ಲಿಯೂ ನಿರಾಸೆಯಾಗಿದೆ. ವಿಧಾನ ಪರಿಷತ್ ಚುನಾವಣೆಗೆ ತನ್ನ ಅಭ್ಯರ್ಥಿಗಳ ಪಟ್ಟಿಯನ್ನು ಬಿಜೆಪಿ ಈಗಾಗಲೇ ಪ್ರಕಟಿಸಿದೆ. ಇದರ ಮಧ್ಯೆ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಹಾಕಿರುವ ಪ್ರತಾಪ್ ಸಿಂಹ, ಉಡುಪಿ ವಿಧಾನಸಭಾ ಕ್ಷೇತ್ರದ ಬಿಜೆಪಿ ಟಿಕೆಟ್ ವಂಚಿತ ರಘುಪತಿ ಭಟ್ ಅವರಿಗೆ ವಿಧಾನ ಪರಿಷತ್ ಪದವೀಧರರ ಕ್ಷೇತ್ರದ ಟಿಕೆಟ್ ನೀಡದ್ದಕ್ಕೆ ತಮ್ಮ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಉಡುಪಿಯ ಶಿಕ್ಷಣ ಸಂಸ್ಥೆಯೊಂದರಲ್ಲಿ ಸಮವಸ್ತ್ರ ಸಂಹಿತೆಯನ್ನು ಮುರಿದು ಬುರ್ಖಾ ಧರಿಸಿ ಕ್ಲಾಸಿಗೆ ಬಂದ ಜಿಹಾದಿ ಮನಸ್ಥಿತಿಯ ವಿರುದ್ಧ ಹೋರಾಡಿದ ರಘುಪತಿ ಭಟ್ಟರಿಗೆ ಎಂಎಲ್ಎ ಟಿಕೆಟ್ಟೂ ಸಿಗಲಿಲ್ಲ. ಒಐಅ ಟಿಕಟ್ಟನ್ನೂ ನೀಡಲಿಲ್ಲ. ಸಾಲದೆಂಬಂತೆ ಪಕ್ಷದಿಂದಲೂ ಉಚ್ಚಾಟನೆಗೆ ಒಳಗಾಗಿ ಸ್ಟೂಡೆಂಟ್ ಆಲಿಯಾ ಅಸ್ಸಾದಿಯಿಂದ ಗೇಲಿಗೆ ಒಳಗಾಗುವ ಪರಿಸ್ಥಿತಿ ಹಿಂದುತ್ವವಾದಿಗಳಿಗೆ ಬಂದಿದ್ದು ದುರದೃಷ್ಟಕರ' ಎಂದು ಹೇಳಿದ್ದಾರೆ.

# ಖಾಸಗಿ ಶಾಲೆಗಳ ಪಾರಮ್ಯ: ನಲುಗಿದ ಸರ್ಕಾರಿ ಶಾಲೆ

## ಸಾರ್ವಜನಿಕರಲ್ಲಿನ ಕಡೆಗಣನೆ ಮನೋಭಾವ, ಖಾಸಗಿ ಸಂಸ್ಥೆಗಳ ಪೈಪೋಟಿ ಕಾರಣದಿಂದ ಸರ್ಕಾರಿ ಶಾಲೆಗಳು ಅವನತಿ ಹಾದಿ

• ಉದಯವಾಹಿನಿ ವೈ.ಎನ್.ಹೊಸಕೋಟೆ

ಹೋಬಳಿಯ ಬಹುತೇಕ ಸರ್ಕಾರಿ ಶಾಲೆಗಳಲ್ಲಿ ದಾಖಲಾತಿ ಕುಸಿತಗೊಂಡು ಅವಸಾನದತ್ತ ಸಾಗಿದೆ. ಹೋಬಳಿಯಲ್ಲಿ 59 ಸರ್ಕಾರಿ ಶಾಲೆಗಳಿವೆ. 100 ಗಡಿ ದಾಖಲಾತಿ ದಾಟಿರುವ 14 ಶಾಲೆಗಳಿದ್ದರೆ, 10 ಸಂಖ್ಯೆ ಮೀರದ 5 ಶಾಲೆಗಳಿವೆ. ಅದರಂತೆ 20ರೊಳಗೆ ವಿದ್ಯಾರ್ಥಿಗಳು ಇರುವ ಶಾಲೆಗಳು 6, 50ರೊಳಗೆ 19, 100ಯೊಳಗಿನ 13 ಶಾಲೆಗಳು ಇವೆ. 7 ಸರ್ಕಾರಿ ಪ್ರೌಢಶಾಲೆಗಳಿವೆ. ಬೂದಿಬೆಟ್ಟ, ಗಂಗಸಾಗರ ಮತ್ತು ಸಾಸಲಕುಂಟೆ ಶಾಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ 50ರೊಳಗೆ ಇದೆ.

**ಶಾಲಾ ಸಮಿತಿ ಮತ್ತು ಶಾಲೆ ಸಾಮರಸ್ಯ ಕೊರತೆ**

ವಿಷಯವಾರು ಶಿಕ್ಷಕರ ಕೊರತೆ ಇದೆ. ಶಿಕ್ಷಕರ ಬೋಧನಾ ಸಮಯ ವಿವಿಧ ಯೋಜನೆ, ತರಬೇತಿಗಳಿಗೆ ಮೀಸಲು ಇಡಲಾಗಿದೆ. ಕೆಲವೆಡೆ ಶಾಲಾ ಸಮಿತಿ ಮತ್ತು ಶಾಲೆ ಸಾಮರಸ್ಯ ಕೊರತೆ, ಪೋಷಕರ ನಿರಾಸಕ್ತಿ, ಸಾರ್ವಜನಿಕರಲ್ಲಿನ ಕಡೆಗಣನೆ ಮನೋಭಾವ, ಖಾಸಗಿ ಸಂಸ್ಥೆಗಳ ಪೈಪೋಟಿ ಕಾರಣದಿಂದ ಸರ್ಕಾರಿ ಶಾಲೆಗಳು ಅವನತಿ ಹಾದಿ ಹಿಡಿಯುತ್ತಿವೆ. ಆಡಳಿತ ವ್ಯವಸ್ಥೆ ಶಾಲಾ ಅಭಿವೃದ್ಧಿಗೆ ಅಗತ್ಯ ಮೂಲ ಸೌಲಭ್ಯ ಒದಗಿಸುತ್ತಿದೆ. ಕಟ್ಟಡ, ಆಟದ ಮೈದಾನ, ಶೌಚಾಲಯ, ನೀರು, ಬೆಳಕು, ಪೀಠೋಪಕರಣ, ಆಟೋಪಕರಣ, ಕಂಪ್ಯೂಟರ್, ಸಾಧನ ಸಲಕರಣೆ, ಕಲಿಕಾ ಸಾಮಗ್ರಿ, ಬೋಧನ ಸಾಮಗ್ರಿ ಪೂರೈಸುತ್ತಿವೆ. ಮಕ್ಕಳನ್ನು ಶಾಲೆಗೆ ಸೆಳೆಯುವ ಸಲುವಾಗಿ ಮಧ್ಯಾಹ್ನದ ಬಿಸಿಯೂಟ, ಪೌಷ್ಟಿಕ ಆಹಾರ, ಹಾಲು, ಮೊಟ್ಟೆ, ಚಿಕ್ಕಿ ಇತ್ಯಾದಿ ನೀಡುತ್ತಿದೆ.

ಉಚಿತ ಸಮವಸ್ತ್ರ, ಶೂ, ಬ್ಯಾಗ್ ಯೋಜನೆಗಳು ಕಾರ್ಯಗತಗೊಂಡಿವೆ. ಆದರೆ, ಇವೆಲ್ಲವುಗಳಿಗಿಂತ ಅತಿಮುಖ್ಯವಾದ ವಿದ್ಯಾರ್ಥಿ ಕಲಿಕಾ ಗುಣಮಟ್ಟ ಸುಧಾರಿಸುವಲ್ಲಿ ಶಿಕ್ಷಣ ಇಲಾಖೆ ನೀತಿ ನಿಯಮ ಎಡವುತ್ತಿದೆ. ಪರಿಣಾಮ ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಆಮೆಗತಿಯಲ್ಲಿ ಸಾಗಿದೆ. ಹೋಬಳಿಯ ಸರ್ಕಾರಿ ಶಾಲೆಗಳಲ್ಲಿ ಒಟ್ಟು 68 ಶಿಕ್ಷಕರ ಕೊರತೆ ಇದೆ. ಸರ್ಕಾರಿ ಪ್ರೌಢಶಾಲೆಗಳಲ್ಲಿ ಶಿಕ್ಷಕರ ಕೊರತೆ ಕಾಡುತ್ತಿದ್ದರೆ, ಅನುದಾನಿತ ಸಂಸ್ಥೆಗಳಲ್ಲಿ ದಾಖಲಾತಿಗೆ ಪರದಾಡುವ ಸ್ಥಿತಿ ಇದೆ. ಖಾಸಗಿ ಶಾಲೆಗಳು ಪೋಷಕರನ್ನು ಸೆಳೆಯುವಲ್ಲಿ ಯಶಸ್ವಿಯಾಗುತ್ತಿವೆ. ಅಧಿಕ ದಾಖಲಾತಿಯೊಂದಿಗೆ ಪ್ರಾಬಲ್ಯ ಹೆಚ್ಚಿಸಿಕೊಳ್ಳುತ್ತಿವೆ. ಶಿಕ್ಷಣ ವ್ಯವಸ್ಥೆ ಪಟ್ಟಭದ್ರ ಹಿತಾಸಕ್ತಿಗಳ ಕೈ ಸೇರಿದೆ. ಉಚಿತ ಮತ್ತು ಕಡ್ಡಾಯ ಎಂಬ ಸಮಾನ ಶಿಕ್ಷಣ ಪರಿಕಲ್ಪನೆ ಅಸಮಾನತೆ ಕ್ಷೇತ್ರವಾಗುತ್ತಿದೆ. ಪ್ರತಿಮಗು ತನ್ನ ಗ್ರಾಮದಿಂದಲೇ ಗುಣಮಟ್ಟದ ಶಿಕ್ಷಣ ಪಡೆಯುವಂತಾಗಬೇಕು.


ಉದಯವಾಹಿನಿ ಚಿತ್ರ

ಸರ್ಕಾರಿ ಶಾಲೆಯನ್ನು ಕಾರ್ಪೋರೇಟ್ ಶಾಲೆಗಳ ಮಟ್ಟಕ್ಕೆ ಕೊಂಡೊಯ್ಯುವ ಚಿಂತನೆ ಜನಪ್ರತಿನಿಧಿಗಳು ಮತ್ತು ಶಿಕ್ಷಣ ಪ್ರೇಮಿಗಳಲ್ಲಿ ಮೂಡಿದಾಗ ಮಾತ್ರ ಸರ್ಕಾರಿ ಶಾಲೆಗಳು ಉಳಿಯಲು, ಎಲ್ಲಾ ಸಮುದಾಯ ಬೆಳೆಯಲು ಸಾಧ್ಯ.

> ಪ್ರತಿ ಮಗುವಿಗೂ ಗುಣಮಟ್ಟದ ಶಿಕ್ಷಣ ಸಿಗಲಿ ಪ್ರತಿ ಮಗುವಿಗೂ ಉತ್ತಮ ಗುಣಮಟ್ಟದ ಉಚಿತ ಮತ್ತು ಕಡ್ಡಾಯ ಶಿಕ್ಷಣ ಸಿಗಬೇಕಾದರೆ ಪ್ರತಿ ಗ್ರಾಮ ಪಂಚಾಯಿತಿಗೆ ಒಂದು ಸುಸಜ್ಜಿತ ಶಾಲೆ ರೂಪುಗೊಳ್ಳಬೇಕು. ಶಾಲೆಯಲ್ಲಿ ವಿಷಯವಾರು ಎಲ್ಲಾ ಅನುಭವಿ ಶಿಕ್ಷಕರನ್ನು ನೇಮಿಸಬೇಕು. ಅವರಿಗೆ ಬೋಧನಾ ಚಟುವಟಿಕೆ ಹೊರತಾದ ಯಾವ ಜವಾಬ್ದಾರಿ ಕೆಲಸ ನೀಡಬಾರದು. ಹೋಬಳಿ ಕೇಂದ್ರ ಸೇರಿದಂತೆ ಲಿಂಗದಹಳ್ಳಿ ಕೋಟಗುಡ್ಡ ಸ್ಥಳಗಳಲ್ಲಿರುವ ಖಾಸಗಿ ಶಿಕ್ಷಣ ಸಂಸ್ಥೆಗಳು ಪ್ರಾಬಲ್ಯವನ್ನು ವಿಸ್ತರಿಸಿವೆ. ಸೇವಾಕ್ಷೇತ್ರವಾಗಿದ್ದ ಶಿಕ್ಷಣ ವ್ಯವಸ್ಥೆ ಇಂದು ವ್ಯಾಪಾರಿ ರಂಗವಾಗಿದೆ. ಮಕ್ಕಳ ಭವಿಷ್ಯ ಕಷ್ಟವಾಗಲಿದೆ. -ಐ.ಎ.ಜಯರಾಮಪ್ಪ, ನಿವೃತ್ತ ಮುಖ್ಯಶಿಕ್ಷಕ ಇಂದ್ರಬೆಟ್ಟ

> ಸರ್ಕಾರಿ ಶಾಲೆಗಳ ಬಹುತೇಕ ಶಿಕ್ಷಕರಲ್ಲಿ ಬದ್ಧತೆ ಕೊರತೆ ಇದೆ. ಪೋಷಕರು ಮಕ್ಕಳನ್ನು ದಾಖಲಿಸಲು ಯೋಚಿಸುತ್ತಾರೆ. ಸರ್ಕಾರಿ ಶಾಲೆ ಶಿಕ್ಷಕರು ತಮ್ಮ ಮಕ್ಕಳನ್ನು ಖಾಸಗಿ ಶಾಲೆಗಳಿಗೆ ಕಳುಹಿಸುತ್ತಿರುವುದು ಸಮುದಾಯ ಶಾಲೆಗಳ ಸ್ಥಿತಿಗತಿಗೆ ಸಾಕ್ಷಿಯಾಗಿದೆ
> - ಕೆ.ಎನ್.ಸುಧೀಂದ್ರಕುಮಾರ್, ಅಧ್ಯಕ್ಷ ತಾಲ್ಲೂಕು ಅಂಗವಿಕಲರ ಒಕ್ಕೂಟ

> ಹೋಬಳಿಯಾದ್ಯಂತ ತೆಲುಗು ವಾತಾವರಣವಿದೆ. ಕಾನ್ವೆಂಟ್ ಸಂಸ್ಕೃತಿ ಶಾಲೆಗಳಲ್ಲಿ ಆಂಗ್ಲಮಾಧ್ಯಮ ಮುಂಚೂಣಿಯಲ್ಲಿ ನಡೆಯುತ್ತಿದ್ದು ಸರ್ಕಾರಿ ಶಾಲೆಗಳಲ್ಲಿ ಮಾತ್ರ ಕನ್ನಡ ಉಳಿಯುತ್ತಿರುವುದು ಕಂಡುಬರುತ್ತಿದೆ. ಈ ಶಾಲೆಗಳ ಅವಸಾನದೊಂದಿಗೆ ನಾಡಿನ ಭಾಷೆಗೂ ಕುತ್ತು ಬರಬಹುದು -ಎ.ಓ.ನಾಗರಾಜು, ಅಧ್ಯಕ್ಷ ಕನ್ನಡ ಕಲಾ ಮತ್ತು ಸಾಂಸ್ಕೃತಿಕ ಮಂಡಲಿ

## ಮಿನಿ ನ್ಯೂಸ್

### ಗೃಹ ಪ್ರವೇಶದ ಊಟ ಸೇವಿಸಿ 50ಕ್ಕೂ ಹೆಚ್ಚು ಜನರು ಅಸ್ವಸ್ಥ: ಓರ್ವ ವೃದ್ಧೆ ಸಾವು

• ಉದಯವಾಹಿನಿ ಮೈಸೂರು

ಜಿಲ್ಲೆಯಲ್ಲಿ ಗೃಹ ಪ್ರವೇಶ ಕಾರ್ಯಕ್ರಮದಲ್ಲಿ ಊಟ ಸೇವಿಸಿದಂತ 50ಕ್ಕೂ ಹೆಚ್ಚು ಜನರು ಅಸ್ವಸ್ಥಗೊಂಡಿದ್ದಾರೆ. ಅಲ್ಲದೇ ತೀವ್ರವಾಗಿ ಅಸ್ವಸ್ಥಗೊಂಡಿದ್ದಂತ ಓರ್ವ ವೃದ್ಧೆ ಚಿಕಿತ್ಸೆ ಫಲಿಸದೇ ಸಾವನ್ನಪ್ಪಿರೋ ಘಟನೆ ನಡೆದಿದೆ.ಮೈಸೂರು ತಾಲ್ಲೂಕಿನ ಮಾರ್ಬಳ್ಳಿಯಲ್ಲಿ ಮೇ.31ರಂದು ಗೃಹ ಪ್ರವೇಶ ಕಾರ್ಯಕ್ರಮವೊಂದನ್ನು ಆಯೋಜಿಸಲಾಗಿತ್ತು.

ಈ ವೇಳೆಯಲ್ಲಿ ಊಟ ಸೇವಿಸಿದಂತ ಒಂದೇ ಕುಟುಂಬದ 50ಕ್ಕೂ ಹೆಚ್ಚು ಜನರಲ್ಲಿ ವಾಂತಿ ಬೇಧಿ ಕಾಣಿಸಿಕೊಂಡಿದೆ. ಅವರನ್ನು ಮೈಸೂರಿನ ಜಿಲ್ಲಾಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲಿಸಲಾಗಿದೆ.

ಮೇ.31ರಂದು ಮಾರ್ಬಳ್ಳಿಯಲ್ಲಿ ನಡೆದಿದ್ದಂತ ಗೃಹ ಪ್ರವೇಶದಲ್ಲಿ 300ಕ್ಕೂ ಹೆಚ್ಚು ಜನರು ಊಟ ಮಾಡಿದ್ದರು. ಮಾರ್ಬಳ್ಳಿ ಬಿಟ್ಟು ಬೇರೆ ಗ್ರಾಮದಿಂದಲೂ ಬಂದು ಊಟ ಮಾಡಿದ್ದರು. ಮಾರ್ಬಳ್ಳಿ ಗ್ರಾಮದಲ್ಲಿ ಊಟ ಮಾಡಿದವರಿಗೆ ಮಾತ್ರವೇ ವಾಂತಿ, ಬೇಧಿ ಕಾಣಿಸಿಕೊಂಡಿದೆ. ಆದ್ರೇ ಬೇರೆ ಊರಿನಿಂದ ಬಂದು ಊಟ ಮಾಡಿದಂತ ಯಾರಿಗೂ ಅಸ್ವಸ್ಥತೆ ಕಾಣಿಸಿಕೊಂಡಿಲ್ಲ.

### ಕಾವೇರಿ ನದಿಯಲ್ಲಿ ಅಪರಿಚಿತ ಮಹಿಳೆ, ಪುರುಷನ ಶವ ಪತ್ತೆ: ಆತ್ಮಹತ್ಯೆ ಶಂಕೆ

• ಉದಯವಾಹಿನಿ ಮಂಡ್ಯ

ಕಾವೇರಿ ನದಿಯಲ್ಲಿ ಅಪರಿಚಿತ ಮಹಿಳೆ ಪುರುಷನ ಶವ ಪತ್ತೆಯಾಗಿದ್ದು, ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣದ ಸಂತೆಮಾಳದ ಬಳಿ ಶವ ಪತ್ತೆಯಾಗಿದೆ. ಅನುಮಾನಾಸ್ಪದ ರೀತಿಯಲ್ಲಿ ನದಿಯಲ್ಲಿ ಶವಗಳು ತೇಲುತ್ತಿವೆ. ಈ ವೇಳೆ ಜನರು ತೇಲುತ್ತಿರುವ ಶವಗಳನ್ನು ನೋಡಲು ಮುಗಿಬಿದ್ದಿದ್ದಾರೆ.

ಹೌದು ಕಾವೇರಿ ನದಿಯಲ್ಲಿ ಅನುಮಾನಾಸ್ಪದ ರೀತಿಯಲ್ಲಿ ಶವಗಳು ನದಿಯಲ್ಲಿ ತೇಲುತ್ತಿದ್ದು, ಜೋಡಿ ಶವ ನೋಡಲು ಈ ವೇಳೆ ಜನರು ಮುಗಿಬಿದ್ದರೂ. ಇಬ್ಬರು ಆತ್ಮಹತ್ಯೆ ಮಾಡಿಕೊಂಡಿರುವ ಶಂಕೆ ವ್ಯಕ್ತವಾಗುತ್ತಿದ್ದು, ಘಟನಾ ಸ್ಥಳಕ್ಕೆ ಶ್ರೀರಂಗಪಟ್ಟಣ ಟೌನ್ ಠಾಣೆಯ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದಾರೆ.

### ನೈರುತ್ಯ ಶಿಕ್ಷಕರ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಡಾ.ಕೆ.ಕೆ ಮಂಜುನಾಥ್ ಕುಮಾರ್ ಮತದಾನ

• ಉದಯವಾಹಿನಿ ಮಡಿಕೇರಿ



ಉದಯವಾಹಿನಿ ಚಿತ್ರ

ವಿಧಾನಪರಿಷತ್ತಿನ 6 ಸ್ಥಾನಗಳಿಗೆ ಚುನಾವಣೆ ನಡೆಯುತ್ತಿದೆ. ಬೆಳಿಗ್ಗೆ 8 ಗಂಟೆಯಿಂದ ಮತದಾನ ಆರಂಭಗೊಂಡಿದ್ದು, ಸಂಜೆ 4 ಗಂಟೆಯವರೆಗೆ ಮತದಾನ ನಡೆಯಲಿದೆ. ಈ ಸಂದರ್ಭದಲ್ಲಿ ನೈರುತ್ಯ ಶಿಕ್ಷಕರ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಡಾ.ಕೆ.ಕೆ ಮಂಜುನಾಥ್ ಕುಮಾರ್ ಮತದಾನ ಮಾಡಿದರು.

ಮಡಿಕೇರಿಯಲ್ಲಿ ನೈರುತ್ಯ ಶಿಕ್ಷಕರ ಕ್ಷೇತ್ರದ ಅಭ್ಯರ್ಥಿ ಡಾ.ಕೆ.ಕೆ ಮಂಜುನಾಥ್ ಕುಮಾರ್ ಕುಶಾಲನಗರದ ಸರ್ಕಾರಿ ಪ್ರಾಥಮಿತ ಶಾಲಾ ಮತಗಟ್ಟೆಯಲ್ಲಿ ಮತದಾನ ಮಾಡಿದರು. ಈ ಸಂದರ್ಭದಲ್ಲಿ ಮಾತನಾಡಿದಂತ ಅವರು, ಈ ಬಾರಿ ನೈರುತ್ಯ ಶಿಕ್ಷಕರ ಕ್ಷೇತ್ರದಿಂದ ಗೆಲುವು ಸಾಧಿಸೋ ವಿಶ್ವಾಸವಿದೆ ಅಂತ ತಿಳಿಸಿದರು.

### ಕ್ಷೀರಭಾಗ್ಯದ ಹಾಲಿನ ಪುಡಿ ಪ್ಯಾಕೆಟ್ ಅಂಗಡಿಗಳಲ್ಲಿ ಪತ್ತೆ

• ಉದಯವಾಹಿನಿ ಪಾವಗಡ


ಉದಯವಾಹಿನಿ ಚಿತ್ರ

ಕ್ಷೀರ ಭಾಗ್ಯ ಯೋಜನೆಯ ಅಡಿ ಬಾಣಂತಿಯರಿಗೆ ಹಾಗೂ ಮಕ್ಕಳಿಗಾಗಿ ಸರ್ಕಾರ ನೀಡುತ್ತಿರುವ ಹಾಲಿನ ಪೌಡರನ್ನು ಅಂಗಡಿಗಳಿಗೆ ಮಾರಾಟ ಮಾಡುತ್ತಿರುವುದು ಘಟನೆ ತಾಲ್ಲೂಕಿನ ವೈ.ನ್.ಹೊಸಕೋಟೆಯಲ್ಲಿ ನಡೆದಿದೆ.

ಮಕ್ಕಳಲ್ಲಿನ ಅಪೌಷ್ಟಿಕತೆ ಹೋಗಲಾಡಿಸಲು ರಾಜ್ಯ ಸರ್ಕಾರ ಅಂಗನವಾಡಿಗಳಿಗೆ ಹಾಲಿನ ಪೌಡರ್ ಪೂರೈಸುತ್ತಿದೆ.

ಆದರೆ ಅಕ್ರಮವಾಗಿ ಅಂಗಡಿಗಳಿಗೆ ಮಾರಾಟ ಮಾಡಲಾಗುತ್ತಿದ್ದ ಸರ್ಕಾರದ ಹಾಲಿನ ಪೌಡರ್ ಈಗ ಅಂಗಡಿಗಳಲ್ಲೂ ಮಾರಾಟ ಮಾಡಲಾಗುತ್ತಿದೆ. ಉಚಿತವಾಗಿಸುವುದನ್ನು ದುಡ್ಡಿಗೆ ಮಾರಾಟ ಮಾಡಿ ಹಣ ಮಾಡಲಾಗುತ್ತಿದೆ ಎಂದು ತಿಳಿದುಬಂದಿದೆ.

ಈ ಹಿನ್ನೆಲೆಯಲ್ಲಿ ಅಂಗನವಾಡಿ ಕಾರ್ಯಕರ್ತೆಯರಿಂದಲೇ ಅಂಗಡಿಗಳಿಗೆ ಸರಬರಾಜು ಮಾಡಲಾಗುತ್ತಿದ್ದು ಮಹಿಳಾ ಅಧಿಕಾರಿಗಳು ಅಂಗಡಿಗಳ ಮೇಲೆ ದಾಳಿ ನಡೆಸಿ ಅಕ್ರಮ ಪತ್ತೆ ಮಾಡಿದ್ದಾರೆ.

### ಮಳೆ ಅಬ್ಬರ ಸರ್ವೀಸ್ ರಸ್ತೆ ಜಲಾವೃತ

• ಉದಯವಾಹಿನಿ ರಾಮನಗರ

ನಗರದಲ್ಲಿ ರಾತ್ರಿಯಿಡೀ ಧಾರಾಕಾರ ಮಳೆ ಸುರಿಯಿತು. ಮಳೆ ಅಬ್ಬರಕ್ಕೆ ನಗರದ ಹೊರವಲಯದ ಬೆಂಗಳೂರು-ಮೈಸೂರು ರಾಷ್ಟ್ರೀಯ ಹೆದ್ದಾರಿಯ ಕೆಲವೆಡೆ ರಸ್ತೆಯಲ್ಲಿ ನೀರು ಸಂಗ್ರಹಗೊಂಡಿದ್ದರಿಂದ ಕಿಲೋಮೀಟರ್‌ನಷ್ಟು ದೂರ ವಾಹನಗಳ ದಟ್ಟಣೆ ಕಂಡುಬಂತು. ಇದರಿಂದಾಗಿ ವಾಹನ ಸವಾರರು ತೊಂದರೆ ಅನುಭವಿಸಿದರು.

ಸಂಜೆ 6ರ ಸುಮಾರಿಗೆ ಭಾರಿ ಗಾಳಿಯೊಂದಿಗೆ ಶುರುವಾದ ಮಳೆ ಸತತ ಎರಡು ತಾಸು ಬಿಡದೆ ಸುರಿಯಿತು. ಇದರಿಂದಾಗಿ ಸಂಗಬಸವನದೊಡ್ಡಿ ಬಳಿಯ ಹೆದ್ದಾರಿಯ ಸೇತುವೆ ಸೇರಿದಂತೆ ತಗ್ಗು ಪ್ರದೇಶಗಳಲ್ಲಿ ನೀರು ನಿಂತಿತು. ಕೆಳ ಸೇತುವೆಗಳ ಬಳಿಯೂ ನೀರು ಸಂಗ್ರಹಗೊಂಡಿತು. ಇದರಿಂದಾಗಿ ವಾಹನಗಳು ಸಾಲುಗಟ್ಟಿ ನಿಂತವು. ದ್ವಿಚಕ್ರ ವಾಹನಗಳ ಸವಾರರು ಅತ್ತ ಮಳೆಯಿಂದ ತಪ್ಪಿಸಿಕೊಳ್ಳಲು ಆಗದೆ, ಇತ್ತ ಬೇಗನೇ ಹೋಗಲು ಆಗದೆ ಪರದಾಡಿದರು. ವಿಷಯ ತಿಳಿದು ಸ್ಥಳಕ್ಕೆ ಬಂದ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು ಕಾರ್ಮಿಕರನ್ನು ಕರೆಯಿಸಿದರು. ವಿವಿಧೆಡೆ ಸಂಗ್ರಹಗೊಂಡಿದ್ದ ನೀರು, ರಸ್ತೆ ಪಕ್ಕ ಸರಾಗವಾಗಿ ಹರಿದು ಹೋಗುವಂತೆ ಮಾಡಿದರು. ಇದರಿಂದಾಗಿ, ಸವಾರರು ಮಳೆ ಲೆಕ್ಕಸದೆ ಕೆಲ ಹೊತ್ತು ರಸ್ತೆಯಲ್ಲೇ ಕಳೆಯಬೇಕಾಯಿತು. ಮಳೆ ನೀರು ಹೆದ್ದಾರಿ ಮತ್ತು ಸರ್ವೀಸ್ ರಸ್ತೆಯ ಪಕ್ಕದಲ್ಲಿರುವ ಚರಂಡಿಗಳಿಗೆ ಸರಾಗವಾಗಿ ಹರಿದು ಹೋಗಬೇಕು. ಆದರೆ, ಕೆಲವೆಡೆ ನೀರು ಹರಿದು ಹೋಗುವ ತೂತುಗಳಲ್ಲಿ ಕಸ ಕಟ್ಟಿಕೊಂಡಿರುವುದರಿಂದ ನೀರು ಸಂಗ್ರಹಗೊಂಡಿತು. ಕೆಲವೆಡೆ ತೀರಾ ತಗ್ಗು ಪ್ರದೇಶವಿರುವುದರಿಂದ ಎಲ್ಲಾ ನೀರು ಅಲ್ಲಿಗೇ ಬಂದು ಸೇರಿಕೊಂಡಿತು. ಇದರಿಂದಾಗಿ ಕೆಲವೆಡೆ ರಸ್ತೆ ಜಲಾವೃತವಾಯಿತು' ಎಂದು ಬೈಕ್ ಸವಾರರೊಬ್ಬರು ತಿಳಿಸಿದರು.


ಉದಯವಾಹಿನಿ ಚಿತ್ರ

ಅಂತರಾಳದಿಂದ..
EDITORIAL

# ನಿಧಿ ಬಳಕೆಯಲ್ಲಿ ಶಾಸಕರ ನಿರಾಸಕ್ತಿ ಸಮರ್ಥನೀಯವಲ್ಲ

ಅಭಿವೃದ್ಧಿ ಕಾಮಗಾರಿಗಳು ಮತ್ತು ಸೇವೆಗಳ ವಿಚಾರದಲ್ಲಿ ಕ್ಷೇತ್ರದ ಜನರ ಆಶೋತ್ತರಗಳಿಗೆ ಸ್ಪಂದಿಸಲು ಶಾಸಕರಿಗೆ 'ಅನುಕೂಲವಾಗುವಂತೆ 2001-02ರಿಂದ ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿ (ಕೆಎಲ್‌ಲ್ಯಾಡ್) ಯೋಜನೆಯನ್ನು ಅನುಷ್ಠಾನಕ್ಕೆ ತರಲಾಯಿತು. ಪ್ರತಿ ವರ್ಷವೂ ಈ ನಿಧಿಯಡಿ ಮಂಜೂರಾಗುವ ಅನುದಾನವನ್ನು ಬಳಸಿಕೊಂಡು ತಮ್ಮ ಆಯ್ಕೆಯ ಸಾರ್ವಜನಿಕ ಕಾಮಗಾರಿಗಳನ್ನು ಕೈಗೊಳ್ಳುವುದು ಮತ್ತು ಆ ಕ್ಷೇತ್ರದ ಜನರಿಗೆ ಸೇವೆಗಳನ್ನು ಒದಗಿಸುವುದಕ್ಕೆ ಅವಕಾಶವಿದೆ. ಆರಂಭದಲ್ಲಿ ಈ 'ಯೋಜನೆಯಡಿ ಪ್ರತಿ ಶಾಸಕರಿಗೆ ವರ್ಷಕ್ಕೆ ರೂ. 25 ಲಕ್ಷ ಅನುದಾನ ಒದಗಿಸಲಾಗುತ್ತಿತ್ತು. 2006-07ರಲ್ಲಿ ಅನುದಾನವನ್ನು 1 ಕೋಟಿಗೆ ಹೆಚ್ಚಿಸಲಾಯಿತು. 2013-14ರಿಂದ ಪ್ರತಿ ಶಾಸಕರಿಗೆ ವಾರ್ಷಿಕ 2 ಕೋಟಿ ಅನುದಾನ ನೀಡಲಾಗುತ್ತಿದೆ. ವಿಧಾನಸಭೆಯ 224 ಮತ್ತು ವಿಧಾನ ಪರಿಷತ್‌ನ 75 ಸದಸ್ಯರಿಗೆ ಕೆಎಲ್ ಲ್ಯಾಡ್ಸ್ ಅಡಿಯಲ್ಲಿ ಅನುದಾನ ದೊರಕುತ್ತಿದೆ. 2023-24ನೇ ಆರ್ಥಿಕ ವರ್ಷದಲ್ಲಿ ರಾಜ್ಯದ ಶಾಸಕರಿಗೆ ಕೆಎಲ್‌ಲ್ಯಾಡ್ಸ್ ಅಡಿಯಲ್ಲಿ ಹಿಂದಿನ ವರ್ಷಗಳ ಬಾಕಿಯೂ ಸೇರಿದಂತೆ ಲಭ್ಯವಿದ್ದ ರೂ. 1.256 ಕೋಟಿ ಅನುದಾನದಲ್ಲಿ ಬರೀ ರೂ. 218 ಕೋಟಿ ವೆಚ್ಚ ಮಾಡಲಾಗಿದೆ ಎಂಬುದು ಶಾಸಕರ ನಿರಾಸಕ್ತಿಗೆ ಕನ್ನಡಿ. -ಹಿಡಿದಿದೆ. 2 1.038 ಕೋಟಿಯಷ್ಟು ಅನುದಾನ ಜಿಲ್ಲಾಧಿಕಾರಿಗಳ ವೈಯಕ್ತಿಕ ಠೇವಣಿ (ಪಿಡಿ) ಖಾತೆಗಳಲ್ಲಿ ವರ್ಷದಿಂದ ಬಾಕಿ ಉಳಿದಿದೆ. ಕುಡಿಯುವ ನೀರು ಪೂರೈಕೆ, ರಸ್ತೆಗಳ ನಿರ್ಮಾಣ, ಶಾಲಾ, ಕಾಲೇಜುಗಳ ಕಟ್ಟಡ, ಶೌಚಾಲಯ ನಿರ್ಮಾಣ, ವಿದ್ಯಾರ್ಥಿ ನಿಲಯಗಳು, ಆಸ್ಪತ್ರೆ, ಆರೋಗ್ಯ ಕೇಂದ್ರಗಳಲ್ಲಿ ಹೊಸ ಕೊಠಡಿಗಳ ನಿರ್ಮಾಣ, ಅಂಗನವಾಡಿ ಕಟ್ಟಡಗಳ ನಿರ್ಮಾಣ, ಕೃತಕ ಕಾಲು ಜೋಡಣೆ ಸೇರಿದಂತೆ ಅನೇಕ ಜನಸ್ನೇಹಿ ಕಾಮಗಾರಿಗಳು, ಕೆಲಸಗಳನ್ನು ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯ ಅನುದಾನದಲ್ಲಿ ಕೈಗೆತ್ತಿಕೊಳ್ಳಲು ಅವಕಾಶವಿದೆ. ಈ ನಿಧಿಯಡಿ ಒದಗಿಸುವ ಅನುದಾನದ ಮೊತ್ತವನ್ನು ಹೆಚ್ಚಿಸುವಂತೆ ಪ್ರತಿ ಬಾರಿಯೂ ವಿಧಾನಮಂಡಲದ ಅಧಿವೇಶನದಲ್ಲಿ ಬೇಡಿಕೆ ಇಡುವ ಶಾಸಕರು, ಲಭ್ಯವಿರುವ ಅನುದಾನದ ಬಳಕೆಗೆ ಆಸಕ್ತಿ ತೋರದಿರುವುದು ತಮ್ಮನ್ನು ಆಯ್ಕೆ ಮಾಡಿದ ಮತದಾರರಿಗೆ ದ್ರೋಹ ಬಗೆದಂತೆ. ಈ ನಿಧಿಯಡಿ ಕೈಗೆತ್ತಿಕೊಂಡ 31,236 ಕಾಮಗಾರಿಗಳು ಹಲವು ವರ್ಷಗಳಿಂದಲೂ ಪೂರ್ಣಗೊಂಡಿಲ್ಲ. ಶಾಸಕರು ತಮ್ಮ ಆಯ್ಕೆಯ ಕಾಮಗಾರಿಗಳ ಪಟ್ಟಿಯನ್ನು ಜಿಲ್ಲಾಧಿಕಾರಿಗಳಿಗೆ ಸಲ್ಲಿಸಿ, ಅನುಮೋದನೆ ಪಡೆಯಬೇಕಾಗುತ್ತದೆ. ಕೆಳಹಂತದ ಅಧಿಕಾರಿಗಳು ಕ್ರಿಯಾ ಯೋಜನೆ ಮತ್ತು ಕಾಮಗಾರಿಗಳ ಪಟ್ಟಿ ಅನುಮೋದನೆ. ಮುಂಗಡ ಅನುದಾನ ಬಿಡುಗಡೆಯಲ್ಲಿ ವಿಳಂಬ ಮಾಡುತ್ತಿರುವುದು, ಕಾಮಗಾರಿಗಳ ಆರಂಭಕ್ಕೆ ನಿರಾಸಕ್ತಿ ಮತ್ತು ಪೂರ್ಣಗೊಂಡ ಕಾಮಗಾರಿಗಳ ಗುತ್ತಿಗೆದಾರರಿಗೆ ಬಿಲ್ ಪಾವತಿಸದೇ ಇರುವುದು ಕೆಎಲ್‌ಲ್ಯಾಡ್ ಅನುದಾನ ಬಳಕೆಯಲ್ಲಿ ಪ್ರಗತಿ ಕ್ಷೀಣಿಸಲು ಕಾರಣ ಎಂಬ ದೂರುಗಳಿವೆ.



**ತಮ್ಮ ಕ್ಷೇತ್ರಕ್ಕೆ ದೊರಕುವ ಅನುದಾನದ ಪ್ರಮಾಣ ಸಾಲದು ಎಂದು 'ಅವಕಾಶ ಸಿಕ್ಕಾಗಲೆಲ್ಲ ಸರ್ಕಾರದ ವಿರುದ್ಧ ಹರಿಹಾಯುವ ಶಾಸಕರು, ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯಡಿ ದೊರಕುವ ಅನುದಾನವನ್ನು ಕಾಲಮಿತಿಯೊಳಗೆ ಬಳಕೆ ಮಾಡುತ್ತಿಲ್ಲ ಎಂಬುದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಇತ್ತೀಚೆಗೆ ನಡೆದ ಸರ್ಕಾರದ ವಿವಿಧ ಇಲಾಖೆಗಳ ಮುಖ್ಯಸ್ಥರ ಸಭೆಯಲ್ಲಿ ಬಹಿರಂಗವಾಗಿದೆ.**

ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿ ಬಳಕೆಗೆ ಅಧಿಕಾರಿಗಳು ಅಡ್ಡಗಾಲು ಹಾಕುತ್ತಿರುವ ಆರೋಪಗಳಲ್ಲಿ ಹುರುಳಿಲ್ಲ ಎಂದು ಹೇಳಲಾಗದು. ಆದರೆ, ವಿಧಾನಮಂಡಲದ ಸದಸ್ಯತ್ವದ ಕಾರಣಕ್ಕಾಗಿ ಶಾಸನಬದ್ಧವಾಗಿ ತಮಗೆ ವಾರ್ಷಿಕವಾಗಿ ಲಭಿಸುತ್ತಿರುವ 2 2 ಕೋಟಿ ಅನುದಾನವನ್ನು ಅತ್ಯಂತ ಜವಾಬ್ದಾರಿಯುತವಾಗಿ ಬಳಸುವ ಮೂಲಕ ತೆರಿಗೆ ಹಣದ ಸದ್ಬಳಕೆಯ ಮಾದರಿಯೊಂದನ್ನು ರೂಪಿಸಬೇಕಾದ ಹೊಣೆಗಾರಿಕೆ ಶಾಸಕರ ಮೇಲಿದೆ. ಆದರೆ, ಕಾಮಗಾರಿಗಳ ಪಟ್ಟಿಯನ್ನೂ ಸಲ್ಲಿಸದೆ 21,038 ಕೋಟಿಯಷ್ಟು ಅಧಿಕ ಮೊತ್ತದ ಅನುದಾನ ನಿರುಪಯುಕ್ತವಾಗಿ ಉಳಿಯುವಂತೆ ಮಾಡಿರುವುದು ಶಾಸಕರ ಬೇಜವಾಬ್ದಾರಿಯುತ ನಡವಳಿಕೆಗೆ ಸಾಕ್ಷಿ. ತಮ್ಮ ಕ್ಷೇತ್ರಕ್ಕೆ ಬೃಹತ್ ಮೊತ್ತದ ಅನುದಾನ ಲಭಿಸಿಲ್ಲ ಎಂದು ಆರೋಪ ಮಾಡುವ, ಈ ಸಂಬಂಧ ವಿಧಾನಮಂಡಲದಲ್ಲಿ ಗದ್ದಲ ಎಬ್ಬಿಸುವ ಶಾಸಕರು ಕೆಎಲ್‌ಲ್ಯಾಡ್ ಅನುದಾನ ಬಳಕೆಗೆ ನಿರಾಸಕ್ತಿ ತೋರುತ್ತಿರುವುದರ ಹಿಂದಿನ ಗುಟ್ಟು ಬಯಲಾಗಬೇಕಿದೆ. ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯನ್ನು ಸಮರ್ಪಕವಾಗಿ ಬಳಕೆ ಮಾಡದ ಶಾಸಕರಿಗೆ ದೊಡ್ಡ ಮೊತ್ತದ ಅನುದಾನಕ್ಕೆ ಬೇಡಿಕೆ ಇಡುವ ನೈತಿಕತೆ ಇರಲು ಹೇಗೆ ಸಾಧ್ಯ? ಕಾಲುಸಂಕಗಳಿಲ್ಲದೇ ಹಳ್ಳಿಗರು ಪ್ರವಾಹದಲ್ಲಿ ಕೊಚ್ಚಿ ಹೋಗುವುದು, ಕುಡಿಯುವ ನೀರಿಗೆ ಹಾಹಾಕಾರ, ಶಾಲೆ, ಕಾಲೇಜು, ಆಸ್ಪತ್ರೆ, ಅಂಗನವಾಡಿಗಳಲ್ಲಿನ ಕೊಠಡಿಗಳ ಕೊರತೆಯಂತಹ ಸಮಸ್ಯೆಗಳನ್ನು ನಿವಾರಿಸುವುದಕ್ಕೆ ಅನುದಾನ ಒದಗಿಸಲು ಸರ್ಕಾರ ಹೆಣಗಾಡುತ್ತಿದೆ. ಅಂತಹ ಜನೋಪಯೋಗಿ ಕೆಲಸಗಳಿಗೆ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯನ್ನೇ ಪೂರ್ಣ ಪ್ರಮಾಣದಲ್ಲಿ ಬಳಸುವ ವಿವೇಚನೆಯನ್ನು ಶಾಸಕರು ತೋರಬೇಕಿದೆ. ಕೆಎಲ್‌ಲ್ಯಾಡ್ ಅನುದಾನ ಬಳಕೆಗೆ ಇದೇ ರೀತಿ ನಿರಾಸಕ್ತಿ ಮುಂದುವರಿದರೆ ಈ ಯೋಜನೆಯನ್ನೇ ರದ್ದುಗೊಳಿಸಿ. ಪೂರ್ಣ ಮೊತ್ತದ ಅನುದಾನವನ್ನು ಜನೋಪಯೋಗಿ ಕಾರ್ಯಗಳಿಗೆ ಬಳಸುವ ನಿರ್ಧಾರವನ್ನು ರಾಜ್ಯ ಸರ್ಕಾರ ಕೈಗೊಳ್ಳುವ ಅಗತ್ಯವಿದೆ.




• ಹಿಂದಿನ ಸಂಚಿಕೆಯಿಂದ

ಅವನೂ ಭಾವುಕನಾಗಿ ಕಣ್ಣೀರು ಸುರಿಸುತ್ತ, ಪ್ರೀತಿ ತುಂಬಿದ ಇನಿದನಿಯಲ್ಲಿ, ''ಆಚಾರ್ಯ, ನನ್ನ ಶ್ರೇಯೋಕಾಂಕ್ಷಿಯಾದ ನೀನು ಸರಿಯಾದುದನ್ನೇ ಹೇಳುತ್ತಿರುವೆ. ಯುದ್ಧಕ್ಕಿಂತ ಮೊದಲೇ ನೀನು ನನ್ನ ಪ್ರಯತ್ನವನ್ನು ತಪ್ಪಿಸಲೆತ್ನಿಸಿದೆ. ಆದರೆ ಒಮ್ಮೆ ಯುದ್ಧ ಆರಂಭವಾದ ಮೇಲೆ ಪ್ರಾಮಾಣಿಕವಾಗಿ, ಜೀವದ ಹಂಗು ತೊರೆದು ಹೋರಾಡಿದೆ. ನೀನೇ ನನ್ನ ಮೊದಲ ಗುರು; ದ್ರೋಣ ಬಂದದ್ದು ಆ ಮೇಲೆ. ನಾನು ಹುಟ್ಟಿದಾಗಿನಿಂದಲೂ ನಿನ್ನ ಜೊತೆಯಲ್ಲಿದ್ದೇನೆ. ನಿನ್ನ ಮಾತು ಪ್ರೀತಿಯಿಂದಲೂ ಅನುಕಂಪದಿಂದಲೂ ಕೂಡಿದ್ದು; ನನಗೆ ಗೊತ್ತು. ''ಆದರೆ ಆಚಾರ್ಯ, ಈಗ ಶಾಂತಿಸ್ಥಾಪನೆ ಸಾಧ್ಯವಿಲ್ಲ. ಅದನ್ನು ಬಹಳ ಹಿಂದೆಯೇ ಮಾಡಬೇಕಾಗಿತ್ತು. ಪಾಂಡವರು ಪಟ್ಟ ಯಾತನೆಗಳನ್ನು ಕುರಿತು ಯೋಚಿಸು ದ್ಯೂತವನ್ನು ನೆನೆಸಿಕೊ. ಅವರು ನನ್ನನ್ನು ಕ್ಷಮಿಸುವರೆನ್ನುವೆಯಾ? ಶಾಂತಿದೂತನಾಗಿ ಬಂದ ಕೃಷ್ಣನನ್ನು ನಾನು ಹೇಗೆ ನಡೆಸಿಕೊಂಡೆ? ದ್ರೌಪದಿಯನ್ನು ದುಶ್ಶಾಸನನು ಸಭೆಯಲ್ಲಿ ಎಳೆದಾಡಿದ ದೃಶ್ಯ ನೆನಪಿದೆಯೇ? ಭೀಮನೂ ನಾನೂ ಬಾಲ್ಯದಿಂದಲೂ ಒಟ್ಟಿಗೆ ಬೆಳೆದವರು. ಅಷ್ಟು ಪ್ರೀತಿಯ ಅವನು ದುಶ್ಶಾಸನನ ರಕ್ತವನ್ನು ಹಾಗೆ ಕುಡಿಯಬೇಕಾದರೆ ವರ್ಷವರ್ಷಗಳಿಂದ ಅವನ ಹೃದಯದಲ್ಲಿ ಅದೆಂತಹ ಕ್ರೋಧಾಗ್ನಿ ಜ್ವಲಿಸುತ್ತಿದ್ದಿರಬೇಕು! ಕೃಷ್ಣಾರ್ಜುನರು ಅಭಿಮನ್ಯುವಿನ ಸಾವನ್ನು ಮರೆಯುವರು ಎನ್ನುವೆಯಾ! ಎಂದಿಗೂ ಇಲ್ಲ! ದ್ರೌಪದಿಗಾದ ಅಪಮಾನವನ್ನು ಪಾಂಡವರು ಎಂದಿಗೂ ಮರೆಯಲಾರರು. ದ್ರೌಪದಿಯು ನಾನು ಸಾಯುವವರೆಗೆ ನೆಲದ ಮೇಲೇ ನಿದ್ರಿಸುವೆನೆಂದು ಪ್ರತಿಜ್ಞೆ ಮಾಡಿರುವಳಂತೆ. ಆಚಾರ್ಯ, ಇದನ್ನೆಲ್ಲಾ ಸರಿಯಾಗಿ ವಿವೇಚಿಸಿ ನೋಡಿದರೆ ಶಾಂತಿಯು ಅಸಾಧ್ಯ ಎಂಬುದು ನಿನಗೇ ಹೊಳೆಯುವುದು.

''ಅದೂ ಅಲ್ಲದೆ, ನನಗೇ ಪಾಂಡವರೊಂದಿಗೆ ಸಂಧಿ ಮಾಡಿಕೊಳ್ಳಲು ಇಷ್ಟವಿಲ್ಲ. ನೀನು ಹೇಳುವಂತೆ ನಾನು ಸಂಧಿಪ್ರಸ್ತಾಪವನ್ನು ಮುಂದಿಟ್ಟರೆ ಧರ್ಮರಾಜನಾದ ಯುಧಿಷ್ಠಿರ ಒಪ್ಪಿಕೊಳ್ಳುವುದೂ ಹೌದು. ಕೃಷ್ಣಾರ್ಜುನರೂ ಅಭಿಮನ್ಯುವಿನ ಸಾವನ್ನು ಮರೆತು ಶಾಂತಿ ಪ್ರಸ್ತಾಪವನ್ನು ಒಪ್ಪಬಹುದು. ಇವರು ಯಾರೂ ಯುದ್ಧವನ್ನು ಬಯಸುವವರಲ್ಲ. ಆದರೆ, ಆಚಾರ್ಯ, ನನಗೇ ಇಷ್ಟವಿಲ್ಲ; ಇಷ್ಟುದಿನ ಒಬ್ಬನೇ ಲೋಕಾಧಿಪತ್ಯವನ್ನನುಭವಿಸಿದ ನಾನು ಈಗ ಅದನ್ನು ಅವರೊಡನೆ ಹಂಚಿಕೊಳ್ಳಲೆ? ಇದು ಎಂದಿಗಾದರೂ ಸಾಧ್ಯವೆ? ನಿನ್ನ ಮೇಲೆ ಕೋಪವೆಂದುಕೊಳ್ಳಬೇಡ; ನಿನ್ನ ಉದ್ದೇಶ ಒಳ್ಳೆಯದೇ; ಆದರೆ ಕಾಹಿಲೆಯವನಿಗೆ ಕಹಿ ಔಷಧಿ ಎಂದಾದರೂ ಹಿಡಿಸುವುದೆ? ಯುದ್ಧವೇ ಕೀರ್ತಿವೈಭವಕ್ಕೆ ದಾರಿ ಎಂದು ನನ್ನ ಅಭಿಮತ. ನಾನೇನೂ ಹೇಡಿಯಲ್ಲ. ನನಗೆ ಯಾವುದರ ಭಯ? ನಾನು ರಾಜನಾಗಿ ಬದುಕಿದವನು; ಬಡವರಿಗೆ ಬೇಕಾದ ಹಾಗೆ ದಾನ ಮಾಡಿದವನು; ರಾತ್ರಿಹಗಲು ವೇದಘೋಷದ ನಡುವೆ ಇದ್ದವನು; ಯಜ್ಞಯಾಗಾದಿಗಳನ್ನು ಮಾಡಿದವನು; ಶತ್ರುಮುಕುಟಗಳನ್ನು ಮೆಟ್ಟಿದವನು.

**ಮುಂದುವರಿಯುವುದು...**

# ಚುನಾವಣೋತ್ತರ ಸಮೀಕ್ಷೆಯಲ್ಲಿ ಕಾಂಗ್ರೆಸ್‌ಗೆ ಹಿನ್ನಡೆ

## ■ ಲೋಕಸಭಾ ಚುನಾವಣೆಯ ಬಳಿಕ ರದ್ದಾಗುತ್ತದೆ ಎಂಬ ಚರ್ಚೆ ರಾಜ್ಯ ರಾಜಕೀಯದಲ್ಲಿ ಚರ್ಚೆ

• ಉದಯವಾಹಿನಿ, ಬೆಂಗಳೂರು

**ಕರ್ನಾಟಕದಲ್ಲಿ ನಿಲ್ಲುತ್ತಾ ಗ್ಯಾರಂಟಿ**



ಉದಯವಾಹಿನಿ ಚಿತ್ರ

ದೇಶದಲ್ಲೇ ಮೊದಲ ಬಾರಿಗೆ ಗ್ಯಾರಂಟಿ ಯೋಜನೆಗಳನ್ನ ಕೊಟ್ಟ ರಾಜ್ಯ ಎಂದರೆ ಅದು ಕರ್ನಾಟಕ. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಪಂಚ ಗ್ಯಾರಂಟಿಗಳನ್ನ ನೀಡುವ ಮೂಲಕ ಅಧಿಕಾರಕ್ಕೆ ಬಂದು ಕಾಂಗ್ರೆಸ್, ಲೋಕಸಭಾ ಚುನಾವಣೆಯ ಬಳಿಕ ರದ್ದಾಗುತ್ತದೆ ಎಂಬ ಚರ್ಚೆ ರಾಜ್ಯ ರಾಜಕೀಯದಲ್ಲಿ ಚರ್ಚೆಯಾಗಿತ್ತು.

ಹೌದು, ರಾಜ್ಯದ ಜನರಿಗೆ ಐದು ಗ್ಯಾರಂಟಿ ಯೋಜನೆಗಳನ್ನು ಕೊಟ್ಟರೂ, ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಹೆಚ್ಚು ಸ್ಥಾನ ಪಡೆಯದಿದ್ದರೆ ಪಂಚ ಗ್ಯಾರಂಟಿಗಳನ್ನು ರದ್ದು ಮಾಡುವುದೇ ಒಳ್ಳೆಯದು. ಈ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೂ ಹೇಳಿದ್ದೇನೆ ಎಂದು ಈ ಹಿಂದೆ ಮಾಗಡಿ ಕಾಂಗ್ರೆಸ್ ಶಾಸಕ ಎಚ್ ಸಿ ಬಾಲಕೃಷ್ಣ ಹೇಳಿದರು.

ಲೋಕಸಭಾ ಚುನಾವಣೆಯಲ್ಲಿ ಹೆಚ್ಚು ಸ್ಥಾನ ಬರಬೇಕು. ಒಂದು ವೇಳೆ, ಲೋಕಸಭಾ ಚುನಾವಣೆಯಲ್ಲಿ ರಾಜ್ಯದಲ್ಲಿ ನಾವೇನಾದರೂ ಕಡಿಮೆ ಸ್ಥಾನ ಗಳಿಸಿದರೆ, ಜನ ಗ್ಯಾರಂಟಿಗಳನ್ನು ತಿರಸ್ಕರಿಸಿದ್ದಾರೆ ಎಂದರ್ಥ. ಆಗ ಅವುಗಳನ್ನು ರದ್ದು ಮಾಡುವುದಾಗಿ ಬಾಲ ಕೃಷ್ಣ ತಿಳಿಸಿದರು. ಬಿಜೆಪಿಯ ಧರ್ಮ ರಾಜಕಾರಣದ ಮಂತ್ರಾಕ್ಷತೆ ಬೇಕೋ ಅಥವಾ ಜನಸಾಮಾನ್ಯರ ಜೀವನ ಬದಲಿಸುತ್ತಿರುವ ಕಾಂಗ್ರೆಸ್‌ನ ಗ್ಯಾರಂಟಿ ಬೇಕೊ ಎಂದು ಜನ ಈ ಚುನಾವಣೆಯಲ್ಲಿ ತೀರ್ಮಾನ ಮಾಡಬೇಕು. ಚುನಾವಣೆಯಲ್ಲಿ ಕೊಟ್ಟ ಮಾತಿನಂತೆ ಗ್ಯಾರಂಟಿಗಳನ್ನು ಜಾರಿಗೊಳಿಸಿದ್ದೇವೆ. ಅವುಗಳ ಆಧಾರದ ಮೇಲೆಯೇ ಜನರ ಬಳಿ ಮತ ಕೇಳುತ್ತೇವೆ ಎಂದು ಮಾಗಡಿ ಶಾಸಕ ಎಚ್ ಸಿ ಬಾಲಕೃಷ್ಣ ಗ್ಯಾರಂಟಿಗಳ ಕುರಿತು ಮಾತನಾಡಿದ್ದರು. ಇದೀಗ ಮತದಾನ ಮುಗಿಯುತ್ತಿದ್ದಂತೆಯೇ ಚುನಾವಣೋತ್ತರ ಸಮೀಕ್ಷೆ ಹೊರಬೀದಿದ್ದು, ಆಡಳಿತರೂಢ ಕಾಂಗ್ರೆಸ್‌ನಾಯಕರಿಗೆ ಅಘಾತ ಉಂಟಾಗಿದೆ.

ಹಲವು ವಾಹಿನಿಗಳು ನಡೆಸಿರುವ ಎಕ್ಸಿಟ್ ಪೋಲ್‌ನಲ್ಲಿ ಆಡಳಿತರೂಢ ಕಾಂಗ್ರೆಸ್‌ಗೆ 3-4 ಸ್ಥಾನಗಳಲ್ಲಿ ಗೆಲುವು ಸಾಧಿಸಲಿದೆ ಎಂದು ಹೇಳಿದೆ. ಇತ್ತ ಎಕ್ಸಿಟ್

**ಇದೀಗ ಕಮಲ-ದಳ ನಾಯಕರ ನಿರೀಕ್ಷೆಯಂತೆ ಬಿಜೆಪಿ 20 ಕ್ಕಿಂತ ಹೆಚ್ಚು ಸ್ಥಾನಗಳನ್ನ ಗೆಲುವು ಸಾಧಿಸಲಿದೆ ಎಂದು ಹಲವು ಸಮೀಕ್ಷೆ ತಿಳಿಸಿದ್ದು, ಕಾಂಗ್ರೆಸ್ ಕನಿಷ್ಠ 10 ಲೋಕಸಭಾ ಕ್ಷೇತ್ರಗಳನ್ನ ಗೆಲುವು ಸಾಧಿಸುವುದು ಕಷ್ಟ ಎನ್ನಲಾಗಿದ್ದು, ಈ ಚುನಾವಣೋತ್ತರ ಸಮೀಕ್ಷೆಯಿಂದ ಪಂಚ ಗ್ಯಾರಂಟಿಗಳು ರದ್ದಾಗುತ್ತಾ ಎಂಬ ಚರ್ಚೆ ಮುನ್ನಲೆಗೆ ಬಂದಿದೆ.**

ಪೋಲ್ ಸಮೀಕ್ಷೆಯಿಂದ ಕಾಂಗ್ರೆಸ್ ನಾಯಕರು ತೀವ್ರ ಬೇಸರಗೊಂಡಿದ್ದು, ಅಂದುಕೊಂಡಂತೆ ಕಾಂಗ್ರೆಸ್ ಕನಿಷ್ಟ 10 ಕ್ಷೇತ್ರಕ್ಕಿಂತ ಅಥವಾ 15 ಕ್ಷೇತ್ರಕ್ಕಿಂತ ಹೆಚ್ಚು ಸ್ಥಾನಗಳಲ್ಲಿ ಕಾಂಗ್ರೆಸ್‌ಅಭ್ಯರ್ಥಿ ಗೆಲುವು ಸಾಧಿಸದಿದ್ದರೇ ಕಾಂಗ್ರೆಸ್ ತಂದ ಗ್ಯಾರಂಟಿ ಯೋಜನೆಗಳು ರದ್ದಾಗುತ್ತಾ ಎನ್ನುವ ಆತಂಕ ಜನರಲ್ಲಿ ಶುರುವಾಗಿದೆ. ಈ ಆತಂಕ ಶುರುವಾಗಲು ಈ ಹಿಂದೆ ಮಾಗಡಿ ಕಾಂಗ್ರೆಸ್ ಶಾಸಕ ಬಾಲಕೃಷ್ಣ ಅವರ ಹೇಳಿಕೆಯೇ ಕಾರಣ ಎನ್ನಲಾಗಿದೆ.

ರಾಜ್ಯದಲ್ಲಿ ಕಾಂಗ್ರೆಸ್‌ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ಐದು ಗ್ಯಾರಂಟಿಗಳ ಪೈಕಿ, ಶಕ್ತಿ ಯೋಜನೆ, ಗೃಹ ಲಕ್ಷ್ಮೀ, ಗೃಹ ಜ್ಯೋತಿ, ಅನ್ನಭಾಗ್ಯ ಹಾಗೂ ಯುವ ನಿಧಿ ಯೋಜನೆಯನ್ನ ಜಾರಿಗೊಳಿಸಿದೆ.

**ರಾಜ್ಯದಲ್ಲಿ ಗ್ಯಾರಂಟಿ ಯೋಜನೆ**

**ಇತ್ತ ಕಾಂಗ್ರೆಸ್‌ಹೈಕಮಾಂಡ್ ರಾಜ್ಯದ 28 ಲೋಕಸಭಾ ಕ್ಷೇತ್ರಗಳ ಪೈಕಿ 20 ಕ್ಷೇತ್ರಗಳನ್ನ ಗೆಲ್ಲಬೇಕು ಎಂದು ಸೂಚನೆ ನೀಡಿತ್ತು. ಅದರಂತೆ ವಿಧಾನಸಭಾ ಚುನಾವಣೆಯಂತೆ ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳನ್ನೇ ಅಸ್ತ್ರವನ್ನಾಗಿ ಮಾಡಿಕೊಂಡು ಕಾಂಗ್ರೆಸ್ ಪ್ರಚಾರ ನಡೆಸಿತ್ತು. ಇತ್ತ ವಿಧಾನಸಭಾ ಚುನಾವಣೆಯಲ್ಲಿ ಹೀನಾಯವಾಗಿ ಸೋಲು ಕಂಡ ಬಿಜೆಪಿ, ಜೆಡಿಎಸ್ ಮೈತ್ರಿ ಮಾಡಿ ಕೊಂಡು ಬಿಜೆಪಿ 25, ಜೆಡಿಎಸ್ ಮೂರು ಕ್ಷೇತ್ರಗಳಲ್ಲಿ ಸ್ಪರ್ಧೆ ನಡೆಸಿದ್ದು, 28 ಕ್ಷೇತ್ರಗಳನ್ನ ಗೆಲ್ಲುವ ನಿರೀಕ್ಷೆಯಲ್ಲಿತ್ತು.**

ಅಲ್ಲದೇ ಲೋಕಸಭಾ ಚುನಾವಣೆಗೆ ತಯಾರಿ ನಡೆಸುತ್ತಿರುವ ಕಾಂಗ್ರೆಸ್ ನಾಯಕರು, ಕರ್ನಾಟಕದ ಜನತೆ ಸೂಕ್ತ ರೀತಿಯಲ್ಲಿ ಗ್ಯಾರಂಟಿ ಯೋಜನೆಗಳು ತಲುಪಬೇಕು ಎಂಬ ನೀಡಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಪ್ರಚಾರ ನಡೆಸಿದರು.

# ರೇವ್ ಪಾರ್ಟಿ ಪ್ರಕರಣ : ತೆಲುಗು ನಟಿ ಹೇಮಾ ಬಂಧನ

• ಉದಯವಾಹಿನಿ, ಬೆಂಗಳೂರು



ಕಳೆದ ಮೇ 20 ರಂದು ಬೆಂಗಳೂರಿನ ಎಲೆಕ್ಟ್ರಾನಿಕ್ ಸಿಟಿಯಲ್ಲಿರುವ ಜಿ ಆರ್ ಫಾರ್ಮ್ ಹೌಸ್‌ನಲ್ಲಿ ರೇವ್ ಪಾರ್ಟಿ ಆಯೋಜನೆ ಮಾಡಲಾಗಿತ್ತು. ಈ ಒಂದು ಪಾರ್ಟಿಯಲ್ಲಿ ಡ್ರಗ್ಸ್ ಸೇವನೆ ಮಾಡಲಾಗುತ್ತಿದೆ ಎಂಬ ಖಚಿತ ಮಾಹಿತಿಯ ಮೇರೆಗೆ ಸಿಸಿಬಿ ಅಧಿಕಾರಿಗಳು ದಾಳಿ ಮಾಡಿದ್ದರು.

ಈ ಒಂದು ಪ್ರಕರಣದಲ್ಲಿ ತೆಲುಗು ನಟಿ ಹೇಮಾ ಕೂಡ ಭಾಗಿಯಾಗಿದ್ದು ಇದೀಗ ಸಿಸಿಬಿ ವಿಚಾರಣೆಗೆ ಹೇಮಾ ಅವರು ಹಾಜರಾಗಿದ್ದು ಅವರನ್ನು ಬಂಧಿಸಿದ್ದಾರೆ ಎಂದು ತಿಳಿದುಬಂದಿದೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ನಟಿ ಹೇಮಾ ಅವರು ಹೊರಗಡೆ ಬಂದು ವಿಡಿಯೋ ರೆಕಾರ್ಡ್ ಮಾಡಿ ಪ್ರಕರಣದ ದಿಕ್ಕನ್ನು ತಪ್ಪಿಸುವ ಪ್ರಯತ್ನ ಮಾಡಿದರು. ಅಲ್ಲದೆ ಸಿಸಿಬಿ ವಿಚಾರಣೆಗೆ ಹಾಜರಾಗಿ ಎಂದು ಎರಡು ಬಾರಿ ನೋಟಿಸ್ ನೀಡಿದರೂ ಕೂಡ ಹೇಮಾ ಅವರು ಅದಕ್ಕೆ ಕ್ಯಾರೆ ಅನ್ನದೆ ವಿಚಾರಣೆಗೆ ಗೈರಾಗಿದ್ದರು. ಇದೀಗ ತೆಲುಗು ನಟಿ ಹೇಮಾಳನ್ನು ಸಿಸಿಬಿ ಅಧಿಕಾರಿಗಳು ಬಂಧಿಸಿದ್ದಾರೆ. ಇಂದು ನಟಿ ಹೇಮಾ ಅವರು ಬುರ್ಖಾ ಹಾಕಿಕೊಂಡು ವಿಚಾರಣೆಗೆ ಬಂದಿದ್ದರು ಪಾರ್ಟಿಯಲ್ಲಿ

**ಬೆಳಗ್ಗೆ ಕೋರ್ಟ್ ಮುಂದೆ ನಟಿ ಹೇಮಾ ಅವರನ್ನು ಹಾಜರುಪಡಿಸಲಾಗುತ್ತದೆ. ನ್ಯಾಯಾಲಯದ ಮುಂದೆ ಸಿಸಿಬಿ ಅಧಿಕಾರಿಗಳು ಹಾಜರುಪಡಿಸಲಿದ್ದಾರೆ. ಇದೀಗ ಕೆಸಿ ಜನರಲ್ ಆಸ್ಪತ್ರೆಯಲ್ಲಿ ಹೇಮಾಗೆ ಮೆಡಿಕಲ್ ಟೆಸ್ಟ್ ಮಾಡುವಂತಹ ಪ್ರಕ್ರಿಯೆ ನಡೆಯುತ್ತಿದೆ. ಮೆಡಿಕಲ್ ಟೆಸ್ಟ್ ಪ್ರಕ್ರಿಯೆ ಮುಗಿದ ಬಳಿಕ ನ್ಯಾಯಾಧೀಶರ ಮುಂದೆ ಸಿಸಿಬಿ ಅಧಿಕಾರಿಗಳು ನಟಿ ಹೇಮವರನ್ನು ಹಾಜರುಪಡಿಸಲಿದ್ದಾರೆ.**

ಹೇಮಾ ಡ್ರಗ್ಸ್ ಸೇವಿಸಿರುವುದು ಬಯಲಾಗಿತ್ತು ವಿಚಾರಣೆಯ ವೇಳೆ ಸಮರ್ಪಕವಾದಂತ ನೀಡದಿದ್ದಕ್ಕೆ ಬಂಧಿಸಲಾಗಿದೆ. ರೇವ್ ಪಾರ್ಟಿ ಎಲ್ಲಿ ನಟಿ ಹೇಮಾ ಕೂಡ ಭಾಗಿಯಾಗಿದ್ದರು. ಅಲ್ಲದೆ ವಿಚಾರಣೆಯ ವೇಳೆ ಗುಟ್ಕಾ ಹಾಕಿಕೊಂಡು ಬಂದಿದ್ದರು ಎಂದು ಕೂಡ ಹೇಳಲಾಗುತ್ತಿದೆ. ಹಾಗಾಗಿ ಸಿಸಿಬಿ ಅಧಿಕಾರಿಗಳು ಅವರನ್ನು ಬಂಧಿಸಿದ್ದು 24 ಗಂಟೆಯ ಒಳಗಾಗಿ ನ್ಯಾಯಾಧೀಶರ ಮುಂದೆ ಹಾಜರುಪಡಿಸಲಿದ್ದಾರೆ.

# ಯತೀಂದ್ರ ಸಿದ್ದು ನಾಮಪತ್ರ ಸಲ್ಲಿಕೆ, ಸಿಎಂ, ಡಿಸಿಎಂ ಸಾಥ್!

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

**ಕಾಂಗ್ರೆಸ್ ಮುಖಂಡರು ಸಾಥ್**

ವಿಧಾನಪರಿಷತ್ ಚುನಾವಣೆಗೆ ಕಾಂಗ್ರೆಸ್ ತನ್ನ ಅಭ್ಯರ್ಥಿಗಳನ್ನು ಘೋಷಿಸಿದ್ದ ಬೆನ್ನಲ್ಲೇ ಇಂದು ಯತೀಂದ್ರ ಸಿದ್ದರಾಮಯ್ಯ ಅವರು ನಾಮಪತ್ರ ಸಲ್ಲಿಸಿದ್ದು ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್ ಸೇರಿದಂತೆ ಕಾಂಗ್ರೆಸ್‌ಮುಖಂಡರು ಸಾಥ್ ನೀಡಿದರು.

ವಿಧಾನಸೌಧದಲ್ಲಿ ವಿಧಾನಪರಿಷತ್ ಚುನಾವಣೆಗೆ ಅಭ್ಯರ್ಥಿಗಳು ನಾಮಪತ್ರ ಸಲ್ಲಿಸುತ್ತಿದ್ದಾರೆ. ಕಾಂಗ್ರೆಸ್‌ಅಭ್ಯರ್ಥಿಯಾಗಿರುವ ಯತೀಂದ್ರ ಸಿದ್ದರಾಮಯ್ಯಗೆ ಇಂದು ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಅವರು ಬಿ ಫಾರಂ ನೀಡಿದರು. ನಂತರ ಪಕ್ಷದ ಮುಖಂಡರ ಸಮ್ಮುಖದಲ್ಲಿ ಯತೀಂದ್ರ ನಾಮಪತ್ರ ಸಲ್ಲಿಸಿದರು. ಕಳೆದ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್135 ಸ್ಥಾನಗಳನ್ನು ಗೆದ್ದಿದ್ದು ಇದರ ಆಧಾರದ ಮೇಲೆ ಒಟ್ಟು 11ರಲ್ಲಿ ಏಳು ಸ್ಥಾನಗಳನ್ನು ಕಾಂಗ್ರೆಸ್? ಗೆಲ್ಲುವ ಅವಕಾಶವಿದ್ದು ಆ ಸ್ಥಾನಗಳಿಗೆ ನಿನ್ನೆ ತನ್ನ ಅಭ್ಯರ್ಥಿಯನ್ನು ಘೋಷಣೆ ಮಾಡಿತ್ತು.

ಸಿಎಂ ಸಿದ್ದರಾಮಯ್ಯ ಪುತ್ರ ಯತೀಂದ್ರ, ಹಾಲಿ ಸಚಿವ ಎನ್.ಎಸ್.ಬೋಸರಾಜು, ಸಿಎಂ ರಾಜಕೀಯ ಕಾರ್ಯದರ್ಶಿ ಡಾ.ಕೆ ಗೋವಿಂದರಾಜು, ವಸಂತಕುಮಾರ್, ಜಗದೇವ್ ಗುತ್ತೇದಾರ್, ಐವನ್ ಡಿಸೋಜಾ ಬಿಲ್ಕಿಸ್ ಬಾನೊ ಅವರನ್ನು ಕಾಂಗ್ರೆಸ್ ಅಭ್ಯರ್ಥಿಗಳನ್ನಾಗಿ ಘೋಷಿಸಲಾಗಿದೆ. ಇನ್ನು ಕಾಂಗ್ರೆಸ್‌ನಿಂದ ಆಯ್ಕೆಯಾಗಿದ್ದ ಜಗದೀಶ್ ಶೆಟ್ಟರ್ ಅವರ ರಾಜೀನಾಮೆಯಿಂದ ತೆರವಾಗಿರುವ ಸ್ಥಾನಕ್ಕೆ ಬಸನಗೌಡ ಬಾದರ್ಲಿ ಅವರನ್ನ ಆಯ್ಕೆ ಮಾಡಿದೆ.

# ಮಳೆಯಾಗುತ್ತಿದ್ದಂತೆ ಹೆಚ್ಚಾಯ್ತು ಹಾವುಗಳ ಕಾಟ: ಸಹಾಯಕ್ಕಾಗಿ ಈ ಸಂಖ್ಯೆಗೆ ಕರೆ ಮಾಡಿ


ಉದಯವಾಹಿನಿ ಚಿತ್ರ

**ಹಾವುಗಳ ಕಾಟ ಶುರು**

• ಉದಯವಾಹಿನಿ, ಬೆಂಗಳೂರು

ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ಕಳೆದ ಎರಡು ದಿನಗಳಿಂದ ಧಾರಾಕಾರ ಮಳೆಯಾಗುತ್ತಿದ್ದು, ಜನ ಜೀವನ ಅಸ್ತವ್ಯಸ್ತಗೊಂಡಿದೆ. ಮಳೆಯ ಅವಾಂತರಗಳ ಮಧ್ಯೆಯೇ ಬೆಂಗಳೂರಿನಲ್ಲಿ ಹಾವುಗಳ ಕಾಟ ಶುರುವಾಗಿದೆ. ಮಳೆ ಆರಂಭವಾಗುತ್ತಿದ್ದಂತೆ ಹಾವುಗಳ ಓಡಾಟ ಹೆಚ್ಚುವುದು ಸಾಮಾನ್ಯ, ಆದರೆ ಕಳೆದ ಕೆಲವು ದಿನಗಳಿಂದ ಅತಿ ಹೆಚ್ಚು ಹಾವುಗಳು ಜನ ವಾಸ ಸ್ಥಳದಲ್ಲಿ ಕಂಡು ಬರುತ್ತಿದ್ದು, ಜನರು ಕಂಗಾಲಾಗಿದ್ದಾರೆ. ನಗರದ ಹಲವು ಪ್ರದೇಶದಲ್ಲಿನ ಮನೆಯೊಳಗೆ, ರಸ್ತೆಗಳಲ್ಲಿ ಹಾಗೂ ಮನೆಯ ಅಕ್ಕಪಕ್ಕದಲ್ಲಿ ಹಾವುಗಳು ಕಾಣಿಸಿಕೊಳ್ಳುತ್ತಿದ್ದು, ಜನರು ಭಯಭೀತರಾಗಿದ್ದಾರೆ. ಹೀಗಾಗಿ ಜನರಿಗೆ ಸಹಾಯವಾಗಲು ಹಾವುಗಳು ಸೇರಿದಂತೆ ಇತರ ವಿಷ ಜಂತುಗಳು ಕಂಡು ಬಂದರೆ ಕರೆ ಮಾಡಲು ಬಿಬಿಎಂಪಿ ಸಹಾಯವಾಣಿ ತೆರೆದಿದೆ.

ಬೆಂಗಳೂರಿನಲ್ಲಿ ವಾಸಿಸುತ್ತಿರುವ ನಿವಾಸಿಗಳು ತಮ್ಮ ಮನೆಗಳ ಸುತ್ತಮುತ್ತ ಹಾವುಗಳು ಕಂಡುಬಂದರೆ ಬಿಬಿಎಂಪಿ ವನ್ಯಜೀವಿ ಸಹಾಯವಾಣಿ: 1533, ಕರ್ನಾಟಕ ಅರಣ್ಯ ಇಲಾಖೆ ಸಹಾಯವಾಣಿ: 1926, ಬಿಬಿಎಂಪಿ ವನ್ಯ ಜೀವಿ ಸಂರಕ್ಷಣಾ ಸಹಾಯವಾಣಿ: 9902794711ಕ್ಕೆ ಕರೆ ಮಾಡಿ ತಿಳಿಸಬಹುದಾಗಿದೆ.

**ಇನ್ನು ಭಾನುವಾರ ಏಕಾಏಕಿ ಬಿರುಗಾಳಿ ಸಹಿತ ಭಾರೀ ಮಳೆಯಾಗಿದ್ದು, ನಿನ್ನೆ ಒಂದೇ ದಿನ ಬೆಂಗಳೂರಿನಲ್ಲಿ 110 ಮಿ.ಮೀ ಮಳೆಯಾಗಿದೆ. ಗಾಳಿ ಮಳೆಗೆ ಬೆಂಗಳೂರು ತತ್ತರಿಸಿದ್ದು, ಬರೋಬ್ಬರಿ 206 ಮರಗಳು ನೆಲಕಚ್ಚಿವೆ. ಚಲಿಸುತ್ತಿದ್ದ ಹಾಗೂ ಮನೆಗಳ ಮುಂದೆ ನಿಲ್ಲಿಸಲಾದ ಕಾರು, ಬೈಕ್ ಮತ್ತು ಆಟೋಗಳ ಮೇಲೆ ಮರ ಬಿದ್ದಿದ್ದು ಲಕ್ಷಾಂತರ ರೂಪಾಯಿ ನಷ್ಟ ಸಂಭವಿಸಿದೆ. ಬೊಮ್ಮನಹಳ್ಳಿಯಲ್ಲಿ 14, ದಾಸರಹಳ್ಳಿಯಲ್ಲಿ 7, ಬೆಂಗಳೂರು ಪೂರ್ವದಲ್ಲಿ 22, ಬೆಂಗಳೂರು ದಕ್ಷಿಣದಲ್ಲಿ 99 ಪಶ್ಚಿಮದಲ್ಲಿ 36 ಸೇರಿದಂತೆ ಒಟ್ಟು 206 ಮರಗಳು ಧರೆಗುರುಳಿದೆ.**

ಬಿಬಿಎಂಪಿಯ ವನ್ಯ ಜೀವಿ ಸಂರಕ್ಷಣಾ ತಂಡ ಕಳೆದ ಒಂದೇ ವಾರ 100 ಕರೆಗಳನ್ನು ಸ್ವೀಕರಿಸಿದೆ. ಸರಾಸರಿ ಪ್ರತಿದಿನ 30 ಕರೆಗಳು ಬಂದಿವೆ. ಹೆಚ್ಚಿನ ಕರೆಗಳು ಯಲಹಂಕ ಮತ್ತು ಬೊಮ್ಮನಹಳ್ಳಿ ವಲಯದಿಂದ ಬರುತ್ತಿದ್ದು, ಕೆಲವು ಭಾಗಗಳಲ್ಲಿ ಹಾವುಗಳ ರಕ್ಷಣಾ ಕಾರ್ಯಾಚರಣೆ ವಿಳಂಬವಾಗುತ್ತಿದೆ.

ಈಗ ಹಾವುಗಳ ಸಂತಾನೋತ್ಪತ್ತಿ ಕಾಲವಾಗಿದ್ದು ಹೀಗಾಗಿ ಮನೆಗಳು ಸೇರಿದಂತೆ ಬೆಚ್ಚಗಿನ ಪ್ರದೇಶಗಳನ್ನು ಅರಸಿ ಬರುತ್ತದೆ. ಹೀಗಾಗಿ ಸಾರ್ವಜನಿಕರು ಎಚ್ಚರಿಕೆ ಇರುವಂತೆ ಬಿಬಿಎಂಪಿ ವನ್ಯ ಜೀವಿ ಸಂರಕ್ಷಣಾ ತಂಡ ಸಾರ್ವಜನಿಕರಿಗೆ ಎಚ್ಚರಿಕೆ ನೀಡಿದೆ.

# ಬೆಂಗಳೂರಿನಲ್ಲಿ ವರುಣನ ಆರ್ಭಟ 133 ವರ್ಷಗಳ ದಾಖಲೆ ಮುರಿದ ಮಳೆ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ರಾಜಧಾನಿ ಬೆಂಗಳೂರಿನಲ್ಲಿ ಭಾನುವಾರ 111 ಮಿಮೀ ಮಳೆಯಾಗಿದ್ದು, ಜೂನ್‌ನಲ್ಲಿ ಒಂದೇ ದಿನದಲ್ಲಿ ಸುರಿದ ಈ ಮಳೆ 133 ವರ್ಷಗಳ ದಾಖಲೆಯನ್ನು ಮುರಿದಿದೆ ಎಂದು ಹವಾಮಾನ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

ಜೂನ್ 2 ರಂದು ಕಳೆದ 133 ವರ್ಷಗಳಲ್ಲಿ ಜೂನ್‌ನಲ್ಲಿ ಒಂದೇ ದಿನದಲ್ಲಿ ಸುರಿದ ಅತಿ ಹೆಚ್ಚು ಮಳೆಯಾಗಿದೆ ಎಂದು ಬೆಂಗಳೂರಿನ ಭಾರತೀಯ ಹವಾಮಾನ ಇಲಾಖೆ (IMDಯ ವಿಜ್ಞಾನಿ ಎನ್ ಪುವಿಯರಸನ್ ಅವರು ಪಿಟಿಐಗೆ ತಿಳಿಸಿದ್ದಾರೆ. ಜೂನ್ 1 ಮತ್ತು ಜೂನ್ 2 ರಂದು ಎರಡು ದಿನದಲ್ಲಿ 140.7 ಮಿಮೀ ಮಳೆಯಾಗಿದೆ. ಇದು ಜೂನ್ ತಿಂಗಳ ಸರಾಸರಿಯನ್ನು ಮೀರಿಸಿದೆ ಎಂದು ಅವರು ಹೇಳಿದ್ದಾರೆ. ಭಾನುವಾರ ಸಂಜೆಯಿಂದ ರಾತ್ರಿವರೆಗೂ ಸುರಿದ ಮಳೆಯು, 133 ವರ್ಷಗಳ ಹಿಂದಿನ ದಾಖಲೆಯನ್ನು ಮುರಿದಿದೆ. ಜೂನ್ ತಿಂಗಳಲ್ಲಿ ಒಂದೇ ದಿನದಲ್ಲಿ ಸುರಿದ ಅತ್ಯಧಿಕ ಮಳೆ ಇದಾಗಿದೆ ಎಂದು ಅವರು ತಿಳಿಸಿದ್ದಾರೆ. 1891, ಜೂನ್ 16 ರಂದು ಒಂದೇ ದಿನದಲ್ಲಿ ಅತಿ ಹೆಚ್ಚು ಮಳೆ ದಾಖಲಾಗಿದೆ ಎಂದು ಅವರು ಹೇಳಿದ್ದಾರೆ. ಭಾರಿ ಮಳೆಯಿಂದ ಬೆಂಗಳೂರಿನ ಬಹುತೇಕ ಪ್ರತಿ ಪ್ರದೇಶದ ರಸ್ತೆಗಳಲ್ಲಿ ಬೃಹದಾಕಾರದ ಮರಗಳು ಧರೆ ಗುರುಳಿರುವುದನ್ನು ಗಮನಿಸಿದಾಗ, ಗಾಳಿಯ ಭಯಾನಕತೆ ಹೇಗಿತ್ತು ಎನ್ನುವುದು ಅರಿವಾಗುತ್ತದೆ. ಹಲವು ನಿವಾಸಿಗಳು ಬಿದ್ದ ಮರಗಳ ಚಿತ್ರಗಳನ್ನು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿದ್ದಾರೆ.

ಭಾನುವಾರ ರಾತ್ರಿ ಟ್ರಿನಿಟಿ ಮೆಟ್ರೊ ನಿಲ್ದಾಣದ ಬಳಿ ಮೆಟ್ರೊ ಟ್ರ್ಯಾಕ್ ಮೇಲೆ ಮರವೊಂದು ಉರುಳಿಬಿದ್ದ ಪರಿಣಾಮ ಪ್ರಯಾಣಿಕರು ಪರದಾಡುವಂತಾಗಿತ್ತು.

**ಬೆಂಗಳೂರಿನ ಐಎಂಡಿ ಕೇಂದ್ರದ ಮುಖ್ಯಸ್ಥ ಸಿ ಎಸ್ ಪಾಟೀಲ್ ಅವರ ಪ್ರಕಾರ, ನೈಋತ್ಯ ಮುಂಗಾರು ಕರ್ನಾಟಕದಲ್ಲಿ ಮತ್ತಷ್ಟು ಚುರುಕಾಗಲಿದ್ದು, ಜೂನ್ 5 ರವರೆಗೆ ಕೆಲವು ಜಿಲ್ಲೆಗಳಿಗೆ ಹಳದಿ ಅಲರ್ಟ್ ಘೋಷಿಸಲಾಗಿದೆ.**

**ಬೃಹದಾಕಾರದ ಮರಗಳು ಧರೆ**

**ಕರಾವಳಿ ಕರ್ನಾಟಕದ ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ, ಉತ್ತರ ಒಳನಾಡಿನಲ್ಲಿ ಬಾಗಲಕೋಟೆ, ಬೆಳಗಾವಿ, ಧಾರವಾಡ, ಗದಗ, ಹಾವೇರಿ, ಕೊಪ್ಪಳ ಮತ್ತು ವಿಜಯಪುರ ಹಾಗೂ ಬಳ್ಳಾರಿ, ಬೆಂಗಳೂರು(ಗ್ರಾಮೀಣ ಮತ್ತು ನಗರ), ಚಿಕ್ಕಬಳ್ಳಾಪುರ, ದಾವಣಗೆರೆ, ಚಿತ್ರದುರ್ಗ, ಹಾಸನ, ಮೈಸೂರು, ತುಮಕೂರಿನಲ್ಲಿ ಮುಂದಿನ ಎರಡು ದಿನಗಳ ಕಾಲ ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಅವರು ತಿಳಿಸಿದ್ದಾರೆ.**

# ರಾಜ್ಯದಲ್ಲಿ ಬಿರುಸು ಪಡೆದ ಮಾನ್ಸೂನ್?

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ


ಮುಂಗಾರು ಪ್ರವೇಶಿಸಿದ ಬೆನ್ನಲ್ಲೇ ರಾಜ್ಯದಲ್ಲಿ ಮುಂಗಾರು ಇನ್ನಷ್ಟು ಬಿರುಸುಗೊಂಡಿದ್ದು, ಈಗಾಗಲೇ ಹಲವೆಡೆ ಉತ್ತಮ ವರ್ಷಧಾರೆಯಾಗುತ್ತಿದೆ. ಬೆಂಗಳೂರು ನಗರ ಸೇರಿ ದಕ್ಷಿಣ ಕರ್ನಾಟಕದ ಬಹುತೇಕ ಭಾಗವನ್ನು ಆವರಿಸಿರುವ ಮಾನ್ಸೂನ್, 2-3 ದಿನಗಳಲ್ಲಿ ಉತ್ತರ ಕರ್ನಾಟಕವನ್ನು ವ್ಯಾಪಿಸಲಿದೆ.

ಹಾಸನ, ಚಿಕ್ಕಮಗಳೂರು, ಮಂಡ್ಯ, ಉತ್ತರ ಕನ್ನಡ ಸೇರಿ ರಾಜ್ಯದ ಹಲವೆಡೆ ಸೋಮವಾರ ಭರ್ಜರಿ ವರ್ಷಧಾರೆಯಾಗಿದೆ. ದಕ್ಷಿಣ ಕನ್ನಡ, ಉತ್ತರ ಕನ್ನಡ,ಉಡುಪಿ, ಬೆಳಗಾವಿ, ಧಾರಾವಾಡ, ಗದಗ, ಹಾವೇರಿ, ಕೊಪ್ಪಳದಲ್ಲಿ ಮುಂದಿನ ಐದು ದಿನ ಹಾಗೂ ಬೆಂಗಳೂರು, ಬೆಂ.ಗ್ರಾಮಾಂತರ, ಹಾಸನ, ಚಿಕ್ಕಮಗಳೂರು,ಮಂಡ್ಯ, ಮೈಸೂರು, ಶಿವಮೊಗ್ಗ, ತುಮಕೂರಿನಲ್ಲಿ ಜೂ 4ರಿಂದ ಜೂ 7ರವರೆಗೆ ಗುಡುಗು ಮಿಂಚು, ಬಿರುಗಾಳಿ ಸಹಿತ ಭಾರಿ ಮಳೆ ಬೀಳುವ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ಹವಾಮಾನ ಇಲಾಖೆ ಯೆಲ್ಲೋ ಅಲರ್ಟ್ ಘೋಷಿಸಿದೆ. ವಿಜಯಪುರ, ಬಳ್ಳಾರಿಯಲ್ಲಿ ಜೂ 4ರಂದು ಹಾಗೂ ರಾಯಚೂರು, ಯಾದಗಿರಿ, ಕೋಲಾರ ಜೂ 5ರಂದು ಯೆಲ್ಲೋ ಅಲರ್ಟ್ ಇರಲಿದೆ. ಉಳಿದೆಡೆ ಸಾಧಾರಣ ಪ್ರಮಾಣದಲ್ಲಿ ವರ್ಷಧಾರೆಯಾಗಲಿದೆ. ಮಾನ್ಸೂನ್ ಪ್ರವೇಶ ಮೂನ್ಸೂಚನೆ ಸಿಕ್ಕಿದ ಬಳಿಕ ಉತ್ತರ ಕರ್ನಾಟಕದ ಬಹುತೇಕ ಜಿಲ್ಲೆಗಳಲ್ಲಿ ಮುಂದಿನ ಐದು ದಿನ ಭಾರಿ ಪ್ರಮಾಣದಲ್ಲಿ ವರ್ಷಧಾರೆಯಾಗಲಿದೆ. ಈಗಾಗಲೇ ಕೆಲವಡೆ ಮಳೆ ಸುರಿದಿದೆ. ಕರಾವಳಿ, ಮಲೆನಾಡು, ದಕ್ಷಿಣ ಒಳನಾಡು, ಉತ್ತರ ಒಳನಾಡಿನ ಕೆಲ ಜಿಲ್ಲೆಗಳಲ್ಲಿ ಮಳೆ ಜತೆಗೆ ಬಿರು ಗಾಳಿ ಜಾಸ್ತಿ ಇರಲಿದೆ. ಒಳನಾಡಿನಲ್ಲಿ ಮುಂದಿನ 48 ಗಂಟೆ ಗರಿಷ್ಠ ಮತ್ತು ಕನಿಷ್ಠ ತಾಪಮಾನವು ಕ್ರಮವಾಗಿ 23 ಡಿ.ಸೆ. ಉಷ್ಣಾಂಶ ಇಳಿಮುಖವಾಗಲಿದೆ ಎಂದು ಹವಾಮಾನ ತಜ್ಞ ಡಾ. ಶ್ರೀನಿವಾಸರೆಡ್ಡಿ ತಿಳಿಸಿದ್ದಾರೆ.

# ನೌಕರರ ಸಂಘದ ಚುನಾವಣೆಗೆ ಮುಹೂರ್ತ ಫಿಕ್ಸ್

## ■ ಮತದಾರರ ಪಟ್ಟಿ ಸಿದ್ಧಪಡಿಸೋ ಸಂಬಂಧ ಅಧಿಸೂಚನೆ ಪ್ರಕಟ

• ಉದಯವಾಹಿನಿ, ಬೆಂಗಳೂರು




ರಾಜ್ಯ ಸರ್ಕಾರಿ ನೌಕರರ ಸಂಘದ ಚುನಾವಣೆಗೆ ಮುನ್ನವೇ ಕರಡು ಮತದಾರರ ಪಟ್ಟಿಯನ್ನು ಸಿದ್ಧಪಡಿಸೋ ಸಂಬಂಧ ಅಧಿಸೂಚನೆಯನ್ನು ಪ್ರಕಟಿಸಲಾಗಿದೆ.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದಿಂದ ಮತದಾರರ ಪಟ್ಟಿ ನೋಟಿಸು ಪ್ರಕಟಿಸಲಾಗಿದೆ. ಅದರಲ್ಲಿ ಸಂಘದ ರಾಜ್ಯ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಕೈಗೊಂಡ ಸರ್ವಾನುಮತದ ನಿರ್ಣಯದಂತೆ 2024-29ನೇ ಸಾಲಿನ ಅವಧಿಗೆ ಎಲ್ಲಾ ಹಂತದ ಪ್ರಕ್ರಿಯೆಗಳನ್ನು ಕಗೊಳ್ಳಲು ಸಂಘದ ಬೈಲಾ ನಿಯಮದಂತೆ ಕರಡು ಮತದಾರರ ಪಟ್ಟಿಯನ್ನು ಹೊರಡಿಸಿ, ಈ ಸಂಬಂದ ಸಂಘದ ಸದಸ್ಯರಿಂದ ಸ್ವೀಕೃತವಾಗಬಹುದಾದ ಮನವಿ, ಆಕ್ಷೇಪಣೆಗಳಿಗೆ ಮುಕ್ತ ಅವಕಾಶ ಕಲ್ಪಿಸಿದೆ ಎಂದಿದೆ.

ಈ ಹಿನ್ನಲೆಯಲ್ಲಿ ಕರಡು ಮತದಾರರ ಪಟ್ಟಿ ಸಿದ್ಧಪಡಿಸೋದಕ್ಕೆ ದಿನಾಂಕ ನಿಗದಿಗೊಳಿಸಲಾಗಿದೆ. ತಾಲ್ಲೂಕು ಶಾಖೆಗಳ ಮತಕ್ಷೇತ್ರಗಳು, ಯೋಜನಾ ಶಾಖೆಗಳ ಮತ ಕ್ಷೇತ್ರಗಳು, ಜಿಲ್ಲಾ ಶಾಖೆಗಳ ಮತ ಕ್ಷೇತ್ರಗಳು, ಬೆಂಗಳೂರು ನಗರ ರಾಜ್ಯ ಪರಿಷತ್ ಮತಕ್ಷೇತ್ರಗಳು ಕರಡು ಮತದಾರರ ಪಟ್ಟಿ ಸಿದ್ಧಪಡಿಸಲು ದಿನಾಂಕ 08-06-2024ರಿಂದ 30-06-2024ರವರೆಗೆ ಅವಕಾಶ ನೀಡಲಾಗಿದೆ. ಕರಡು ಮತದಾರರ ಪಟ್ಟಿಯನ್ನು ದಿನಾಂಕ 01-07-2024ರಂದು ಪ್ರಕಟಿಸಲಾಗುತ್ತದೆ. ಆಕ್ಷೇಪಣೆಗಳನ್ನು ದಿನಾಂಕ 02-07-2024ರಿಂದ 10-07-2024ರ ಒಳಗಾಗಿ ಸಲ್ಲಿಸುವಂತೆ ತಿಳಿಸಿದೆ.

ಇನ್ನೂ ಸಂಘದ ಬೈಲಾ ನಿಯಮಗ ಅನ್ವಯ ಅರ್ಹರಿರುವ ಸಂಘದ ಸದಸ್ಯರ ಹೆಸರುಗಳನ್ನು ಒಳಗೊಂಡ ಕರಡು ಮತದಾರರ ಪಟ್ಟಿಯನ್ನು ನಿಗದಿತ ದಿನಾಂಕದೊಳಗೆ ಸಿದ್ಧಪಡಿಸಿ, ಹೊರಡಿಸಲಾದ ಮತದಾರರ ಪಟ್ಟಿಯನ್ನು ರಾಜ್ಯ ಸಂಘಕ್ಕೆ ಸಲ್ಲಿಸುವಂತೆ ತಿಳಿಸಲಾಗಿದೆ.

**ಕರಡು ಮತದಾರರ ಪಟ್ಟಿ ಸಿದ್ಧತೆಗೆ ಆದೇಶ**

**ಯಾವುದೇ ಕಾರಣಕ್ಕೂ ನಿಗದಿತ ಅವಧಿಯ ವಿಸ್ತರಣೆಗೆ ಅವಕಾಶ ಇರೋದಿಲ್ಲ. ತಪ್ಪಿದಲ್ಲಿ ಸಂಬಂಧಿಸಿದ ಶಾಖೆಗಳೇ ಹೊಣೆಯಾಗಲಿದ್ದಾವೆ. ತಮ್ಮ ಶಾಖೆಗಳಲ್ಲಿ ಕಾರ್ಯಕಾರಿ ಸಮಿತಿ ಸಭೆಗಳನ್ನು ಸಂಘದ ಬೈಲಾ ರಿತ್ಯಾ ನಡೆಸಿ, ಕ್ರಮ ವಹಿಸುವಂತೆ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯ ಕಾರ್ಯಕಾರಿ ಸಮಿತಿಯ ಪ್ರಧಾನ ಕಾರ್ಯದರ್ಶಿ ಶ್ರೀನಿವಾಸ್.ಟಿ ಆದೇಶದಲ್ಲಿ ತಿಳಿಸಿದ್ದಾರೆ.**

# ಚಿಂಚೋಳಿ 74.83, ಐನಾಪೂರ 74.83 ಸರಿಸಮ ಮತದಾನ

## ಕ್ಷೇತ್ರದ ಪದವೀಧರರ ಚುನಾವಣೆ, ಮತದಾನ ಮಾಡಲು ಸರದಿಯಲ್ಲಿ ನಿಂತ ಮತದಾರರು, 74.83 ಪ್ರತಿಶತಃ ಶಾಂತಿಯುತ ಮತದಾನ

• ಉದಯವಾಹಿನಿ,ಚಿಂಚೋಳಿ



ಉದಯವಾಹಿನಿ ಚಿತ್ರ

ಪಟ್ಟಣದ ಸರ್ಕಾರಿ ಕನ್ಯಾ ಪ್ರಾಥಮಿಕ ಶಾಲೆ, ಸುಲೇಪೇಟ, ಐನಾಪೂರ ಮೂರು ಭೂತಗಳಲ್ಲಿ ಕರ್ನಾಟಕ ವಿಧಾನ ಪರಿಷತ್ ಚುನಾವಣೆ 2024ರ ಈಶಾನ್ಯ ಪದವೀಧರರ ಕ್ಷೇತ್ರದ ಚುನಾವಣೆಯಲ್ಲಿ ಪದವೀಧರರು ಮತದಾನ ಮಾಡಲು ಸರದಿ ಸಾಲಿನಲ್ಲಿ ನಿಂತು ಮತದಾನ ಮಾಡಿದರು.

ಮತದಾನ ಪ್ರಕ್ರಿಯೆಯ 100ಮೀ ದೂರ ಕಾಂಗ್ರೆಸ್ ಮತ್ತು ಬಿಜೆಪಿ ಪಕ್ಷದ ಕಾರ್ಯಕರ್ತರು ಮುಖಂಡರು ಟೆಂಟ್ ಹಾಕಿ ಕುಡಿಯುವ ನೀರು, ಕುರ್ಚಿ ಟೇಬಲ್ ಹಾಕಿಕೊಂಡು ಮತದಾನ ಮಾಡಲು ಬರುವ ಮತದಾರರಿಗೆ ಅವರ ಹೆಸರಿನ ಚೀಟಿ ಗಳು ಕೊಡುತ್ತಾ ಕುಳಿತು ಪಕ್ಷದ ಪರವಾಗಿ ಕೆಲಸ ಮಾಡುವುದು ಕಂಡುಬಂದರೆ, ಇನ್ನೊಂದೆಡೆ ಇತರೆ ಪಕ್ಷಗಳ ಮತ್ತು ಸ್ವಾತಂತ್ರ್ಯ ಅಭ್ಯರ್ಥಿಯಾಗಿ ಸ್ಪರ್ಧಿಸಿದ ಯಾವುದೇ ಅಭ್ಯರ್ಥಿಗಳ ಪರವಾಗಿ ಕೆಲಸ ಮಾಡುವುದಾಗಲಿ ಮತದಾರರಿಗೆ ಹೇಳುವುದಾಗಲಿ ಯಾವುದೇ ಕಂಡುಬಂದಿರುವುದಿಲ್ಲ.

ಕಾರ್ಯಕರ್ತರ ನಡುವೆ ಮಾತಿನ ಚಕಮಕಿ

**ಕಾಂಗ್ರೆಸ್ ಪಕ್ಷ:** ಕಾಂಗ್ರೆಸ್ ಪಕ್ಷದ ಪರವಾಗಿ ಸ್ಥಳೀಯ ಕಾಂಗ್ರೆಸ್ ಹಿರಿಯ ಮುಖಂಡ, ಕೆಪಿಸಿಸಿ ಉಪಾಧ್ಯಕ್ಷ ಸುಭಾಷ್ ರಾಠೋಡ್ ಆಗಮಿಸಿ ಕಾಂಗ್ರೆಸ್ ಟೆಂಟ್ ನಲ್ಲಿ ಕುಳಿತು ಕಾರ್ಯಕರ್ತರಿಗೆ ಮತದಾರರಿಗೆ ಹುರಿದುಂಬಿಸಿದರು.

ಬಸವರಾಜ ಮಾಲಿ, ದೀಪಕನಾಗ್ ಪುಣ್ಯ ಶೆಟ್ಟಿ, ಮಹೇಮೂದ ಪಟೇಲ, ಅಬ್ದುಲ್ ಬಾಷೀದ್, ಲಕ್ಷ್ಮಣ ಆವುಂಟಿ, ಜಗನ್ನಾಥ ಗುತ್ತೇದಾರ, ಅಜೀತ್ ಪಾಟೀಲ, ಸಂತೋಷ ಗುತ್ತೇದಾರ, ವಿಶ್ವ ಹೊಡೆಬೀರನಳ್ಳಿ, ಸುರೇಶ ಭಂಟ್ಟಾ, ನರಸಿಂಹಮ್ಲು ಕುಂಬಾರ, ವೀರಶೆಟ್ಟಿ ಪಾಟೀಲ, ರಮೇಶ, ನಾಗೇಶ ಗುಣಾಜೀ, ಶಬ್ಬೀರ ಅಹೇಮದ್, ಶೇಖ್ ಫರೀದ್, ಇತರರಿದ್ದರು.

**ಬಿಜೆಪಿ ಪಕ್ಷ:** ಬಿಜೆಪಿ ಪಕ್ಷದ ಪರವಾಗಿ ಸ್ಥಳೀಯ ಶಾಸಕ ಡಾ.ಅವಿನಾಶ ಜಾಧವ ಆಗಮಿಸಿ ಪಟ್ಟಣದ ಭೂತನಲ್ಲಿ ನಡೆಯುತ್ತಿರುವ ಮತದಾನದ ಕೇಂದ್ರಕ್ಕೆ ತೆರಳಿ ವಿವರ ಪಡೆದುಕೊಂಡು ಬಿಜೆಪಿ ಪಕ್ಷದಿಂದ ಹಾಕಿದ ಟೆಂಟ್‌ನಲ್ಲಿ ಕಾರ್ಯಕರ್ತರೊಂದಿಗೆ ಕುಳಿತು ಕಾರ್ಯಕರ್ತರಿಗೆ ಹುರಿದುಂಬಿಸಿದರು.

ಗೋಪಾಲರಾವ ಕಟ್ಟಿಮನಿ,ಗೌತಮ್ ಪಾಟೀಲ, ಸಂತೋಷ, ಗಡಂತಿ, ಶ್ರೀಮಂತ ಕಟ್ಟಿಮನಿ, ಸತೀಶರೆಡ್ಡಿ ತಾದಲಾಪೂರ, ಶಿವಯೋಗಿ ರುಸ್ತಾಂಪೂರ, ಕೆಎಂ ಬಾರಿ, ಭೀಮಶೆಟ್ಟಿ ಮುರುಡಾ, ಗಿರಿರಾಜ ನಾಟೀಕಾರ, ತೌಫೀಕ್ ಖುರೇಷಿ, ಲೋಕೇಶ ಶೇಳಗಿ, ಪ್ರದೀಪ ಮೇತ್ರಿ, ಅಮರ ಲೋಡನೂರ, ಶ್ರೀಕಾಂತ ಪಿತ್ತಲ, ಶಂಕರ ಶಿವಪೂರಿ, ಸೇರಿದಂತೆ ಅನೇಕರಿದ್ದರು.

### ಕಾಂಗ್ರೆಸ್ ಬಿಜೆಪಿ ಮಾತಿನ ಚಕಮಕಿ

**ಪಟ್ಟಣದ ಕನ್ಯಾ ಪ್ರಾಥಮಿಕ ಶಾಲೆಯಲ್ಲಿರುವ ಬೂತ್‌ನಲ್ಲಿ ಪದವೀಧರರ ಚುನಾವಣೆ ಸಂದರ್ಭದಲ್ಲಿ 100ಮೀ ದೂರ ಹೊರೆಗಡೆ ಕುಳಿತ್ತಿರುವ ಬಿಜೆಪಿ ಕಾಂಗ್ರೆಸ್ ಕಾರ್ಯಕರ್ತರು ಶಾಸಕ ಡಾ.ಅವಿನಾಶ ಜಾಧವ ಬಿಜೆಪಿ ಸ್ಥಳಕ್ಕೆ ಆಗಮಿಸಿದಾಗ ಬಿಜೆಪಿ ಕಾರ್ಯಕರ್ತರು ಕಾಂಗ್ರೆಸ್ ಕಾರ್ಯಕರ್ತರ ನಡುವಳಿಕೆ ತಿಳಿಸಿದಾಗ ಶಾಸಕರು ಗರಂ ಆಗಿ ಚುನಾವಣೆಯನ್ನು ಕಾನೂನಿನ ಅಡಿಯಲ್ಲಿ ಸೂಕ್ಷ್ಮವಾಗಿ ನಡೆಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಕಾಂಗ್ರೆಸ್‌ನವರು ಊಟ ಹಣ ರಾಜರೋಷವಾಗಿ ಹಂಚಿಕೆ ಮಾಡುತ್ತಿದ್ದು ಅವರ ಮೇಲೆ ಯಾಕೆ ಕ್ರಮ ಕೈಗೊಳ್ಳುತ್ತಿಲ್ಲವೆಂದು ಪ್ರಶ್ನಿಸಿದಾಗ ನಮ್ಮ ಎದುರುಗಡೆ ಅಂಥಹುದು ಯಾವುದೇ ಕಂಡುಬಂದಿಲ್ಲವೆಂದು ಅಧಿಕಾರಿಗಳು ಹೇಳಿದರು. ಒಬ್ಬ ಕಾರ್ಯಕರ್ತನಿಗೆ ಹಣ ತಪಾಸಣೆ ನಡೆಸುತ್ತಿರುವಾಗ ಬಿಜೆಪಿ ಕಾಂಗ್ರೆಸ್ ಕಾರ್ಯಕರ್ತರ ನಡುವೆ ಮಾತಿನ ಚಕಮಕಿ ನಡೆದು ವಿಕೋಪದ ಪ್ರಸಂಗ ನಡೆಯಿತು ತಕ್ಷಣವೇ ಪೋಲಿಸ್ ಅಧಿಕಾರಿಗಳು ಆಗಮಿಸಿ ಪರಿಸ್ಥಿತಿ ತಿಳಿಗೊಳಿಸಿದರು.**


ಉದಯ ವಾಹಿನಿ

ಪ್ರಾದೇಶಿಕ

ಮಂಗಳವಾರ 04 ಜೂನ್ 2024 | 05


## ಮಿನಿ ನ್ಯೂಸ್

### ಕೊಪ್ಪಳ ಜಿಲ್ಲೆಯಾದ್ಯಂತ ಉತ್ತಮ ಮಳೆ, ತುಂಬಿ ಹರಿದ ಹಳ್ಳಕೊಳ್ಳ

• ಉದಯವಾಹಿನಿ, ಕೊಪ್ಪಳ

ಭಾನುವಾರ ಮಧ್ಯರಾತ್ರಿಯಿಂದ ಸೋಮವಾರದ ಬೆಳಗಿನ ಜಾವದ ತನಕ ಜಿಲ್ಲೆಯಾದ್ಯಂತ ಉತ್ತಮ ಮಳೆಯಾಗಿದ್ದು ಹಳ್ಳಕೊಳ್ಳಗಳು ತುಂಬಿ ಹರಿಯುತ್ತಿವೆ. ಕುಷ್ಟಗಿ ತಾಲ್ಲೂಕಿನ ಹೆಸರೂರು ಬಳಿಯ ಚೆಕ್ ಡ್ಯಾಮ್ ತುಂಬಿದ್ದು, ಇದೇ ತಾಲ್ಲೂಕಿನ ತಾವರಗೇರಾ ನಂದಾಪೂರ ರಸ್ತೆಯಲ್ಲಿ ಕೆರೆಯ ನೀರು ಹರಿದಿದೆ.

ಕೊಪ್ಪಳ ತಾಲ್ಲೂಕಿನ ಅಳವಂಡಿ ಸಮೀಪದ ಘಟ್ಟಿರಡ್ಡಿಹಾಳ ಗ್ರಾಮದಿಂದ ಕವಲೂರು ಸಂಪರ್ಕಿಸುವ ರಸ್ತೆಯ ಮಧ್ಯದಲ್ಲಿರುವ ಹಿರೇಹಳ್ಳವೂ ತುಂಬಿ ಹರಿದಿದೆ. ಕಳೆದ ವರ್ಷ ಮಳೆಯ ದರ್ಶನವಿಲ್ಲದೆ ಪರದಾಡಿದ್ದ ಜನರಿಗೆ ಈ ಬಾರಿ ಮೇಲಿಂದ ಮೇಲೆ ಬೀಳುತ್ತಿರುವ ಮಳೆ ಖುಷಿ ನೀಡಿದೆ. ಕೃಷಿ ಚಟುವಟಿಕೆಗೂ ಅನುಕೂಲವಾಗಿದ್ದು ರೈತರಲ್ಲಿ ಮೊಗದ ಮೇಲೆ ಮಂದಹಾಸ ಮೂಡಿದೆ. ಕೊಪ್ಪಳ ನಗರ, ಕುಷ್ಟಗಿ, ತಾವರಗೇರಾ, ಕಾರಟಗಿ, ಕುಕನೂರು ತಾಲ್ಲೂಕುಗಳಲ್ಲಿ ಉತ್ತಮ ಮಳೆ ಬಂದಿದ್ದು ಕೃಷಿ ಚಟುವಟಿಕೆ ಗರಿಗೆದರಿದೆ.

### ಬಾಲಕಿಗೆ ದೆವ್ವ ಹಿಡಿದಿದೆ, ಲೈಂಗಿಕ ಸುಖ ನೀಡಬೇಕು: ಮೌಲ್ವಿ

• ಉದಯವಾಹಿನಿ, ಚಿತ್ರದುರ್ಗ

ಕುರಾನ್ ಪಠಿಸಲು ಮಸೀದಿಗೆ ಬರುತ್ತಿದ್ದ ಬಾಲಕಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪದ ಮೇರೆಗೆ ಮೌಲ್ವಿ ಸೇರಿ ಇಬ್ಬರನ್ನು ಮಹಿಳಾ ಠಾಣೆಯ ಪೊಲೀಸರು ಬಂಧಿಸಿದ್ದಾರೆ. ಮೌಲ್ವಿ ಅಬ್ದುಲ್ ರೆಹಮಾನ್, ಬಾಲಕಿಯ ಅಣ್ಣ ಬಂಧಿತರು. ಬಾಲಕಿ ಮೂರು ವರ್ಷಗಳಿಂದ ಕುರಾನ್ ಪಠಿಸಲು ಮಸೀದಿಗೆ ಬರುತ್ತಿದ್ದಳು. ಬಾಲಕಿಗೆ ದೆವ್ವ ಹಿಡಿದಿದೆ, ಗಾಳಿ ಸೋಕಿದೆ ಎಂದು ಕುಟುಂಬದ ಸದಸ್ಯರಿಗೆ ಮೌಲ್ವಿ ನಂಬಿಸಿದ್ದಾನೆ. ದೈಹಿಕ ಸುಖ ನೀಡಿದರೆ ದೆವ್ವ ಬಿಡುತ್ತದೆ ಎಂದು ಲೈಂಗಿಕ ಕಿರುಕುಳ ನೀಡಿದ್ದಾನೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

### ಒಂದೇ ಸೂರಿನಡಿ ಮೂರು ತರಗತಿ

• ಉದಯವಾಹಿನಿ, ನಾಯಕನಹಟ್ಟಿ

ಹಳೆಯ ಗೋಡೆಗಳು, ಒಡೆದುಹೋದ ಹೆಂಚುಗಳು, ಬಿಸಿಲು, ಮಳೆ ನೀರು ಸರಾಗವಾಗಿ ಒಳಪ್ರವೇಶಿಸಿ ಪಾಠ- ಪ್ರವಚನಕ್ಕೆ ಅಡ್ಡಿಯಾಗುವುದು, ಇನ್ನೇನು ಕುಸಿದು ಬೀಳಲು ಕಾಯುತ್ತಿರುವ ಚಾವಣಿ...

ಇದು ನಾಯಕನಹಟ್ಟಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯ ಮಾದಯ್ಯನಹಟ್ಟಿ ಗ್ರಾಮದಲ್ಲಿ ಕಾಣಸಿಗುವ ಸರ್ಕಾರಿ ಶಾಲೆಯ ಚಿತ್ರಣ.ಪುಟ್ಟ ಗ್ರಾಮದ ಶಾಲೆಯಲ್ಲಿ 55ಕ್ಕೂ ಹೆಚ್ಚು ವಿದ್ಯಾರ್ಥಿಗಳು ಕಲಿಕೆಯಲ್ಲಿ ತೊಡಗಿದ್ದಾರೆ. ಶಿಕ್ಷಕರಿದ್ದಾರೆ. ಆದರೆ, ಅಧ್ಯಯನಕ್ಕೆ ಸುಸಜ್ಜಿತವಾದ ಕೊಠಡಿಗಳಿಲ್ಲ. ಹೀಗಾಗಿ ವಿದ್ಯಾರ್ಥಿಗಳಿಗೆ ಸಾಕಷ್ಟು ತೊಂದರೆ ಎದುರಿಸುತ್ತಿದ್ದಾರೆ. ಮಾದಯ್ಯನಹಟ್ಟಿ ಗ್ರಾಮದಲ್ಲಿ ಅಂದಾಜು 100 ಮನೆಗಳಿದ್ದು, 800ಕ್ಕೂ ಹೆಚ್ಚು ಜನಸಂಖ್ಯೆ ಹೊಂದಿದೆ. 1962ರಲ್ಲಿ ಗ್ರಾಮದಲ್ಲಿ ಪ್ರಾಥಮಿಕ ಶಿಕ್ಷಣಕ್ಕಾಗಿ ಸರ್ಕಾರ ಶಾಲೆಯನ್ನು ತೆರೆಯಿತು. ಅಂದು ಗ್ರಾಮದ ಹೃದಯ ಭಾಗದಲ್ಲಿ ಎರಡು ಕೊಠಡಿಗಳಲ್ಲಿ ಕೇವಲ 6-8 ವಿದ್ಯಾರ್ಥಿಗಳಿಂದ ಆರಂಭಗೊಂಡ ಶಾಲೆಯು ನಿರಂತರವಾಗಿ ತನ್ನ ಅಸ್ತಿತ್ವ ಉಳಿಸಿಕೊಂಡು ಬಂದಿದೆ.

ಈ ಶಾಲೆಯಲ್ಲಿ ಕಲಿತ ನೂರಾರು ವಿದ್ಯಾರ್ಥಿಗಳು ಉನ್ನತ ವ್ಯಾಸಂಗ ಪೂರೈಸಿ ಸರ್ಕಾರದ ಹಲವು ಹುದೆಗಳನ್ನು ಪಡೆದಿದ್ದಾರೆ. ಇಂದಿಗೆ 62 ವರ್ಷಗಳ ಇತಿಹಾಸ ಇರುವ ಶಾಲೆಗೆ ಕಳೆದ ಎರಡು ವರ್ಷಗಳಿಂದ ಹಲವು ಸಂಕಷ್ಟಗಳು ಎದುರಾಗಿದೆ. ದಿನನಿತ್ಯದ ಪಾಠ-ಪ್ರವಚನಕ್ಕೆ ಕೊಠಡಿಗಳ ಸಮಸ್ಯೆ ಎದುರಾಗಿದೆ.

### ರೌಡಿಗಳ ಮನೆ ಮೇಲೆ ದಾಳಿ: ಪರಿಶೀಲನೆ

• ಉದಯವಾಹಿನಿ, ಹುಬ್ಬಳ್ಳಿ

ಅವಳಿ ನಗರದಲ್ಲಿ ಅಪರಾಧ ಕೃತ್ಯಗಳನ್ನು ನಿಯಂತ್ರಿಸಲು ಹಾಗೂ ಚುನಾವಣಾ ಮತ ಎಣಿಕೆ ಹಿನ್ನೆಲೆಯಲ್ಲಿ ಮುಂಜಾಗ್ರತೆಯಾಗಿ ಹಮ್ಮಿಕೊಂಡಿರುವ ರೌಡಿಗಳ ಮನೆ ಮೇಲಿನ ದಾಳಿಯನ್ನು ಪೊಲೀಸರು ಮುಂದುವರಿಸಿದ್ದು, ಭಾನುವಾರ ಬೆಳ್ಳಂಬೆಳಿಗ್ಗೆ ವಿದ್ಯಾನಗರ ಠಾಣಾ ವ್ಯಾಪ್ತಿಯಲ್ಲಿ ಕಾರ್ಯಾಚರಣೆ ನಡೆಸಿದರು.

ಉಣಕಲ್, ವಿದ್ಯಾನಗರ, ಸಾಯಿನಗರ, ಟಿಂಬರ್ ಯಾರ್ಡ್ ಹಾಗೂ ಸುತ್ತಲಿನ 10ಕ್ಕೂ ಹೆಚ್ಚು ರೌಡಿಗಳ ಮನೆ ಮೇಲೆ ಇನ್‌ಸ್ಪೆಕ್ಟರ್ ಡಿ.ಕೆ. ಪಾಟೀಲ ನೇತೃತ್ವದ ತಂಡ ದಾಳಿ ನಡೆಸಿತು. ಕಾನೂನು ಬಾಹಿರವಾಗಿ ಆಯುಧಗಳನ್ನು ಸಂಗ್ರಹಿಸಿಟ್ಟುಕೊಂಡಿರುವ ಬಗ್ಗೆಯೂ ಪರಿಶೀಲನೆ ನಡೆಸಿತು. ರೌಡಿಗಳ ದೈನಂದಿನ ಕಾರ್ಯ, ಅವರ ಓಡಾಟ, ಮನೆಯವರ ಮಾಹಿತಿಯನ್ನು ಪಡೆದರು. ಈ ಹಿಂದೆ ಅವರು ಪಾಲ್ಗೊಂಡಿದ್ದ ಅಪರಾಧ ಚಟುವಟಿಕೆಗಳ ಮಾಹಿತಿಯನ್ನು ಕುಟುಂಬದವರಿಗೆ ತಿಳಿಸಿ, ಜಾಗೃತೆಯಿಂದ ಇರಲು ಎಚ್ಚರಿಕೆ ನೀಡಿದರು.

### ರಾಯಚೂರು ಜಿಲ್ಲೆಗೆ ಬಂಪರ್

• ಉದಯವಾಹಿನಿ, ರಾಯಚೂರು

ವಿಧಾನ ಪರಿಷತ್ತಿನ 11 ಸ್ಥಾನಗಳಿಗೆ ನಡೆಯಲಿರುವ ಚುನಾವಣೆಯಲ್ಲಿ ಕಲ್ಯಾಣಕ್ಕೆ ಸಿಂಹಪಾಲು ದೊರೆತರೆ, ರಾಯಚೂರು ಜಿಲ್ಲೆಗೆ ಬಂಪರ್ ಲಭಿಸಿದೆ. ರಾಜ್ಯ ವಿಧಾನ ಪರಿಷತ್ತಿಗೆ ಆಯ್ಕೆ ಮಾಡಲು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನಿರ್ದೇಶನದ ಮೇರೆಗೆ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ ಅವರು ಜಿಲ್ಲೆಯ ಮೂವರ ಹೆಸರನ್ನು ಅಂತಿಮಗೊಳಿಸಿದ್ದಾರೆ. ವಿಧಾನ ಪರಿಷತ್ ಸ್ಥಾನಗಳಿಗೆ ಚುನಾವಣೆ ಘೋಷಣೆಯಾದ ಬೆನ್ನಲ್ಲೇ ಹಾಲಿ ಸಚಿವ ಎನ್.ಎಸ್. ಬೋಸರಾಜು, ಕೆಪಿಸಿಸಿ ಕಾರ್ಯಾಧ್ಯಕ್ಷ ವಸಂತಕುಮಾರ ಹಾಗೂ ಬಸನಗೌಡ ಬಾದರ್ಲಿ ಹೆಸರು ಕೇಳಿ ಬಂದಿದ್ದವು. ಪಕ್ಷ ಕೊನೆಗೂ ಈ ಮೂವರ ಸೇವೆಯನ್ನು ಪರಿಗಣಿಸಿ ವಿಧಾನ ಪರಿಷತ್‌ಗೆ ಆಯ್ಕೆ ಮಾಡಲು ನಿರ್ಧರಿಸಿದೆ.

ಮಾನ್ವಿ ವಿಧಾನಸಭಾ ಕ್ಷೇತ್ರದಿಂದ 1999 ಹಾಗೂ 2004ರಲ್ಲಿ ಸತತ ಎರಡು ಬಾರಿ ಶಾಸಕರಾಗಿದ್ದ ಎನ್.ಎಸ್. ಬೋಸರಾಜು, 2008ರಲ್ಲಿ ಮಾನ್ವಿ ಕ್ಷೇತ್ರ ಪುನರ್ ವಿಂಗಡಣೆಯಾಗಿ ಪರಿಶಿಷ್ಟ ಪಂಗಡಕ್ಕೆ ಮೀಸಲಾದ ಕಾರಣ ಸ್ಪರ್ಧೆಯಿಂದ ವಂಚಿತರಾಗಿದ್ದರು. 2013ರಲ್ಲಿ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಸ್ತಿತ್ವಕ್ಕೆ ಬಂದ ನಂತರ ಅವರನ್ನು ವಿಧಾನ ಪರಿಷತ್ತಿನ ಸದಸ್ಯರನ್ನಾಗಿ ಆಯ್ಕೆ ಮಾಡಲಾಗಿತ್ತು. ಕಳೆದ ವರ್ಷ ಮತ್ತೆ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಅವರನ್ನು ಸಣ್ಣ ನೀರಾವರಿ ಇಲಾಖೆಯ ಸಚಿವರನ್ನಾಗಿ ಮಾಡುವ ಜೊತೆಗೆ ಬಾಕಿ ಉಳಿದ ಒಂದು ವರ್ಷದ ಅವಧಿಗೆ ವಿಧಾನ ಪರಿಷತ್ತಿಗೆ ಸದಸ್ಯರನ್ನಾಗಿ ಮಾಡಲಾಗಿತ್ತು. ಇದೀಗ ಅವಧಿ ಮುಗಿದ ನಂತರ ಕಾಂಗ್ರೆಸ್ ಹೈಕಮಾಂಡ್ ಮತ್ತೆ ಅವರ ಸಚಿವ ಸ್ಥಾನವನ್ನೂ ಭದ್ರಪಡಿಸಲು ತೀರ್ಮಾನಿಸಿದೆ.

# ವಿದ್ಯುತ್ ಸ್ಥಗಿತ; ವಿರುಪಾಪುರ ಸರಣಿಗಳ್ಳತನ ಶ್ವಾನದಳದಿಂದ ಪರಿಶೀಲನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಸಿಂಧನೂರು

ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ. ವಿದ್ಯುತ್ ಸ್ಥಗಿತಗೊಂಡಿರೆ ಸಾಕು ಕಳ್ಳರು ಕಾಟ ಶುರುವಾಗಿದ್ದು ನೋಡಿದರೆ. ಭಾನುವಾರ ರಾತ್ರಿ ತಾಲ್ಲೂಕಿನ ವಿರುಪಾಪುರ ಗ್ರಾ ಮದಲ್ಲಿ ಐದು ಮನೆಗಳು ಕಳ್ಳತನವೇ ಸಾಕ್ಷಿಯಾಗಿದೆ. ತಾಲ್ಲೂಕಿನಾದ್ಯಂತ ನಿನ್ನೆ ರಾತ್ರಿ ಮಳೆ ಬ ರುತ್ತಿದ್ದಂತೆ ವಿದ್ಯುತ್ ಸ್ಥಗಿತಗೊಂಡಿದ್ದ. ನೋಡಿ ಭಾನು ವಾರ ರಾತ್ರಿ ವಿರುಪಾಪುರ ಗ್ರಾಮದಲ್ಲಿ ಕಿರಣ್ ಅಂಗಡಿ ಹಾಗೂ ಖಾಸಗಿ ಆಸ್ಪತ್ರೆಯಲ್ಲಿ. ಮೌನೇಶ್ ತಂದೆ ಈರ ಪ್ಪ. ಡಾ. ಶಂಕರಗೌಡ ಬಪ್ಪೂರ ಆಸ್ಪತ್ರೆ. ಹನುಮಂತ ಬೇವಿನ ಮನೆ. ಹಾಗೂ ಬೈಕ್ ಸಹ ಸುಮಾರು 20 ತೊಲೆ ಬಂಗಾರ. ಅರ್ಧ ಕೆಜಿ ಬೆಳ್ಳಿ. 02 ಲಕ್ಷ ರೂ ಹಣ ಕಳ್ಳತನ ಯಾಗಿದ್ದು ಎಂದು ತಿಳಿದು ಬಂದಿದೆ.

ಪ್ರತಿ ದಿನ ರಾತ್ರಿ ಮನೆ ಹೊರಗೆ ಮಲಗುತ್ತಿದ್ದರು.

ಭಾನುವಾರ ರಾತ್ರಿ ಮಳೆ ಬರುತ್ತಿದ್ದಂತೆ ಎಲ್ಲರೂ ಮನೆಯೊಳಗೆ ಮಲಗಿದ್ದರಿಂದ ಈ ಕಳ್ಳತನಕ್ಕೆ ಕಾರಣವಾಗಿದೆ ಎಂದು ಊರಿನ ಸಾರ್ವಜನಿಕರು ಮಾತಾಡುತ್ತಿದ್ದರು. ಅಲ್ಲಿ ಇರುವ ಮೂರು ಮನೆಯವರು ಬೇರೆ ಊರುಗಳಿಗೆ ಹೋಗಿರುವುದನ್ನು ಗಮನಿಸಿ. ಭಾನುವಾರ ರಾತ್ರಿ ವಿದ್ಯುತ್ ಸ್ಥಗಿತಗೊಂಡಿದ್ದು. ಗಮನಿಸಿ ಮನೆಗಳನ್ನು ಕಳ್ಳವು ಮಾಡಲಾಗಿದೆ ಎಂದು ತಿಳಿದಿದ್ದು. ಈ ವಿಷಯ ತಿಳಿದ ಸ್ಥಳಕ್ಕೆ ಆಗಮಿಸಿ ಪೋಲಿಸ್ ಇಲಾಖೆ ತಮ್ಮ ಶ್ವಾನ ದಳ ಮೂಲಕ ಪರಿಶೀಲನೆ. ಕಳ್ಳತನ ಸ್ಥಳಕ್ಕೆ ಡಾಗ್ ಸ್ಕ್ಯಾಡ್ ಮೂಲಕ ಪರಿಶೀಲಿಸಿದಾಗ ಕಳ್ಳತನ ಆಗಿರುವ ಮನೆಗಳಲ್ಲಿ ಓಡಾಡಿ ಕಳ್ಳತನ ಮಾಡಿರುವ ಸ್ಥಳವನ್ನು ಗಮನಿಸುತ್ತು. ಈ ಸಂದರ್ಭದಲ್ಲಿ ಸ್ಥಳಕ್ಕೆ ಗ್ರಾಮೀಣ ಸಿಪಿಐ ಸುನಿಲ್ ವಿ ಮೂಲಿಮನಿ. ಗ್ರಾಮೀಣ ಪಿಎಸ್‌ಐ ಮಹಮ್ಮದ್ ಇಷಾಕ್. ಕಳ್ಳತನ ಯಾಗಿರವ ಮನೆಗಳಿಗೆ ಬೇಟಿ ನೀಡಿ ಸ್ಥಳವನ್ನು ಪರಿಶೀಲನೆ ಮಾಡಿ ದೂರುದಾರ ಮೂಲಕ ಗ್ರಾಮೀಣ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡು ಕಳ್ಳರು ಪತ್ತೆಗೆ ಪೊಲೀಸರು ಬಲೆ ಬೀಸಿದ್ದಾರೆ.

# ಪ್ರತಿಬಾರಿ ಮಳೆ ಬಂದಾಗಲೂ ಇದೇ ಪರಿಸ್ಥಿತಿ


ಉದಯವಾಹಿನಿ ಚಿತ್ರ

• ರವಿ ತೇಲಂಗಿ

• ಉದಯವಾಹಿನಿ, ಮುದ್ದೇಬಿಹಾಳ

ಮತ್ತೆ ಅಡವಿ ಹುಲಗಬಾಳ ಸೇತುವೆ ಒಡೆದಿದೆ

ಮುದ್ದೇಬಿಹಾಳ ತಾಲ್ಲೂಕಿನ ಅಡವಿ ಹುಲಗಬಾಳ ಗ್ರಾಮದಿಂದ ಅಡವಿ ಹುಲಗಬಾಳ ತಾಂಡಾಕ್ಕೆ ಹೋಗುವ ಸೇತುವೆ ಮುಂಗಾರು ಆರಂಭದ ಬಾರಿ ಮಳೆಗೆ ಒಡೆದು ಸಾರ್ವಜನಿಕ ಸಂಪರ್ಕ ಕಡೆ ದಿದೆ ಇದು ಮೊದಲ ಬಾರಿ ಏನಲ್ಲಾ ಈ ಸೇತುವೆ ಒಡೆದದ್ದು ಕಳೆದ ವರ್ಷದ ಮಳೆಗೂ ಒಡೆದು ತಾಂಡಾ ನಿವಾಸಿಗಳು ನಡುಗಡ್ಡೆಗೆ ಸಿಲುಕಿದ್ದರು ಮತ್ತೆ ಈಗ ಇದು ಪುನರ್ನಾವರ್ತನೆ ಆಗಿದೆ ಅಷ್ಟೇ ಈ ಸೇತುವೆ ದುರಸ್ತಿ ಸರಿಯಾಗಿ ಮಾಡದ ಕಾರಣ ಮತ್ತೆ ಮತ್ತೆ ಮಳೆಗೆ ಈ ಅವಾಂತರ ಸೃಷ್ಟಿಯಾಗುತ್ತಿದೆ ಸಂಬಂಧಿಸಿದ ಇಲಾಖೆ ಅಧಿಕಾರಿಗಳಾಗಲಿ ತಾಲ್ಲೂಕು ಆಡಳಿತ ಸಮ ಸ್ಯೆ ಶಾಶ್ವತ ಪರಿಹಾರ ನೀಡದೆ ಇದ್ದರೆ ತಹಶೀಲ್ದಾರ ಕಚೇರಿಯ ಮುಂದೆ ಪ್ರತಿಭಟಿಸುವ ಎಚ್ಚರಿಕೆಯನ್ನು ತಾಂಡಾನಿವಾಸಿಗಳಾದ ಬಸ್ಸು ಚವ್ಹಾಣ, ಶೇಖಪ್ಪ ಚವ್ಹಾಣ, ಭೀಮಪ್ಪ ರಾಠೋಡ,ನಾರಾಯಣಪ್ಪ ಚವ್ಹಾಣ, ರೂಪಸಿಂಗ್ ಚವ್ಹಾಣ, ಸೋನುಬಾಯಿ ಚವ್ಹಾಣ, ಭೀಮುಬಾಯಿ ಚವ್ಹಾಣ, ಗುರುಬಾಯಿ ರಾಠೋಡ ಎಚ್ಚರಿಕೆ ನೀಡಿದ್ದಾರೆ ಜನಪ್ರತಿನಿಧಿಗಳು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಸೇತುವೆ ದುರಸ್ತಿ ಮಾಡುವಂತೆ ಆಗ್ರಹಪಡಿಸಿದ್ದಾರೆ.

### ಮಳೆಗೆ ಡೂಂಕಮಡು ಸೇತುವೆ ಮುಳುಗಡೆ

**ಡೂಂಕಮಡು ಮುದ್ದೇಬಿಹಾಳ ಸಂಪರ್ಕ ಸೇತುವೆ ರವಿವಾರ ರಾತ್ರಿ ಸುರಿದ ಭಾರಿ ಮಳೆಯಿಂದ ಸಂಪೂರ್ಣ ಮುಳಗಿದೆ ಇದರಿಂದ ಡೂಂಕಮಡುದಿಂದ ,ಅಡವಿ ಸೋಮನಾಳ, ಮುದ್ದೇಬಿಹಾಳ ಸಂಪರ್ಕ ಕಡಿದಿದೆ ಇದರಿಂದ ಶಾಲಾ ಮಕ್ಕಳಿಗೆ ಗ್ರಾಮಸ್ಥರ ಸಂಚಾರಕ್ಕೆ ಅನಾನುಕೂಲ ಉಂಟಾಗಿದೆ ಪ್ರತಿ ಭಾರಿ ಮಳೆಬಂದಾಗಲೂ ಇದೆ ಪರಿಸ್ಥಿತಿ ರೋಸಿಹೋಗಿರುವ ಗ್ರಾಮದ ದಲಿತ ಮುಖಂಡ ದೇವೇಂದ್ರ ಹೂಸಮನಿ, ದ್ಯಾಮಣ್ಣ ಕೂಡಲಗಿ, ನಿಂಗಪ್ಪ ಚಳ್ಳಗಿ, ನಿಂಗಣ್ಣ ಪೂಜಾರಿ ಬಸವರಾಜ ಜೋಗಂಡಭಾವಿ ಮುತ್ತು ಬಿಂಗೇರಿ ಮುತ್ತು ಕೂಡ್ಲಿಗಿ, ಮತ ಕೇಳಲು ಬರುವ ಜನಪ್ರತಿನಿಧಿಗಳು ಗ್ರಾಮಸ್ಥರ ಸಮಸ್ಯೆ ಏನೆಂದು ಅರಿತು ಪರಿಹಾರ ನೀಡಬೇಕು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೇತುವೆ ಮೇಲ್ದರ್ಜೆಗೆ ಏರಿಸಲು ಸೂಚಿಸಬೇಕು ಎಂದು ಆಗ್ರಹಿಸಿದ್ದಾರೆ.**

# ದುರಸ್ಥಿಗೆ ಕಾದಿರುವ ಸರ್ಕಾರಿ ಶಾಲೆಗಳು

• ಉದಯವಾಹಿನಿ, ಚಿಕ್ಕಮಗಳೂರು


ಉದಯವಾಹಿನಿ ಚಿತ್ರ

ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ಸಂಖ್ಯೆ ಕಡಿಮೆಯಾಗುತ್ತಿರುವುದು ಒಂದೆಡೆಯಾದರೆ, ಇತ್ತ ಶಾಲೆಗಳಲ್ಲಿ ಕಟ್ಟಡ ಕೂಡ ಹಾಳಾಗುತ್ತಿವೆ. ದುಸ್ಥಿತಿಯಲ್ಲಿರುವ 187 ಶಾಲೆಗಳು ಕಾಯಕಲ್ಪಕ್ಕೆ ಕಾಯುತ್ತಿವೆ.

ಜಿಲ್ಲೆಯಲ್ಲಿ ಸರ್ಕಾರಿ ಶಾಲೆಗಳು ಅಲ್ಲಲ್ಲಿ ಶಿಥಿಲಾವಸ್ತೆಯಲ್ಲಿದ್ದು, ಭಯದ ನಡುವೆ ವಿದ್ಯಾರ್ಥಿಗಳು ಪಾಠ ಕಲಿಯುತ್ತಿದ್ದಾರೆ.ಚಿಕ್ಕಮಗಳೂರು ನಗರದ ಮಧ್ಯದಲ್ಲಿರುವ ಪೋರ್ಟರ್ ಪೇಟೆ ಸರ್ಕಾರಿ ಶಾಲೆ ಮೇಲ್ಚಾವಣಿ ಅಲ್ಲಲ್ಲಿ ಬಿರುಕು ಬಿಟ್ಟಿದ್ದು, ಕಳಚಿ ಬೀಳುವ ಹಂತದಲ್ಲಿದೆ. ಮೇಲ್ಚಾವಣಿ, ಗೋಡೆ ಮುಟ್ಟಿದರೆ ಸಿಮೆಂಟ್ ಉದುರಿ ಬೀಳುತ್ತಿದ್ದು, ಮಳೆ ಬಂದರೆ ಇನ್ನಷ್ಟು ಹಾಳಾಗುವ ಆತಂಕ ಇದೆ. 2003ರಲ್ಲಿ ನಿರ್ಮಾಣವಾಗಿರುವ ಕಟ್ಟಡ ದುರಸ್ತಿ ಕಂಡಿಲ್ಲ. ಇದರ ನಡುವೆಯೇ ವಿದ್ಯಾರ್ಥಿಗಳು ಪಾಠ ಕಲಿಯುತ್ತಿದ್ದಾರೆ. ಇದು ಸರ್ಕಾರಿ ಶಾಲೆಯ ದುಸ್ತಿಗೆ ಉದಾಹರಣೆ. ಈ ರೀತಿಯ ಅನೇಕ ಶಾಲೆಗಲಿದ್ದು, ದುರಸ್ತಿ ಆಗಬೇಕಿದೆ.

ಐ.ಜಿ. ರಸ್ತೆಯಲ್ಲಿರುವ ಉರ್ದು ಶಾಲೆಯ ಮೇಲ್ಚಾವಣಿ ಸಂಪೂರ್ಣವಾಗಿ ಹಾಳಾಗಿದ್ದು, ದುರಸ್ತಿಯಾಗದಿದ್ದರೆ ಮಳೆಗಾಲದಲ್ಲಿ ನೀರು ಕೊಠಡಿ ಸೇರಲಿದೆ. ಈ ರೀತಿಯ ಒಂದಿಲ್ಲೊಂದು ಸಮಸ್ಯೆ ಹೊತ್ತಿರುವ 187 ಶಾಲೆಗಳನ್ನು ಶಿಕ್ಷಣ ಇಲಾಖೆ ಗುರುತಿಸಿದೆ.ಸರ್ಕಾರಿ, ಖಾಸಗಿ, ಅನುದಾನಿತ ಶಾಲೆಗಳು ಸೇರಿದಂತೆ ಒಟ್ಟು 1,924 ಶಾಲೆಗಳಿವೆ. ಶಿಕ್ಷಣ ಇಲಾಖೆ ವ್ಯಾಪ್ತಿಗೆ 1,402 ಶಾಲೆಗಳು ಒಳಪಡಲಿದ್ದು, ಉಳಿದಂತೆ ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ 95, ಅನುದಾನಿತ 122, ಖಾಸಗಿ 30, ಕೇಂದ್ರ ಸರ್ಕಾರದ ವ್ಯಾಪ್ತಿಗೆ ಒಳಪಡುವ 4 ಶಾಲೆಗಳಿವೆ. ಕಳೆದ ಬಾರಿಯ ಮಳೆ ಸೇರಿದಂತೆ ಹಲವು ಕಾರಣಗಳಿಂದ 187 ಶಾಲೆಗಳು ಶಿಥಿಲಾವಸ್ಥೆಯಲ್ಲಿವೆ.

**ಜಿಲ್ಲೆಯ ಹಲವು ಸರ್ಕಾರಿ ಶಾಲೆಗಳು ದಶಕಗಳೇ ಕಳೆದರೂ ಬಣ್ಣ ಕಂಡಿಲ್ಲ. ಬಿರುಕು ಬಿಟ್ಟಿರುವ ಗೋಡೆಗಳಿಗೆ ತೇಪೆ ಬಿದ್ದಿಲ್ಲ. ಕಿತ್ತು ಹೋಗಿರುವ ನೆಲಹಾಸು ಮುಚ್ಚಿಲ್ಲ. ಹಲವೆಡೆ ಶೌಚಾಲಯಗಳ ಸ್ಥಿತಿಯೂ ದುಸ್ತರ ಎಂದು ಪೋಷಕರು ದೂರುತ್ತಾರೆ.**

# ಸುರಿದ ಭಾರಿ ಮಳೆಗೆ ಕುಸಿದು ಬಿದ್ದ ಮನೆಗಳು

• ಉದಯವಾಹಿನಿ, ಮುದ್ದೇಬಿಹಾಳ

ರವಿವಾರ ರಾತ್ರಿ ಸುರಿದ ಭಾರಿ ಮಳೆಗೆ ಮುದ್ದೇಬಿಹಾಳ ತಾಲ್ಲೂಕಿನ ಹಲವಡೆ ಮನೆಗಳು ಕುಸಿದು ಬಿದ್ದರೆ ಅಡವಿ ಹುಲಗಬಾಳ ಸೇತುವೆ ಒಡೆದು ಹೋಗಿದೆ ಮತ್ತು ಡೂಂಕಮಡು ಗ್ರಾಮದ ಸೇತುವೆ ನೀರಿನಲ್ಲಿ ಮುಳಗಿದೆ.

**ಮುಂಗಾರು ಆರಂಭಕ್ಕೆ ತಾಲ್ಲೂಕಿನ ಭಾರಿ ಮಳೆ ರವಿವಾರ ರಾತ್ರಿ, ಗುಡುಗು ಸಿಡಿಲಿನೊಂದಿಗೆ ಸುರಿದಿದೆ ತಡರಾತ್ರಿ 12:40 ಕ್ಕೆ ಆರಂಭಾದ ಮಳೆ ಬೆಳಗಿನ ಜಾವದ ವರಗೆ ಬಂದಿದೆ ಮುದ್ದೇಬಿಹಾಳ ಪಟ್ಟಣದಲ್ಲಿ 55.50ಮಿಮೀ ಮಳೆ ಆಗಿದ್ದರೆ ನಾಲತವಾಡ ಪಟ್ಟಣದಲ್ಲಿ 22.40 ಮಿಮೀ ,ಢವಳಗಿಯಲ್ಲಿ 120.00 ಮಿಮೀ ತಾಳಿಕೋಟೆಯಲ್ಲಿ 77.30 ಮಿಮೀ ಮಳೆ ಪ್ರಮಾಣ ದಾಖಲಾಗಿದೆ**



ಉದಯವಾಹಿನಿ ಚಿತ್ರ

**ತಾಲ್ಲೂಕಿನ ಕುಂಟೋಜಿ ಗ್ರಾಮದ ಮಲ್ಲನಗೌಡ ಬಿರಾದಾರ, ಢವಳಗಿ ಗ್ರಾಮದ ಭೀಮಪ್ಪ ಮಾದರ, ಗುರಲಿಂಗಪ್ಪ ಮೂಲಿಮನಿ, ಮತ್ತು ಚೊಂಡಿ ಗ್ರಾಮದ ಯಂಕವ್ವ ಪಾಟೀಲ್‌ರ ಮನೆಗಳು ಭಾಗಶಃ ಹಾನಿಯಾಗಿವೆ. ಎನ್‌ಡಿಆರ್‌ಎಫ್ ನಿಂದ ಪೂರ್ಣಪ್ರಮಾಣದಲ್ಲಿ ಕುಸಿದ ಮನೆಗಳಿಗೆ 120.000 ರೂ ಪರಿಹಾರ, ಶೇ15% ರಷ್ಟು ಹಾನಿಯಾಗಿದ್ದರೆ 6500 ರೂ. ಪರಿಹಾರ ನೀಡಲಾಗುತ್ತದೆ**

**- ಬಸವರಾಜ ನಾಗರಾಳ, ತಹಶೀಲ್ದಾರ**

# ಮರೆಯಾಗುತ್ತಿರುವ ಆಲೂಗಡ್ಡೆ ಕೃಷಿ

• ಉದಯವಾಹಿನಿ, ಅರಕಲಗೂಡು


ಉದಯವಾಹಿನಿ ಚಿತ್ರ

ತಾಲ್ಲೂಕಿನಲ್ಲಿ ಪ್ರಮುಖ ವಾಣಿಜ್ಯ ಬೆಳೆ ಆಲೂಗಡ್ಡೆ ಕೃಷಿ ದಿನೇ, ದಿನೇ ಕ್ಷೀಣಿಸುತ್ತಿದ್ದು, ತಾಲ್ಲೂಕಿನಿಂದಲೇ ಮರೆಯಾಗುವ ಹಂತ ಎದುರಾಗಿದೆ. 1980-90 ರ ದಶಕದಲ್ಲಿ ತಾಲ್ಲೂಕಿನ ಕಸಬಾ, ದೊಡ್ಡಮಗ್ಗೆ ಹಾಗೂ ಮಲ್ಲಿಪಟ್ಟಣ ಹೋಬಳಿಯ ಕೆಲ ಭಾಗದಲ್ಲಿ ಮುಂಗಾರು ಹಂಗಾಮಿನಲ್ಲಿ ಆಲೂಗಡ್ಡೆಯದ್ದೇ ಮೇಲಾಟ. ಬಂದರೆ ಅತ್ಯಧಿಕ ಲಾಭ, ಇಲ್ಲದಿದ್ದರೆ ಹಾಕಿದ ಬಂಡವಾಳವೂ ದೊರೆಯದೇ ರಸ್ತೆಯಲ್ಲಿ ಆಲೂಗಡ್ಡೆ ಚೆಲ್ಲಿ ಬರುವ ಸ್ಥಿತಿ.ರೈತರ ಬಾಯಲ್ಲಿ 'ಜೂಜಿನ ಬೆಳೆ' ಎಂದು ಹೆಸರಾಗಿದ್ದ ಆಲೂಗಡ್ಡೆಯನ್ನು ಬೆಳೆಯುವುದೇ ಪ್ರತಿಷ್ಠೆ ಎನಿಸಿತ್ತು. ಇಂತಿಷ್ಟು ಎಕರೆಯಲ್ಲಿ ಆಲೂಗಡ್ಡೆ ಬೆಳೆ ಮಾಡಿದ್ದೇನೆ ಎಂದು ರೈತರು ಹೆಮ್ಮೆಯಿಂದ ಹೇಳಿಕೊಳ್ಳುತ್ತಿದ್ದ ಕಾಲವಿತ್ತು. ತಾಲ್ಲೂಕಿನ ಮೂರು ಹೋಬಳಿಗಳ ವ್ಯಾಪ್ತಿಯಲ್ಲಿ 10 ಸಾವಿರ ಹೆಕ್ಟೇರ್‌ಗೂ ಹೆಚ್ಚಿನ ಪ್ರದೇಶದಲ್ಲಿ ಬೆಳೆಯುತ್ತಿದ್ದು, ಸೋಮವಾರ 600 ರಿಂದ 700 ಹೆಕ್ಟೇರ್‌ಗೆ ಕುಸಿದಿದೆ. ಈ ಬೆಳೆ ಕುರಿತು ರೈತರಲ್ಲಿ ಯಾವುದೇ ಆಸಕ್ತಿ ಉಳಿದಿಲ್ಲ. ಆಲೂಗಡ್ಡೆ ಬಗ್ಗೆ ಭಾವನಾತ್ಮಕ ನಂಟು ಹೊಂದಿರುವ ಕೆಲವೇ ರೈತರು ಮಾತ್ರ ಈ ಕೃಷಿಯನ್ನು ಮುಂದುವರಿಸಿಕೊಂಡು ಬರುತ್ತಿದ್ದಾರೆ.

ಒಂದೊಮ್ಮೆ ರೈತರ ಆರ್ಥಿಕ ಶಕ್ತಿ ವೃದ್ಧಿಸಲು ನೆರವಾಗಿದ್ದ ಈ ಬೆಳೆ ಗುಣಮಟ್ಟದ ಬಿತ್ತನೆ ಬೀಜದ ಕೊರತೆ, ರೋಗ ಬಾಧೆ, ಹೆಚ್ಚಿದ ಕೃಷಿ ವೆಚ್ಚ, ಬೆಳೆದ ಬೆಳೆಗೆ ದೊರಕದ ದರ, ಮಾರುಕಟ್ಟೆ ಸೌಲಭ್ಯ ಇಲ್ಲದಿರುವುದು, ಸರ್ಕಾರ ನೀಡುತ್ತಿದ್ದ ಪ್ರೋತ್ಸಾಹದ ನಿಲು ಗಡೆ, ಹವಾಮಾನದ ಬದಲಾವಣೆ, ಕುಂಠಿತಗೊಂಡ ಇಳುವರಿ ಹೀಗೆ ಹತ್ತು ಹಲವು ಕಾರಣಗಳು ರೈತರು ಈ ಕೃಷಿಯಿಂದ ವಿಮುಖರಾಗಲು ಕಾರಣವಾಗಿದೆ. ಅಂಗಾಂಶ ಕೃಷಿ ಮೂಲಕ ಆಲೂಗಡ್ಡೆ ಕೃಷಿಯನ್ನು ಪ್ರೋತ್ಸಾಹಿಸುವ ಯೋಜನೆಯೂ ರೈತರನ್ನು ಆಕರ್ಷಿಸುವಲ್ಲಿ ವಿಫಲವಾಗಿದೆ. ಹೀಗಾಗಿ ತಾಲ್ಲೂಕಿನಲ್ಲಿ ಮುಂದಿನ ದಿನಗಳಲ್ಲಿ ಆಲೂಗಡ್ಡೆ ಕೃಷಿ ಕಣ್ಮರೆಯಾದರೂ ಅಚ್ಚರಿಯೇನಿಲ್ಲ ಎಂದು ರೈತರು ಹೇಳುತ್ತಿದ್ದಾರೆ.

**ಅಂಗಾಂಶ ಕೃಷಿ ಮೂಲಕ ಆಲೂಗಡ್ಡೆ ಕೃಷಿಯನ್ನು ಪ್ರೋತ್ಸಾಹಿಸುವ ಯೋಜನೆಯೂ ರೈತರನ್ನು ಆಕರ್ಷಿಸುವಲ್ಲಿ ವಿಫಲವಾಗಿದೆ. ಹೀಗಾಗಿ ತಾಲ್ಲೂಕಿನಲ್ಲಿ ಮುಂದಿನ ದಿನಗಳಲ್ಲಿ ಆಲೂಗಡ್ಡೆ ಕೃಷಿ ಕಣ್ಮರೆಯಾದರೂ ಅಚ್ಚರಿಯೇನಿಲ್ಲ ಎಂದು ರೈತರು ಹೇಳುತ್ತಿದ್ದಾರೆ.**

# ನಿರ್ವಹಣೆ ಸಮಸ್ಯೆ, ಸುಳಿಗೆ ಮಿನಿ ಟ್ಯಾಂಕ್‌ಗಳು

• ಉದಯವಾಹಿನಿ, ಚಿತ್ರದುರ್ಗ


ಉದಯವಾಹಿನಿ ಚಿತ್ರ

ಕಿತ್ತು ಹೋದ ನಲ್ಲಿಗಳು, ಸಮೀಪದ ಗುಂಡಿಯಲ್ಲಿ ನಿಂತ ಮಲಿನ ನೀರು, ನಲ್ಲಿ ಸ್ಥಾನ ಆವರಿಸಿರುವ ತೆಂಗಿನ ನಾರು, ಕಳೆ ಬಟ್ಟೆ, ಮರದ ತುಂಡು, ಸದಾ ಪೋಲಾಗುವ ನೀರು..ಇದು ಜಿಲ್ಲೆಯ ನೀರಿನ ಮಿನಿ ಟ್ಯಾಂಕ್‌ಗಳ ದುಃಸ್ಥಿತಿ. ನಗರ ಸೇರಿದಂತೆ ಜಿಲ್ಲೆಯ ಬಹುತೇಕ ಭಾಗಗಳಲ್ಲಿ ಮಿನಿ ಟ್ಯಾಂಕ್‌ಗಳು ಸಂಪೂರ್ಣ ಹಾಳಾಗಿವೆ.

ನಗರದ ದೊಡ್ಡಪೇಟೆ, ಕಬೀರಾನಂದ ಆಶ್ರಮ, ಕಾಮನಬಾವಿ ಬಡಾವಣೆ, ಬಡಾಮಕಾನ್, ಜೆಜೆ ಹಟ್ಟಿ, ಜೆಸಿಆರ್, ಜೋಗಿಮಟ್ಟಿ ರಸ್ತೆ, ಐಯುಡಿಪಿ ಲೇಔಟ್ ಸೇರಿದಂತೆ ಬಹುತೇಕ ಭಾಗಗಳಲ್ಲಿ ನೀರಿನ ಟ್ಯಾಂಕ್‌ಗಳ ನಳಗಳು ಹಾಳಾಗಿವೆ. ಇದರಿಂದ ನೀರು ವ್ಯರ್ಥವಾಗುತ್ತಿದೆ. ಕುಡಿಯುವ ನೀರಿನ ಟ್ಯಾಂಕ್‌ಗಳನ್ನು ಸ್ಥಳೀಯ ಆಡಳಿತ, ಜಿಲ್ಲಾ ಪಂಚಾಯಿತಿಯಿಂದ ನಿರ್ಮಿಸಲಾಗಿದೆ. ನಿತ್ಯ ಟ್ಯಾಂಕ್‌ಗಳಿಗೆ ಬೋರ್‌ವೆಲ್‌ನಿಂದ ನೀರು ಪೂರೈಸಲಾಗುತ್ತದೆ. ಆದರೆ, ಟ್ಯಾಂಕ್‌ನ ನಳಗಳು ಹಾಳಾಗಿರುವುದರಿಂದ ನೀರು ಪೋಲಾಗುತ್ತಿದೆ. ನೀರು ವ್ಯರ್ಥವಾಗುವುದನ್ನು ತಡೆಯಲು ತೆಂಗಿನ ನಾರು, ಮೆಕ್ಕೆಜೋಳದ ದಂಟನ್ನು ಪೈಪ್‌ಗೆ ಡ್ಡಲಾಗಿ ಇರಿಸಲಾಗುತ್ತಿದೆ. ಆದರೂ ನೀರು ವ್ಯರ್ಥವಾಗುತ್ತಿದೆ. ಬರದ ಕಾರಣಕ್ಕೆ ಮಿನಿ ಟ್ಯಾಂಕ್‌ಗಳಿಗೆ ನೀರನ್ನು ಭರ್ತಿ ಮಾಡಿ ಪೂರೈಸಲಾಗುತ್ತಿತ್ತು. ಆದರೆ ನೀರಿನ ಹಂಚಿಕೆ, ಪೂರೈಕೆ ವ್ಯವಸ್ಥೆಯಲ್ಲಿನ ಲೋಪಗಳನ್ನು ಸರಿಪಡಿಸಿಕೊಳ್ಳಲು ನಗರ ಸ್ಥಳೀಯ ಸಂಸ್ಥೆಗಳು ಉತ್ಸುಕತೆ ತೋರದ ಕಾರಣ ಸಾರ್ವಜನಿಕರು ಸಮಸ್ಯೆ ಎದುರಿಸುವಂತಾಗಿದೆ.

ಒಂದು ಬಿಂದಿಗೆ ನೀರಿಗೂ ಜನರು ಪರದಾಡುವ ಪರಿಸ್ಥಿತಿ ಮಾತ್ರ ಬದಲಾಗಿಲ್ಲ. ಮಿನಿ ಟ್ಯಾಂಕ್‌ಗಳು ಕೊಳವೆ ಬಾವಿ ನೀರನ್ನು ಅವಲಂಬಿಸಿವೆ. ಲೆಕ್ಕದಲ್ಲಿ ಎರಡು ದಿನಕ್ಕೊಮ್ಮೆ ಇದ್ದರೂ ನಾಲ್ಕು ದಿನ, ಆರು ದಿನ, ಎಂಟು ದಿನಕ್ಕೊಮ್ಮೆ ಸರದಿಯ ಪ್ರಕಾರ ಬಡಾವಣೆಗಳಿಗೆ ನೀರು ಪೂರೈಸಲಾಗುತ್ತಿದೆ. ಆದರೆ, ನಿರ್ವಹಣೆ ಇಲ್ಲದೆ ನೀರು ಪೋಲಾಗುತ್ತಿದೆ.

ನಗರದ ಕೊಳಚೆ ಪ್ರದೇಶಗಳ ಟ್ಯಾಂಕ್‌ಗಳ ಸ್ಥಿತಿ ಹೇಳತೀರದಾಗಿದೆ. ಬಹುತೇಕ ಕಡೆ ನಲ್ಲಿಗಳು, ಸಿಮೆಂಟ್ ಮುಚ್ಚಳಿಕೆಗಳೇ ಕಾಣೆಯಾಗಿವೆ. ಇನ್ನೂ ಕೆಲವೆಡೆ ಟ್ಯಾಂಕ್‌ಗೆ ಅಳವಡಿಸಿದ ಕಬ್ಬಿಣದ ಪೈಪ್‌ಗಳನ್ನು ಕಿತ್ತು ಹಾಕಲಾಗಿದೆ. ಕೊಳವೆ ಬಾವಿಯಿಂದ ನೀರು ಪೂರೈಸುತ್ತಿದ್ದಂತೆಯೇ ನೀರು ಚರಂಡಿಗೆ ಹರಿಯುತ್ತಿದೆ. ಕವಾಡಿಗರ ಹಟ್ಟಿ ದುರ್ಘಟನೆ ಬಳಿಕ ಜಿಲ್ಲೆಯ ಎಲ್ಲಾ ಟ್ಯಾಂಕ್‌ಗಳನ್ನು ನಿಯಮಿತವಾಗಿ ಸ್ವಚ್ಛಗೊಳಿಸಲು ಜಿಲ್ಲಾಡಳಿತ ಆದೇಶಿಸಿತ್ತು. ಆದರೆ ಕೆಲ ದಿನದ ಬಳಿಕ ಪುನಃ ನಿರ್ವಹಣೆ ಸಮಸ್ಯೆ ಎದುರಿಸುವಂತಾಗಿದೆ.

**ಚಿತ್ರದುರ್ಗ ನಗರದ ಕಬೀರಾನಂದ ಬಡಾವಣೆಯಲ್ಲಿ ಸಂಪೂರ್ಣ ಹಾಳಾಗಿರುವ ಮಿನಿ ಟ್ಯಾಂಕ್ ನಾಯಕನಹಟ್ಟಿ ಪಟ್ಟಣದ ಅಂಬೇಡ್ಕರ್ ನಗರದಲ್ಲಿ ಚರಂಡಿ ಪಕ್ಕದಲ್ಲಿರುವ ಕುಡಿಯುವ ನೀರಿನ ಮಿನಿ ಟ್ಯಾಂಕ್ ದುಃಸ್ಥಿತಿ ಹಿರಿಯೂರು ತಾಲ್ಲೂಕಿನ ಬುರುನರೊಪ್ಪ ಗ್ರಾಮದಿಂದ ಭರಂಪುರ ಕಡೆ ಹೋಗುವ ರಸ್ತೆ ಬದಿಯಲ್ಲಿ ಕೊಳಚೆ ನೀರು ನಿಂತಿರುವುದು ಎಸ್.ಜೆ.ಸೋಮಶೇಖರ್ ಎಂ.ರೇಣುಕಾ ಸರೋಜಮ್ಮ**

# ಮುಖ್ಯರಸ್ತೆ ಸೇರುವಲ್ಲಿನ ಕಿರುಸೇತುವೆಗೆ ತಡೆಗೋಡೆಯೇ ಇಲ್ಲ

## ವಾರಗಳ ಹಿಂದೆ ನಗರದಲ್ಲಿ ಸುರಿದ ಮಳೆಗೆ ನಗರದ ಕೊಟ್ಟಾರ ಬಳಿಯ ಅಬ್ಬಕ್ಕನಗರ ಪ್ರದೇಶದಲ್ಲಿ ಸೃಷ್ಟಿಯಾದ ಪ್ರವಾಹ

• ಉದಯವಾಹಿನಿ, ಮಂಗಳೂರು


ಉದಯವಾಹಿನಿ ಚಿತ್ರ

ನಗರದ ಕೊಟ್ಟಾರ ಚೌಕಿಯಿಂದ ಆಕಾಶ ಭವನ, ಜಲ್ಲಿಗುಡ್ಡೆ ಕಡೆಗೆ ಹೋಗುವ ರಸ್ತೆಯೊಂದು ಸಂಪರ್ಕ ಕಲ್ಪಿಸುತ್ತದೆ. ಈ ರಸ್ತೆಯು ಮುಖ್ಯ ರಸ್ತೆಯನ್ನು ಸೇರುವಲ್ಲಿನ ಕಿರುಸೇತುವೆಗೆ ತಡೆಗೋಡೆಯೇ ಇಲ್ಲ. ಮಳೆಗಾಲದಲ್ಲಿ ಪ್ರವಾಹ ಉಂಟಾದಾಗ ಇಲ್ಲಿ ರಸ್ತೆ ಯಾವುದು- ಚರಂಡಿ ಯಾವುದೆಂದೇ ತಿಳಿಯದು!

ಪ್ರವಾಹ ಕಾಲದ ಮೃತ್ಯು ಕೂಪ

ವಾರಗಳ ಹಿಂದೆ ನಗರದಲ್ಲಿ ಸುರಿದ ಮಳೆಗೆ ನಗರದ ಕೊಟ್ಟಾರ ಬಳಿಯ ಅಬ್ಬಕ್ಕನಗರ ಪ್ರದೇಶದಲ್ಲಿ ಸೃಷ್ಟಿ ಯಾದ ಪ್ರವಾಹ ಈ ವರ್ಷದ ಮೊದಲ ಜೀವ ಬಲಿಯನ್ನು ಪಡೆಯಿತು. ಮಳೆ ನೀರು ಹರಿಯುವ ಚರಂಡಿ ಉಕ್ಕಿ ಪಕ್ಕದ ರಸ್ತೆಗೆ ನೀರು ಆವರಿಸಿತ್ತು. ರಸ್ತೆ ಹಾಗೂ ಚರಂಡಿಗಳ ನಡುವೆ ವ್ಯತ್ಯಾಸ ತಿಳಿಯದ ಸ್ಥಿತಿ ನಿರ್ಮಾಣವಾಗಿತ್ತು. ಈ ಪ್ರವಾಹದ ಸೆಳೆತಕ್ಕೆ ಸಿಲುಕಿದ ಆಟೊ ರಿಕ್ಷಾವೊಂದು ಚರಂಡಿ ನೀರಿಗೆ ಬಿದ್ದು, ಚಾಲಕ ದೀಪಕ್ ಆಚಾರ್ಯ ಅಸುನೀಗಿದ್ದರು. ಪ್ರವಾಹ ಉಂಟಾಗುವ ಪ್ರದೇಶಗಳಲ್ಲಿ ಮಳೆ ನೀರು ಹರಿಯುವ ಚರಂಡಿಗೆ ತಡೆಗೋಡೆಯ ರಕ್ಷಣೆ ಇಲ್ಲದಿದ್ದರೆ, ಅದು ಎಷ್ಟು ಅಪಾಯಕಾರಿ ಆಗಬಲ್ಲುದು ಎಂಬುದನ್ನು ಈ ದುರ್ಘಟನೆ ಜಾಹೀರು ಮಾಡಿದೆ.

ಪ್ರವಾಹದ ಸಂದರ್ಭದಲ್ಲಿ ದುರ್ಘಟನೆಗೆ ಕಾರಣವಾಗಬಲ್ಲ ಅನೇಕ ರಸ್ತೆಗಳು, ಕಿರುಸೇತುವೆಗಳು ನಗರದಲ್ಲಿ ಅಲ್ಲಲ್ಲಿ ಇವೆ. ಮಳೆಗಾಲದಲ್ಲಿ ಇವು ಅಪಾಯಕ್ಕೆ ಕಾರಣವಾಗಬಲ್ಲವು ಎಂಬುದರ ಅರಿವಿದ್ದರೂ ಮಳೆ ನೀರು ಹರಿಯುವ ಚರಂಡಿ ಪಕ್ಕ ತಡೆಗೋಡೆ ನಿರ್ಮಿಸುವ ಕಾರ್ಯಕ್ಕೆ ಪಾಲಿಕೆ ಇನ್ನು ಕ್ರಮ ವಹಿಸಿಲ್ಲ. ಇಂತಹ ಅಪಾಯಕಾರಿ ತಾಣಗಳ ಪೈಕಿ ಕೆಲವೊಂದರ ವಿವರಗಳು ಇಲ್ಲಿದೆ.

ಕೊಟ್ಟಾರ- ಜಲ್ಲಿಗುಡ್ಡೆ ಆಕಾಶಭವನ ಸಂಪರ್ಕ ರಸ್ತೆ ಪಂಪ್ ಹೌಸ್ ಪಕ್ಕದಲ್ಲಿ ಬಂದು ಕೊಟ್ಟಾರದ ಮುಖ್ಯ ರಸ್ತೆಗೆ ಸೇರುತ್ತದೆ. ಜೋರು ಮಳೆಯಾದಾಗ ಇಲ್ಲಿ ರಸ್ತೆ ಮೇಲೆ ಎರಡು ಅಡಿಗಳಷ್ಟು ನೀರು ಇರುತ್ತದೆ. ರಸ್ತೆ ಮತ್ತು ಚರಂಡಿ ಒಂದಾದಾಗ ಇಲ್ಲಿ ವಾಹನ ಚಲಾಯಿಸುವುದು ಬಲು ಅಪಾಯಕಾರಿ ಎನ್ನುತ್ತಾರೆ ಸ್ಥಳೀಯರಾದ ಮಂಜುನಾಥ.

ಈ ಕಿರು ಸೇತುವೆ ನಿರ್ಮಿಸಿ 10 ವರ್ಷ ಮೇಲಾಯಿತು. ಇಲ್ಲಿ ಒಂದು ಪುಟ್ಟ ತಡೆಯನ್ನು ಕಟ್ಟಿದ್ದರು, ಆದರೆ ಅದು ಮೂರೇ ತಿಂಗಳಲ್ಲಿ ಕಿತ್ತುಹೋಗಿದೆ. ಅಂದಿನಿಂದ ದ್ವಿಚಕ್ರ ವಾಹನ ಸವಾರರು ಇಲ್ಲಿ ಅಪಾಯವನ್ನು ಬಗಲಲ್ಲಿ ಕಟ್ಟಿಕೊಂಡೇ ಓಡಾಡುತ್ತಿದ್ದಾರೆ. ಈ ಕಿರು ಸೇತುವೆ ಬಳಿ ದ್ವಿಚಕ್ರವಾಹನ ಚರಂಡಿಗೆ ಉರುಳಿದ ಮೂರು ದುರ್ಘಟನೆಗಳು ಸಂಭವಿಸಿವೆ. ಇಲ್ಲಿ ಕಿರು ಸೇತುವೆಗೆ ಮತ್ತು ಚರಂಡಿ ನಡುವೆ ತಡೆಗೋಡೆ ಕಟ್ಟದಿದ್ದರೆ ಮಳೆಗಾಲದಲ್ಲಿ ಮತ್ತೆ ಅವಘಡ ಸಂಭವಿಸುವ ಸಾಧ್ಯತೆ ಇದೆ' ಎಂದರು.

ಕೊಟ್ಟಾರ ಬಳಿ ಜಿಲ್ಲಾ ಪಂಚಾಯಿತಿ ಕಚೇರಿ ಮತ್ತು ರಾಷ್ಟ್ರೀಯ ಹೆದ್ದಾರಿ ನಡುವೆಯೂ ಮಳೆ ನೀರು ಚರಂಡಿ ಹರಿಯುತ್ತದೆ. ಅದರ ಪಕ್ಕದಲ್ಲೇ ಕಿರು ಕಚ್ಚಾ ರಸ್ತೆ ಇದೆ. ಚರಂಡಿ ಉಕ್ಕಿದರೆ ರಸ್ತೆಗೂ ಚರಂಡಿಗೂ ವ್ಯತ್ಯಾಸ ತಿಳಿಯದಂತಾಗುತ್ತದೆ.

ಆನೆಗುಂಡಿ-ಕಾಪಿಕಾಡ್ ನಡುವೆ ಮಳೆ ನೀರು ಚರಂಡಿ ಪಕ್ಕದ ರಸ್ತೆಯಲ್ಲಿ ಕೆಲವೆಡೆ ತಡೆಗೋಡೆ ನಿರ್ಮಿಸಲಾಗಿದೆ. ಆದರೆ ಇನ್ನೂ ಕೆಲವು ಕಡೆ ಈ ರಸ್ತೆಯು ತಡೆಗೋಡೆ ಇಲ್ಲದೇ ಅಪಾಯಕಾರಿಯಾಗಿಯೇ ಇದೆ. ನಗರದ ಸುಬ್ರಹ್ಮಣ್ಯ ಪುರ, ಅಬ್ಬಕ್ಕ ನಗರದಲ್ಲಿ ಹೊಸತಾಗಿ ನಿರ್ಮಿಸಿದ ರಸ್ತೆಗಳ ಪಕ್ಕದಲ್ಲೇ ಚರಂಡಿ ಇದೆ. ಇಲ್ಲಿ ಎಲ್ಲೂ ತಡೆಗೋಡೆ ಇಲ್ಲ.

**ರಸ್ತೆ ಪಕ್ಕದ ಮಳೆ ನೀರು ಚರಂಡಿಗೆ ತಡೆಗೋಡೆಯನ್ನೇ ನಿರ್ಮಿಸದ ಅಪಾಯಕಾರಿ ರಸ್ತೆಗಳು ನಗರದ ಅಲ್ಲಲ್ಲಿ ಕಾಣ ಸಿಗುತ್ತವೆ. ಸ್ಮಾರ್ಟ್ ಸಿಟಿ ಯೋಜನೆಯಲ್ಲಿ ಕೈಗೆತ್ತಿ ಕೊಂಡ ಕಾಮಗಾರಿಯನ್ನು ಗಡುವಿನ ಒಳಗೆ ಮುಗಿಸುವ ತರಾತುರಿಯಲ್ಲಿ ಅನೇಕ ಕಡೆ ಚರಂಡಿ ಪಕ್ಕ ತಡೆಗೋಡೆ ನಿರ್ಮಿಸಿಯೇ ಇಲ್ಲ**

**-ಶುಭಕರ, ಕೋಡಿಕಲ್‌ನ ರಿಕ್ಷಾ ಚಾಲಕ.**

**ನಗರದಲ್ಲಿ ಮೊದಲ ಮಳೆಯಲ್ಲಿ ಜೀವ ಬಲಿ ಪಡೆದ ದುರ್ಘಟನೆ ಪಾಲಿಕೆಗೆ, ಜನಪ್ರತಿನಿಧಿಗಳಿಗೆ ಪಾಠವಾಗಬೇಕು. ರಸ್ತೆ ನಿರ್ಮಿಸಿದರೆ ಸಾಲದು, ಅದರ ಪಕ್ಕದಲ್ಲಿ ಮಳೆ ನೀರು ಹರಿಯುವ ಚರಂಡಿಗೆ ಅಗತ್ಯವಿರುವ ಕಡೆ ತಡೆಗೋಡೆಯನ್ನೂ ನಿರ್ಮಿಸಬೇಕು' ಎಂದು ಅವರು ಒತ್ತಾಯಿಸಿದರು.**

# ಉದಯ ವಾಹಿನಿ

## ದೇಶ/ವಿದೇಶ

ಮಂಗಳವಾರ 04 ಜೂನ್ 2024



# ಎಎಪಿ ನಾಯಕರಿಗೆ 292.8 ಕೋಟಿ ರೂ. ಕಿಕ್‌ಬ್ಯಾಕ್: ಆರೋಪ

## ದಿಲ್ಲಿ ಅಬಕಾರಿ ನೀತಿ ಹಗರಣ: ಎಎಪಿ ನಾಯಕರಿಗೆ ಕೆಸಿಆರ್ ಪುತ್ರಿ ಕವಿತಾರಿಂದ 292 ಕೋಟಿ ಕಿಕ್‌ಬ್ಯಾಕ್



5.5 ಕೋಟಿ ರೂ. ಅಕ್ರಮ ಹಣ

**ಹೊಸದಿಲ್ಲಿ:** ದಿಲ್ಲಿ ಅಬಕಾರಿ ನೀತಿ ಹಗರಣಕ್ಕೆ ಸಂಬಂಧಿಸಿದಂತೆ ಬಂಧಿತರಾಗಿರುವ ತೆಲಂಗಾಣದ ಮಾಜಿ ಸಿಎಂ ಕೆ ಚಂದ್ರಶೇಖರ್ ರಾವ್ ಅವರ ಮಗಳು ಹಾಗೂ ಬಿಆರ್‌ಎಸ್ ನಾಯಕಿ ಕೆ ಕವಿತಾ, ಆಮ್ ಆದ್ಮಿ ಪಕ್ಷದ ನಾಯಕರಿಗೆ 292 ಕೋಟಿ ರೂ. ಕಿಕ್‌ಬ್ಯಾಕ್ ನೀಡಿದ್ದಾರೆ ಎಂದು ಜಾರಿ ನಿರ್ದೇಶನಾಲಯ ಆರೋಪಿಸಿದೆ.

ಸೌತ್ ಗ್ರೂಪ್ ಸದಸ್ಯರ ಜತೆ ಶಾಮೀಲಾಗಿದ್ದ ಕವಿತಾ, ಪ್ರಸ್ತುತ ರದ್ದಾಗಿರುವ ದಿಲ್ಲಿ ಲಿಕ್ಕರ್ ನೀತಿ ಯಲ್ಲಿ ಅಕ್ರಮ ಹಣ ವರ್ಗಾವಣೆ ಮೂಲಕ ಲಾಭ ಪಡೆದುಕೊಳ್ಳಲು ಎಎಪಿ ನಾಯಕರಿಗೆ 292.8 ಕೋಟಿ ರೂ. ಕಿಕ್ ಬ್ಯಾಕ್ ನೀಡಿರುವುದಾಗಿ ಇಡಿ ಚಾರ್ಜ್‌ಶೀಟ್ ಹೇಳಿದೆ. ಸಂಚು ಹಾಗೂ ಇಂಡೋ ಸ್ಪಿರಿಟ್ಸ್ ಸಂಸ್ಥೆ ರಚನೆಯ ಮೂಲಕ, 292.8 ಕೋಟಿ ರೂ ಮೊತ್ತದ ಅಕ್ರಮದ ಸೃಷ್ಟಿ, ಸ್ವಾಧೀನ ಹಾಗೂ ಬಳಕೆಯಲ್ಲಿ ಕವಿತಾ ಭಾಗಿಯಾಗಿದ್ದಾರೆ. ಈ ಹಣವು ಸಂಚಿನ ಫಲಿತಾಂಶವಾಗಿ ಮತ್ತು ಕಿಕ್‌ಬ್ಯಾಕ್ ಪಾವತಿಯಾಗಿ ವಿನಿಯೋಗವಾಗಿದೆ ಎಂದು ತನಿಖಾ ಸಂಸ್ಥೆ ತಿಳಿಸಿದೆ. ಇಂಡೋ ಸ್ಪಿರಿಟ್ ಒಂದು ನೈಜ ವ್ಯವಹಾರ ಸಂಸ್ಥೆ ಎಂದು ತೋರಿಸುವ ಮೂಲಕ ಹಾಗೂ 292.8 ಕೋಟಿ ರೂ. ಅಪರಾಧದ ಲಾಭ ಪಡೆ ಯುವ ಮೂಲಕ, ಕಾನೂನುಬದ್ಧ ವ್ಯವಹಾರದಿಂದ ಬಂದ ಪ್ರಾಮಾಣಿಕ ಲಾಭ ಎಂದು ಅಕ್ರಮದ ಆ ದಾಯವನ್ನು ಬಿಂಬಿಸುವುದರಲ್ಲಿ ಕವಿತಾ ಭಾಗಿ ಯಾಗಿದ್ದಾರೆ ಎಂದು ಆರೋಪಪಟ್ಟಿ ಹೇಳಿದೆ. ತಮ್ಮ ಸಹವರ್ತಿ ಅಭಿಷೇಕ್ ಬೋಯಿನಪಲ್ಲಿ ಹೆಸರಿನಲ್ಲಿ ಇಂಡೋ ಸ್ಪಿರಿಟ್‌ನಿಂದ ಕವಿತಾ ಅವರು 5.5 ಕೋಟಿ ರೂ. ಅಕ್ರಮ ಹಣ ಪಡೆದಿದ್ದಾರೆ ಎಂದೂ ತಿಳಿಸಿದೆ. ತಮ್ಮ ಮಧ್ಯವರ್ತಿ ಮೂಲಕ ಸರ್ಕಾರಿ ಅಧಿಕಾರಿಗಳಿಗೆ ಕಿಕ್‌ಬ್ಯಾಕ್ ನೀಡುವುದರೊಂದಿಗೆ, ಕೆ. ಕವಿತಾ ಅವರು 1,100 ಕೋಟಿ ರೂ ಮೊತ್ತದ ಅಕ್ರಮ ಸೃಷ್ಟಿಯಾಗುವಲ್ಲಿ ಭಾಗಿಯಾಗಿದ್ದಾರೆ. ಹಾಗೆಯೇ ಈ ಅಕ್ರಮ ಹಣವನ್ನು ಸರ್ಕಾರಿ ಅಧಿಕಾರಿಗಳಿಗೆ ವರ್ಗಾಯಿಸುವ ಕಾರ್ಯದಲ್ಲಿಯೂ ತೊಡಗಿದ್ದಾರೆ ಎಂದು ಆರೋಪಿಸಿದೆ.

**ಜುಲೈ 3ರವರೆಗೂ ನ್ಯಾಯಾಂಗ ಬಂಧನ:** ಅಕ್ರಮ ಹಣ ವರ್ಗಾವಣೆ ಆರೋಪದಲ್ಲಿ ಬಂಧನದಲ್ಲಿರುವ ಕೆ ಕವಿತಾ ಅವರ ನ್ಯಾಯಾಂಗ ಬಂಧನದ ಅವಧಿಯನ್ನು ದಿಲ್ಲಿ ನ್ಯಾಯಾಲಯವು ಜುಲೈ 3ರವರೆಗೂ ಸೋಮವಾರ ವಿಸ್ತರಿಸಿದೆ. ಇದೇ ಪ್ರಕರಣದ ಇತರೆ ಮೂವರು ಆರೋಪಿಗಳಾದ ಪ್ರಿನ್ಸ್, ಅರವಿಂದ್ ಮತ್ತು ದಾಮೋದರ್‌ಗೆ ತಲಾ 1 ಲಕ್ಷ ರೂ ವೈಯಕ್ತಿಕ ಬಾಂಡ್‌ನೊಂದಿಗೆ ಜಾಮೀನು ಮಂಜೂರು ಮಾಡಿದೆ.

> **ಈಗ ರದ್ದುಗೊಂಡಿರುವ ದಿಲ್ಲಿ ಲಿಕ್ಕರ್ ನೀತಿ ಹಗರಣದಲ್ಲಿ ತೆಲಂಗಾಣದ ಮಾಜಿ ಸಿಎಂ ಕೆ ಚಂದ್ರಶೇಖರ್ ರಾವ್ ಅವರ ಮಗಳು ಕೆ ಕವಿತಾ ಪಾತ್ರದ ಬಗ್ಗೆ ಜಾರಿ ನಿರ್ದೇಶನಾಲಯ ಚಾರ್ಜ್‌ಶೀಟ್‌ನಲ್ಲಿ ಗಂಭೀರ ಆರೋಪಗಳನ್ನು ಮಾಡಿದೆ. ಕವಿತಾ ಅವರು ಎಎಪಿ ನಾಯಕರಿಗೆ 292.8 ಕೋಟಿ ರೂ ಮೊತ್ತದ ಕಿಕ್‌ಬ್ಯಾಕ್ ನೀಡಿದ್ದರು ಎಂದು ಅದು ಹೇಳಿದೆ. ಅಲ್ಲದೆ, ತಮ್ಮ ಫೋನ್‌ಗಳಲ್ಲಿದ್ದ ಎಲ್ಲಾ ಪುರಾವೆಗಳನ್ನೂ ಅಳಿಸಿದ್ದರು ಎಂದು ತಿಳಿಸಿದೆ.**

### ಮೊಬೈಲ್ ಫೋನ್‌ನಿಂದ ಎಲ್ಲಾ ಡಿಲೀಟ್

**ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ತಮ್ಮ ಪಾತ್ರವನ್ನು ಮುಚ್ಚಿಡಲು ಕವಿತಾ ಅವರು ತಮ್ಮ ಮೊಬೈಲ್ ಫೋನ್‌ನಲ್ಲಿದ್ದ ಪುರಾವೆಗಳನ್ನು ಹಾಗೂ ವಿವರಗಳನ್ನು ಅಳಿಸಿ ಹಾಕಿದ್ದಾರೆ. ಬಿಆರ್‌ಎಸ್ ನಾಯಕಿ ಪರೀಕ್ಷೆಗಾಗಿ 9 ಫೋನ್‌ಗಳನ್ನು ಇ.ಡಿ ಮುಂದೆ ಹಾಜರುಪಡಿಸಿದ್ದರು. ಈ ಎಲ್ಲಾ ಫೋನ್‌ಗಳನ್ನೂ ಫಾರ್ಮ್ಯಾಟ್ ಮಾಡಲಾಗಿದ್ದು, ಯಾವುದರಲ್ಲಿಯೂ ಡೇಟಾ ಇರಲಿಲ್ಲ ಎಂದು ಇಡಿ ತಿಳಿಸಿದೆ. ವಿಚಾರಣೆ ವೇಳೆ ಕವಿತಾ ಅವರು ನುಣುಚಿಕೊಳ್ಳುತ್ತಿದ್ದು, ಫಾರ್ಮ್ಯಾಟ್ ಮಾಡಿದ ಫೋನ್‌ಗಳಿಗೆ ವಿವರಣೆ ನೀಡುವುದು ಅವರಿಗೆ ಸಾಧ್ಯವಾಗಿಲ್ಲ. ಅವರು ಪ್ರಕರಣದ ಸಾಕ್ಷಿದಾರರ ಮೇಲೆ ಪ್ರಭಾವ ಬೀರುವಲ್ಲಿಯೂ ಭಾಗಿಯಾಗಿದ್ದಾರೆ ಎಂದು ಹೇಳಿದೆ.**

# ಜಪಾನ್‌ನಲ್ಲಿ ಮತ್ತೆ ಭೂಕಂಪನ



**ಟೋಕಿಯೊ:** ಇತ್ತೀಚೆಗೆ ಸಂಭವಿಸಿದ್ದ ಭೂಕಂಪನದಿಂದ ಇನ್ನು ಚೇತರಿಸಿಕೊಳ್ಳುತ್ತಿರುವ ಜಪಾನ್‌ನಲ್ಲಿ ಮತ್ತೆ ಕಂಪನವಾಗಿದೆ. ಜಪಾನಿನ ಉತ್ತರ-ಮಧ್ಯ ಪ್ರದೇಶವಾದ ಇಶಿಕಾವಾದಲ್ಲಿ ಸೋಮವಾರ ಮುಂಜಾನೆ ಮತ್ತೆ ಭೂಕಂಪಗಳು ಸಂಭವಿಸಿವೆ. ಆದರೆ ಈ ಕಂಪನದಲ್ಲಿ ಸಾಕಷ್ಟು ಹಾನಿಯಾಗಿಲ್ಲ ಎನ್ನುವುದೇ ಸಮಾಧಾನ ತರುವ ವಿಚಾರವಾಗಿದೆ. ನೋಟೊ ಪೆನಿನ್ಸುಲಾದ ಉತ್ತರದ ಮೇಲ್ಭಾಗದಲ್ಲಿ 5.9 ತೀವ್ರತೆಯ ಕಂಪನವು ನಿಮಿಷಗಳ ನಂತರ 4.8 ಮತ್ತು ನಂತರ ಮುಂದಿನ ಎರಡು ಗಂಟೆಗಳಲ್ಲಿ ಹಲವಾರು ಸಣ್ಣ ಭೂಕಂಪಗಳು ಸಂಭವಿಸಿದವು ಎಂದು ಜಪಾನ್ ಹವಾಮಾನ ಸಂಸ್ಥೆ ತಿಳಿಸಿದೆ.

ಕಳೆದ ಜ. 1 ರಂದು ಸಂಭವಿಸಿದ ಭೂಕಂಪದಲ್ಲಿ ಹಾನಿಗೊಳಗಾದ ಎರಡು ಮನೆಗಳು ವಾಜಿಮಾ ನಗರದಲ್ಲಿ ಕುಸಿದವು ಆದರೆ ಇದುವರೆಗೆ ಯಾವುದೇ ಗಾಯಗಳು, ಇತರ ಹಾನಿಗಳು ವರದಿಯಾಗಿಲ್ಲ ಎಂದು ಅಗ್ನಿಶಾಮಕ, ವಿಪತ್ತು ನಿರ್ವಹಣಾ ಸಂಸ್ಥೆ ತಿಳಿಸಿದೆ.

ಅವುಗಳಲ್ಲಿ ಒಂದು, ನೋಟೊ ಪೆನಿನ್ಸುಲಾದಲ್ಲಿನ ಶಿಕಾ ಸ್ಥಾವರವು ಸಣ್ಣ ಹಾನಿಯನ್ನುಂಟು ಮಾಡಿದೆ, ಆದರೂ ಇದು ಎರಡು ರಿಯಾಕ್ಟರ್‌ಗಳ ಕೂಲಿಂಗ್ ಕಾರ್ಯಗಳ ಮೇಲೆ ಪರಿಣಾಮ ಬೀರುವುದಿಲ್ಲ ಎಂದು ಅಧಿಕಾರಿಗಳು ಹೇಳಿದ್ದಾರೆ. ಯಾವುದೇ ವಿದ್ಯುತ್ ವ್ಯತ್ಯಯವಾಗಿಲ್ಲ ಎಂದು ಹಾಕುರಿಕು ಎಲೆಕ್ಟ್ರಿಕ್ ಪವರ್ ಕಂಪನಿ ತಿಳಿಸಿದೆ. ಜನವರಿ 1 ರಂದು ಸಂಭವಿಸಿದ ಭೂಕಂಪದಲ್ಲಿ 241 ಜನರು ಸಾವನ್ನಪ್ಪಿದರು. ಹಾನಿಗಳು ಇನ್ನೂ ಉಳಿದಿವೆ, ಅನೇಕ ನಿವಾಸಿಗಳನ್ನು ಸ್ಥಳಾಂತ ರಿಸಲಾಗಿದೆ.

> **ಪಶ್ಚಿಮ ಜಪಾನ್ ರೈಲ್ವೆ ಕಂ ಪ್ರಕಾರ ಶಿಂಕನ್‌ಸೆನ್ ಸೂಪರ್-ಎಕ್ಸ್‌ಪ್ರೆಸ್ ರೈಲುಗಳು, ಇತರ ರೈಲು ಸೇವೆಗಳನ್ನು ಸುರಕ್ಷತಾ ತಪಾಸಣೆಗಾಗಿ ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಯಿತು ಆದರೆ ಅವುಗಳಲ್ಲಿ ಹೆಚ್ಚಿನವು ಪುನರಾರಂಭಗೊಂಡವು. ಸಮೀಪದ ಎರಡು ಪರಮಾಣು ವಿದ್ಯುತ್ ಸ್ಥಾವರಗಳಲ್ಲಿ ಯಾವುದೇ ವೈಪರೀತ್ಯಗಳು ಕಂಡುಬಂದಿಲ್ಲ ಎಂದು ಪರಮಾಣು ನಿಯಂತ್ರಣ ಪ್ರಾಧಿಕಾರ ಹೇಳಿದೆ.**

# ಮರ ಕಡಿಯದಂತೆ, ಬೆಳೆ ಸುಡದಂತೆ ಫತ್ವಾ ಹೊರಡಿಸಿದ ಇಸ್ಲಾಮಿಕ್ ಸಂಘಟನೆ

**ಲಕ್ನೋ:** ಮರ ಕಟಾವು ಮಾಡುವವರು ಹಾಗೂ ಬೆಳೆ ಸುಡುವವರ ವಿರುದ್ಧ ಉತ್ತರಪ್ರದೇಶದ ಇಸ್ಲಾಮಿಕ್ ಸಂಘಟನೆಯೊಂದು ಫತ್ವಾ ಹೊರಡಿಸುವ ಮೂಲಕ ಗಮನ ಸೆಳೆದಿದೆ. ದಿನೇ ದಿನೇ ಉಷ್ಣಾಂಶ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಮರಗಳನ್ನು ಕಡಿಯಬೇಡಿ ಮತ್ತು ಬೆಳೆಗಳನ್ನು ಸುಡದಂತೆ ಮನವಿ ಮಾಡಿಕೊಂಡಿರುವ ಇಲ್ಲಿನ ಇಸ್ಲಾಮಿಕ್ ಸೆಂಟರ್ ಆಫ್ ಇಂಡಿಯಾ (ಐಸಿಐ) ಈ ಫತ್ವಾ ಹೊರಡಿಸಿದೆ.

ತಾಪಮಾನ ಏರಿಕೆ ತಡೆಗಟ್ಟುವ ಉದ್ದೇಶದಿಂದ ಈ ಫತ್ವಾ ಹೊರಡಿಸಲಾಗಿದೆ. ಕುರಾನ್‌ನ ಪ್ರಕಾರ, ಹಸಿರನ್ನು ರಕ್ಷಿಸುವುದು, ನೀರನ್ನು ಉಳಿಸುವುದು ಮತ್ತು ವ್ಯರ್ಥ ಮಾಡು ವುದನ್ನು ತಪ್ಪಿಸುವುದು ಮುಸ್ಲಿಮರ ಧಾರ್ಮಿಕ ಕರ್ತವ್ಯವಾಗಿದೆ. ಪ್ರತಿಯೊಬ್ಬ ಮುಸ್ಲಿಮರು ಹಸಿರು ಮರಗಳು ಮತ್ತು ಬೆಳೆಗಳಿಗೆ ಬೆಂಕಿ ಹಚ್ಚದಂತೆ ನೋಡಿಕೊಳ್ಳಬೇಕು ಎಂದು ಐಸಿಐನ ಅಧ್ಯಕ್ಷ ಮೌಲಾನಾ ಖಾಲಿದ್ ರಶೀದ್ ಫರಂಗಿ ಮಹಾಲಿ ಹೇಳಿದ್ದಾರೆ.

> **ಸರ್ವಶಕ್ತನ ಪ್ರಕಾರ, ಮನುಷ್ಯರು ಮತ್ತು ಪ್ರಾಣಿಗಳು ಸೇರಿದಂತೆ ಎಲ್ಲಾ ಜೀವಿಗಳಿಗೆ ಅನುಕೂಲವಾಗುವ ಸಸಿಗಳನ್ನು ನೆಡುವವರಿಗೆ ಪ್ರತಿಫಲವಿದೆ. ಕೊಳಗಳು, ಕಾಲುವೆಗಳು, ನದಿಗಳು ಮತ್ತು ಸಮುದ್ರಗಳನ್ನು ಕಲುಷಿತಗೊಳಿಸದಂತೆ ಉಳಿಸಲು ಪ್ರಾಮಾಣಿಕ ಪ್ರಯತ್ನಗಳನ್ನು ಮಾಡಿ ಎಂದು ಅವರು ಹೇಳಿದರು, ಇಸ್ಲಾಂನಲ್ಲಿ, ಮರಗಳು, ಬೆಳೆಗಳನ್ನು ಸುಡುವುದನ್ನು ನಿಷೇಧಿಸಲಾಗಿದೆ, ಇದು ಯುದ್ಧದ ಸಮಯ ದಲ್ಲಿ, ಮರಗಳು, ತೋಟಗಳು, ಹೊಲಗ ಳನ್ನು ಸುಡಬಾರದು ಎಂದು ಅವರು ಹೇಳಿದ್ದಾರೆ.**

# ವಿಶ್ವ ದಾಖಲೆ ಬರೆದ ಭಾರತದ ಮತದಾರರು

**ನವದೆಹಲಿ:** ವಿಶ್ವದ ಅತಿದೊಡ್ಡ ಪ್ರಜಾಪ್ರಭುತ್ವ ವ್ಯವಸ್ಥೆ ಹೊಂದಿರುವ ಭಾರತದ 18ನೇ ಲೋಕಸಭೆ ಚುನಾವಣೆಯ ಏಳು ಹಂತದದಲ್ಲಿ 64.2 ಕೋಟಿ ಮತದಾರರು ತಮ್ಮ ಹಕ್ಕು ಚಲಾಯಿಸುವುದರೊಂದಗೆ ವಿಶ್ವ ದಾಖಲೆ ಬರೆದಿದ್ದಾರೆ.


31.2 ಕೋಟಿ ಮಹಿಳೆಯರು ಸೇರಿದಂತೆ ಈ ಬಾರಿ ಒಟ್ಟು 64.2 ಕೋಟಿ ಮತದಾರರು ಮತ ಚಲಾಯಿಸಿದ್ದು ಹಿಂದಿನ ಎಲ್ಲಾ ಚುನಾವಣೆಗಳ ಶೇಕಡವಾರು ಮತದಾನವನ್ನು ಈ ಬಾರಿ ಮುರಿದು ಹಾಕಿದೆ. ನವದೆಹಲಿಯಲ್ಲಿ ಸುದ್ದಿಗೋಷ್ಠಿ ನಡೆಸಿದ ಕೇಂದ್ರ ಮುಖ್ಯ ಚುನಾವಣಾ ಆಯುಕ್ತ ರಾಜೀವ್‌ಕುಮಾರ್ ಅವರು, ಪ್ರಜಾತಂತ್ರದ ಅತಿದೊಡ್ಡ ಹಬ್ಬ ಎನಿಸಿದ ಮತದಾನದಲ್ಲಿ ಈ ಬಾರಿ ಮತದಾರರು ಉತ್ಸುಕತೆಯಿಂದಲೇ ಭಾಗವಹಿಸಿದ್ದಾರೆ. ಅತಿಹೆಚ್ಚು ಮತದಾನವಾಗಿರುವುದು ವಿಶ್ವ ದಾಖಲೆಗೆ ಸೇರ್ಪಡೆಯಾಗಿದೆ ಎಂದು ಸಂತಸ ವ್ಯಕ್ತಪಡಿಸಿದರು.

ಮತದಾನದಲ್ಲಿ ಭಾಗಿಯಾದ ಎಲ್ಲಾ ಮತದಾರರಿಗೂ ಕೃತಜ್ಞತೆ ಸಲ್ಲಿಸಿದ ಅವರು ಮುಕ್ತ ಮತ್ತು ನ್ಯಾಯಸಮತ ಮತದಾನಕ್ಕೆ ಸಹಕರಿಸಿದ ಎಲ್ಲರಿಗೂ ಅಭಿನಂದನೆಗಳು. 68 ಸಾವಿರ ಉಸ್ತುವಾರಿ ತಂಡಗಳು, 1.5 ಕೋಟಿ ಭದ್ರತಾ ಪಡೆಗಳನ್ನು ಭದ್ರತೆಗೆ ನಿಯೋಜಿಸಲಾಗಿತ್ತು. ವಿಶ್ವದ ಯಾವುದೇ ರಾಷ್ಟ್ರವು ಇಷ್ಟು ದೊಡ್ಡ ಪ್ರಮಾಣದಲ್ಲಿ ಭದ್ರತೆಗೆ ನಿಯೋಜನೆ ಮಾಡಿರುವ ಉದಾಹರಣೆಗಳಿಲ್ಲ. ಭಾಗಿಯಾದ ಎಲ್ಲರಿಗೂ ಆಯೋಗ ಕೃತಜ್ಞತೆ ಸಲ್ಲಿಸುತ್ತದೆ ಎಂದು ತಿಳಿಸಿದರು. ಕಣಿವೆ ರಾಜ್ಯವಾದ ಜಮುಕಾಶೀರದಲ್ಲಿ ಈ ಬಾರಿ ನಾಲ್ಕು ದಶಕಗಳ ನಂತರ ಶೇ.58.58 ಮತದಾನವಾಗಿದೆ. ಈವರೆಗೂ ಅಲ್ಲಿ 51.05 ಮಾತ್ರ ಮತದಾನವಾಗಿತ್ತು. ಮತದಾರರು ಭಾಗಿಯಾಗಿ ಹಕ್ಕು ಚಲಾಯಿಸಿದ್ದಾರೆ ಎಂದು ಮಾಹಿತಿ ನೀಡಿದರು. ಜಮುಕಾಶೀರದಲ್ಲಿ ಎಷ್ಟು ಸಾಧ್ಯವೋ ಅಷ್ಟು ಬೇಗ ವಿಧಾನಸಭೆ ಚುನಾವಣೆಯನ್ನು ನಡೆಸುತ್ತೇವೆ ಈಗಾಗಲೇ ಆಯೋಗ ಎಲ್ಲಾ ರೀತಿಯ ಸಿದ್ದತೆಗಳನ್ನು ಕೈಗೊಂಡಿದ್ದೇವೆ ಎಂದು ತಿಳಿಸಿದರು. 2024ರ ಲೋಕಸಭೆ ಚುನಾವಣೆಗೆ ಸುಮಾರು ನಾಲ್ಕು ಲಕ್ಷ ವಾಹನಗಳು, 135 ವಿಶೇಷ ರೈಲುಗಳು ಮತ್ತು 1,692 ಹವಾ ನಿಯಂತ್ರಿತ ರೈಲುಗಳನ್ನು ಬಳಸಲಾಗಿದೆ ಎಂದು ಹೇಳಿದರು.

2019ರಲ್ಲಿ 540 ಮತಗಟ್ಟೆಗಳಲ್ಲಿ ಮರುಮತದಾನ ನಡೆದಿದ್ದರೆ ಈ ಬಾರಿ ಕೇವಲ 39 ಕೇಂದ್ರಗಳಲ್ಲಿ ಮರು ಮತದಾನ ನಡೆದಿವೆ ಎಂದು ಅವರು ತಿಳಿಸಿದರು. 2019ರಲ್ಲಿ 3,500 ಕೋಟಿ ರೂ.ಗಳಿಗೆ ಹೋಲಿಸಿದರೆ 2024ರ ಚುನಾವಣೆಯಲ್ಲಿ ನಗದು, ಉಚಿತ ವಸ್ತುಗಳು, ಡ್ರಗ್ಸ್, ಮದ್ಯ ಸೇರಿದಂತೆ 10,000 ಕೋಟಿ ರೂ.ಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಅವರು ತಿಳಿಸಿದರು.

# ಎಕ್ಸಿಟ್ ಪೋಲ್‌ಗೆ ವಿರುದ್ಧವಾಗಿ ಫಲಿತಾಂಶ

**ನವದೆಹಲಿ:** ಲೋಕಸಭಾ ಚುನಾವಣೆಯ ಫಲಿತಾಂಶಗಳು ಎಕ್ಸಿಟ್ ಪೋಲ್‌ಗಳಲ್ಲಿ ತೋರಿಸಿರುವ ಫಲಿತಾಂಶಗಳಿಗೆ ಸಂಪೂರ್ಣವಾಗಿ ವಿರುದ್ಧವಾಗಿರುತ್ತದೆ ಎಂದು ಕಾಂಗ್ರೆಸ್ ನಾಯಕಿ ಸೋನಿಯಾ ಗಾಂಧಿ ಹೇಳಿದ್ದಾರೆ. ಲೋಕಸಭೆ ಚುನಾವಣೆ ಫಲಿತಾಂಶದ ಕುರಿತು ಅವರ ನಿರೀಕ್ಷೆಗಳ ಬಗ್ಗೆ ಪತ್ರಕರ್ತರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಕಾದು ನೋಡಿ, ನಮ ನಿರೀಕ್ಷೆಯಂತೇ ಲೋಕಸಭಾ ಚುನಾವಣಾ ಫಲಿತಾಂಶ ಬರಲಿದೆ ಎಂದರು. ಹಿಂದಿನ ಎಕ್ಸಿಟ್ ಪೋಲ್‌ಗಳು ಬಿಜೆಪಿ ನೇತೃತ್ವದ ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟವು ಸ್ಪಷ್ಟ ಬಹುಮತದೊಂದಿಗೆ ಸರ್ಕಾರವನ್ನು ರಚಿಸುತ್ತದೆ ಎಂದು ಭವಿಷ್ಯ ನುಡಿದಿದೆ. ಈ ಸಮೀಕ್ಷೆಗಳಲ್ಲಿ ಪ್ರತಿಪಕ್ಷಗಳ ಮೈತ್ರಿಕೂಟ ಸುಮಾರು 150 ಸ್ಥಾನ ಪಡೆಯುವುದಾಗಿ ಹೇಳಿಕೊಂಡಿದೆ.




ಕಾದು ನೋಡಿ, ಫಲಿತಾಂಶಗಳು ಎಕ್ಸಿಟ್ ಪೋಲ್ ಫಲಿತಾಂಶಗಳಿಗೆ ಸಂಪೂರ್ಣವಾಗಿ ವಿರುದ್ಧವಾಗಿರುತ್ತವೆ ಎಂದು ಹೇಳಿದರು. ಇದನ್ನು ಎಕ್ಸಿಟ್‌ಪೋಲ್ ಎಂದು ಕರೆಯುವುದಿಲ್ಲ ಆದರೆ ಅದರ ಹೆಸರು ಮೋದಿ ಮೀಡಿಯಾ ಪೋಲ್. ಇದು ಮೋದಿ ಜಿ ಅವರ ಸಮೀಕ್ಷೆ, ಇದು ಅವರ ಫ್ಯಾಂಟಸಿ ಸಮೀಕ್ಷೆ ಎಂದು ಕಾಂಗ್ರೆಸ್ ಮಾಜಿ ಅಧ್ಯಕ್ಷ ರಾಹುಲ್ ಗಾಂಧಿ ಹೇಳಿದ್ದಾರೆ. ಈ ಸಮೀಕ್ಷೆಗಳು ಕಲ್ಪನೆಯ ಕೆಲಸ ಎಂದು ಹೇಳಿಕೊಂಡಿರುವ ಕಾಂಗ್ರೆಸ್ ನಾಯಕರು ಭಾರತ ಬ್ಲಾಕ್ 295 ಸ್ಥಾನಗಳನ್ನು ಗೆದ್ದು ಸರ್ಕಾರ ರಚಿಸಲಿದೆ ಎಂದು ಭರವಸೆ ವ್ಯಕ್ತಪಡಿಸಿದ್ದಾರೆ. ಎಬಿಪಿ-ಸಿ ಮತದಾರರ ಎಕ್ಸಿಟ್ ಪೋಲ್ ಎನ್‌ಡಿಎ 353-383 ಸ್ಥಾನಗಳನ್ನು ಪಡೆಯಲಿದೆ ಎಂದು ಭವಿಷ್ಯ ನುಡಿದಿದೆ. ಅದೇ ಸಮಯದಲ್ಲಿ ವಿರೋಧ ಪಕ್ಷದ ಇಂಡಿಯಾ ಮೈತ್ರಿಕೂಟ 152-182 ಸ್ಥಾನಗಳನ್ನು, ಇತರರು 4-12 ಸ್ಥಾನಗಳನ್ನು ಪಡೆಯುವ ನಿರೀಕ್ಷೆಯಿದೆ ಎಂದು ಹೇಳಿದೆ.

> **ದೇಶದಲ್ಲಿ 2024 ರ ಲೋಕಸಭೆ ಚುನಾವಣೆ ಏಳು ಹಂತಗಳಲ್ಲಿ ನಡೆದಿದೆ. ಏ. 19ರಂದು ಮೊದಲ ಹಂತ, ಏಪ್ರಿಲ್ 26 ರಂದು ಎರಡನೇ, ಮೇ 7ರಂದು ಮೂರನೇ, ಮೇ 13ರಂದು 4 ನೇ, ಮೇ 20 ರಂದು ಐದನೇ, ಮೇ 25ರಂದು ಆರನೇ, ಜೂ. 1 ರಂದು ಏಳನೇ ಹಂತದ ಮತದಾನ ನಡೆದಿದ್ದು, ಈಗ ಜೂನ್ 4 ರಂದು ಫಲಿ ತಾಂಶ ಬರಲಿದೆ. ಲೋಕಸಭೆ ಚುನಾವಣೆಯಲ್ಲಿ ಭಾರತೀಯ ಜನತಾ ಪಾರ್ಟಿ ನೇತೃತ್ವದ ಎನ್‌ಡಿಎ ದೊಡ್ಡ ಬಹುಮತವನ್ನು ಗೆಲ್ಲುವ ನಿರೀಕ್ಷೆಯೊಂದಿಗೆ ಪ್ರಧಾನಿ ನರೇಂದ್ರ ಮೋದಿ ಸತತ ಮೂರನೇ ಅವಧಿಗೆ ಅಧಿಕಾರವನ್ನು ಉಳಿಸಿಕೊಳ್ಳುತ್ತಾರೆ ಎಂದು ಹೆಚ್ಚಿನ ಎಕ್ಸಿಟ್ ಪೋಲ್‌ಗಳು ಭವಿಷ್ಯ ನುಡಿದಿವೆ.**

# ನಿರಾಶಾವಾದಿಗಳ ಒತ್ತಡದಿಂದ ದೇಶವನ್ನು ಮುಕ್ತಗೊಳಿಸಲು ಕರೆ

**ನವದೆಹಲಿ:** ಹಳತಾದ ಚಿಂತನೆ ಮತ್ತು ನಂಬಿಕೆಗಳನ್ನು ಮರು ಮೌಲ್ಯಮಾಪನ ಮಾಡಲು ಮತ್ತು ನಮ ಸಮಾಜವನ್ನು ವತ್ತಿಪರ ನಿರಾಶಾವಾದಿಗಳ ಒತ್ತಡದಿಂದ ಮುಕ್ತಗೊಳಿಸಲು ರಾಷ್ಟ್ರಕ್ಕೆ ಕರೆ ನೀಡಿರುವ ಪ್ರಧಾನಿ ನರೇಂದ್ರ ಮೋದಿ ಅವರು ವಿಕಸಿತ್ ಭಾರತ್‌ಗೆ ಅಡಿಪಾಯವಾಗಬೇಕು ಎಂದು ಪ್ರತಿಪಾದಿಸಿದ್ದಾರೆ. 21ನೇ ಶತಮಾನದ ಜಗತ್ತು ಅನೇಕ ಭರವಸೆಗಳೊಂದಿಗೆ ಭಾರತದತ್ತ ನೋಡುತ್ತಿದೆ. ಮತ್ತು ಜಾಗತಿಕ ಸನ್ನಿವೇಶದಲ್ಲಿ ಮುಂದುವರಿಯಲು ನಾವು ಹಲವಾರು ಬದಲಾವಣೆಗಳನ್ನು ಮಾಡಬೇಕಾಗಿದೆ. ಸುಧಾರಣೆಗೆ ಸಂಬಂಧಿಸಿದಂತೆ ನಾವು ನಮ್ಮ ಸಾಂಪ್ರದಾಯಿಕ ಚಿಂತನೆಯನ್ನು ಸಹ ಬದಲಾಯಿಸಬೇಕಾಗಿದೆ. ಭಾರತವು ಸುಧಾರಣೆಯನ್ನು ಕೇವಲ ಆರ್ಥಿಕ ಸುಧಾರಣೆಗಳಿಗೆ ಸೀಮಿತಗೊಳಿಸುವುದಿಲ್ಲ ಎಂದು ಅವರು ಲೇಖನದಲ್ಲಿ ಕರೆ ನೀಡಿದ್ದಾರೆ. ಲೋಕಸಭೆ ಚುನಾವಣೆ ಪ್ರಚಾರ ಮುಗಿದ ನಂತರ ಆಧ್ಯಾತಿಕ ಪ್ರವಾಸದಲ್ಲಿ ಮೇ 30 ರಂದು ಕನ್ಯಾಕುಮಾರಿ ತಲುಪಿದ್ದರು. ಸುಧಾರಣೆಯ ದಿಕ್ಕಿನತ್ತ ಜೀವನದ ಪ್ರತಿಯೊಂದು ಅಂಶದಲ್ಲೂ ಮುನ್ನಡೆಯುವಂತೆ ಮೋದಿ ಜನರಿಗೆ ಕರೆ ನೀಡಿದರು. ಮುಂಬರುವ 2047 ರ ವೇಳೆಗೆ ಭಾರತದ ಸುಧಾರಣೆಗಳು ವಿಕಸಿತ್ ಭಾರತ್ (ಅಭಿವದ್ಧಿ ಹೊಂದಿದ ಭಾರತ) ಆಶಯಗಳೊಂದಿಗೆ ಹೊಂದಿಕೆಯಾಗಬೇಕು ಎಂದು ಮೋದಿ ಹೇಳಿದರು, ಸುಧಾರಣೆ ಎಂದಿಗೂ ಯಾವುದೇ ದೇಶಕ್ಕೆ ಏಕರೂಪದ ಪ್ರಕ್ರಿಯೆಯಾಗುವುದಿಲ್ಲ ಎಂದು ಹೇಳಿದರು.

ಆದ್ದರಿಂದ, ನಾನು ದೇಶಕ್ಕಾಗಿ ಸುಧಾರಣೆ, ಸಾಧನೆ ಮತ್ತು ಪರಿವರ್ತನೆಯ ದಷ್ಟಿಕೋನವನ್ನು ಹಾಕಿದ್ದೇನೆ. ಸುಧಾರಣೆಯ ಜವಾಬ್ದಾರಿ ನಾಯಕತ್ವದ ಮೇಲಿದೆ. ಅದರ ಆಧಾರದ ಮೇಲೆ ನಮ ಅಧಿಕಾರಶಾಹಿ ನಿರ್ವಹಿಸುತ್ತದೆ, ಮತ್ತು ಜನರು ಜನ್ ಭಗೀದಾರಿಯ ಉತ್ಸಾಹದೊಂದಿಗೆ ಸೇರಿದಾಗ, ನಾವು ನಡೆಯುತ್ತಿರುವ ಪರಿವರ್ತನೆಗೆ ಸಾಕ್ಷಿಯಾಗಿದೆ ಎಂದು ಅವರು ಹೇಳಿದರು.



ಲೋಕಸಭೆ ಚುನಾವಣೆಯ ಮತ ಎಣಿಕೆ ನಡೆಯುವ ಒಂದು ದಿನದ ಮೊದಲು ಈ ಲೇಖನ ಪ್ರಕಟವಾಗಿದ್ದು, ಆಡಳಿತಾರೂಢ ಬಿಜೆಪಿಗೆ ದೊಡ್ಡ ಬಹುಮತದೊಂದಿಗೆ ಮೋದಿ ಅವರು ಮೂರನೇ ಅವಧಿಗೆ ದಾಖಲೆ ಸಮನಾದ ಅಧಿ ಕಾರವನ್ನು ಉಳಿಸಿಕೊಳ್ಳಲಿದ್ದಾರೆ ಎಂದು ನಿರ್ಗಮನ ಸಮೀಕ್ಷೆಗಳು ಭವಿಷ್ಯ ನುಡಿದಿವೆ.

> **ಮರುಚುನಾವಣೆ ವೇಳೆ ತಮ ಸರ್ಕಾರದ ಕಾರ್ಯಸೂಚಿಯ ಸ್ಪಷ್ಟವಾದ ವಿವರಣೆಯಲ್ಲಿ, ನಮ ದೇಶವನ್ನು ವಿಕಸಿತ್ ಭಾರತ್ ಮಾಡಲು ನಾವು ಶ್ರೇಷ್ಠತೆಯನ್ನು ಮೂಲಭೂತ ತತ್ವವನ್ನಾಗಿ ಮಾಡಬೇಕು. ನಾವು ಎಲ್ಲಾ ನಾಲ್ಕು ದಿಕ್ಕುಗಳಲ್ಲಿ ತ್ವರಿತವಾಗಿ ಕೆಲಸ ಮಾಡಬೇಕಾಗಿದೆ: ವೇಗ, ಸ್ಕೇಲ್, ವ್ಯಾಪ್ತಿ ಮತ್ತು ಮಾನದಂಡಗಳು ಉತ್ಪಾದನೆಯ ಜೊತೆಗೆ, ನಾವು ಗುಣಮಟ್ಟದ ಮೇಲೆ ಕೇಂದ್ರೀಕರಿಸಬೇಕು ಮತ್ತು ಶೂನ್ಯ ದೋಷ-ಶೂನ್ಯ ಪರಿಣಾಮ ಮಂತ್ರಕ್ಕೆ ಬದ್ಧರಾಗಿರಬೇಕು ಎಂದಿದ್ದಾರೆ.**

# ದೆಹಲಿ ಸರ್ಕಾರಕ್ಕೆ ತಿರುಗೇಟು ನೀಡಿದ ಹರಿಯಾಣ ಸಿಎಂ

**ಚಂಡೀಗಢ:** ರಾಷ್ಟ್ರ ರಾಜಧಾನಿಗೆ ತನ್ನ ಪಾಲಿನ ನೀರನ್ನು ಬಿಡುಗಡೆ ಮಾಡುತ್ತಿಲ್ಲ ಎಂದು ತಮ್ಮ ರಾಜ್ಯದ ವಿರುದ್ಧ ದೆಹಲಿ ಸರ್ಕಾರ ಮಾಡಿರುವ ಆರೋಪವನ್ನು ಹರಿಯಾಣ ಮುಖ್ಯಮಂತ್ರಿ ನಯಾಬ್ ಸಿಂಗ್ ಸೈನಿ ಅಲ್ಲಗಳೆದಿದ್ದಾರೆ. ನಿಗದಿತ ಪ್ರಮಾಣಕ್ಕಿಂತಲೂ ಹೆಚ್ಚಿನ ನೀರನ್ನು ಬಿಡುಗಡೆ ಮಾಡಲಾಗುತ್ತಿದೆ ಎಂದು ಪ್ರತಿ ಪಾದಿಸಿದ್ದಾರೆ. ಸಂಪನ್ಮೂಲದ ಸಮರ್ಪಕ ನಿರ್ವಹಣೆ ಮತ್ತು ಹಂಚಿಕೆಯತ್ತ ಗಮನ ಹರಿಸುವಂತೆ ಆಮ್ ಆದ್ಮ ಪಕ್ಷದ (ಎಎಪಿ) ಸರ್ಕಾರಕ್ಕೆ ಸಲಹೆ ನೀಡಿದ್ದಾರೆ.

ದೆಹಲಿ ಸರ್ಕಾರದ ಆರೋಪದ ಬಗ್ಗೆ ಕರ್ನಲ್‌ನಲ್ಲಿ ಪ್ರತಿಕ್ರಿಯಿಸಿದ ಸೈನಿ, 'ಅರವಿಂದ ಕೇಜ್ರವಾಲ್ ಅವರು ಜನರನ್ನು ದಾರಿ ತಪ್ಪಿಸುತ್ತಿದ್ದಾರೆ. ಈ ಹಿಂದೆಯೂ, ಅವರು ಈ ವಿಚಾರವನ್ನು ಪ್ರಸ್ತಾಪಿಸಿದ್ದರು. ಅವರು ತಮ್ಮ ನ್ಯೂನತೆಗಳನ್ನು ಮುಚ್ಚಿಕೊಳ್ಳಲು ಪ್ರಯತ್ನಿಸುತ್ತಾರೆ' ಎಂದು ದೂರಿದ್ದಾರೆ. ಒಪ್ಪಿರುವ ಪ್ರಮಾಣಕ್ಕಿಂತಲೂ ಹೆಚ್ಚಿನ ನೀರನ್ನು ದೆಹಲಿಗೆ ಬಿಡುಗಡೆ ಮಾಡುತ್ತಿದ್ದೇವೆ' ಎಂದೂ ಅವರು ಹೇಳಿದ್ದಾರೆ.

**ಸುಪ್ರೀಂ ಕೋರ್ಟ್ ಮೊರೆ ಹೋದ ದೆಹಲಿ:** ದೆಹಲಿಯಲ್ಲಿ ನೀರಿನ ಬಿಕ್ಕಟ್ಟು ತೀವ್ರವಾಗಿದೆ. ಬಿಸಿಗಾಳಿಯ ಪರಿಣಾಮ ನೀರಿನ ಬೇಡಿಕೆ ಗಣನೀಯವಾಗಿ ಏರಿದೆ. ಹೀಗಾಗಿ ಒಂದು ತಿಂಗಳವರೆಗೆ ಹೆಚ್ಚುವರಿ ನೀರು ಬಿಡುಗಡೆ ಮಾಡುವಂತೆ ಪಕ್ಕದ ಹರಿಯಾಣಕ್ಕೆ ನಿರ್ದೇಶನ ನೀಡಬೇಕು ಎಂದು ಕೋರಿ ದೆಹಲಿ ಸರ್ಕಾರ ಶುಕ್ರವಾರ ಸುಪ್ರೀಂ ಕೋರ್ಟ್‌ಗೆ ಮನವಿ ಮಾಡಿದೆ.



ನೀರಿಗೆ ತಡೆ ಆರೋಪ

### ಕೇಂದ್ರಕ್ಕೆ ಪತ್ರ

**ದೆಹಲಿಯ ನೀರಿನ ಬಿಕ್ಕಟ್ಟನ್ನು ಪರಿಹರಿಸಲು ಉತ್ತರ ಪ್ರದೇಶ ಅಥವಾ ಹರಿಯಾಣದಿಂದ ನೀರನ್ನು ಬಿಡುಗಡೆ ಮಾಡಿಸುವಂತೆ ಕೋರಿ ದೆಹಲಿಯ ಜಲ ಸಚಿವೆ ಆತಿಶಿ ಅವರು ಕೇಂದ್ರದ ಜಲಶಕ್ತಿ ಸಚಿವ ಗಜೇಂದ್ರ ಸಿಂಗ್ ಶೆಖಾವತ್ ಅವರಿಗೆ ಪತ್ರ ಬರೆದಿದ್ದಾರೆ. ಹರಿಯಾಣವು ಯಮುನಾ ನದಿಗೆ ಅಗತ್ಯ ಪ್ರಮಾಣದಲ್ಲಿ ನೀರು ಹರಿಸುತ್ತಿಲ್ಲ. ಇದರಿಂದಾಗಿ ಕೆಲ ದಿನಗಳಿಂದ ವಜೀರಾಬಾದ್ ಬ್ಯಾರೇಜ್‌ನಲ್ಲಿ ನೀರಿನ ಮಟ್ಟ ತೀವ್ರವಾಗಿ ಕುಸಿತವಾಗಿದೆ ಎಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.**

# ಭಾರತ ಮೂಲದ 23 ವರ್ಷದ ವಿದ್ಯಾರ್ಥಿನಿ ಅಮೆರಿಕದಲ್ಲಿ ನಾಪತ್ತೆ

## ಸ್ಯಾನ್ ಬರ್ನಾರ್ಡಿನೊದ ಕ್ಯಾಲಿಫೋರ್ನಿಯಾ ರಾಜ್ಯ ವಿಶ್ವವಿದ್ಯಾಲಯದ (ಸಿಎಸ್‌ಯುಎಸ್‌ಬಿ) ವಿದ್ಯಾರ್ಥಿನಿ



**ಹ್ಯೂಸ್ಟನ್:** ಅಮೆರಿಕದಲ್ಲಿ ಭಾರತ ಮೂಲದ ಮತ್ತೊಬ್ಬ ವಿದ್ಯಾರ್ಥಿನಿ ನಾಪತ್ತೆಯಾಗಿದ್ದಾಳೆ. 23 ವರ್ಷದ ವಿದ್ಯಾರ್ಥಿನಿ ಕ್ಯಾಲಿಫೋರ್ನಿಯಾ ರಾಜ್ಯ ದಿಂದ ಕಳೆದ ವಾರ ಕಾಣೆಯಾಗಿದ್ದು, ಆಕೆಯ ಪತ್ತೆಗೆ ನೆರವು ನೀಡುವಂತೆ ಪೊಲೀಸರು ಸಾರ್ವಜನಿಕರ ಸಹಾಯ ಕೋರಿದ್ದಾರೆ. ಭಾರತೀಯ ಸಮುದಾಯದ ವಿದ್ಯಾರ್ಥಿಗಳ ಮೇಲೆ ಹಲ್ಲೆ, ಹತ್ಯೆಗಳು ಮತ್ತು ನಾಪತ್ತೆ ಪ್ರಕರಣಗಳು ಅಮೆರಿಕದಲ್ಲಿ ಹೆಚ್ಚುತ್ತಿದ್ದು, ಈ ಸರಣಿಗೆ ಇದು ಮತ್ತೊಂದು ಸೇರ್ಪಡೆಯಾಗಿದೆ. ಸ್ಯಾನ್ ಬರ್ನಾರ್ಡಿನೊದ ಕ್ಯಾಲಿ ಫೋರ್ನಿಯಾ ರಾಜ್ಯ ವಿಶ್ವವಿದ್ಯಾಲಯದ (ಸಿಎಸ್‌ಯುಎಸ್‌ಬಿ) ವಿದ್ಯಾ ರ್ಥಿನಿ ನಿತೀಶಾ ಕಂಡುಲಾ, ಮೇ 28ರಿಂದ ಕಾಣೆಯಾಗಿದ್ದಾಳೆ ಎಂದು ಪೊಲೀಸರು ತಿಳಿಸಿದ್ದಾರೆ. ಆಕೆ ಲಾಸ್ ಏಂಜಲೀಸ್‌ನಲ್ಲಿ ಕೊನೆಯ ಬಾರಿ ಕಾಣಿಸಿಕೊಂಡಿದ್ದಳು. ಮೇ 30ರ ನಂತರ ಮತ್ತೆ ಪತ್ತೆಯಾಗಿಲ್ಲ ಎಂದು ಸಿಎಸ್‌ಯುಎಸ್‌ಬಿಯ ಪೊಲೀಸ್ ಮುಖ್ಯಸ್ಥ ಜಾನ್ ಗುಟ್ಟೀರೆಜ್ ಭಾನುವಾರ ತಿಳಿಸಿದ್ದಾರೆ.

**ಮಿಸ್ಸಿಂಗ್ ಪರ್ಸನ್ ಅಲರ್ಟ್:** ನಿತೀಶಾ ಕಂಡುಲಾ ಇರುವಿಕೆ ಬಗ್ಗೆ ಮಾಹಿತಿ ಇರುವ ಯಾರಾದರೂ ನಮ್ಮನ್ನು ಸಂಪರ್ಕಿಸಿ ಎಂದು ಕ್ಯಾಲಿಫೋರ್ನಿಯಾ ಸ್ಟೇಟ್ ಯುನಿವರ್ಸಿಟಿ, ಸ್ಯಾನ್ ಬರ್ನಾರ್ಡಿನೊ ಪೊಲೀಸರು ಟ್ವೀಟ್ ಮಾಡಿದ್ದಾರೆ. (909) 537-5165 ಸಂಪರ್ಕ ಸಂಖ್ಯೆಯನ್ನು ಅವರು ನೀಡಿದ್ದಾರೆ. ನಿತೀಶಾ ಕಂಡುಲಾ 5 ಅಡಿ 6 ಇಂಚ್ ಎತ್ತರವಿದ್ದು, 160 ಪೌಂಡ್ (72.5 ಕೆಜಿ) ತೂಕವಿದ್ದಾರೆ. ಕಪ್ಪು ಕೂದಲು ಹಾಗೂ ಕಪ್ಪು ಕಣ್ಣುಗಳನ್ನು ಹೊಂದಿದ್ದಾರೆ ಎಂದು ಪೊಲೀಸರು ಲಿಖಿತ ಹೇಳಿಕೆ ಬಿಡುಗಡೆ ಮಾಡಿದ್ದಾರೆ. ಕ್ಯಾಲಿಫೋರ್ನಿಯಾ ಲೈಸೆನ್ಸ್ ಪ್ಲೇಟ್ ಹೊಂದಿರುವ 2021 ಟೊಯೊಟಾ ಕೊರೊಲ್ಲಾ ಕಾರನ್ನು ನಿತೀಶಾ ಕಂಡುಲಾ ಚಲಾಯಿಸಿರುವ ಸಾಧ್ಯತೆ ಇದೆ. ಆದರೆ ಅದರ ಬಣ್ಣ ತಿಳಿದಿಲ್ಲ ಎಂದು ಪೊಲೀಸರು ಹೇಳಿದ್ದಾರೆ. ಆಕೆಯ ಇರುವಿಕೆ ಕುರಿತು ಮಾಹಿತಿ ಇರುವವರು ಅಧಿಕಾರಿಗಳನ್ನು ಸಂಪರ್ಕಿಸುವಂತೆ ಜನರಿಗೆ ಮನವಿ ಮಾಡಿರುವ ಪೊಲೀಸರು, ಸಿಎಸ್‌ಯುಎಸ್‌ಬಿ ಪೊಲೀಸ್ ಇಲಾಖೆ (909) 538-7777, ಎಲ್‌ಎಪಿಡಿ ನೈಋತ್ಯ ವಿಭಾಗದ (213) 485-2582 ಸಂಖ್ಯೆ ಸಂಪರ್ಕಿಸಬೇಕು ಎಂದು ತಿಳಿಸಿದ್ದಾರೆ.

> **ಅಮೆರಿಕದಲ್ಲಿ ಭಾರತೀಯ ವಿದ್ಯಾರ್ಥಿಗಳ ನಾಪತ್ತೆ ಪ್ರಕರಣಗಳ ಸರಣಿಗೆ ಮತ್ತೊಂದು ಸೇರ್ಪಡೆಯಾಗಿದೆ. ಕ್ಯಾಲಿಫೋರ್ನಿಯಾ ಸ್ಟೇಟ್ ವಿವಿಯಲ್ಲಿ ವ್ಯಾಸಂಗ ಮಾಡುತ್ತಿದ್ದ 23 ವರ್ಷದ ನಿತೀಶಾ ಕಂಡುಲಾ, ಮೇ 28ರಿಂದ ನಾಪತ್ತೆಯಾಗಿದ್ದಾಳೆ. ಆಕೆ ಕೊನೆಯ ಬಾರಿ ಲಾಸ್ ಏಂಜಲಿಸ್‌ನಲ್ಲಿ ಕಾಣಿಸಿದ್ದಳು ಎಂದು ಪೊಲೀಸರು ತಿಳಿಸಿದ್ದಾರೆ.**

### ಸರಣಿ ಅಪರಾಧ ಪ್ರಕರಣಗಳು

**ಕಳೆದ ತಿಂಗಳು ಭಾರತೀಯ ವಿದ್ಯಾರ್ಥಿ, 26 ವರ್ಷದ ರೂಪೇಶ್ ಚಂದ್ರ ಚಿಂತಾಕಿಂದ್ ಷಿಕಾಗೋದಿಂದ ನಾಪತ್ತೆಯಾಗಿರುವುದು ವರದಿಯಾಗಿತ್ತು. ಮಾರ್ಚ್ ತಿಂಗಳಿಂದ ನಾಪತ್ತೆಯಾಗಿದ್ದ ಭಾರತ ಮೂಲದ ವಿದ್ಯಾರ್ಥಿ, ಏಪ್ರಿಲ್ ತಿಂಗಳಲ್ಲಿ ಅಮೆರಿಕದ ಕ್ಲೀವ್‌ಲ್ಯಾಂಡ್ ನಗರದಲ್ಲಿ ಶವವಾಗಿ ಪತ್ತೆಯಾಗಿದ್ದ. ಹೈದರಾಬಾದ್‌ನ ನಚರಾಮ್ ನಿವಾಸಿ ಮೊಹಮ್ಮದ್ ಅಬ್ದುಲ್ ಅರಫಾತ್, ಕ್ಲೀವ್‌ಲ್ಯಾಂಡ್ ನಗರದಲ್ಲಿ ಶವವಾಗಿ ಪತ್ತೆಯಾಗಿದ್ದ. ಆತ ಕ್ಲೀವ್‌ಲ್ಯಾಂಡ್ ವಿವಿಯಿಂದ ಐಟಿ ಸ್ನಾತಕೋತ್ತರ ಪದವಿಗಾಗಿ ಕಳೆದ ವರ್ಷದ ಮೇ ತಿಂಗಳಲ್ಲಿ ಅಮೆರಿಕಕ್ಕೆ ತೆರಳಿದ್ದ. ಮಿಸ್ಸೋರಿಯ ಸೇಂಟ್ ಲೂಯಿಸ್‌ನಲ್ಲಿ 34 ವರ್ಷದ ಶಾಸ್ತ್ರೀಯ ನೃತ್ಯಪಟು ಅಮರನಾಥ್ ಘೋಷ್ ಅವರನ್ನು ಮಾರ್ಚ್‌ನಲ್ಲಿ ಗುಂಡಿಕ್ಕಿ ಹತ್ಯೆ ಮಾಡಲಾಗಿತ್ತು. ಪುರ್ಡ್ಯೂ ವಿವಿಯ ವಿದ್ಯಾರ್ಥಿಯಾಗಿದ್ದ 23 ವರ್ಷದ ಸಮೀರ್ ಕಾಮತ್, ಫೆಬ್ರವರಿ 5ರಂದು ಇಂಡಿಯಾನಾದ ಉದ್ಯಾನವೊಂದರಲ್ಲಿ ಶವವಾಗಿ ಪತ್ತೆಯಾಗಿದ್ದ. ಜನವರಿಯಲ್ಲಿ, ಇಲ್ಲಿನೊಯಿಸ್ ವಿವಿ ವಿದ್ಯಾರ್ಥಿಯಾಗಿದ್ದ 18 ವರ್ಷದ ಅಕುಲ್ ಧವನ್ ನಿಗೂಢವಾಗಿ ಮೃತಪಟ್ಟಿದ್ದ.**

ಮುಂದುವರಿದ ಅಪರಾಧ ಸರಣಿ

## ಮಿನಿ ನ್ಯೂಸ್

### ಪ್ರೇಮ್ ಸಿಂಗ್ ತಮಾಂಗ್‌ಗೆ 2ನೇ ಬಾರಿಗೆ ಸಿಕ್ಕಿಂ ಪಟ್ಟ

**ಗ್ಯಾಂಗ್‌ಟಕ್:** ಸಿಕ್ಕಿಂ ಕ್ರಾಂತಿಕಾರಿ ಮೋರ್ಚಾದ (ಎಸ್‌ಕೆಎಂ) ಶಾಸಕಾಂಗ ಪಕ್ಷದ ನಾಯಕರಾಗಿ ಪ್ರೇಮ್ ಸಿಂಗ್ ತಮಾಂಗ್ ಆಯ್ಕೆಯಾಗಿದ್ದು, ಎರಡನೇ ಬಾರಿ ಸಿಕ್ಕಿಂ ಮುಖ್ಯಮಂತ್ರಿಯಾಗಿ ಶೀಘ್ರದಲ್ಲೇ ಪ್ರಮಾಣವಚನ ಸ್ವೀಕರಿಸಲಿದ್ದಾರೆ. ಮುಖ್ಯಮಂತ್ರಿಗಳ ಅಧಿಕೃತ ನಿವಾಸದಲ್ಲಿ ನಡೆದ ಶಾಸಕಾಂಗ ಪಕ್ಷದ ಸಭೆಯಲ್ಲಿ ಹೊಸದಾಗಿ ಆಯ್ಕೆಯಾದ ಎಲ್ಲಾ 31 ಶಾಸಕರು ಹಾಜರಿದ್ದರು.ಸಭೆಯಲ್ಲಿ ಎಸ್‌ಕೆಎಂ ಪ್ರಧಾನ ಕಾರ್ಯದರ್ಶಿ ಅರುಣ್ ಉಪ್ರೇತಿ ಅವರು ಶಾಸಕಾಂಗ ಪಕ್ಷದ ನಾಯಕರಾಗಿ ಸಿಎಂ ತಮಾಂಗ್ ಅವರ ಹೆಸರನ್ನು ಪ್ರಸ್ತಾಪಿಸಿದರು. ಅದನ್ನು ಪಕ್ಷದ ಶಾಸಕಿ ಸೋನಮ್ ಲಾಮಾ ಅನುಮೋದಿಸಿದರು.

ನಂತರ ಅವರನ್ನು ಶಾಸಕಾಂಗ ಪಕ್ಷದ ನಾಯಕರನ್ನಾಗಿ ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ. ಪಕ್ಷದ ನಾಯಕರು ತಮಾಂಗ್ ಅವರ ಆಯ್ಕೆಗೆ ಅಭಿನಂದನೆ ಸಲ್ಲಿಸಿದ್ದು, ಅವರ ನಾಯಕತ್ವದಲ್ಲಿ ಸಮರ್ಪಣಾಭಾವದಿಂದ ಕೆಲಸ ಮಾಡುವುದಾಗಿ ಪ್ರತಿಜ್ಞೆ ಮಾಡಿದ್ದಾರೆ ಎಂದು ಪ್ರಕಟಣೆ ಹೇಳಿದೆ. ಹಿಮಾಲಯ ರಾಜ್ಯ ಸಿಕ್ಕಿಂನಲ್ಲಿ ಸಿಕ್ಕಿಂ ಕ್ರಾಂತಿಕಾರಿ ಮೋರ್ಚಾ 32 ಸದಸ್ಯ ಬಲದ ವಿಧಾನಸಭೆಯಲ್ಲಿ 31 ಸ್ಥಾನಗಳನ್ನು ಗೆದ್ದುಕೊಂಡು ಸತತ ಎರಡನೇ ಅವಧಿಗೆ ಅಧಿಕಾರಕ್ಕೆ ಮರಳಿದೆ. ಪ್ರತಿಪಕ್ಷ ಎಸ್‌ಡಿಎಫ್ ಕೇವಲ ಒಂದು ಸ್ಥಾನವನ್ನು ಪಡೆದುಕೊಂಡಿದೆ.

### ಟ್ರ್ಯಾಕ್ಟರ್ ಟ್ರಾಲಿ ಪಲ್ಟಿಯಾಗಿ 13 ಮಂದಿ ಸಾವು

**ರಾಜಗಢ:** ಮಧ್ಯಪ್ರದೇಶದ ರಾಜ್‌ಗಢ ಜಿಲ್ಲೆಯ ಪಿಪ್ಲೋಡಿಯಲ್ಲಿ ತಡರಾತ್ರಿ ಟ್ರ್ಯಾಕ್ಟರ್ ಟ್ರಾಲಿ ಪಲ್ಟಿಯಾದ ಪರಿಣಾಮ ನಾಲ್ವರು ಮಕ್ಕಳು ಸೇರಿದಂತೆ 13 ಜನರು ಸಾವನ್ನಪ್ಪಿದ್ದಾರೆ ಮತ್ತು 15 ಜನರು ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಗಾಯಗೊಂಡವರಲ್ಲಿ 13 ಮಂದಿಯನ್ನು ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದ್ದು, ಇಬ್ಬರ ತಲೆ ಮತ್ತು ಎದೆಗೆ ಗಾಯಗಳಾಗಿರುವ ಕಾರಣ ಸುಧಾರಿತ ಚಿಕಿತ್ಸೆಗಾಗಿ ಭೋಪಾಲ್‌ಗೆ ರವಾನಿಸಲಾಗಿದೆ ಎಂದು ರಾಜ್‌ಗಢ ಜಿಲ್ಲಾಧಿಕಾರಿ ಹರ್ಷ್ ದೀಕ್ಷಿತ್ ದೂರವಾಣಿ ಮೂಲಕ ಪಿಟಿಐಗೆ ತಿಳಿಸಿದ್ದಾರೆ. ತೀವ್ರವಾಗಿ ಗಾಯಗೊಂಡಿರುವ ಇಬ್ಬರು ಅಪಾಯದಿಂದ ಪಾರಾಗಿರುವುದರಿಂದ ಸಾವಿನ ಸಂಖ್ಯೆ ಹೆಚ್ಚಾಗುವ ಸಾಧ್ಯತೆ ಇಲ್ಲ ಎಂದು ಅವರು ಹೇಳಿದರು. ಬಲಿಪಶುಗಳು ನೆರೆಯ ರಾಜಸ್ಥಾನದ ಮೋತಿಪುರ ಗ್ರಾಮದಿಂದ ಬಂದು ಇಲ್ಲಿನ ಕುಲಂಪುರಕ್ಕೆ ತೆರಳುತ್ತಿದ್ದ ಮದುವೆ ಪಾರ್ಟಿಯ ಸದಸ್ಯರು ಎಂದು ಇನ್ನೊಬ್ಬ ಅಧಿಕಾರಿ ತಿಳಿಸಿದ್ದಾರೆ.

### ಮತ ಎಣಿಕೆ ಕೇಂದ್ರದ ಬಳಿ ಸುಳಿಯದಂತೆ ಶಾಸಕನಿಗೆ ಸುಪ್ರಿಂ ತಡೆ

**ನವದೆಹಲಿ:** ಮತಗಟ್ಟೆಯಲ್ಲಿ ಇವಿಎಂ ಒಡೆದು ಹಾಕಿದ ಆರೋಪದ ಮೇಲೆ ವೈಎಸ್‌ಆರ್ ಕಾಂಗ್ರೆಸ್ ಶಾಸಕ ಪಿನ್ನೆಲ್ಲಿ ರಾಮಕೃಷ್ಣ ರೆಡ್ಡಿಗೆ ಜೂನ್ 4ರಂದು ಮಾಚರ್ಲಾ ವಿಧಾನಸಭಾ ಕ್ಷೇತ್ರದ ಮತ ಎಣಿಕೆ ಕೇಂದ್ರ ಪ್ರವೇಶಿಸದಂತೆ ಸುಪ್ರೀಂ ಕೋರ್ಟ್ ತಡೆ ನೀಡಿದೆ. ನ್ಯಾಯಮೂರ್ತಿಗಳಾದ ಅರವಿಂದ್ ಕುಮಾರ್, ಸಂದೀಪ್ ಮೆಹ್ತಾ ಅವರ ರಜಾಕಾಲದ ಪೀಠವು ಮೇ 13 ರ ಚುನಾವಣೆ ಸಂದರ್ಭ ದಲ್ಲಿ ನಡೆದ ಘಟನೆಯ ವೀಡಿಯೊವನ್ನು ನೋಡಿದೆ ಮತ್ತು ರೆಡ್ಡಿಗೆ ನೀಡಲಾದ ನಿರೀಕ್ಷಣಾ ಜಾಮೀನು ನ್ಯಾಯ ವ್ಯವಸ್ಥೆಯ ಸಂಪೂರ್ಣ ಅಪಹಾಸ್ಯ ಎಂದು ಹೇಳಿದೆ.

ಜೂನ್ 4 ರಂದು ಮಾಚರ್ಲಾ ವಿಧಾನಸಭಾ ಕ್ಷೇತ್ರದ ಮತ ಎಣಿಕೆ ಕೇಂದ್ರಕ್ಕೆ ಪ್ರವೇಶಿಸದಂತೆ ಮತ್ತು ಅದರ ಸಮೀಪದಲ್ಲಿ ಇರದಂತೆ ಪೀಠವು ರೆಡ್ಡಿಗೆ ಕಟ್ಟುನಿಟ್ಟಿಗಿ ಸೂಚಿಸಿದೆ. ಮೇ 28 ರಂದು ರೆಡ್ಡಿ ಅವರಿಗೆ ನೀಡಲಾದ ಮಧ್ಯಂತರ ರಕ್ಷಣೆಯಿಂದ ಪ್ರಭಾವಿತರಾಗದೆ ಜೂನ್ 6 ರಂದು ವಿಚಾರಣೆಗೆ ಪಟ್ಟಿ ಮಾಡಲಾದ ರೆಡ್ಡಿ ವಿರುದ್ಧದ ಪ್ರಕರಣಗಳಿಗೆ ಸಂಬಂಧಿಸಿದ ಅರ್ಜಿಯನ್ನು ನಿರ್ಧರಿಸಲು ಆಂಧ್ರಪ್ರದೇಶ ಹೈಕೋರ್ಟ್‌ಗೆ ಅದು ಕೇಳಿದೆ. ಆಡಳಿತಾರೂಢ ವೈಎಸ್‌ಆರ್‌ಸಿಪಿಯ ಮಾಚರ್ಲಾ ವಿಧಾನಸಭಾ ಕ್ಷೇತ್ರದ ಅಭ್ಯರ್ಥಿ ರೆಡ್ಡಿ ಅವರು ತಮ್ಮ ಬೆಂಬಲಿಗರೊಂದಿಗೆ ಮತಗಟ್ಟೆಗೆ ನುಗ್ಗಿ ವಿವಿಪ್ಯಾಟ್ ಮತ್ತು ಇವಿಎಂ ಯಂತ್ರಗಳನ್ನು ಒಡೆದಿದ್ದಾರೆ ಎನ್ನಲಾಗಿದೆ.

### ವಿಮಾನದ ಬಾಗಿಲು ತೆರೆಯಲೆತ್ನಿಸಿದ ಪ್ರಯಾಣಿಕನ ಬಂಧನ

**ಮುಂಬೈ:** ಕೋಝಿಕ್ಕೋಡ್‌ನಿಂದ ಬಹ್ರೇನ್‌ಗೆ ತೆರಳುತ್ತಿದ್ದ ಏರ್ ಇಂಡಿಯಾ ಎಕ್ಸ್‌ಪ್ರೆಸ್ ವಿಮಾನದಲ್ಲಿ ಕ್ಯಾಬಿನ್ ಸಿಬ್ಬಂದಿಯ ಮೇಲೆ ಹಲ್ಲೆ ನಡೆಸಿ ವಿಮಾನದ ಬಾಗಿಲು ತೆರೆಯಲು ಯತ್ನಿಸಿದ ಆರೋಪದ ಮೇಲೆ 25 ವರ್ಷದ ಯುವಕನನ್ನು ಮುಂಬೈ ಪೊಲೀಸರು ಬಂಧಿಸಿದ್ದಾರೆ. ಇಲ್ಲಿನ ಛತ್ರಪತಿ ಶಿವಾಜಿ ಮಹಾರಾಜ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ವಿಮಾನ ತುರ್ತು ಭೂಸ್ಪರ್ಶ ಮಾಡಿದ ನಂತರ ಆರೋಪಿ ಅಬ್ದುಲ್ ಮುಸಾವಿರ್ ನಡುಕಂಡಿಯನ್ನು ಬಂಧಿಸಲಾಗಿದೆ ಎಂದು ಸಹರ್ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಸಿಬ್ಬಂದಿಗಳು ಪ್ರಯಾಣಿಕನನ್ನು ತನ್ನ ಸೀಟಿಗೆ ಕರೆತರುವಲ್ಲಿ ಯಶಸ್ವಿಯಾದಾಗ, ಅವನು ಇತರ ಪ್ರಯಾಣಿಕರನ್ನು ಅವಾಚ್ಯವಾಗಿ ನಿಂದಿಸಲು ಮತ್ತು ಹಲ್ಲೆ ಮಾಡಲು ಪ್ರಾರಂಭಿಸಿದನು ನಂತರ ತುರ್ತು ಬಾಗಿಲು ತೆರೆಯುವಂತೆ ಬೆದರಿಕೆ ಹಾಕಿದನು ಎಂದು ಅಧಿಕಾರಿ ಹೇಳಿದರು. ಭದ್ರತಾ ಬೆದರಿಕೆಗೆ ಹೆದರಿದ ಪೈಲಟ್ ಛತ್ರಪತಿ ಶಿವಾಜಿ ಮಹಾರಾಜ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ತುರ್ತು ಭೂಸ್ಪರ್ಶ ಮಾಡಿ ಭದ್ರತಾ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.ಆರೋಪಿಗಳ ವಿರುದ್ಧ ಭಾರತೀಯ ದಂಡ ಸಂಹಿತೆಯ ವಿಮಾನದ ಸಂಬಂಧಿತ ನಿಬಂಧನೆಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.

### ಸಿರಿಯಾ ಮೇಲೆ ಇಸ್ರೇಲ್ ವಾಯುದಾಳಿ

**ಬೇರೂಟ್:** ಸಿರಿಯಾದ ಅಲೆಪ್ಪೋ ನಗರದ ಮೇಲೆ ಇಸ್ರೇಲ್ ವಾಯುದಾಳಿ ನಡೆಸಿದ್ದು, ಹಲವರು ಮೃತಪಟ್ಟಿದ್ದಾರೆ ಎಂದು ಅಲ್ಲಿನ ಸರ್ಕಾರಿ ಮಾಧ್ಯಮ ವರದಿ ಮಾಡಿದೆ. ಆಗ್ನೇಯ ಭಾಗದ ಅಲೆಪ್ಪೋ ನಗರದ ಮೇಲೆ ಈ ದಾಳಿ ನಡೆದಿದೆ ಎಂದಷ್ಟೇ ಹೇಳಿರುವ ಸನಾ ಸುದ್ದಿಸಂಸ್ಥೆ ಮೃತರ ಸಂಖ್ಯೆ ಬಗ್ಗೆ ಯಾವುದೇ ಮಾಹಿತಿ ನೀಡಿಲ್ಲ. ಇಸ್ರೇಲ್ ದಾಳಿಯಲ್ಲಿ ಹಲವರು ಹುತಾತ್ಮರಾಗಿದ್ದು, ಕೆಲ ಸ್ವತ್ತಿನ ನಷ್ಟವಾಗಿದೆ' ಎಂದಷ್ಟೇ ತಿಳಿಸಿದೆ. ಈ ಬಗ್ಗೆ ಇಸ್ರೇಲ್‌ನಿಂದ ಯಾವುದೇ ಪ್ರತಿಕ್ರಿಯೆ ಬಂದಿಲ್ಲ. 1948ರಲ್ಲಿ ಇಸ್ರೇಲ್ ದೇಶ ಅಸ್ತಿತ್ವಕ್ಕೆ ಬಂದಾಗಿನಿಂದ ಇಸ್ರೇಲ್, ಸಿರಿಯಾ ನಡುವೆ ಸಂಘರ್ಷವಿದೆ. ಹಲವು ವರ್ಷಗಳ ಈ ಸಂಘರ್ಷದಲ್ಲಿ ಸಿರಿಯಾ ಅಧ್ಯಕ್ಷ ಬಶರ್ ಅಸ್ಸಾದ್ ಅವ ರನ್ನು ಇರಾನ್ ಬೆಂಬಲಿಸುತ್ತಿದೆ. ಈ ಹಿಂದೆ ಇಸ್ರೇಲ್, ಇರಾನ್ ಅನ್ನೂ ಗುರಿಯಾಗಿಸಿಕೊಂಡು ದಾಳಿ ಮಾಡಿದೆ. ಗಾಜಾದಲ್ಲಿ ಹಮಾಸ್ ಬಂಡುಕೋರರ ವಿರುದ್ಧದ ಇಸ್ರೇಲ್ ಹೋರಾಟದ ನಡುವೆಯೇ ಈ ದಾಳಿ ನಡೆದಿದೆ.



# ಪರಾಗ್ ಈ ರೀತಿ ಉತ್ತರ ಕೊಡೋದಾ!

ಈ ಬಾರಿಯ ಟಿ20 ವಿಶ್ವಕಪ್‌ನಲ್ಲಿ ರಿಯಾನ್ ಪರಾಗ್‌ಗೆ ಟೀಂ ಇಂಡಿಯಾದಲ್ಲಿ ಅವಕಾಶ ನೀಡಬೇಕೆಂದು ಹಲವರು ಹೇಳಿದ್ದರು. ಆದರೆ ಪರಾಗ್‌ಗೆ ತಂಡದಲ್ಲಿ ಅವಕಾಶ ಸಿಗಲಿಲ್ಲ. ಸಧ್ಯ ತಮ್ಮ ಅಭ್ಯಾಸದಲ್ಲಿ ನಿರತರಾಗಿರುವ ಪರಾಗ್ ಬಳಿ ಈ ವಿಶ್ವಕಪ್‌ನಲ್ಲಿ ಸೆಮಿಫೈನಲ್ ಆಡುವ ಅಗ್ರ ನಾಲ್ಕು ತಂಡಗಳ ಬಗ್ಗೆ ಪ್ರಶ್ನೆ ಕೇಳಲಾಗಿದೆ. ಅದಕ್ಕೆ ಅವರು ನೀಡಿದ ಉತ್ತರ ಅಚ್ಚರಿ ಮೂಡಿಸಿದೆ.

ಟಿ20 ವಿಶ್ವಕಪ್ ಆರಂಭವಾಗಿ ಈಗಾಗಲೇ 2 ದಿನಗಳು ಕಳೆದಿವೆ. ಅದಾಗ್ಯೂ ಈ ಮಿನಿ ವಿಶ್ವಸಮರದ ಜ್ವರ ಎಲ್ಲಿಯೂ ಕಾವೇರಿದಂತೆ ಕಾಣುತ್ತಿಲ್ಲ. ಪ್ರಮುಖ ತಂಡಗಳು ಇನ್ನು ಅಖಾಡಕ್ಕಿಳಿಯದಿರುವುದು ಇದಕ್ಕೆ ಕಾರಣವಾಗಿರಬಹುದು. ಆದರೂ ಲೀಗ್ ಹಂತಕ್ಕೂ ಮುನ್ನವೇ ಸೆಮಿಫೈನಲ್‌ಗೇರುವ 4 ತಂಡಗಳು ಯಾವುವು ಎಂಬುದರ ಬಗ್ಗೆ ಈಗಾಗಲೇ ಚರ್ಚೆ ಶುರುವಾಗಿದೆ.

ಅಲ್ಲದೆ ಈ ಬಾರಿಯ ಟಿ20 ವಿಶ್ವಕಪ್‌ನಲ್ಲಿ ರಿಯಾನ್ ಪರಾಗ್‌ಗೆ ಟೀಂ ಇಂಡಿಯಾದಲ್ಲಿ ಅವಕಾಶ ನೀಡಬೇಕೆಂದು ಹಲವರು ಹೇಳಿದ್ದರು. ಆದರೆ ಪರಾಗ್‌ಗೆ ತಂಡದಲ್ಲಿ ಅವಕಾಶ ಸಿಗಲಿಲ್ಲ. ಸಧ್ಯ ತಮ್ಮ ಅಭ್ಯಾಸದಲ್ಲಿ ನಿರತರಾಗಿರುವ ಪರಾಗ್ ಬಳಿ ಈ ವಿಶ್ವಕಪ್‌ನಲ್ಲಿ ಸೆಮಿಫೈನಲ್ ಆಡುವ ಅಗ್ರ ನಾಲ್ಕು ತಂಡಗಳ ಬಗ್ಗೆ ಪ್ರಶ್ನೆ ಕೇಳಲಾಗಿದೆ.

ಇದಕ್ಕೆ ಉತ್ತರಿಸಿರುವ ಪರಾಗ್ ಮೊದಲ ಆಯ್ಕೆ ಭಾರತ ಎಂದಿದ್ದಾರೆ. ಆ ಬಳಿಕ ಅವರು ಯಾವ ತಂಡಗಳು ಮೊದಲ ನಾಲ್ಕು ಸ್ಥಾನಗಳನ್ನು ತಲುಪುತ್ತವೆ ಎಂಬುದರ ಕುರಿತು ಮಾತನಾಡಲು ನಿರಾಕರಿಸಿದ್ದಾರೆ. ಈ ಬಗ್ಗೆ ಮಾತನಾಡಿದ ಅವರು, ಟಾಪ್ ನಾಲ್ಕು ತಂಡಗಳ ಬಗ್ಗೆ ಮಾತನಾಡುವುದು ಪಕ್ಷಪಾತವಾಗುತ್ತದೆ.

ಆದರೆ ಪ್ರಾಮಾಣಿಕವಾಗಿ ಹೇಳಬೇಕೆಂದರೆ, ನಾನು ವಿಶ್ವಕಪ್ ನೋಡುವ ಗೋಜಿಗೆ ಹೋಗುವುದಿಲ್ಲ. ಕೊನೆಯಲ್ಲಿ ಯಾರು ಗೆಲ್ಲುತ್ತಾರೆ ಎಂದು ನೋಡುತ್ತೇನೆ ಮತ್ತು ಸಂತೋಷಪಡುತ್ತೇನೆ.

ನಾನು ವಿಶ್ವಕಪ್ ಆಡುವಾಗ ಅಗ್ರ ನಾಲ್ಕು ತಂಡಗಳ ಬಗ್ಗೆ ಮಾತನಾಡುತ್ತೇನೆ ಎಂದಿದ್ದಾರೆ.

# ಸೂಪರ್ ಓವರ್‌ನಲ್ಲಿ ರೋಚಕ ಜಯ ಸಾಧಿಸಿದ ನಮೀಬಿಯಾ

## ಸೂಪರ್ ಓವರ್‌ನತ್ತ ಸಾಗಿದ ಪಂದ್ಯದಲ್ಲಿ ನಮೀಬಿಯಾ ತಂಡ 11 ರನ್‌ಗಳ ರೋಚಕ ಜಯ



ಬಾರ್ಬಡೋಸ್‌ನ ಕೆನ್ಸಿಂಗ್ಟನ್ ಓವಲ್ ಮೈದಾನದಲ್ಲಿ ನಡೆದ ಟಿ20 ವಿಶ್ವಕಪ್‌ನ 3ನೇ ಪಂದ್ಯದಲ್ಲಿ ನಮೀಬಿಯಾ ತಂಡ ಜಯ ಸಾಧಿಸಿದೆ. ರಣರೋಚಕ ಹೋರಾಟಕ್ಕೆ ಸಾಕ್ಷಿಯಾಗಿದ್ದ ಈ ಪಂದ್ಯವು ಟೈನಲ್ಲಿ ಅಂತ್ಯ ಕಂಡಿತ್ತು. ಅದರಂತೆ ಸೂಪರ್ ಓವರ್‌ನತ್ತ ಸಾಗಿದ ಪಂದ್ಯದಲ್ಲಿ ನಮೀಬಿಯಾ ತಂಡ 11 ರನ್‌ಗಳ ರೋಚಕ ಜಯ ಸಾಧಿಸಿದೆ.

ಇದಕ್ಕೂ ಮುನ್ನ ಈ ಪಂದ್ಯದಲ್ಲಿ ಟಾಸ್ ಗೆದ್ದ ನಮೀಬಿಯಾ ಬೌಲಿಂಗ್ ಆಯ್ದುಕೊಂಡಿತು. ಅದರಂತೆ ಇನಿಂಗ್ಸ್ ಆರಂಭಿಸಿದ ಒಮಾನ್ ತಂಡಕ್ಕೆ ಆರಂಭಿಕ ಆಘಾತ ನೀಡುವಲ್ಲಿ ರೂಬೆನ್ ಟ್ರಂಪೆಲ್ಮನ್ ಯಶಸ್ವಿಯಾದರು.

ಮೊದಲ ಓವರ್‌ನ ಮೊದಲ ಎಸೆತದಲ್ಲಿ ಆರಂಭಿಕ ಆಟಗಾರ ಕಶ್ಯಪ್ ಪ್ರಜಾಪತಿ (0) ಯನ್ನು ಎಲ್‌ಬಿಡಬ್ಲ್ಯು ಮಾಡಿದ ರೂಬೆನ್ ಟ್ರಂಪೆಲ್ಮನ್, 2ನೇ ಎಸೆತದಲ್ಲಿ ಒಮಾನ್ ತಂಡದ ನಾಯಕ ಅಖಿಬ್ ಇಲ್ಯಾಸ್ (0) ವಿಕೆಟ್ ಪಡೆದರು. ಅಂದರೆ ಶೂನ್ಯಕ್ಕೆ 2 ವಿಕೆಟ್ ಉರುಳಿಸಿ ಒಮಾನ್ ತಂಡಕ್ಕೆ ಬ್ಯಾಕ್ ಟು ಬ್ಯಾಕ್ ಆಘಾತ ನೀಡಿದರು.

ಈ ಆಘಾತದಿಂದ ಚೇತರಿಸಿಕೊಳ್ಳುವ ಮುನ್ನವೇ ನಸೀಮ್ ಖುಷಿ (6) ವಿಕೆಟ್ ಪಡೆಯುವಲ್ಲಿ ರೂಬೆನ್ ಟ್ರಂಪೆಲ್ಮನ್ ಯಶಸ್ವಿಯಾದರು.

ಈ ಹಂತದಲ್ಲಿ ಜವಾಬ್ದಾರಿಯುತ ಬ್ಯಾಟಿಂಗ್ ಪ್ರದರ್ಶಿಸಿದ ಝೀಶಾನ್ ಮಖ್ಸೂದ್ 22 ರನ್‌ಗಳ ಕೊಡುಗೆ ನೀಡಿದರೆ, ಖಾಲಿದ್ ಖೈಲಿ 34 ರನ್ ಬಾರಿಸಿದರು. ಇನ್ನು ಅಯಾನ್ ಖಾನ್ 15 ರನ್‌ಗಳ ಕೊಡುಗೆ ನೀಡಿದರು. ಇದಾದ ಬಳಿಕ ಬ್ಯಾಕ್ ಟು ಬ್ಯಾಕ್ ವಿಕೆಟ್ ಕಳೆದುಕೊಂಡ ಒಮಾನ್ ತಂಡವು 19.4 ಓವರ್‌ಗಳಲ್ಲಿ 109 ರನ್‌ಗಳಿಗೆ ಆಲೌಟ್ ಆಯಿತು.

110 ರನ್‌ಗಳ ಸುಲಭ ಗುರಿ ಬೆನ್ನತ್ತಿದ ನಮೀಬಿಯಾ ತಂಡದ ಕೂಡ ಉತ್ತಮ ಆರಂಭ ಪಡೆದಿರಲಿಲ್ಲ. ಆರಂಭಿಕ ಆಟಗಾರ ಮೈಕೆಲ್ ವ್ಯಾನ್ ಲಿಂಗೆನ್ (0) ಬಿಲಾಲ್ ಖಾನ್ ಎಸೆತದಲ್ಲಿ ಕ್ಲೀನ್ ಬೌಲ್ಡ್ ಆಗಿ ನಿರ್ಗಮಿಸಿದರು. ಈ ಹಂತದಲ್ಲಿ ಜೊತೆಗೂಡಿದ ನಿಕೋ ಲಸ್ ಡೆವಿನ್ ಹಾಗೂ ಜಾನ್ ಫ್ರೈಲಿಂಕ್ 42 ರನ್‌ಗಳ ಜೊತೆಯಾಟವಾಡುವ ಮೂಲಕ ತಂಡವನ್ನು ಆರಂಭಿಕ ಆಘಾತದಿಂದ ಪಾರು ಮಾಡಿದರು.

ಈ ಹಂತದಲ್ಲಿ ನಿಕೋಲಸ್ ಡೆವಿನ್ (24) ವಿಕೆಟ್ ಒಪ್ಪಿಸಿದರು. ಆ ಬಳಿಕ ಬಂದ ನಾಯಕ ಗೆರ್ಹಾರ್ಡ್ ಎರಾಸ್ಮಸ್ ಕೇವಲ 13 ರನ್ ಗಳಿಸಲಷ್ಟೇ ಶಕ್ತರಾದರು. ಮತ್ತೊಂದೆಡೆ ಕ್ರೀಸ್ ಕಚ್ಚಿ ನಿಂತಿದ್ದ ಜಾನ್ ಫ್ರೈಲಿಂಕ್ 48 ಎಸೆತಗಳಲ್ಲಿ 6 ಫೋರ್‌ಗಳೊಂದಿಗೆ 45 ರನ್ ಬಾರಿಸಿ ಕೊನೆಯ ಓವರ್‌ನ ಮೊದಲ ಎಸೆತದಲ್ಲಿ ವಿಕೆಟ್ ಒಪ್ಪಿಸಿದರು.

ಪರಿಣಾಮ ಅಂತಿಮ ಓವರ್‌ನ ಕೊನೆಯ 5 ಎಸೆತಗಳಲ್ಲಿ 5 ರನ್‌ಗಳು ಬೇಕಿತ್ತು. ಅದ್ಭುತ ದಾಳಿ ಸಂಘಟಿಸಿದ ಮೆಹ್ರಾನ್ ಖಾನ್ 2ನೇ ಎಸೆತದಲ್ಲಿ ಯಾವುದೇ ರನ್ ನೀಡಲಿಲ್ಲ. ಅಲ್ಲದೆ 3ನೇ ಎಸೆತದಲ್ಲಿ ಝೇನ್ ಗ್ರೀನ್ (0) ಅವರನ್ನು ಎಲ್‌ಬಿಡಬ್ಲ್ಯು ಮಾಡಿದರು.

ನಮೀಬಿಯಾ ತಂಡಕ್ಕೆ ಕೊನೆಯ 3 ಎಸೆತಗಳಲ್ಲಿ 5 ರನ್‌ಗಳು ಬೇಕಿತ್ತು. 4ನೇ ಎಸೆತದಲ್ಲಿ ಮಲನ್ ಕ್ರುಗರ್ 1 ರನ್ ಗಳಿಸಿದರು. 5ನೇ ಎಸೆತದಲ್ಲಿ ಡೇವಿಡ್ ವೀಝು 2 ರನ್ ಬಾರಿಸಿದರು. ಕೊನೆಯ ಎಸೆತದಲ್ಲಿ 2 ರನ್‌ಗಳು ಬೇಕಿತ್ತು. ಅಂತಿಮ ಎಸೆತದಲ್ಲಿ ಒಂದು ರನ್ ಓಡುವ ಮೂಲಕ ನಮೀಬಿಯಾ ತಂಡ ಪಂದ್ಯವನ್ನು ಟೈ ಮಾಡಿಕೊಂಡಿತು.

ಒಮಾನ್ 109 (19.4)
ನಮೀಬಿಯಾ 109/6 (20)

**ನಮೀಬಿಯಾ ಪ್ಲೇಯಿಂಗ್ 11:** ಮೈಕೆಲ್ ವ್ಯಾನ್ ಲಿಂಗೆನ್, ನಿಕೋಲಾಸ್ ಡೇವಿನ್, ಜಾನ್ ಫ್ರಿಲಿಂಕ್, ಗೆರ್ಹಾರ್ಡ್ ಎರಾಸ್ಮಸ್ (ನಾಯಕ), ಮಲನ್ ಕ್ರುಗರ್, ಜೆಜೆ ಸ್ಮಿತ್, ಡೇವಿಡ್ ವೈಸ್, ಝೇನ್ ಗ್ರೀನ್ (ವಿಕೆಟ್ ಕೀಪರ್), ರೂಬೆನ್ ಟ್ರಂಪೆಲ್ಮನ್, ಬರ್ನಾರ್ಡ್ ಸ್ಕೋಲ್ಟ್ಜ, ತಂಗೇನಿ ಲುಂಗಮೆನಿ.


**ಒಮಾನ್ ಪ್ಲೇಯಿಂಗ್ 11:** ಕಶ್ಯಪ್ ಪ್ರಜಾಪತಿ, ನಸೀಮ್ ಖುಷಿ (ವಿಕೆಟ್ ಕೀಪರ್), ಅಕಿಬ್ ಇಲ್ಯಾಸ್ (ನಾಯಕ), ಜೀಶನ್ ಮಕ್ಸೂದ್, ಖಾಲಿದ್ ಕೈಲ್, ಅಯಾನ್ ಖಾನ್, ಮೊಹಮ್ಮದ್ ನದೀಮ್, ಮೆಹ್ರಾನ್ ಖಾನ್, ಶಕೀಲ್ ಅಹ್ಮದ್, ಕಲೀಮುಲ್ಲಾ, ಬಿಲಾಲ್ ಖಾನ್.

### ಸೂಪರ್ ಓವರ್ ಪಂದ್ಯ

**ಬಿಲಾಲ್ ಖಾನ್ ಎಸೆದ ಸೂಪರ್ ಓವರ್‌ನ ಮೊದಲ ಎಸೆತದಲ್ಲಿ ನಮೀಬಿಯಾ ಬ್ಯಾಟರ್ ಡೇವಿಡ್ ವೀಝು ಫೋರ್ ಬಾರಿಸಿದರು. 2ನೇ ಎಸೆತದಲ್ಲಿ ಡೀಪ್ ಮಿಡ್ ವಿಕೆಟ್‌ನತ್ತ ಭರ್ಜರಿ ಸಿಕ್ಸ್ ಸಿಡಿಸಿದರು. ಮೂರನೇ ಎಸೆತದಲ್ಲಿ 2 ರನ್. ನಾಲ್ಕನೇ ಎಸೆತದಲ್ಲಿ 1 ರನ್. ಐದನೇ ಎಸೆತದಲ್ಲಿ ಎರಾಸ್ಮಸ್ ಲೆಗ್ ಸೈಡ್‌ನತ್ತ ಫೋರ್ ಬಾರಿಸಿದರು. ಆರನೇ ಎಸೆತದಲ್ಲಿ ಮತ್ತೊಂದು ಫೋರ್ ಬಾರಿಸುವ ಮೂಲಕ ನಮೀಬಿಯಾ ತಂಡ ಸೂಪರ್ ಓವರ್‌ನಲ್ಲಿ 21 ರನ್ ಕಲೆಹಾಕಿತು. 22 ರನ್‌ಗಳ ಗುರಿ ಪಡೆದ ಒಮಾನ್, ಮೊದಲ ಎಸೆತದಲ್ಲಿ 2 ರನ್ ಕಲೆಹಾಕಿತು. ಎರಡನೇ ಎಸೆತದಲ್ಲಿ ಯಾವುದೇ ರನ್ ಇಲ್ಲ. ಮೂರನೇ ಎಸೆತದಲ್ಲಿ ನಸೀಮ್ ಖುಷಿ ಬೌಲ್ಡ್ ಆದರು. ನಾಲ್ಕನೇ ಎಸೆತದಲ್ಲಿ 1 ರನ್. ಐದನೇ ಎಸೆತದಲ್ಲಿ ಕೇವಲ 1 ರನ್. ಕೊನೆಯ ಎಸೆತದಲ್ಲಿ ಸಿಕ್ಸ್. ಈ ಮೂಲಕ ಡೇವಿಡ್ ವೀಝು ಸೂಪರ್ ಓವರ್‌ನಲ್ಲಿ ನಮೀಬಿಯಾ ತಂಡಕ್ಕೆ 11 ರನ್‌ಗಳ ಜಯ ತಂದು ಕೊಟ್ಟರು.**

**ಭಾರೀ ಕುತೂಹಲ ಮೂಡಿಸಿದ ರೋಚಕ ಪಂದ್ಯ**

# ಸಮಸ್ಯೆಗಳ ಆಗರವಾಗಿರುವ ಮೈದಾನ



ಟಿ20 ವಿಶ್ವಕಪ್‌ಗೆ ಅದ್ದೂರಿ ಚಾಲನೆ ಸಿಕ್ಕಿದೆ. ಜೂನ್ 5 ರಿಂದ ತನ್ನ ಅಭಿಯಾನ ಆರಂಭಿಸಲಿರುವ ಟೀಂ ಇಂಡಿಯಾ ಜೂನ್ 9 ರಂದು ಹೈವೋಲ್ಟೇಜ್ ಕದನದಲ್ಲಿ ಸಾಂಪ್ರದಾಯಿಕ ಎದುರಾಳಿ ಪಾಕಿಸ್ತಾನವನ್ನು ಎದುರಿಸಲಿದೆ. ಈ ಪಂದ್ಯಕ್ಕೆ ನ್ಯೂಯಾರ್ಕ್‌ನಲ್ಲಿ ಹೊಸದಾಗಿ ನಿರ್ಮಿಸಲಾಗಿರುವ ನಸ್ಸೌ ಕೌಂಟಿ ಸ್ಟೇಡಿಯಂ ಆತಿಥ್ಯವಹಿಸುತ್ತಿದೆ.

ಇದೇ ಮೈದಾನದಲ್ಲಿ ಭಾರತ ಇನ್ನೂ ಎರಡು ಪಂದ್ಯಗಳನ್ನು ಆಡಲಿದೆ. ಒಂದು ಪಾಕಿಸ್ತಾನವನ್ನು ಎದುರಿಸುವ ಮೊದಲು ಮತ್ತು ಇನ್ನೊಂದು ಅದನ್ನು ಎದುರಿಸಿದ ನಂತರ. ಇದರರ್ಥ ಟೀಂ ಇಂಡಿಯಾ ಜೂನ್ 5 ರಂದು ಐರ್ಲೆಂಡ್ ವಿರುದ್ಧ ಮತ್ತು ಜೂನ್ 12 ರಂದು ಯುಎಸ್‌ಎ ವಿರುದ್ಧ ಆಡಲಿದೆ. ಆದರೆ ಈ ಪಂದ್ಯಗಳಿಗೂ ಮುನ್ನ ಈ ಮೈದಾನದಲ್ಲಿನ ಅವ್ಯವಸ್ಥೆ ಕುರಿತು ಸಾಕಷ್ಟು ಚರ್ಚೆ ನಡೆಯುತ್ತಿದೆ.

ನ್ಯೂಯಾರ್ಕ್‌ನಲ್ಲಿ ಹೊಸದಾಗಿ ನಿರ್ಮಾಣಗೊಂಡಿರುವ ನಸ್ಸೌ ಮಾಡ್ಯುಲರ್ ಸ್ಟೇಡಿಯಂ ಕಂಟೈನರ್‌ಗಳಿಂದ ಸಿದ್ಧವಾಗಿದೆ. ವಾಶ್ ರೂಮ್‌ಗಳು ಕೂಡ ಕಂಟೈನರ್‌ಗಳಿಂದ ಮಾಡಲ್ಪಟ್ಟಿದೆ. ಹೀಗಾಗಿ ಹೆಚ್ಚಿನ ನೀರಿನ ಸೌಲಭ್ಯ ಈ ಕ್ರೀಡಾಂಗಣದಲ್ಲಿಲ್ಲ.

ಈ ಕ್ರೀಡಾಂಗಣದ ಮೈದಾನದ ಮೇಲಿನ ಹುಲ್ಲು ಸಹ ನೈಸರ್ಗಿಕವಾಗಿಲ್ಲ. ಅಂದರೆ ಕೃತಕ ಹುಲ್ಲನ್ನು ಬಳಸಲಾಗಿದೆ. ಹೀಗಾಗಿ ಇಡೀ ಕ್ರೀಡಾಂಗಣದಲ್ಲಿ ಹುಲ್ಲಿನ ಚಾಪೆ ಹಾಸಿದಂತೆ ಕಾಣುತ್ತದೆ. ಬರ್ಮುಡಾ ಹುಲ್ಲಿನ ಹೊದಿಕೆಯನ್ನು ಬಳಸಿದ್ದು, ಇದನ್ನು ಬೇಸ್‌ಬಾಲ್ ಮತ್ತು ಫುಟ್‌ಬಾಲ್ ಮೈದಾನಗಳಲ್ಲಿ ಬಳಸಲಾಗುತ್ತದೆ.

# ವಿಚ್ಛೇದನ ವದಂತಿಗೆ ನತಾಶಾ ಬ್ರೇಕ್



ಕಳೆದ ಕೆಲವು ದಿನಗಳಿಂದ ಕೇಳಿಬರುತ್ತಿದ್ದ ವಿಚ್ಛೇದನ ಊಹಾಪೋಹಗಳಿಗೆ ಇದೀಗ ಕ್ರಿಕೆಟಿಗ ಹಾರ್ದಿಕ್ ಪಾಂಡ್ಯ ಅವರ ಪತ್ನಿ ನತಾಶಾ ಸ್ಟಾಂಕೋವಿಕ್ ಅಂತ್ಯಹಾಡುವ ಕೆಲಸ ಮಾಡಿದ್ದಾರೆ. ವಾಸ್ತವವಾಗಿ ನತಾಶಾ, ಹಾರ್ದಿಕ್ ಅವರೊಂದಿಗಿನ ಫೋಟೋಗಳನ್ನು ತಮ್ಮ ಇನ್ಸ್ಟಾಗ್ರಾಮ್ ಖಾತೆಯಲ್ಲಿ ಆರ್ಕೈವ್ ಮಾಡಿದ್ದರು. ಇದನ್ನು ಗಮನಿಸಿದ ನೆಟ್ಟಿಗರು ದಂಪತಿಗಳ ನಡುವಿನ ಸಂಬಂಧದಲ್ಲಿ ಬಿರುಕು ಮೂಡಿದೆ ಎಂದು ಸುದ್ದಿ ಹಬ್ಬಿಸಿದ್ದರು. ಆದರೀಗ ನತಾಶಾ ಅವರು ಹಾರ್ದಿಕ್ ಜೊತೆಗಿರುವ ಎಲ್ಲಾ ಫೋಟೋಗಳನ್ನು ಅನ್ ಆರ್ಕೈವ್ ಮಾಡುವ ಮುಖಾಂತರ ನಮ್ಮಿಬ್ಬರ ಸಂಬಂಧ ಇನ್ನು ಗಟ್ಟಿಯಾಗಿದೆ ಎಂದು ಹೇಳುವ ಕೆಲಸ ಮಾಡಿದ್ದಾರೆ.

ಕೆಲವು ದಿನಗಳ ಹಿಂದೆ ನತಾಶಾ ಅವರ ಇನ್‌ಸ್ಟಾಗ್ರಾಮ್ ಪ್ರೊಫೈಲ್ ಅನ್ನು ನೋಡಿದಾಗ, ಮದುವೆ ಸೇರಿದಂತೆ ಹಾರ್ದಿಕ್ ಅವರೊಂದಿಗಿನ ಎಲ್ಲಾ ಫೋಟೋಗಳು ಮಾಯವಾಗಿದ್ದವು. ಆದೆರ ಈಗ ಅವರ ಫೀಡ್‌ನಲ್ಲಿ ಅವೆಲ್ಲವೂ ಮತ್ತೆ ಗೋಚರಿಸುತ್ತವೆ. ಆ ಫೋಟೋಗಳನ್ನು ಡಿಲೀಟ್ ಮಾಡುವ ಬದಲು, ನತಾಶಾ ಅವುಗಳನ್ನು ಆರ್ಕೈವ್ ಮಾಡಿದ್ದರು. ಇದೀಗ ಆ ಫೋಟೋಗಳನ್ನು ರಿಸ್ಟೋರ್ ಮಾಡಿರುವಂತೆ ತೊರುತ್ತಿದೆ.

# ಅಮಿತಾಬ್ ದಾಂಪತ್ಯಕ್ಕೆ 51ರ ಸಂಭ್ರಮ



ಬಾಲಿವುಡ್ ಬಿಗ್‌ಬಿ ಅಮಿತಾಬ್ ಬಚ್ಚನ್ ಹಾಗೂ ಜಯಾ ಭಾದೂರಿ ಜೋಡಿ ಇಂದು (ಜೂನ್ 3) ತಮ್ಮ 51ನೇ ವಿವಾಹ ವಾರ್ಷಿಕೋತ್ಸವ ಆಚರಿಸಿಕೊಂಡಿದೆ. ಭರ್ತಿ 51 ವರ್ಷಗಳ ಯಶಸ್ವಿ ದಾಂಪತ್ಯ ಜೀವನ ನಡೆಸಿ ಯುವ ಜನತೆಗೆ ಮಾದರಿಯಾಗಿದ್ದಾರೆ ಬಾಲಿವುಡ್‌ನ ಹಿರಿಯ ನಟ-ನಟಿ.

ಅಮಿತಾಬ್-ಜಯಾ ಜೋಡಿಯ ಐದು ದಶಕದ ಸುಖೀ ದಾಂಪತ್ಯದ ಸುದ್ದಿ ಯುವ ಜನತೆಗೆ ಮಾದರಿ ವಿಷಯ. ಜಯಾ ಬಚ್ಚನ್ ಇನ್ಸ್ಟಾದಲ್ಲಿ ಈ ವಿಚಾರ ಹಂಚಿಕೊಳ್ಳುತ್ತಿದ್ದಂತೆ ಜೋಡಿಗೆ ಶುಭಾಶಯದ ಕಾಮೆಂಟ್ಸ್ ಬರುತ್ತಿದೆ. ಸುಖೀ ದಾಂಪತ್ಯದ ಸಲಹೆ ಕೇಳುತ್ತಿದ್ದಾರೆ ಇನ್ನೂ ಹಲವರು. ಆದರೆ ವೈಯಕ್ತಿಕ ರಾಗದ್ವೇಷಗಳಿಗಿಂತ ಹೆಚ್ಚಾಗಿ ಕೌಟುಂಬಿಕ ಮೌಲ್ಯವನ್ನ ಮಾತ್ರ ನಂಬಿರುವುದೇ 50 ವರ್ಷದ ಸುದೀರ್ಘ ದಾಂಪತ್ಯ ಅಡಿಪಾಯ ಅನ್ನೋದನ್ನ ನಂಬಬೇಕು. ಯಾಕಂದ್ರೆ ಚಿಕ್ಕ-ಪುಟ್ಟ ಮನಸ್ತಾಪಗಳು ಎದುರಾದರೂ ದೂರಾಗುವ ಮನಸ್ಥಿತಿಗಳ ನಡುವೆ ಅಸಹಜ ಎನ್ನಿಸಿದ್ದ ಜೋಡಿ ಅಮಿತಾಬ್ ಜಯಾರದ್ದು. ಮದುವೆ ಸಂದರ್ಭದಲ್ಲಂತೂ ಈಗಿನ ಕಾಲದಂತೆ ಟ್ರೋಲ್ ಪೇಜ್‌ಗಳಿದ್ದರೆ ಅದೆಷ್ಟು ಟ್ರೋಲ್ ಆಗುತ್ತಿದ್ದರೋ. ಯಾಕಂದ್ರೆ ಈ ಜೋಡಿ ನೋಡ್ದವರೆಲ್ಲಾ ಬಚ್ಚನ್ ಆರಡಿ ಜಯಾ ಮೂರಡಿ ಎಂದು ಕಾಲೆಳೆದವರೇ ಹೆಚ್ಚು. ಯಾಕಂದ್ರೆ ಜೋಡಿಗೆ ಎತ್ತರದಲ್ಲಿ ಅಜಗಜಾಂತರ ವ್ಯತ್ಯಾಸ ಇದೆ. ಆದರೂ ಟೀಕೆ ಟಿಪ್ಪಣಿ ನಡುವೆಯೂ ಯಶಸ್ವಿ ಗ್ರಹಸ್ಥಾಶ್ರಮ ನಡೆಸುತ್ತಿದ್ದಾರೆ ಈ ದಂಪತಿ. ಅಮಿತಾಬ್ ಜಯಾ ಜೋಡಿ 1973 ಜೂನ್ 3ರಂದು ದಾಂಪತ್ಯ ಜೀವನಕ್ಕೆ ಕಾಲಿಡ್ತಾರೆ. ಬಳಿಕ ಅಭಿಷೇಕ್ ಹಾಗೂ ಶ್ವೇತಾ ಇಬ್ಬರು ಮಕ್ಕಳು ಹುಟ್ಟುತ್ತಾರೆ. ಬಳಿಕವೂ ಇಬ್ಬರೂ ಚಿತ್ರದಲ್ಲಿ ನಟಿಸುತ್ತಲೇ ಇರ್ತಾರೆ. ಇದೀಗ ರಾಜಕೀಯದಲ್ಲೂ ಹೆಸರುಮಾಡಿರುವ ಜಯಾ ಬಚ್ಚನ್‌ರನ್ನ ಬ್ರೇವ್ ಲೇಡಿ ಎಂದೇ ಕರೆಯಲಾಗುತ್ತೆ. ಅಮಿತಾಬ್ ಬಚ್ಚನ್ ಯಶಸ್ಸಿನ ಹಿಂದೆ ಜಯಾ ಬಚ್ಚನ್ ಇದ್ದಾರೆ.



# ಮಾರ್ಟಿನ್ ಅಖಾಡಕ್ಕೆ ತಲೈವ ಎಂಟ್ರಿ



ಈ ವರ್ಷದ ದಸರಾ ಹಬ್ಬಕ್ಕೆ ಸ್ಯಾಂಡಲ್‌ವುಡ್‌ನ ಹೈವೋಲ್ಟೇಜ್ ಸಿನಿಮಾ 'ಮಾರ್ಟಿನ್') ತೆರೆಗಪ್ಪಳಿಸೋಕೆ ಸಜ್ಜಾಗಿ ನಿಂತಿದೆ. ಮತ್ತೊಂದು ಕಡೆ ಟಾಲಿವುಡ್‌ನ ಯಂಗ್ ಟೈಗರ್ ಜ್ಯೂ.ಎನ್‌ಟಿಆರ್ ನಟನೆಯ ಮೋಸ್ಟ್ ಅವೈಟೆಡ್ ಸಿನಿಮಾ 'ದೇವರ' ಚಿತ್ರ ಕೂಡ ಅಕ್ಟೋಬರ್ 10ರಂದು ಐದು ಭಾಷೆಯಲ್ಲಿ ರಿಲೀಸ್ ಆಗುತ್ತಿದೆ. ಇದೀಗ ಕಾಲಿವುಡ್ ನಿಂದಲೂ ತಲೈವ ತಮ್ಮ ಅಭಿಮಾನಿ ಬಳಗಕ್ಕೆ ಬಿಗ್ ಸರ್ಪ್ರೈಸ್ ಒಂದನ್ನ ನೀಡಿದ್ದಾರೆ.

ಹೌದು, ಒಂದು ಕಡೆ 'ದೇವರ' ಅಕ್ಟೋಬರ್ 10ಕ್ಕೆ ತೆರೆಕಾಣ್ತಿದೆ. ಮತ್ತೊಂದೆಡೆ 'ಮಾರ್ಟಿನ್' ಚಿತ್ರ ಅಕ್ಟೋಬರ್ 11ಕ್ಕೆ ಕೇವಲ ಒಂದು ದಿನದ ಅಂತರದಲ್ಲಿ ಸೌತ್‌ನ ಇಬ್ಬರು ಬಿಗ್ ಸ್ಟಾರ್ಸ್ ಸಿನಿಮಾಗಳು ಚಿತ್ರಮಂದಿರಕ್ಕೆ ಲಗ್ಗೆ ಇಡುತ್ತಿವೆ ಅನ್ನುವ ಸುದ್ದಿ ಭಾರೀ ಸದ್ದು ಮಾಡುತ್ತಿದೆ. ಹೀಗಿರುವಾಗಲೇ ಮತ್ತೊಂದು ಬಿಗ್ ಸರ್ಪ್ರೈಸ್ ತಲೈವಾ ಕಡೆಯಿಂದ ಸಿಕ್ಕಿದೆ. ರಜನಿಕಾಂತ್ ನಟನೆಯ ವೆಟ್ಟೈಯಾನ್ ಸಿನಿಮಾ ಇದೇ ಅಕ್ಟೋಬರ್ 10ಕ್ಕೆ ದಸರಾ ಹಬ್ಬದ ಉಡುಗೊರೆಯಾಗಿ ಬೆಳ್ಳಿ ಪರದೆ ಮೇಲೆ ಆಟವನ್ನ ಶುರು ಮಾಡಲಿದೆಯಂತೆ.

ಹೀಗಂತ ಖುದ್ದು ರಜನಿಕಾಂತ್ ಹೇಳಿದ್ದಾರೆ.

# ಕೆಲವೇ ತಿಂಗಳಲ್ಲಿ 30 ಕೆಜಿ ದೇಹದ ತೂಕ ಇಳಿಸಿಕೊಂಡ ಸೋನಾಕ್ಷಿ



ಬಾಲಿವುಡ್ ಬೆಡಗಿ ಸೋನಾಕ್ಷಿ ಸಿನ್ಹಾ ಹಲವು ವರ್ಷಗಳ ನಂತರ ಈಗ 'ಹೀರಾಮಂಡಿ' ವೆಬ್ ಸಿರೀಸ್ ಮೂಲಕ ಸಕ್ಸಸ್ ಸಿಕ್ಕಿದೆ. 'ದಬಾಂಗ್' ನಟಿಗೆ ಬೇಡಿಕೆ ಕೂಡ ಜಾಸ್ತಿ ಆಗಿದೆ. ಹೀಗಿರುವಾಗ ಅವರ ಫಿಟ್‌ನೆಸ್ ಬಗ್ಗೆ ಹೊಸ ವಿಚಾರವೊಂದು ರಿವೀಲ್ ಆಗಿದೆ. 90 ಕೆಜಿ ಇದ್ದ ಸೋನಾಕ್ಷಿ 30 ಕೆಜಿ ದೇಹ ತೂಕ ಇಳಿಸಿಕೊಂಡಿದ್ದರ ಬಗ್ಗೆ ಮಾತನಾಡಿದ್ದಾರೆ. 2010ರಲ್ಲಿ ಸಲ್ಮಾನ್ ಖಾನ್‌ಗೆ ನಾಯಕಿಯಾಗುವ ಮೂಲಕ ಸೋನಾಕ್ಷಿ ಸಿನ್ಹಾ ಅವರು ಚಿತ್ರರಂಗಕ್ಕೆ ಕಾಲಿಟ್ಟರು. ಸೋನಾಕ್ಷಿ ಚಿತ್ರರಂಗಕ್ಕೆ ಬರುವ ಮುನ್ನ ಸಖತ್ ದಪ್ಪ ಇದ್ದರು. ಅವರ ದೇಹದ ತೂಕ 90 ಕೆಜಿ ಇತ್ತು. ಅವರು 30 ಕೆಜಿಗೂ ಅಧಿಕ ತೂಕವನ್ನು ಇಳಿಸಿಕೊಂಡಿದ್ದಾರೆ. ನಟಿ ಜಿಮ್ ಸೇರಿದರು. ನಿತ್ಯ ಒಂದಷ್ಟು ಸಮಯವನ್ನು ಅವರು ಜಿಮ್‌ನಲ್ಲಿ ಕಳೆಯುತ್ತಿದ್ದರು. ಹಲವು ರೀತಿಯ ವರ್ಕೌಟ್ ಮಾಡಿ ಬೆವರು ಸುರಿಸುತ್ತಿದ್ದರು. ಇದರ ಎಫೆಕ್ಟ್ ಹಂತ ಹಂತವಾಗಿ ತೂಕ ಕಳೆದುಕೊಳ್ಳುತ್ತಾ ಬಂದರು. 60ರ ಆಸುಪಾಸಿನಲ್ಲಿರುವ ಸಲ್ಮಾನ್ ಖಾನ್ ಫಿಟ್‌ನೆಸ್ ನೋಡಿ ಸಾಕಷ್ಟು ಸ್ಫೂರ್ತಿ ಸಿಕ್ಕಿತ್ತು ಎಂದು ಖುಷಿಯಿಂದ ನಟಿ ಅನುಭವ ಹಂಚಿಕೊಂಡಿದ್ದಾರೆ. ಈ ಹಿಂದಿನ ಅವರ ಫೋಟೋವನ್ನು ಇಟ್ಟುಕೊಂಡು ಸಾಕಷ್ಟು ಟ್ರೋಲ್ ಮಾಡುತ್ತಿದ್ದರು. ಆಮ್ಲೆಟ್ ತಿನ್ನಬೇಕು ಎನಿಸಿದರೆ ಮಾಡಿಕೊಂಡು ತಿನ್ನಿ. ಆದರೆ ಮೊಟ್ಟೆಯ ಶೇಪ್ ಹಾಗಿದೆ, ಹೀಗಿದೆ ಎಂದೆಲ್ಲಾ ಹೇಳಬೇಡಿ ಎಂದು ನಟಿ ತಿರುಗೇಟು ನೀಡಿದ್ದರು.

# ಮೂರನೇ ಬಾರಿ ಒಂದಾದ ದುನಿಯಾ ವಿಜಯ್ ಎಸ್.ನಾರಾಯಣ್






ಹೆಸರಾಂತ ದಿಗ್ಗಜರ ಚಿತ್ರಗಳನ್ನು ನಿರ್ದೇಶಿಸಿರುವ ಹೆಸರಾಂತ ನಿರ್ದೇಶಕ ಎಸ್ ನಾರಾಯಣ್ ಅವರ ನಿರ್ದೇಶನದ ''ಪ್ರೊಡಕ್ಷನ್ ನಂ 1'' ಚಿತ್ರ ಇತ್ತೀಚೆಗಷ್ಟೇ ಆರಂಭವಾಗಿದೆ. ಈ ನೂತನ ಚಿತ್ರದ ಪ್ರಮುಖಪಾತ್ರದಲ್ಲಿ ಖ್ಯಾತ ನಟ ದುನಿಯಾ ವಿಜಯ್ ಹಾಗೂ ಶ್ರೇಯಸ್ ಮಂಜು ಅಭಿನಯಿಸುತ್ತಿದ್ದಾರೆ. ದುನಿಯಾ ವಿಜಯ್ ಅವರು ಜೂನ್ 5 ರಿಂದ ಚಿತ್ರೀಕರಣದಲ್ಲಿ ಭಾಗಿಯಾಲಿದ್ದಾರೆ. ಈಗಾಗಲೇ ಚಿಕ್ಕಮಗಳೂರಿನಲ್ಲಿ ಶ್ರೇಯಸ್ ಮಂಜು ಮುಂತಾದ ಕಲಾವಿದರ ಅಭಿನಯದಲ್ಲಿ ಮೊದಲ ಹಂತದ ಚಿತ್ರೀಕರಣ ಮುಕ್ತಾಯವಾಗಿದೆ.

ಕನ್ನಡ ಚಿತ್ರರಂಗಕ್ಕೆ ಸಾಕಷ್ಟು ಜನಪ್ರಿಯ ಚಿತ್ರಗಳನ್ನು ನೀಡಿರುವ ಕೆ.ಮಂಜು ಹಾಗೂ ರಮೇಶ್ ಯಾದವ್ ಜಂಟಿಯಾಗಿ ಈಶ ಪ್ರೊಡಕ್ಷನ್ಸ್ ಸಂಸ್ಥೆಯ ಮೂಲಕ ಈ ಚಿತ್ರವನ್ನು ನಿರ್ಮಾಣ ಮಾಡುತ್ತಿದ್ದಾರೆ. ಈಶ ಪ್ರೊಡಕ್ಷನ್ಸ್ ಮೂಲಕ ನಿರ್ಮಾಣವಾಗುತ್ತಿರುವ ಮೊದಲ ಚಿತ್ರವಿದು. ಎಸ್ ನಾರಾಯಣ್, ಕೆ.ಮಂಜು, ರಮೇಶ್ ಯಾದವ್ ಹಾಗೂ ದುನಿಯಾ ವಿಜಯ್ ಅವರಂತಹ ಕನ್ನಡ ಚಿತ್ರರಂಗದ ದಿಗ್ಗಜರ ಪಾಲ್ಗೊಳ್ಳುವಿಕೆಯಲ್ಲಿ ಮೂಡಿ ಬರುತ್ತಿರುವ ಈ ನೂತನ ಚಿತ್ರದ ಮೇಲೆ ಸಾಕಷ್ಟು ನಿರೀಕ್ಷೆಯಿದೆ. ಸದ್ಯದಲ್ಲೇ ಅದ್ದೂರಿಯಾಗಿ ಚಿತ್ರದ ಶೀರ್ಷಿಕೆಯನ್ನು ಅನಾವರಣಗೊಳಿಸಲು ಚಿತ್ರತಂಡ ಸಿದ್ದತೆ ನಡೆಸುತ್ತಿದೆ.

ದುನಿಯಾ ವಿಜಯ್ ಹಾಗೂ ಶ್ರೇಯಸ್ ಮಂಜು ಪ್ರಮುಖಪಾತ್ರದಲ್ಲಿ ಅಭಿನಯಿಸುತ್ತಿರುವ ಈ ಚಿತ್ರದ ನಾಯಕಿ ಬೃಂದಾ. ವಿಭಿನ್ನಪಾತ್ರದಲ್ಲಿ ಸಾಧುಕೋಕಿಲ ಸಹ ಕಾಣಿಸಿಕೊಳ್ಳುತ್ತಿದ್ದಾರೆ. ರಂಗಾಯಣ ರಘು, ತಾರಾ ಅನುರಾಧ, ಶರತ್ ಲೋಹಿತಾಶ್ವ, ಪ್ರಮೋದ್ ಶೆಟ್ಟಿ, ಮುಂತಾದವರಿದ್ದಾರೆ.

# ರಿಷಬ್ ಶೆಟ್ಟಿಗೆ ಹರಿಪ್ರಿಯಾ ಇಟ್ಟರು ನಿಕ್‌ನೇಮ್



'ಕಾಂತಾರ' ಸಿನಿಮಾದ ಮೂಲಕ ಸ್ಯಾಂಡಲ್‌ವುಡ್ ಮಾತ್ರವಲ್ಲದೇ ಪ್ಯಾನ್ ಇಂಡಿಯಾ ಲೆವೆಲ್‌ನಲ್ಲಿ ಖ್ಯಾತಿ ಪಡೆದ ನಟ ರಿಷಬ್ ಶೆಟ್ಟಿ. 'ಕಾಂತಾರ' ಸಿನಿಮಾದ ನಟನೆ, ಆ ಸಿನಿಮಾವನ್ನ ಪ್ರೆಸೆಂಟ್ ಮಾಡಿದ ರೀತಿಗೆ ಇಡೀ ಭಾರತೀಯ ಚಿತ್ರರಂಗವೇ ಎದ್ದು ನಿಂತು ಚಪ್ಪಾಳೆ ತಟ್ಟಿತ್ತು. ಇದೀಗ 'ಕಾಂತಾರ ಚಾಪ್ಟರ್-1' ಸಿನಿಮಾದ ಶೂಟಿಂಗ್ ಕೆಲಸದಲ್ಲಿ ಬ್ಯುಸಿಯಾಗಿದ್ದಾರೆ. ಇದರ ನಡುವೆ ಇತ್ತೀಚೆಗೆ ನಡೆದ ಸಿನಿಮಾ ಕಾರ್ಯಕ್ರಮವೊಂದಕ್ಕೆ ರಿಷಬ್ ಶೆಟ್ಟಿ ಮುಖ್ಯ ಅತಿಥಿಯಾಗಿ ಆಗಮಿಸಿದ್ದರು. ಈ ವೇಳೆ, ರಿಷಬ್ ಶೆಟ್ಟಿಗೆ ಹರಿಪ್ರಿಯಾ ಇಟ್ಟಿರುವ ನಿಕ್‌ನೇಮ್ ಬಗ್ಗೆ ರಿವೀಲ್ ಮಾಡಿದ್ದಾರೆ. ಈ ಸಮಯದಲ್ಲಿ ನಟಿ ಹರಿಪ್ರಿಯಾ ಅವರು ರಿಷಬ್ ಶೆಟ್ಟಿ ಅವರ ಜೊತೆಗಿನ ಶೂಟಿಂಗ್ ದಿನಗಳನ್ನ ಮೆಲುಕು ಹಾಕಿದ್ದಾರೆ. 'ರಿಷಬ್ ಅವರನ್ನ ಆತ್ಮೀಯವಾಗಿ ನಾನು ಗುರೂ ಅಂತಾನೇ ಕರಿತಿದ್ದೆ ಎಂದು ಸೀಕ್ರೆಟ್ ರಿವೀಲ್ ಮಾಡಿದ್ದಾರೆ. ಜೊತೆಗೆ ರಿಷಬ್ ಅವರಿಗೆ ತುಂಬಾ ಇಷ್ಟವಾದ ಚಾಕ್‌ಲೇಟ್ ಅನ್ನು ಗಿಫ್ಟ್ ಆಗಿ ನೀಡಿದರು. ಅಷ್ಟು ದೊಡ್ಡ ನಟರಾಗಿದ್ದ ರಿಷಬ್ ಶೆಟ್ಟಿ ಕೂಡ ಚಾಕ್‌ಲೇಟ್ ಅನ್ನು ಪ್ರೀತಿಯಿಂದಲೇ ಸ್ವೀಕರಿಸಿದರು. 'ರಿಕ್ಕಿ' ಸಿನಿಮಾ ಸೆಟ್‌ನಲ್ಲಿ ಹರಿಪ್ರಿಯಾ ಚಾಕ್‌ಲೇಟ್ ಅನ್ನು ಎಲ್ಲಾರಿಗೂ ತಂದು ಕೊಡುತ್ತಿದ್ದರಂತೆ. ಇಡೀ ಸೆಟ್‌ಗೆ ಇದು ಫೇವರೇಟ್ ಆಗಿತ್ತು. ಅನ್ನೋ ಮಾತನ್ನ ನಟ ರಿಷಬ್ ಶೆಟ್ಟಿ ಕೂಡ ಈ ವೇಳೆ ಹಂಚಿಕೊಂಡರು. ಜೊತೆಗೆ ಸಿನಿಮಾ ರಂಗಕ್ಕೆ ಮತ್ತೆ ಕಮ್ ಬ್ಯಾಕ್ ಮಾಡಿ ಹರಿಪ್ರಿಯಾ ಅಂತ ಆಹ್ವಾನ ನೀಡಿದರು ಡಿವೈನ್‌ಸ್ಟಾರ್.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com, epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966